ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಸಂಪುಟ: 21, ಸಂಚಿಕೆ: 124, ಪುಟಗಳು: 8, ಮಂಗಳವಾರ, 13 ಫೆಬ್ರವರಿ 2024 RNI NO. KARKAN/2002/08054

epaper: www.sanjemugilu.com

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ



ನೇಣು ಸಾರಥ್ಯದಲ್ಲಿ...

**ಸುಭಾಷಿತ**

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆನೇಕಾ

## ಪಂಚಾಂಗ

(ಮಂಗಳವಾರ 13, ಫೆಬ್ರವರಿ -2024)

- ಶೋಭಕೃತ್ ಸಂವತ್ಸರ, ಶಿಶಿರ ಋತು
- ಉತ್ತರಾಯಣ, ಮಾಘ ಮಾಸ
- ಶುಕ್ಲ ಪಕ್ಷ, ಬಿದಿಗೆ,
- ಶತಭಿಷಾ ನಕ್ಷತ್ರ
- ರಾಹುಕಾಲ: 03 : 30 PM -04 : 59 PM
- ಗುಳಿಕಕಾಲ: 12 : 32 PM - 02 : 01 PM
- ಯಮಗಂಡಕಾಲ: 09 : 34 AM - 11 : 03 AM

### ಕಗ್ಗಂಟಾಗಿಯೇ ಉಳಿದ ಕಾಂಗ್ರೆಸ್ ರಾಜ್ಯಸಭಾ ಅಭ್ಯರ್ಥಿ ಆಯ್ಕೆ

# ನಾಮ ಪತ್ರ ಸಲ್ಲಿಸಲು 3 ದಿನ ಬಾಕಿ

**ಬೆಂಗಳೂರು:** ರಾಜ್ಯಸಭೆ ಚುನಾವಣೆಗೆ ಅಭ್ಯರ್ಥಿಗಳನ್ನು ಅಂತಿಮಗೊಳಿಸುವುದು ಕಾಂಗ್ರೆಸ್‌ಗೆ ಕಗ್ಗಂಟಾಗಿದೆ. ರಾಜ್ಯಸಭೆಗೆ ನಾಮ ಪತ್ರ ಸಲ್ಲಿಸಲು ಇನ್ನು ಮೂರೇ ದಿನ ಬಾಕಿ ಇದೆ. ಇದುವರೆಗೂ ಅಭ್ಯರ್ಥಿ ಯಾರಾಗಬೇಕು ಎಂಬ ಬಗ್ಗೆ ಅಂತಿಮ ನಿರ್ಧಾರ ಆಗಿಲ್ಲ. ರಾಜ್ಯ ನಾಯಕರ ಆಯ್ಕೆಗೆ ಇನ್ನೂ ಗ್ರೀನ್ ಸಿಗ್ನಲ್ ಸಿಕ್ಕಿಲ್ಲ. ಹೈಕಮಾಂಡ್‌ನಿಂದಲೇ ಹೊರ ರಾಜ್ಯದ ಒಂದು ಅಭ್ಯರ್ಥಿಯ ಫೈನಲ್ ಆಗುವ ಸಾಧ್ಯತೆ ಇದೆ. ಅಭಿಷೇಕ್ ಮನು ಸಿಂಘ್ವಿ ಅಥವಾ ರಘುರಾಂ ರಾಜನ್ ರಾಜ್ಯಸಭೆ ಅಭ್ಯರ್ಥಿ ಆಗುವ ಸಾಧ್ಯತೆ ಇದೆ.



ಕರ್ನಾಟಕದಿಂದ ಬಿ.ಎಲ್ ಶಂಕರ್ ಹಾಗೂ ನಾಸೀರ್ ಹುಸೇನ್ ಹೆಸರು ಮುಂಚೂಣಿಯಲ್ಲಿದೆ. ಒಕ್ಕಲಿಗ ಕೋಟಾದಡಿ ಬಿ.ಎಲ್ ಶಂಕರ್ ಹಾಗೂ ಹಾಲಿ ಸದಸ್ಯ ಜಿ.ಸಿ ಚಂದ್ರಶೇಖರ್‌ಗೆ ಸಿಎಂ ಸಿದ್ದರಾಮಯ್ಯ ಬೆಂಬಲ ಸೂಚಿಸಿದ್ದಾರೆ. ಜಿ.ಸಿ ಚಂದ್ರಶೇಖರ್‌ಗೆ ಡಿಸಿಎಂ ಡಿ.ಕೆ ಶಿವಕುಮಾರ್ ಬೆಂಬಲ ಸೂಚಿಸಿದ್ದಾರೆ. ನಾಸೀರ್ ಹುಸೇನ್ ಪರ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ ಬ್ಯಾಟ್ ಬೀಸುತ್ತಿದ್ದಾರೆ. ಬಿ.ಎಲ್. ಶಂಕರ್ ಅತ್ತ ದೆಹಲಿಯಲ್ಲೇ ಬೀಡು ಬಿಟ್ಟಿದ್ದಾರೆ. ನಾಳೆ ರಾಜ್ಯದಲ್ಲೇ ಸ್ಕ್ರೀನಿಂಗ್ ಕಮಿಟಿ ಸಭೆಯಲ್ಲಿ ಹೆಸರು ಅಂತಿಮಗೊಳ್ಳುವ ನಿರೀಕ್ಷೆ ಇದೆ.

ಫೆ.15ರಂದು ನಾಮಪತ್ರ ಸಲ್ಲಿಸಲು ಕೊನೆಯ ದಿನವಾಗಿದ್ದು, ಮೂರು ಸ್ಥಾನ ಭರ್ತಿ ಮಾಡಿಕೊಳ್ಳಲು ಕಾಂಗ್ರೆಸ್‌ಗೆ ಅವಕಾಶವಿದೆ. ಪ್ರಸ್ತುತ 20ಕ್ಕಿಂತ ಹೆಚ್ಚು ಆಕಾಂಕ್ಷಿಗಳು ಮುಂದೆ ಬಂದಿದ್ದು, ವಿವಿಧ ಕೋಟಾದಡಿ ಬೇಡಿಕೆ ಮುಂದಿಟ್ಟಿದ್ದಾರೆ. ಮಠ ಮಾನ್ಯಗಳಿಂದ, ಉದ್ಯಮಿಗಳಿಂದ ಒತ್ತಡ ಹೇರಲಾರಂಭಿಸಿದ್ದಾರೆ. ಮೂರು ಸ್ಥಾನಗಳ ಪೈಕಿ ಒಂದು ಸ್ಥಾನ ಅಲ್ಪಸಂಖ್ಯಾತರಿಗೆ, ಒಂದು ಒಕ್ಕಲಿಗ ಮತ್ತೊಂದು ಪುಟ 2

# ಆಸ್ತಿ ತೆರಿಗೆ ಪಾವತಿಸದವರ ಕಾರು, ಶಾಲಾ ಬಸ್ ಜಪ್ತಿ

**ಬೆಂಗಳೂರು:** ಆಸ್ತಿ ತೆರಿಗೆ ಪಾವತಿಸದ ಕಾರಣಕ್ಕಾಗಿ ಕಾರುಗಳು ಮತ್ತು ಶಾಲಾ ಬಸ್‌ಗಳಂತಹ ಚರ ಆಸ್ತಿಗಳನ್ನು ಮೊದಲ ಬಾರಿಗೆ ಬಿಬಿಎಂಪಿ ಜಪ್ತಿ ಮಾಡಿದೆ. ತೆರಿಗೆ ಬಾಕಿ ಇರಿಸಿಕೊಂಡಿರುವವರಿಂದ ಸಂಗ್ರಹಿಸುವ ಉದ್ದೇಶದೊಂದಿಗೆ ಎಸ್‌ಒಪಿ (ಪ್ರಮಾಣಿತ ಕಾರ್ಯಾಚರಣಾ ಕಾರ್ಯವಿಧಾನ) ಜಾರಿಗೊಳಿಸಿದ ಮೂರು ತಿಂಗಳ ನಂತರ ಈ ಕ್ರಮ ಕೈಗೊಳ್ಳಲಾಗಿದೆ. ಬಿಬಿಎಂಪಿಯ ಯಲಹಂಕ ವಿಭಾಗದಲ್ಲಿ ನಾಲ್ಕು ವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ವಾಹನಗಳನ್ನು ಜಪ್ತಿ ಮಾಡಿದ ಕೆಲವೇ ಗಂಟೆಗಳ ನಂತರ, ಆಸ್ತಿ ಮಾಲೀಕರು ಬಾಕಿಯ ಶೇ 50 ರಷ್ಟನ್ನು ಪಾವತಿಸಲು ಮತ್ತು ನಮ್ಮ ನೋಟಿಸ್ ವಿರುದ್ಧ ಮೇಲ್ಮನವಿ ಸಲ್ಲಿಸಲು ನಿರ್ಧರಿಸಿದ್ದಾರೆ ಎಂದು ಹಿರಿಯ ಬಿಬಿಎಂಪಿ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಪುಟ 2



## ಸಂಕ್ಷಿಪ್ತ ಸುದ್ದಿ

### ಕೈ ಮುಖಂಡನ ಹೆಸರು ಬರೆದಿಟ್ಟು ಆತ್ಮಹತ್ಯೆ





**ಗದಗ:** ಕಾಂಗ್ರೆಸ್ ಮುಖಂಡನ ಹೆಸರನ್ನ ಡೆತ್ ನೋಟ್‌ನಲ್ಲಿ ಬರೆದಿಟ್ಟು ವೈದ್ಯ ಆತ್ಮಹತ್ಯೆ ಶರಣಾಗಿರುವ ಘಟನೆ ರೋಣ ತಾಲೂಕಿನ ಹಿರೇಹಾಳ ಗ್ರಾಮದಲ್ಲಿ ಸೋಮವಾರ ನಡೆದಿದೆ. ಕಾಂಗ್ರೆಸ್ ಮುಖಂಡರಾಗಿರುವ ಶಶಿಧರ್ ಹಟ್ಟಿ ಆತ್ಮಹತ್ಯೆ ಮಾಡಿಕೊಂಡ ವೈದ್ಯ. ಮರಳು ದಂಧೆಕೋರ ಮತ್ತು ಕಾಂಗ್ರೆಸ್ ಮುಖಂಡನಾಗಿರುವ ಶರಣಗೌಡ ಪಾಟೇಲ್‌ರ ಹೆಸರನ್ನು ಡೆತ್ ನೋಟ್‌ನಲ್ಲಿ ಬರೆದಿಟ್ಟು, ಮನೆಯಲ್ಲಿ ಲುಂಗಿಯಿಂದ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾರೆ. ಪುಟ 2

### ದಾವಣಗೆರೆಯಲ್ಲೂ ಮಕ್ಕಳಿಂದ ಶೌಚಾಲಯ ಸ್ವಚ್ಛತೆ



**ದಾವಣಗೆರೆ:** ರಾಜ್ಯದಲ್ಲಿ ಮತ್ತೊಂದು ಅಮಾನವೀಯ ಹಾಗೂ ಸಮಾಜ ತಲೆ ತಗ್ಗಿಸುವ ಘಟನೆ ಬೆಳಕಿಗೆ ಬಂದಿದೆ. ಶಾಲಾ ಬಾಲಕಿಯರಿಂದ ಶೌಚಾಲಯ ಸ್ವಚ್ಛಗೊಳಿಸಿದ ಮತ್ತೊಂದು ಪ್ರಕರಣ ಬಹಿರಂಗವಾಗಿದೆ. ದಾವಣಗೆರೆ ತಾಲೂಕಿನ ಮೆಳ್ಳೆಕಟ್ಟೆ ಗ್ರಾಮದ ಸರ್ಕಾರಿ ಶಾಲೆಯಲ್ಲಿ 10ಕ್ಕೂ ಅಧಿಕ ಬಾಲಕಿಯರು ಶೌಚಾಲಯ ಸ್ವಚ್ಛಗೊಳಿಸಿದ್ದಾರೆ ಎಂಬ ಆರೋಪ ಕೇಳಿ ಬಂದಿದೆ. ಶಾಲೆಯ ಸಮವಸ್ತ್ರದಲ್ಲಿ ಪೊರಕೆ ಹಿಡಿದು ಬಾಲಕಿಯರು ಶೌಚಾಲಯ ಸ್ವಚ್ಛ ಮಾಡಿದ್ದಾರೆ. ಬಕೆಟ್ ನಲ್ಲಿ ನೀರು ತಂದು ಪೊರಕೆಯಿಂದ ಶೌಚಾಲಯ ಸ್ವಚ್ಛಗೊಳಿಸುತ್ತಿರುವ ಬಾಲಕಿಯರ ವಿಡಿಯೋ ವೈರಲ್ ಆಗಿದೆ. ಶಾಲೆಯ ಮುಖ್ಯಶಿಕ್ಷಕಿ ಹೈಸ್ಕೂಲ್ ಮಕ್ಕಳಿಂದ ಶೌಚಾಲಯ ಸ್ವಚ್ಛ ಮಾಡಿಸಿದ್ದಾರೆ. ಸ್ವತಹ ಗಾಂಧಿಜಿಯೇ ತಮ್ಮ ಶೌಚಾಲಯ ಸ್ವಚ್ಛ ಮಾಡಿಕೊಳ್ಳುತ್ತಿದ್ದರು. ನೀವು ಸ್ವಚ್ಛಗೊಳಿಸಿ ಎಂದು ಮುಖ್ಯ ಶಿಕ್ಷಕಿ ಸೂಚನೆ ನೀಡಿದ್ದರಂತೆ. ಪುಟ 2

### ಸರ್ಕಾರದ ಮುಂದಿಟ್ಟಿರುವ ಹಲವು ಬೇಡಿಕೆಗಳು

# ರೈತರ ಪ್ರತಿಭಟನೆ

**ದೆಹಲಿ:** ರೈತರು ತಮ್ಮ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ದೆಹಲಿ ಚಲೋ ಪ್ರತಿಭಟನೆಗೆ ಕರೆಕೊಟ್ಟಿದ್ದಾರೆ. ಯುನೈಟೆಡ್ ಕಿಸಾನ್ ಮೋರ್ಚಾ ಮತ್ತು ಕಿಸಾನ್ ಮಜ್ದೂರ್ ಮೋರ್ಚಾ ಸೇರಿದಂತೆ 200 ಕ್ಕೂ ಹೆಚ್ಚು ರೈತ ಸಂಘಟನೆಗಳು ಈ ಘೋಷಣೆ ಮಾಡಿದೆ. ಉತ್ತರ ಪ್ರದೇಶ, ಹರ್ಯಾಣ ಮತ್ತು ಪಂಜಾಬ್ ಮತ್ತು ಇತರೆ ಸ್ಥಳಗಳಿಂದ ರೈತರು ದೆಹಲಿ ಚಲೋ ಮೆರವಣಿಗೆಗಾಗಿ ರಾಜಧಾನಿಗೆ ಹೊರಟಿದ್ದಾರೆ. ಏತನ್ಮಧ್ಯೆ, ತಮ್ಮ ಬೇಡಿಕೆಗಳ ಕುರಿತು ಚರ್ಚಿಸಲು ಕೇಂದ್ರವು ಸೋಮವಾರ (ಫೆಬ್ರವರಿ 12) ಸಭೆ ಕರೆದಿತ್ತು. ರೈತರ ಬೇಡಿಕೆಗಳೇನು ಎಂಬುದರ ಕುರಿತ ಮಾಹಿತಿ ಇಲ್ಲಿದೆ.

### ರೈತರ ಬೇಡಿಕೆ ಏನು?

1. ಯುನೈಟೆಡ್ ಕಿಸಾನ್ ಮೋರ್ಚಾ ಮತ್ತು ಉತ್ತರ ಪ್ರದೇಶ, ಹರ್ಯಾಣ ಮತ್ತು ಪಂಜಾಬ್‌ನ ಹೆಚ್ಚಿನ ರೈತ ಸಂಘಗಳು ಬೆಳೆಗಳಿಗೆ ಕನಿಷ್ಠ ಬೆಂಬಲ ಬೆಲೆಯನ್ನು ಖಾತರಿಪಡಿಸುವ ಕಾನೂನನ್ನು ಒತ್ತಾಯಿಸಿವೆ.
2. PTI ಪ್ರಕಾರ, ಪ್ರಸಿದ್ಧ ವಿಜ್ಞಾನಿ ಮತ್ತು ಭಾರತದಲ್ಲಿ ಹಸಿರು ಕ್ರಾಂತಿಯ ಪಿತಾಮಹ, M.S. ಸ್ವಾಮಿನಾಥನ್ ಆಯೋಗದ ಶಿಫಾರಸುಗಳನ್ನು ಜಾರಿಗೆ ತರಲು ಒತ್ತಾಯಿಸಲಾಗುತ್ತಿದೆ.
3. ಅಲ್ಲದೆ, ರೈತರು ಕೃಷಿ ಸಾಲ ಮನ್ನಾ ಮತ್ತು ಪೊಲೀಸರು ರೈತರ ವಿರುದ್ಧ ದಾಖಲಿಸಿರುವ ಪ್ರಕರಣಗಳನ್ನು ಹಿಂಪಡೆಯುವಂತೆ ಒತ್ತಾಯಿಸುತ್ತಿದ್ದಾರೆ.
4. ಇದಲ್ಲದೇ, ಲಖಿಂಪುರಿ ಖೇರಿ ಹಿಂಸಾಚಾರದ ಸಂತ್ರಸ್ತರಿಗೆ ನ್ಯಾಯಕ್ಕಾಗಿ ರೈತರು ಒತ್ತಾಯಿಸುತ್ತಿದ್ದಾರೆ.



ದೆಹಲಿಯಲ್ಲಿ ಸೆಕ್ಷನ್ 144 ಜಾರಿ ರೈತರ ದೆಹಲಿ ಚಲೋ ಮೆರವಣಿಗೆಯನ್ನು ಗಮನದಲ್ಲಿಟ್ಟುಕೊಂಡು ರಾಷ್ಟ್ರ ರಾಜಧಾನಿಯಲ್ಲಿ ಸೆಕ್ಷನ್ 144 ಅನ್ನು ದೆಹಲಿ ಪೊಲೀಸರು ಜಾರಿಗೊಳಿಸಿದ್ದಾರೆ. ಈ ಆದೇಶ ಒಂದು ತಿಂಗಳ ಕಾಲ ಜಾರಿಯಲ್ಲಿರುತ್ತದೆ. ದೆಹಲಿ ಪೊಲೀಸ್ ಕಮಿಷನರ್ ಸಂಜಯ್ ಅರೋರಾ ಸೋಮವಾರ ಹೊರಡಿಸಿದ ಆದೇಶದಲ್ಲಿ, ಯಾವುದೇ ರೀತಿಯ ರ್ಯಾಲಿ ಅಥವಾ ಮೆರವಣಿಗೆಯನ್ನು ಕೈಗೊಳ್ಳುವುದನ್ನು ಮತ್ತು ರಸ್ತೆಗಳು ಮತ್ತು ಮಾರ್ಗಗಳನ್ನು ನಿರ್ಬಂಧಿಸುವುದನ್ನು ನಿಷೇಧಿಸಲಾಗಿದೆ.

ದೆಹಲಿ ಚಲೋ ಮೆರವಣಿಗೆ ವೇಗಪಡೆಯುತ್ತಿದ್ದಂತೆ, ಸಿಂಘು, ಘಾಜಿಪುರ ಮತ್ತು ಟಿಕ್ರಿ ಗಡಿಗಳಲ್ಲಿ ಭದ್ರತಾ ಕ್ರಮಗಳನ್ನು ತೀವ್ರಗೊಳಿಸಲಾಗಿದೆ. ಪ್ರತಿಭಟಿಸುವ ವಾಹನಗಳು ನಗರಕ್ಕೆ ಪ್ರವೇಶಿಸುವುದನ್ನು ತಡೆಯುವ ಉದ್ದೇಶದಿಂದ ದೆಹಲಿ ಪೊಲೀಸರು ಬ್ಯಾರಿಕೇಡ್‌ಗಳ ಜೊತೆಗೆ ಮೊಳೆಗಳನ್ನು ಅಳವಡಿಸಲಾಗಿದೆ.

ದೆಹಲಿ ಪೊಲೀಸರ ಆದೇಶದ ಮೇರೆಗೆ, ರಾಷ್ಟ್ರ ರಾಜಧಾನಿಯ ಗಡಿಯನ್ನು ದಾಟದಂತೆ ಟ್ರಾಕ್ಟರ್ ರ್ಯಾಲಿಗಳನ್ನು ನಿಷೇಧಿಸಲಾಗಿದೆ. ಪಂಜಾಬ್, ಉತ್ತರ ಪ್ರದೇಶ ಮತ್ತು ಹರಿಯಾಣದ ರೈತರು ದೆಹಲಿ ಪ್ರವೇಶಿಸಲು ಪ್ರಯತ್ನಿಸುವ ಸಾಧ್ಯತೆ ಇದೆ.

### ರಾಜಸ್ಥಾನದ ಕೋಟಾದಲ್ಲಿ ಐಐಟಿ ಆಕಾಂಕ್ಷಿ ಆತ್ಮಹತ್ಯೆ

# ಇದು 4ನೇ ಪ್ರಕರಣ

ಕೋಟಾ: ರಾಜಸ್ಥಾನದ ಕೋಟಾದಲ್ಲಿ ಐಐಟಿ ಆಕಾಂಕ್ಷಿಯೊಬ್ಬರು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ನಡೆದಿದೆ. ಇಂದು ಬೆಳಿಗ್ಗೆ ಹಾಸ್ಟೆಲ್ ಕೋಣೆಯಲ್ಲಿ ಶವವಾಗಿ ಪತ್ತೆಯಾಗಿದ್ದಾರೆ. ದೇಶದ ಅನೇಕ ಕಡೆಯಿಂದ ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತಯಾರಾಗಲು ಇಲ್ಲಿನ ಕಾಲೇಜಿಗೆ ಬುರತ್ತಾರೆ. ಆದರೆ ಇಲ್ಲಿ ಇಂತಹ ಘಟನೆಗಳು ನಡೆಯುತ್ತಿರುವುದು ಅಚ್ಚರಿ ಎಂದು ಹೇಳಲಾಗುತ್ತದೆ. 2023ರಲ್ಲೂ ಇಂತಹ ಅನೇಕ ಘಟನೆಗಳು ಇಲ್ಲಿ ನಡೆದಿದೆ. ಈ ವರ್ಷ ಇದು ನಾಲ್ಕನೇ ವಿದ್ಯಾರ್ಥಿ ಆತ್ಮಹತ್ಯೆಯಾಗಿದೆ ಎಂದು ಹೇಲಾಗಿದೆ.

ಆತ್ಮಹತ್ಯೆ ಮಾಡಿಕೊಂಡಿರುವ ವಿದ್ಯಾರ್ಥಿಯನ್ನು ಜಾರ್ಖಂಡ್‌ನ ನಿವಾಸಿ ಶುಭ್ ಚೌಧರಿ ಎಂದು ಹೇಳಲಾಗಿದೆ. ಅವರು ಐಐಟಿ ಸೇರಿದಂತೆ ದೇಶದ ಉನ್ನತ ಎಂಜಿನಿಯರಿಂಗ್ ಕಾಲೇಜುಗಳಿಗೆ ಪ್ರವೇಶ ಪಡೆಯಲು ಅಗತ್ಯವಿರುವ ಜೆಇಇ-ಮೇನ್ಸ್‌ಗೆ



ತಯಾರಿ ನಡೆಸುತ್ತಿದ್ದರು. ಈ ಕಾರಣಕ್ಕೆ ಕಳೆದ ಎರಡು ವರ್ಷಗಳಿಂದ ಕೋಟಾದಲ್ಲಿದ್ದರು. ನಿನ್ನೆ ಜೆಇಇ ಮೇನ್ಸ್ ಫಲಿತಾಂಶಗಳು ಪ್ರಕಟವಾಗಿದೆ. ಇದರಲ್ಲಿ ಶುಭ್ ಅವರು ನಿರೀಕ್ಷಿಸಿದ್ದಕ್ಕಿಂತ ಕಡಿಮೆ ಅಂಕಗಳನ್ನು ಪಡೆದುಕೊಂಡಿದ್ದಾರೆ. ಫಲಿತಾಂಶ ನೋಡಿದ ನಂತರ ಅವರು ಹಾಸ್ಟೆಲ್ ನ ಕೋಣೆ ಹೋಗಿದ್ದಾರೆ. ಇಂದು ಬೆಳಿಗ್ಗೆ ನೋಡಿದಾಗ ಶುಭ್ ಚೌಧರಿ ಸೀಲಿಂಗ್‌ಗೆ ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿದ್ದಾರೆ. ಪುಟ 2

### ಫೆಬ್ರವರಿ ಕೊನೆಯಲ್ಲಿ ಬಿಜೆಪಿ ಮೊದಲ ಪಟ್ಟಿ ಬಿಡುಗಡೆ

# ಯಾರಿಗೆ ಸಿಗಲಿದೆ ಟಿಕೆಟ್?

**ಬೆಂಗಳೂರು:** ಲೋಕಸಭಾ ಚುನಾವಣೆಗೆ ಕೇವಲ ತಿಂಗಳು ಬಾಕಿ ಇರುವಾಗಲೇ ಫೆಬ್ರವರಿ ಕೊನೆಯಲ್ಲಿ ರಾಜ್ಯದ ಬಿಜೆಪಿ ಅಭ್ಯರ್ಥಿಗಳ ಮೊದಲ ಪಟ್ಟಿ ಪ್ರಕಟವಾಗುವ ಸಾಧ್ಯತೆಯಿದೆ.

14- 16 ಕ್ಷೇತ್ರಗಳ ಮೊದಲ ಪಟ್ಟಿ ಬಿಡುಗಡೆಯಾಗಲಿದ್ದು, ಈ ಪಟ್ಟಿಯಲ್ಲಿ ಬಹುತೇಕ ಹಾಲಿಗಳಿಗೆ ಟಿಕೆಟ್ ಸಿಗಲಿದೆ. ಬಿಜೆಪಿ ಲೋಕಸಭೆ ತಯಾರಿ ಮಧ್ಯೆ ಮೊದಲ ಪಟ್ಟಿ ಪ್ರಕಟಿಸುವ ಬಗ್ಗೆ ಗೃಹ ಸಚಿವ ಅಮಿತ್ ಶಾ ಸುಳಿವು ನೀಡಿದ್ದಾರೆ.

ಗೆಲುವು ಸ್ಪಷ್ಟ ಇರುವ ಕ್ಷೇತ್ರಗಳ ಅಮಿತ್ ಶಾ ವರದಿ ಪಡೆದಿದ್ದು ಮೊದಲ ಪಟ್ಟಿಯಲ್ಲಿ ಬಹುತೇಕ ಗೆಲ್ಲುವ ಹಾಲಿ ಸಂಸದರಿಗೆ ಟಿಕೆಟ್ ಸಿಗಲಿದೆ. ಹೊಸ ಮುಖ, ಅಚ್ಚರಿ ಅಭ್ಯರ್ಥಿ ಹೆಸರು ಎರಡು ಮತ್ತು ಮೂರನೇ ಪಟ್ಟಿಯಲ್ಲಿ ಪ್ರಕಟವಾಗಲಿದೆ. ಪುಟ 2




# ಕಾಂಗ್ರೆಸ್ ಅಭ್ಯರ್ಥಿ ಪರ ಎಸ್‌ಟಿಎಸ್ ಬಹಿರಂಗ ಪ್ರಚಾರ



**ಬೆಂಗಳೂರು:** ಯಶವಂತಪುರದ ಬಿಜೆಪಿ ಶಾಸಕ ಎಸ್‌ಟಿ ಸೋಮಶೇಖರ್ ಅವರು ಬೆಂಗಳೂರು ಶಿಕ್ಷಕರ ಕ್ಷೇತ್ರದ ಉಪಚುನಾವಣೆಗೆ ಪುಟ್ಟಣ್ಣ ಪರ ಮತಯಾಚನೆ ಮಾಡಿದ್ದಾರೆ.

ಯಶವಂತಪುರ ವಿಧಾನಸಭಾ ಕ್ಷೇತ್ರದ ಶಿಕ್ಷಕರ ಜೊತೆ ಸೋಮವಾರ ಸೋಮಶೇಖರ್ ಸಭೆ ನಡೆಸಿದ್ದರು. ಈ ವೇಳೆ ಪುಟ್ಟಣ್ಣಗೆ ಮತ ನೀಡುವಂತೆ ಪ್ರಚಾರ ಮಾಡಿದ್ದಾರೆ. ಸೋಮವಾರದಿಂದ ವಿಧಾನಸಭಾ ಅಧಿವೇಶನ ಆರಂಭವಾಗಿದ್ದು ಶಾಸಕಾಂಗ ಪಕ್ಷದ ಸಭೆಗೆ ಗೈರಾಗಿ ಪುಟ್ಟಣ್ಣ ಪರ ಪತಯಾಚನೆ ಮಾಡಿದ್ದಕ್ಕೆ ಬಿಜೆಪಿ ನಾಯಕರು ಗರಂ ಆಗಿದ್ದಾರೆ. ಪುಟ 2

### ನಿಖಿಲ್ ಮಂಡ್ಯ ಕಣದಿಂದ ಹಿಂದೆ

# ಸರಿದಿದ್ದೇಕೆ?

**ಮಂಡ್ಯ:** ಲೋಕಸಭಾ ಚುನಾವಣೆಗೆ ನಿಖಿಲ್ ಕುಮಾರಸ್ವಾಮಿ ಮತ್ತೆ ಮಂಡ್ಯದಿಂದ ಸ್ಪರ್ಧೆ ಮಾಡುತ್ತಾರೆ ಎಂಬ ಮಾತುಗಳು ಕೇಳಿ ಬಂದಿದ್ದವು. ಆದರೆ ಈ ಬಾರಿ ನಿಖಿಲ್ ಮಂಡ್ಯ ಕಣದಿಂದ ಹಿಂದಕ್ಕೆ ಸರಿದಿದ್ದಾರೆ.



ಬಿಜೆಪಿ ಜೊತೆ ಜೆಡಿಎಸ್ ಮೈತ್ರಿ ಮಾಡಿಕೊಂಡ ಬೆನ್ನಲ್ಲೇ ಜಿಲ್ಲೆಯ ಜೆಡಿಎಸ್ ನಾಯಕರು ಮಂಡ್ಯದಿಂದಲೇ ನಿಖಿಲ್ ಸ್ಪರ್ಧೆ ಮಾಡಬೇಕೆಂದು ಒತ್ತಡ ಹೇರಿದ್ದರು. ಅಷ್ಟೇ ಅಲ್ಲದೇ ನಿಖಿಲ್ ಅಭ್ಯರ್ಥಿಯಾಗುವುದು ಬಹುತೇಕ ಖಚಿತ ಎಂಬ ಮಾತು ಪುಟ 2

# ಚುನಾವಣೆ ಹೊತ್ತಲ್ಲೇ ಬೆಳಗಾವಿ ಜಿಲ್ಲೆ ವಿಭಜನೆಗೆ ಆಸಕ್ತಿ ತೋರಿಸಿದ ಸರ್ಕಾರ

**ಬೆಳಗಾವಿ:** ಲೋಕಸಭೆ ಚುನಾವಣೆ ಇನ್ನೇನು ಸಮೀಪಿಸುತ್ತಿದೆ ಎಂಬ ಹೊತ್ತಿನಲ್ಲಿಯೇ ಬೆಳಗಾವಿ ಜಿಲ್ಲೆ ವಿಭಜನೆ ಎಂಬ ಜೇನಗೂಡಿಗೆ ಕಾಂಗ್ರೆಸ್ ಸರ್ಕಾರ ಕೈಹಾಕುತ್ತಿರುವಂತಿದೆ. ಬೆಳಗಾವಿ ಜಿಲ್ಲೆ ರಾಜಕೀಯ ನಿಯಂತ್ರಣಕ್ಕೆ ತೆಗೆದುಕೊಳ್ಳಲು ಈ ಅಸ್ತ್ರವನ್ನು ಪ್ರಯೋಗ ಮಾಡಲು ಸರ್ಕಾರ ಮುಂದಾಗಿದೆ ಎನ್ನಲಾಗಿದೆ. ರಾಜ್ಯದಲ್ಲಿ ಯಾವುದೇ ಪಕ್ಷದ ಸರ್ಕಾರ ಬಂದರೂ ಬೆಳಗಾವಿ ಜಿಲ್ಲೆ ಅಧಿಕಾರದ ಕೇಂದ್ರ ಬಿಂದು. ಬೆಳಗಾವಿ ರಾಜಕಾರಣಿಗಳ ಪ್ರತಿಷ್ಠೆಗೆ ಸರ್ಕಾರಗಳೇ ಪತನವಾದ ಉದಾಹರಣೆಗಳೂ ಇವೆ.

ಭೌಗೋಳಿಕವಾಗಿ ರಾಜ್ಯದಲ್ಲಿ ಎರಡನೇ ಅತಿ ದೊಡ್ಡ ಜಿಲ್ಲೆಯಾಗಿರುವ ಬೆಳಗಾವಿಯಲ್ಲಿ ಗಡಿ ವಿವಾದದ ಕಾರಣಕ್ಕೆ ಜಿಲ್ಲೆ ವಿಭಜನೆ ಪ್ರಸ್ತಾವ ನೆನೆಗುದ್ದಿಗೆ ಬಿದ್ದಿತ್ತು. ಆದರೆ, ಈಗ ಚುನಾವಣೆ ಹೊತ್ತಲ್ಲೇ ಸರ್ಕಾರ ಜಿಲ್ಲೆ ವಿಭಜನೆಗೆ ಆಸಕ್ತಿ



ತೋರಿದೆ.

ಮತ್ತೊಂದೆಡೆ ಪ್ರತ್ಯೇಕ ಜಿಲ್ಲೆಗಾಗಿ ಗೋಕಾಕ್, ಬೈಲಹೊಂಗಲ, ಚಿಕ್ಕೋಡಿ ಹಾಗೂ ಅಥಣಿ ಜನರಿಂದ ಹೋರಾಟ ನಡೆಯುತ್ತಿದೆ. ಹಲವು ದಶಕಗಳಿಂದ ಜಿಲ್ಲೆ ವಿಭಜನೆ ಕೂಗು ಕೇಳಿ ಬರುತ್ತಿದೆ. ಈ ಮಧ್ಯೆ, ಜಿಲ್ಲಾ ವಿಭಜನೆ ಸಂಬಂಧ ಸಮಗ್ರ ವರದಿ ನೀಡುವಂತೆ ಪ್ರಾದೇಶಿಕ ಆಯುಕ್ತರಿಗೆ ಸರ್ಕಾರ ನಿರ್ದೇಶನ ನೀಡಿದೆ. ಪುಟ 2

# ಮುಂದುವರಿದ ಬೀಟಮ್ಮ ಗ್ಯಾಂಗ್ ಉಪಟಳ



**ಚಿಕ್ಕಮಗಳೂರು:** ಕಾಫಿನಾಡು ಚಿಕ್ಕಮಗಳೂರಿನಲ್ಲಿ ಬೀಟಮ್ಮ ಗ್ಯಾಂಗ್ ಉಪಟಳ ಹೆಚ್ಚಾಗುತ್ತಲೇ ಇದೆ. ಚಿಕ್ಕಮಗಳೂರು ಹೊರವಲಯದ ಇಂದಾವರ ಗ್ರಾಮದಲ್ಲಿ ಬೀಟಮ್ಮ ಗ್ಯಾಂಗ್ ಬೀಡುಬಿಟ್ಟಿದೆ. ಛತ್ರಿಮರ ದೇಗುಲ ಬಳಿ ಕಾಡಾನೆಗಳು ಬೀಡುಬಿಟ್ಟಿವೆ. 26 ಕಾಡಾನೆಗಳೊಂದಿಗೆ ರಾತ್ರೋರಾತ್ರಿ ಬೀಟಮ್ಮ ಗ್ಯಾಂಗ್ ಗ್ರಾಮಕ್ಕೆ ಎಂಟ್ರಿ ಕೊಟ್ಟಿವೆ. ಚಿಕ್ಕಮಗಳೂರು ನಗರ ಪ್ರವೇಶಿಸದಂತೆ ಇಂದಾವರ ಗ್ರಾಮದ ಸುತ್ತ ಅರಣ್ಯ ಇಲಾಖೆ, ಕಾವಲು ಕಾಯುತ್ತಿದ್ದಾರೆ. ಪುಟ 2

### ಬೇಸಿಗೆಗೂ ಮುನ್ನವೇ ಕುಡಿಯೋ ನೀರಿಗೆ

# ಹಾಹಾಕಾರ




**ಬೆಂಗಳೂರು:** ಸಿಲಿಕಾನ್ ಸಿಟಿಯಲ್ಲಿ ಕುಡಿಯುವ ನೀರು ಬೇಕಾದ್ರೇ ಜೇಬು ತುಂಬಾ ಕಾಸಿರಬೇಕು ಅನ್ನುವಂತಹ ಸ್ಥಿತಿ ನಿರ್ಮಾಣವಾಗುತ್ತಿದೆ. ಬೇಸಿಗೆ ಸಮೀಪಿಸುತ್ತಿದ್ದು, ಕಾವೇರಿ ಬರಿದಾಗುತ್ತಿದೆ. ಇದರಿಂದ ಬೆಂಗಳೂರಿನಲ್ಲಿ ನೀರಿನ ಅಭಾವ ಸೃಷ್ಟಿಯಾಗುತ್ತಿದೆ. ಹೀಗಾಗಿ ಜನ ಅನಿವಾರ್ಯವಾಗಿ ಖಾಸಗಿ ಟ್ಯಾಂಕರ್ ನೀರಿನ ಮೊರೆ ಹೋಗುತ್ತಿದ್ದಾರೆ.

ಬೇಸಿಗೆಗೂ ಮುನ್ನವೇ ಬೆಂಗಳೂರಿನಲ್ಲಿ ನೀರಿಗೆ ಹಾಹಾಕಾರ ಶುರುವಾದ ಬೆನ್ನಲ್ಲೇ ಟ್ಯಾಂಕರ್ ನೀರಿಗೆ ಬೇಡಿಕೆ ಹೆಚ್ಚಾಗಿದೆ. ಎಷ್ಟರಮಟ್ಟಿಗೆ ಅಂದ್ರೆ, ಎರಡು, ಮೂರು ಪಟ್ಟು ಹೆಚ್ಚು ದರ ಕೇಳಿದ್ರೂ, ನೀರನ್ನು ಖರೀದಿಸಬೇಕಾಗಿದೆ. ಪ್ರಶ್ನೆ ಮಾಡಿದ್ರೆ, ಬೇಕಾದ್ರೆ ತೆಗೆದುಕೊಳ್ಳಿ, ಇಲ್ಲವಾದ್ರೆ ಬಿಡಿ ಅಂತಾ ಮುಖಕ್ಕೆ ಹೊಡೆದಂತೆ ಹೇಳ್ತಾರೆ. ಅದರಲ್ಲೂ ಲಗ್ಗೆರೆ ಬ್ರಿಡ್ಜ್, ನವರಂಗ್, ದಾಸರಹಳ್ಳಿ, ಹೊಸಕೆರೆಹಳ್ಳಿ, ಮೂಡಲಪಾಳ್ಯಗಳಲ್ಲಿ ವಾಟರ್ ಟ್ಯಾಂಕರ್ ಮಾಲೀಕರು ಹೇಳಿದಷ್ಟೇ ದರ ಕೊಡಬೇಕಾಗಿದೆ. ಪುಟ 2

## ಶಿಕ್ಷಕನಿಂದ ಮಾನಹಾನಿ ಮೆಸೇಜ್ ಮನನೊಂದು ವಿದ್ಯಾರ್ಥಿನಿ ಆತ್ಮಹತ್ಯೆ

**ಮಂಗಳೂರು:** ಶಿಕ್ಷಕನೋರ್ವ ವಿದ್ಯಾರ್ಥಿನಿಯೋರ್ವಳ ಬಗ್ಗೆ ಮಾನಹಾನಿ ಮೆಸೇಜ್ ಕಳಿಸಿದ್ದಕ್ಕೆ ಮನನೊಂದು ಹತ್ತನೇ ತರಗತಿ ವಿದ್ಯಾರ್ಥಿನಿ ಆತ್ಮಹತ್ಯೆ ಮಾಡಿಕೊಂಡ ಘಟನೆ ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲೂಕಿನ ಧರ್ಮಸ್ಥಳದ ಬಳಿ ನಡೆದಿದೆ. ಧರ್ಮಸ್ಥಳದ ಖಾಸಗಿ ಶಿಕ್ಷಣ ಸಂಸ್ಥೆಯಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದ ವಿದ್ಯಾರ್ಥಿನಿಗೆ ಡ್ರಾಯಿಂಗ್ ಶಿಕ್ಷಕ ರೂಪೇಶ್ ಪೂಜಾರಿ ಎಂಬಾತ ಮೃತಪಟ್ಟ ವಿದ್ಯಾರ್ಥಿನಿಯ ಬಗ್ಗೆ ಇನ್ನೊಂದು ವಿದ್ಯಾರ್ಥಿನಿಯ ಮೊಬೈಲ್‌ಗೆ ಮಾನಹಾನಿ ರೀತಿಯ ಮೆಸೇಜ್ ಕಳಿಸಿದ್ದ. ಈ ಬಗ್ಗೆ ತಿಳಿದ ವಿದ್ಯಾರ್ಥಿನಿ ಮನೆಯವರಿಗೆ ತಿಳಿಸಿ ಶಾಲೆಗೆ ತಾಯಿ ಜೊತೆ ಹೋಗಿ ವಿಚಾರಿಸಿದ್ದಳು. ಬಳಿಕ ಈ ಘಟನೆಯಿಂದ ನೊಂದ ವಿದ್ಯಾರ್ಥಿನಿ ಫೆ.7ರಂದು ಶಾಲೆಯಲ್ಲಿ ಬಿಸ್ಕೆಟ್ ಜೊತೆ ಇಲಿ ಪಾಷಾಣ ಸೇವಿಸಿದ್ದಳು. ಗಂಭೀರ ಸ್ಥಿತಿಯಲ್ಲಿದ್ದ ಆಕೆಯನ್ನು ಮಂಗಳೂರಿನ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಬಳಿಕ ಹೆಚ್ಚಿನ ಚಿಕಿತ್ಸೆಗೆ ಬೆಂಗಳೂರಿಗೆ ರವಾನಿಸಲಾಗಿತ್ತು, ಚಿಕಿತ್ಸೆ ಫಲಕಾರಿಯಾಗದೆ ಇಂದು ವಿದ್ಯಾರ್ಥಿನಿ ಸಾವನ್ನಪ್ಪಿದ್ದಾಳೆ. ಶಿಕ್ಷಕನ ವಿರುದ್ಧ ಧರ್ಮಸ್ಥಳ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಕುಮಾರಣ್ಣ ರಾಜ್ಯಕ್ಕೆ ಬೇಕೆಂದು ಶಾಸಕರು, ಮುಖಂಡರ ಕೂಗು

**ಮಂಡ್ಯ:** ಕುಮಾರಣ್ಣ ರಾಜ್ಯಕ್ಕೆ ಬೇಕು ಅಂತಾ ನಮ್ಮ ಶಾಸಕರು ಮತ್ತು ಮುಖಂಡರ ಕೂಗಾಗಿದೆ ಎಂದು ಜೆಡಿಎಸ್ ಯುವನಾಯಕ ನಿಖಿಲ್ ಕುಮಾರಸ್ವಾಮಿ ತಿಳಿಸಿದ್ದಾರೆ. ಪಾಂಡವಪುರದಲ್ಲಿ ಸುದ್ದಿಗಾರರೊಂದಿಗೆ ಪ್ರತಿಕ್ರಿಯಿಸಿದ ಅವರು, ಕುಮಾರಸ್ವಾಮಿ ಚುನಾವಣೆಯಲ್ಲಿ ಸ್ಪರ್ಧೆ ಮಾಡುವುದರ ಬಗ್ಗೆ ಮಾತನಾಡಿದ್ದಾರೆ. ಕುಮಾರಣ್ಣ ಅವರಿಗೆ ಹಲವು ಲೋಕಸಭಾ ಕ್ಷೇತ್ರದಲ್ಲಿ ಒತ್ತಾಯ ಇದೆ. ಎಲ್ಲಿ ಅಂತಾ ಅವರು ಸ್ಪರ್ಧೆ ಮಾಡ್ತಾರೆ. ಕುಮಾರಣ್ಣ ನಮ್ಮ ರಾಜ್ಯಕ್ಕೆ ಬೇಕು. ಅವರು ಲೋಕಸಭಾ ಸ್ಪರ್ಧೆ ಮಾಡೋದು ಬಿಡೋದು ಮುಂದೆ ಗೊತ್ತಾಗುತ್ತೆ. ಅವರ ಸ್ಪರ್ಧೆ ಬಗ್ಗೆ ನನಗೆ ಗೊತ್ತಿಲ್ಲ. ಅದು ಪಕ್ಷದ ವರಿಷ್ಠರ ತೀರ್ಮಾನ. ಅವರು ನಮ್ಮ ರಾಜ್ಯಕ್ಕೆ ಬೇಕು ಅಂತಾ ಶಾಸಕರು ಮುಖಂಡರ ಕೂಗಾಗಿದೆ ಎಂದು ಸುಳಿವು ನೀಡಿದ್ದಾರೆ. ಕೆಲವರು ಕುಮಾರಣ್ಣ ಕೇಂದ್ರಕ್ಕೆ ಹೋಗಲಿ ಅಂತಾರೆ. ಕೆಲವರು ರಾಜ್ಯದಲ್ಲಿ ಉಳಿದುಕೊಳ್ಳಲಿ ಅಂತಾರೆ. ಅಂತಿಮವಾಗಿ ಏನ್ ಆಗುತ್ತೆ ಎನ್ನೋದು ಕಾದು ನೋಡೋಣ. ನನ್ನ ಸ್ಪರ್ಧೆಗೆ ತೆರೆ ಬಿದ್ದಿದೆ. ಏನೇ ಕೇಳಿದ್ರು ಇದೇ ಉತ್ತರ. 2019ರ ಸೋಲಿನ ಬಗ್ಗೆ ಚಿಂತಿಸಿ ಫಲ ಏನು ಇಲ್ಲ. ಮುಂದೆ ಆಗುವುದರ ಬಗ್ಗೆ ಯೋಚನೆ ಮಾಡಬೇಕು ಅಷ್ಟೇ. ನಾನು ಪಾಸಿಟಿವ್ ಡೈರೆಕ್ಷನ್ ಅಲ್ಲಿ ಹೋಗಬೇಕೆಂಬ ಮನಸ್ಥಿತಿಯಲ್ಲಿ ಇದ್ದೀನಿ. ಕಳೆದು ಹೋಗಿರುವ ವಿಚಾರದ ಬಗ್ಗೆ ನಾನು ಪ್ರಾಮುಖ್ಯತೆ ಕೊಡುವುದಿಲ್ಲ ಎಂದಿದ್ದಾರೆ. ಸುಮಲತಾ ಬಗ್ಗೆ ಮಾತನಾಡಿ, ಬಿಜೆಪಿ ಸುಮಲತಾ ಅವರ ಟಿಕೆಟ್ ಕೇಳಲು ಅಧಿಕಾರ ಇದೆ ಕೇಳ್ತಾರೆ. ಅಂತಿಮವಾಗಿ ಕೇಂದ್ರದ ನಾಯಕರು ತೀರ್ಮಾನ ಮಾಡುತ್ತಾರೆ. ಮೈತ್ರಿ ಬಗ್ಗೆ ಮಾತನಾಡುವವರ ಬಗ್ಗೆ ಅಮಿತ್ ಶಾ ಅವರು ಬಿಜೆಪಿ ನಾಯಕರಿಗೆ ಸಂದೇಶ ನೀಡಿದ್ದಾರೆ. ನಮ್ಮ ಪಕ್ಷದಲ್ಲಿ ಮೈತ್ರಿ ಬಗ್ಗೆ ಗೊಂದಲ ಇಲ್ಲ. ನಮ್ಮಲ್ಲಿ ಯಾರು ಅಪಸ್ವರದ ಮಾತನ್ನು ಹೇಳಿಲ್ಲ ಎಂದು ಸ್ಪಷ್ಟನೆ ನೀಡಿದ್ದಾರೆ.

# ಕೇಸರಿ ಇವರೊಬ್ಬರ ಆಸ್ತಿಯಾ?



**ಬೆಂಗಳೂರು:** ಕರ್ನಾಟಕ ಬಜೆಟ್ ಅಧಿವೇಶನದ ಮೊದಲ ದಿನವಾದ ವಿಪಕ್ಷ ಬಿಜೆಪಿ ಶಾಸಕರು ಕೇಸರಿ ಶಾಲು ಧರಿಸಿಕೊಂಡು ಹಾಜರಾದರಲ್ಲದೆ, ಜೈ ಶ್ರೀರಾಮ್ ಘೋಷಣೆಗಳನ್ನು ಕೂಗಿದರು. ಈ ಬಗ್ಗೆ ಪ್ರತಿಕ್ರಿಯೆ ನೀಡಿದ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್, ಬಿಜೆಪಿಯವರು ಕೇಸರಿ ಶಾಲಾದರೂ ಹಾಕಿಕೊಳ್ಳಲಿ ಕಪ್ಪಾದರೂ ಹಾಕಿಕೊಳ್ಳಲಿ. ಕೇಸರಿ ಇವರೊಬ್ಬರ ಆಸ್ತಿಯಾ ಎಂದು ಪ್ರಶ್ನಿಸಿದರು.

ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಜಂಟಿ ಅಧಿವೇಶನವನ್ನು ಉದ್ದೇಶಿ ಮಾತನಾಡುತ್ತಾ, ಇಡೀ ದೇಶಕ್ಕೆ ಕರ್ನಾಟಕ ಸರ್ಕಾರದ ಗ್ಯಾರಂಟಿ ಯೋಜನೆಗಳು ಮಾದರಿಯಾಗಿವೆ. ಸರ್ಕಾರವು ನಡೆ ನುಡಿಗಳಗಳನ್ನು ಒಂದಾಗಿಸಿಕೊಂಡು ಕೆಲಸ ಮಾಡುತ್ತಿದೆ ಎಂದೆಲ್ಲಾ ಹಾಡಿ ಹೊಗಳಿದರು. ಆದರೆ, ರಾಜ್ಯಪಾಲರಿಂದ ಸರ್ಕಾರವು ಸುಳ್ಳು ಭಾಷಣ ಮಾಡಿಸಿದೆ ಎಂದು ವಿಪಕ್ಷ ಬಿಜೆಪಿ ಟೀಕಿಸುತ್ತಿದೆ.

ಈ ಬಗ್ಗೆ ಪ್ರತಿಕ್ರಿಯೆ ನೀಡಿದ ಡಿಕೆ ಶಿವಕುಮಾರ್, ನಾವು ರಾಜ್ಯದ ಹಿತಕ್ಕೆ ಏನು ಬೇಕೋ ಅದನ್ನು ಮಾಡುತ್ತೇವೆ ಎಂದರು. ಅಲ್ಲದೆ, ನಮ್ಮ ಗ್ಯಾರಂಟಿಗಳನ್ನೇ ಇವರು ಕಾಪಿ ಮಾಡಿದ್ದಾರೆ. ನಮ್ಮ ಗ್ಯಾರಂಟಿ ಕಾಪಿ ಮಾಡಿಯೇ ಮೋದಿ ಗ್ಯಾರಂಟಿ ಅಂತ ಮಾಡುತ್ತಿಲ್ಲವೇ? ಕರ್ನಾಟಕ ಮಾಡೆಲ್ ಅನ್ನೇ ನಾವು ಜಾರಿ ಮಾಡುತ್ತೇವೆ ಎಂದರು.

ಕರ್ನಾಟಕ ಬಜೆಟ್ ಅಧಿವೇಶನ 2024 ಇಂದಿನಿಂದ ಆರಂಭವಾಗಿದೆ. ಹತ್ತು ದಿನಗಳ ಕಾಲ ನಡೆಯುವ ವಿಧಾನಮಂಡಲ ಅಧಿವೇಶನದಲ್ಲಿ ಹಣಕಾಸು ಸಚಿವರೂ ಆಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಫೆಬ್ರವರಿ 16 ರಂದು ಬಜೆಟ್ ಮಂಡನೆ ಮಾಡಲಿದ್ದಾರೆ. ಇಂದು ಜಂಟಿ ಅಧಿವೇಶನ ಉದ್ದೇಶಿಸಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಭಾಷಣ ಮಾಡಿದರು.

ಬಜೆಟ್ ಅಧಿವೇಶನದ ಮೊದಲ ದಿನ ಬಿಜೆಪಿ ನಾಯಕರು ಕೇಸರಿ ಶಾಲೆ ಧರಿಸಿಕೊಂಡು ಬಂದಿದ್ದು ವಿಶೇಷವಾಗಿದೆ. ಸದ್ಯ ರಾಜ್ಯದಲ್ಲಿ ಮಂಡ್ಯದ ಕೆರಗೋಡಿನಲ್ಲಿ ಹನುಮ ಧ್ವಜ ತೆರವು ವಿಚಾರ ರಾಜ್ಯವ್ಯಾಪಿ ಹಬ್ಬಿದೆ. ಕೆರಗೋಡಿನಲ್ಲಿ ಹನುಮ ಧ್ವಜವನ್ನು ಮತ್ತೆ ಹಾರಿಸಲು ಬಿಜೆಪಿ ನಾಯಕರು ಪಣತೊಟ್ಟಿದ್ದಾರೆ. ಇದರ ಪ್ರತೀಕವೆಂಬಂತೆ ಬಿಜೆಪಿ ಶಾಸಕರು ಅಧಿವೇಶನಕ್ಕೆ ಕೇಸರಿ ಶಾಲು ಧರಿಸಿಕೊಂಡು ಬಂದಿದ್ದಾರೆ. ಈ ಮೂಲಕ ಹಿಂದೂ ವಿರೋಧ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಸರ್ಕಾರವೆಂದು ಸಾಂಕೇತಿಕವಾಗಿ ಟೀಕಿಸಿದ್ದಾರೆ.

# ಸದನದಲ್ಲಿ ಜೈಶ್ರೀರಾಮ್, ಜೈಭೀಮ್ ಸದ್ದು



**ಬೆಂಗಳೂರು:** ರಾಜ್ಯದಲ್ಲಿ ಧ್ವಜ ದಂಗಲ್ ತೀವ್ರಗೊಂಡಿರುವ ಹೊತ್ತಲ್ಲಿಯೇ ವಿಧಾನಮಂಡಲ ಅಧಿವೇಶನ ಶುರುವಾಗಿದೆ.

ಮೊದಲ ದಿನವಾದ ಇಂದು ಜಂಟಿ ಅಧಿವೇಶನದಲ್ಲಿ ಕೇಸರಿಧಾರಿ ಬಿಜೆಪಿಗರು ಜೈ ಶ್ರೀರಾಮ್ ಘೋಷಣೆ ಮೊಳಗಿಸಿದ್ದಾರೆ. ಇದಕ್ಕೆ ಪ್ರತಿಯಾಗಿ ಕಾಂಗ್ರೆಸ್ಸಿಗರು ಭಾರತ್ ಮಾತಾಕಿ ಜೈ, ಜೈ ಭೀಮ್ ಎಂಬ ಘೋಷಣೆಗಳನ್ನು ಕೂಗಿದ್ದಾರೆ. ರಾಜ್ಯಪಾಲರು ಭಾಷಣ ಮುಗಿಸುವಾಗ ಬೋಲೋ ಭಾರತ್ ಮಾತಾಕಿ ಜೈ ಅಂದ್ರು. ಆಗ ಎಲ್ರೂ ಭಾರತ್ ಮಾತಾಕಿ ಜೈ ಎಂದ್ರು. ಈ ಬೆನ್ನಲ್ಲೇ ಬಿಜೆಪಿ ಶಾಸಕರು ಜೈ ಶ್ರೀರಾಮ್ ಎಂದು ಮೂರ್ನಾಲ್ಕು ಬಾರಿ ಕೂಗಿದ್ರು. ಆಗ ಇದಕ್ಕೆ ಪ್ರತಿಯಾಗಿ ಕಾಂಗ್ರೆಸ್ ಶಾಸಕರು, ಭಾರತ್ ಮಾತಾಕಿ ಜೈ, ಜೈ ಭೀಮ್, ಜೈ ಬಸವಣ್ಣ ಎಂಬ ಘೋಷಣೆ ಮೊಳಗಿಸಿದ್ರು. ಇದಕ್ಕೂ ಮುನ್ನ ಬಿಜೆಪಿ ಶಾಸಕರು ಕೇಸರಿ ಶಾಲು ಹಾಕಿಕೊಂಡು ಸದನಕ್ಕೆ ಬಂದ್ರು. ಜೈ ಶ್ರೀರಾಮ್ ಎನ್ನುತ್ತಲೇ ಘೋಷಣೆ ಮಾಡುತ್ತಲೇ ಮೊಗಸಾಲೆ ಪ್ರವೇಶಿಸಿದ್ರು.

ಈ ವೇಳೆ ಅಲ್ಲಿ ಕಾಣಿಸಿಕೊಂಡ ಕಾಂಗ್ರೆಸ್ ಶಾಸಕ ಗಣಿಗ ರವಿಗೆ ಮಾಜಿ ಮಂತ್ರಿ ಮುನಿರತ್ನ ಕೇಸರಿ ಶಾಲು ಹಾಕಿದ್ರು. ಇದಕ್ಕೆ ಗಣಿಗ ರವಿ ಆಕ್ಷೇಪಿಸಲಿಲ್ಲ. ಕೇಸರಿ ಶಾಲಿನೊಂದಿಗೆ ಮೊಗಸಾಲೆಗೆ ತೆರಳಿದ್ರು. ಆದ್ರೆ, ಎಸ್‌ಟಿ ಸೋಮಶೇಖರ್ ಮಾತ್ರ ಕೇಸರಿ ಶಾಲು ಹಾಕಿಕೊಳ್ಳಲಿಲ್ಲ.. ಇದು ಮತ್ತೊಮ್ಮೆ ಚರ್ಚೆಗೆ ಗ್ರಾಸವಾಯ್ತು. ಬಿಜೆಪಿಗರ ಕೇಸರಿ ರಾಜಕೀಯಕ್ಕೆ ಡಿಸಿಎಂ ಡಿಕೆ ಶಿವಕುಮಾರ್ ತಮ್ಮ ಎಂದಿನ ಶೈಲಿಯಲ್ಲಿ ಕೌಂಟರ್ ನೀಡಿದ್ರು.

# ಸಹಕಾರಿ ಕ್ಷೇತ್ರ ಹಾಳಾಗಲು ಹಿಂದಿನ ಸರ್ಕಾರವೇ ಕಾರಣ

**ಹುಬ್ಬಳ್ಳಿ:** ಹಿಂದಿನ ಸರ್ಕಾರವೇ ಸಹಕಾರಿ ಕ್ಷೇತ್ರವನ್ನು ಹಾಳು ಮಾಡಲು ಯತ್ನಿಸಿದ್ದು, ಈಗ ಪ್ರಧಾನಿ ನರೇಂದ್ರ ಮೋದಿ ಹಾಗೂ ಸಹಕಾರ ಸಚಿವ ಅಮಿತ್ ಶಾ ಬಂದ ನಂತರ ಚೇತರಿಕೆ ಕಾಣುತ್ತಿದೆ ಎಂದು ಸಹಕಾರಿ ಸಂಘಗಳ ಒಕ್ಕೂಟದ ಅಧ್ಯಕ್ಷ, ಶಾಸಕ ಜಿ.ಟಿ. ದೇವೇಗೌಡ ಆರೋಪಿಸಿದರು. ಇಲ್ಲಿನ ಅಮರಗೋಳ ಎಪಿಎಂಸಿ ಬಳಿಯ ವಿದ್ಯಾಧಿರಾಜ ಭವನದಲ್ಲಿ ಹಮ್ಮಿಕೊಳ್ಳಲಾಗಿದ್ದ ಸಹಕಾರ ಭಾರತಿ ಕರ್ನಾಟಕ ಹಾಗೂ ಅಖಿಲ ಭಾರತ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘಗಳ (ಪಿಎಸಿಎಸ್) ರಾಷ್ಟ್ರೀಯ ಅಧಿವೇಶನ ಉದ್ಘಾಟಿಸಿ ಮಾತನಾಡಿದರು.

ಇಂದಿಗೂ ಕೆಲವರು ಈ ಸಹಕಾರಿ ಕ್ಷೇತ್ರದಿಂದಲೇ ರಾಜಕೀಯ ನೆಲೆ ಕಂಡುಕೊಂಡಿದ್ದಾರೆ. ಆದರೆ, ಇದರ ಏಳ್ಗೆಗೆ ಧ್ವನಿ ಎತ್ತುವ ಕಾರ್ಯ ಮಾಡದಿರುವುದು ನೋವಿನ ಸಂಗತಿ. ಕೇಂದ್ರ ಸರ್ಕಾರದಲ್ಲಿ ಪ್ರಥಮ ಬಾರಿಗೆ ಸಹಕಾರಿ ಕ್ಷೇತ್ರದ ಖಾತೆ ತೆರೆದ ಕೀರ್ತಿ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಸಲ್ಲುತ್ತದೆ ಎಂದರು. ಕೇಂದ್ರ ಸಹಕಾರಿ ಖಾತೆಯ ಸಚಿವ ಅಮಿತ್ ಶಾ ಅವರು ಎಲ್ಲ ಸಹಕಾರಿ ಸಂಘಗಳನ್ನು ಡಿಜಿಟಲೀಕರಣಗೊಳಿಸುವ ಜತೆಗೆ ಅನೇಕ ಯೋಜನೆ ಜಾರಿಗೆ ತಂದು ಸಹಕಾರಿ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಶ್ರಮಿಸುತ್ತಿದ್ದಾರೆ. ಪಕ್ಷಾತೀತ, ಜಾತ್ಯಾತೀತ ಹಾಗೂ ಸಮಾನತೆಯ ತತ್ವದಲ್ಲಿ ಮುನ್ನಡೆಯುತ್ತಿರುವ ಕ್ಷೇತ್ರವೇ ಈ ಸಹಕಾರ ಕ್ಷೇತ್ರ ಎಂದರು.

ಸರ್ಕಾರದ ಹಸ್ತಕ್ಷೇಪ: ಕೃಷಿ ಕ್ಷೇತ್ರ ಮತ್ತು ದೇಶದ ಸಮಗ್ರ ಆರ್ಥಿಕ ಅಭಿವೃದ್ಧಿಗೆ ಸಹಕಾರ ಸಂಘಗಳ ಪಾತ್ರ ಹಿರಿದಾಗಿದ್ದು, ಇವುಗಳನ್ನು ಉಳಿಸಿ-ಬೆಳೆಸುವ ಕೆಲಸವನ್ನು ಸಂಘದ ಸರ್ವ ಸದಸ್ಯರು ಮತ್ತು ಪದಾಕಾರಿಗಳು ಪ್ರಾಮಾಣಿಕವಾಗಿ ಮಾಡಬೇಕು. ಬರಗಾಲ, ಅತಿವೃಷ್ಟಿ, ಅನಾವೃಷ್ಟಿ ಸೇರಿದಂತೆ ಅನೇಕ ಕಾರಣದಿಂದ ಆರ್ಥಿಕ ಸಂಕಷ್ಟಕ್ಕೆ ಒಳಗಾಗುವ ರೈತರ ಕಣ್ಣೀರು ಒರೆಸುವ ಕೆಲಸವನ್ನು ಕೃಷಿ ಪತ್ತಿನ ಸಹಕಾರಿ ಸಂಘ ಮಾಡುತ್ತಿವೆ. ಆದರೆ, ಕೆಲವೊಮ್ಮೆ ಸರ್ಕಾರದ ಹಸ್ತಕ್ಷೇಪದಿಂದ ಸಹಕಾರ ಕ್ಷೇತ್ರ ಅಭಿವೃದ್ಧಿಯಲ್ಲಿ ಹಿನ್ನಡೆ ಅನುಭವಿಸುವಂತಾಗಿದೆ ಎಂದು ಕಳವಳ ವ್ಯಕ್ತಪಡಿಸಿದರು. ಸಹಕಾರಿಗಳಿಂದಲೇ ನನ್ನ ಗೆಲುವು: ಇಂದಿನ ಸ್ಪರ್ಧಾತ್ಮಕ ಕ್ಷೇತ್ರದಲ್ಲಿ ಗಟ್ಟಿಯಾಗಿ ಉಳಿದಿರುವ ಕ್ಷೇತ್ರವೆಂದರೆ ಅದು ಸಹಕಾರಿ ಕ್ಷೇತ್ರ. ಅನೇಕರಿಗೆ ಸಹಕಾರಿ ಸಂಘಗಳೇ ಗೌರವ ಮತ್ತು ನಾಯಕತ್ವ ಗುಣವನ್ನು ಬೆಳೆಸಿವೆ. ನಾನು ಚುನಾವಣೆಯಲ್ಲಿ ಸಿದ್ದರಾಮಯ್ಯ ಅವರನ್ನು 36 ಸಾವಿರ ಮತಗಳ ಅಂತರದಿಂದ ಸೋಲಿಸುವಾಗ ನನ್ನ ಬಳಿ ಹಣ ಇರಲಿಲ್ಲ. ಇದೇ ಸಹಕಾರಿ ಸಂಘ ಹಾಗೂ ಜನರು ನನ್ನನ್ನು ಚುನಾವಣೆಯಲ್ಲಿ ಗೆಲ್ಲಿಸಿದ್ದಾರೆ. ಇಂದು ರೈತರು ಉಳಿದಿದ್ದಾರೆ ಎಂದರೆ, ಅದಕ್ಕೆ ಸಹಕಾರಿ ಕ್ಷೇತ್ರದ ಕೊಡುಗೆಯಾದ ಹೈನುಗಾರಿಕೆಯೇ ಪ್ರಮುಖ ಕಾರಣ. ಸಂಘದ ಗೌರವವನ್ನು ಹೆಚ್ಚಿಸುವ ಕೆಲಸವನ್ನು ಸಂಘದ ಕಾರ್ಯದರ್ಶಿಗಳು, ನಿರ್ದೇಶಕರು ಹಾಗೂ ಸದಸ್ಯರು ಮಾಡಬೇಕಿದೆ. ಈ ರಾಷ್ಟ್ರೀಯ ಅಧಿವೇಶನ ಸಹಕಾರ ಕ್ಷೇತ್ರದ ಪುನರುತ್ಥಾನಕ್ಕೆ ಸ್ಫೂರ್ತಿಯಾಗಲಿ ಎಂದರು.

# ತೀರ್ಥಹಳ್ಳಿಯಲ್ಲಿ ಒಂದೇ ದಿನ 6 ಜನರಿಗೆ ಮಂಗನ ಕಾಯಿಲೆ

**ಶಿವಮೊಗ್ಗ:** ರಾಜ್ಯದ ಮಲೆನಾಡು ಭಾಗದಲ್ಲಿ ಮಂಗನ ಕಾಯಿಲೆ ಹೆಚ್ಚುತ್ತಿದ್ದು, ಇದರಿಂದ ಜನರಲ್ಲಿ ಆತಂಕ ಶುರುವಾಗಿದೆ. ತೀರ್ಥಹಳ್ಳಿ ಪಟ್ಟಣದಲ್ಲಿ ಆರು ಜನರಿಗೆ ಮಂಗನ ಕಾಯಿಲೆ ಬಂದಿದೆ. ಸದ್ಯ ಈ ಆರು ಜನರನ್ನು ತೀರ್ಥಹಳ್ಳಿ ತಾಲೂಕು ಆಸ್ಪತ್ರೆಗೆ ದಾಖಲಿಸಲಾಗಿದೆ.

ಇನ್ನು ರೋಗಿಗಳ ಸಂಪರ್ಕಕ್ಕೆ ಬಂದ 42 ಜನರ ರಕ್ತ ತಪಾಸಣೆ ಮಾಡಲಾಗಿದೆ. ತಾಲೂಕು ಆಸ್ಪತ್ರೆಗೆ ಜಿಲ್ಲಾ ವೈದ್ಯಾಧಿಕಾರಿ ರಾಜೇಶ್ ಸುರಗಿಹಳ್ಳಿ ಭೇಟಿ ನೀಡಿ, ಪಾಸಿಟಿವ್ ಬಂದ ಆರು ರೋಗಿಗಳ ಆರೋಗ್ಯ ವಿಚಾರಿಸಿದರು. ''ಆತಂಕ ಪಡುವ ಅಗತ್ಯವಿಲ್ಲ. ಸೂಕ್ತ ಚಿಕಿತ್ಸೆಯ ವ್ಯವಸ್ಥೆ ಆಸ್ಪತ್ರೆಯಲ್ಲಿ ಮಾಡಲಾಗಿದೆ. ಧೈರ್ಯದಿಂದ ಇರಿ'' ಎಂದು ರೋಗಿಗಳಿಗೆ ಧೈರ್ಯ ತುಂಬಿದರು. ಶಿವಮೊಗ್ಗ ಜಿಲ್ಲೆಯಲ್ಲಿ ಇಲ್ಲಿಯವರೆಗೆ ಒಟ್ಟು 32 ಮಂಗನ ಕಾಯಿಲೆ ಪ್ರಕರಣಗಳು ವರದಿಯಾಗಿದೆ.

**ಮಂಗನ ಕಾಯಿಲೆಗೆ 18 ವರ್ಷದ ಯುವತಿ ಸಾವು:** ಒಂದು ವಾರದ ಹಿಂದೆ ಶಿವಮೊಗ್ಗ ಜಿಲ್ಲೆಯ ಹೊಸನಗರ ತಾಲೂಕಿನ ಅರಳಿಕೊಪ್ಪ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬೊಪ್ಪನಮನೆ ಗ್ರಾಮದಲ್ಲಿ ಮಂಗನ ಕಾಯಿಲೆಯಿಂದ 18 ವರ್ಷದ ಯುವತಿ ಮೃತಪಟ್ಟಿದ್ದರು. ಬೊಪ್ಪನೆಮನೆ ಗ್ರಾಮದ ನಿವಾಸಿ ಅನನ್ಯ ಮೃತ ಯುವತಿ. ಇದು ಮಂಗನ ಕಾಯಿಲೆಗೆ ಮೃತಪಟ್ಟ ಮೊದಲ ಪ್ರಕರಣವಾಗಿದೆ. ಚಳಿ ಜ್ವರದಿಂದ ಬಳಲುತ್ತಿದ್ದ ಯುವತಿಗೆ ಮೆಗ್ಗಾನ್ ಆಸ್ಪತ್ರೆಯಲ್ಲಿ ಮೂರು ದಿನ ಚಿಕಿತ್ಸೆ ನೀಡಲಾಗಿತ್ತು. ಹೆಚ್ಚಿನ ಚಿಕಿತ್ಸೆಗೆ ಮಣಿಪಾಲ್ ಕೆಎಂಸಿ ಆಸ್ಪತ್ರೆಗೆ ಪೋಷಕರು ದಾಖಲಿಸಿದ್ದರು. ಆದರೆ ಚಿಕಿತ್ಸೆ ಫಲಿಸದೆ ಯುವತಿ ಮೃತಪಟ್ಟಿದ್ದಾಳೆ.

ಕಳೆದ ಕೆಲವು ದಿನಗಳ ಹಿಂದೆ ಅಂದರೆ ಫೆ.08ರ ವರೆಗೆ ಚಿಕ್ಕಮಗಳೂರು ಜಿಲ್ಲೆಯಲ್ಲಿ ಒಂಬತ್ತು ಜನರು ಮಂಗನ ಕಾಯಿಲೆಯಿಂದ ಬಳಲುತ್ತಿದ್ದರು. ಜಿಲ್ಲೆಯಲ್ಲಿ ಪತ್ತೆಯಾದ ಒಟ್ಟು ಒಂಬತ್ತು ಮಂಗನ ಕಾಯಿಲೆ ಪ್ರಕರಣಗಳ ಪೈಕಿ ಓರ್ವ ಸೋಂಕಿತ ಮೃತಪಟ್ಟಿದ್ದರು. ಇನ್ನು ಇಲ್ಲಿ ಪತ್ತೆಯಾದ ಮಂಗನ ಕಾಯಿಲೆ ಪ್ರಕರಣಗಳಲ್ಲಿ ಅತಿ ಹೆಚ್ಚು ಪ್ರಕರಣಗಳು ಓಎಲ್‌ವಿ ಎಸ್ಟೇಟ್ ಭಾಗದಲ್ಲಿ ಪತ್ತೆಯಾಗಿವೆ.

## ಮೊದಲ ಪುಟದಿಂದ...

### 3 ದಿನ ಬಾಕಿ

ಪರಿಶಿಷ್ಟರಿಗೆ ಕೊಡಬೇಕೆಂದು ಚರ್ಚೆಯಾಗಿದೆ. ಅಲ್ಪಸಂಖ್ಯಾತ ಕೋಟಾದಿಂದ ಹಾಲಿ ಸದಸ್ಯ ನಾಸೀರ್ ಹುಸೇನ್ ಪುನರಾಯ್ಕೆ ಬಯಸಲಿದ್ದು, ಹೈಕಮಾಂಡ್ ಕಡೆಯಿಂದ ಭರವಸೆಯೂ ಸಿಕ್ಕಿದೆ. ಆದರೆ, ಕೊನೆ ಹಂತದ ಬದಲಾವಣೆ ಹೊರತುಪಡಿಸಿ ನಾಸೀರ್ ಪುನಃ ಕಣಕ್ಕಿಳಿಯುವುದು ಬಹುತೇಕ ಖಚಿತ ಎಂದು ಹೇಳಲಾಗುತ್ತಿದೆ.

### ಶಾಲಾ ಬಸ್ ಜಪ್ತಿ

ಕಳೆದ ಆರು ತಿಂಗಳಲ್ಲಿ ಬಿಬಿಎಂಪಿ 10,603 ಅಂಗಡಿಗಳು ಮತ್ತು ವಾಣಿಜ್ಯ ಸಂಸ್ಥೆಗಳನ್ನು ಸೀಲ್ ಮಾಡಿದೆ. ಆದರೆ, ವಶಪಡಿಸಿಕೊಂಡ ವಾಹನಗಳನ್ನು ಇಡಲು ಸೂಕ್ತ ಸ್ಥಳಾವಕಾಶ ಇಲ್ಲದ ಕಾರಣ ಚರಾಸ್ತಿಗಳನ್ನು ಮುಟ್ಟುಗೋಲು ಹಾಕಿಕೊಂಡಿಲ್ಲ. ಬಿಬಿಎಂಪಿ ಕಾಯ್ದೆಯಡಿ, ಸ್ಥಿರ ಮತ್ತು ಚರಾಸ್ತಿಗಳನ್ನು ವಶಪಡಿಸಿಕೊಳ್ಳಲು ಅವಕಾಶವಿದೆ.

ನಾವು ಜನರಿಗೆ ತೊಂದರೆ ನೀಡಲು ಬಯಸುವುದಿಲ್ಲ. ಆದ್ದರಿಂದ ತೆರಿಗೆಯನ್ನು ವಂಚಿಸಿದವರ ಮನೆಗೆ ಬೀಗ ಹಾಕುತ್ತಿಲ್ಲ ಎಂದು ಹಿರಿಯ ಕಂದಾಯ ಅಧಿಕಾರಿಯೊಬ್ಬರು ತಿಳಿಸಿರುವುದಾಗಿ ಮಾಧ್ಯಮವೊಂದು ವರದಿ ಮಾಡಿದೆ.

**46,318 ನೋಟಿಸ್ ಜಾರಿ:** ಒಟ್ಟಾರೆ 2023ರ ನವೆಂಬರ್ ಮತ್ತು 2024ರ ಫೆಬ್ರವರಿ ನಡುವೆ 46,318 ಆಸ್ತಿಗಳಿಗೆ ತೆರಿಗೆ ಬಾಕಿ ವಸೂಲಿಗೆ ಬಿಬಿಎಂಪಿ ನೋಟಿಸ್ ಜಾರಿ ಮಾಡಿದೆ. ಇದೇ ಅವಧಿಯಲ್ಲಿ, ಕಂದಾಯ ಅಧಿಕಾರಿಗಳು ನಿವೇಶನಗಳನ್ನು ಸೀಲ್ ಮಾಡಿದರೂ ತೆರಿಗೆ ಪಾವತಿಸದ ಪ್ರಕರಣಕ್ಕೆ ಸಂಬಂಧಿಸಿದ 7,203 ಆಸ್ತಿಗಳನ್ನು ಜಪ್ತಿ ಮಾಡಿದ್ದಾರೆ.

**ಇದೇ ಮೊದಲ ಬಾರಿ ಬೃಹತ್ ಕಾರ್ಯಾಚರಣೆ:** ಒಟ್ಟು 500 ಕೋಟಿ ರೂ.ಗೂ ಹೆಚ್ಚು ಬಾಕಿ ಉಳಿಸಿಕೊಂಡಿರುವ ಆಸ್ತಿ ತೆರಿಗೆ ಸುಸ್ತಿದಾರರ ವಿರುದ್ಧ ಬಿಬಿಎಂಪಿ ಇದೇ ಮೊದಲ ಬಾರಿಗೆ ದೊಡ್ಡ ಮಟ್ಟದ ಕ್ರಮ ಕೈಗೊಂಡಿದೆ. ಸುಸ್ತಿದಾರರ ಹಿಂದೆ ಹೋಗುವುದರ ಜೊತೆಗೆ, ಸ್ವ-ಮೌಲ್ಯಮಾಪನ ಯೋಜನೆ (ಎಸ್‌ಎಎಸ್) ಅಡಿಯಲ್ಲಿ ಸಲ್ಲಿಸಿದ ದಾಖಲೆಗಳು ಮತ್ತು ಆಸ್ತಿಯನ್ನು ಮರು ಪರಿಶೀಲಿಸಲು ನಾಗರಿಕ ಸಂಸ್ಥೆಯು ಆಸ್ತಿಗಳನ್ನು ಮರುಪರಿಶೀಲಿಸಲು ಪ್ರಾರಂಭಿಸಿದೆ.

ಈ ಉಪಕ್ರಮವು ಬಿಬಿಎಂಪಿಯ ಆದಾಯವನ್ನು 550 ಕೋಟಿ ರೂ.ಗಳಷ್ಟು ಹೆಚ್ಚಿಸಲು ಸಹಾಯ ಮಾಡಿದೆ. ಆದರೆ ಈ ಕ್ರಮದ ಬಗ್ಗೆ ಕೆಲವು ವಲಯಗಳಿಂದ ಟೀಕೆಗಳು ವ್ಯಕ್ತವಾಗಿವೆ.

### 4ನೇ ಪ್ರಕರಣ

ಇನ್ನು ಆತ್ಮಹತ್ಯೆಗೆ ಅವರು ಪಡೆದ ಅಂಕ ಕಾರಣವೇ ಅಥವಾ ಇನ್ನು ಬೇರೆ ಏನಾದರೂ ಕಾರಣ ಇರಬಹುದ ಎಂದು ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಇದರ ಜತೆಗೆ ಅವರ ಕೋಣೆಯಲ್ಲಿ ಡೆತ್ ನೋಟ್ ಇದ್ದೀಯಾ ಎಂಬ ಬಗ್ಗೆಯು ತನಿಖೆ ನಡೆಸುತ್ತಿದ್ದಾರೆ. ಇನ್ನು ಈ ವಿಚಾರವನ್ನು ಶುಭ್ ಚೌಧರಿ ಅವರ ಮನೆಯವರಿಗೆ ತಿಳಿಸಿದ್ದು, ಶವವನ್ನು ಮರಣೋತ್ತರ ಪರೀಕ್ಷೆ ನಡೆಸಲಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

### ಸರಿದಿದ್ದೇಕೆ?

ಜೆಡಿಎಸ್ ವಲಯದಲ್ಲಿ ಕೇಳಿ ಬಂದಿತ್ತು. ಆದರೆ ಈಗ ಈ ಎಲ್ಲಾ ಮಾತುಗಳಿಗೆ ನಿಖಿಲ್ ಪೂರ್ಣವಿರಾಮ ಹಾಕಿದ್ದು ಮಂಡ್ಯದಿಂದ ಈ ಬಾರಿ ಸ್ಪರ್ಧಿಸುವುದಿಲ್ಲ ಎಂದು ಹೇಳಿದ್ದಾರೆ.

ಮಂಡ್ಯದಿಂದ ಸ್ಪರ್ಧೆ ಮಾಡುವುದಿಲ್ಲ ಎಂದು ನಿಖಿಲ್ ಹೇಳುವುದರ ಹಿಂದೆ ಹಲವು ಅಂಶಗಳು ಇರಬಹುದು ಎಂದು ವಿಮರ್ಶಿಸಲಾಗುತ್ತಿದೆ. ಲೋಕಸಭಾ ಚುನಾವಣೆಯಲ್ಲಿ ಸೋತ ಬಳಿಕ ಮಂಡ್ಯದಲ್ಲಿ ನಿಖಿಲ್ ಹೆಚ್ಚು ಸಕ್ರಿಯರಾಗಿರಲಿಲ್ಲ. ಕಳೆದ ವಿಧಾನಸಭಾ ಚುನಾವಣೆಯಲ್ಲಿ ಮಂಡ್ಯ ಜಿಲ್ಲೆ ಬಿಟ್ಟು ರಾಮನಗರದಲ್ಲಿ ಸ್ಪರ್ಧಿಸಿ ಸೋತಿದ್ದರು.

ಒಂದು ವೇಳೆ ನಿಖಿಲ್ ಮಂಡ್ಯದಲ್ಲೇ ಮರಳಿ ಸ್ಪರ್ಧೆ ಮಾಡಿದರೆ ಕಾಂಗ್ರೆಸ್ ನಾಯಕರು ಅವಕಾಶವಾದಿ ರಾಜಕಾರಣಿ ಎಂದು ಕರೆಯುವ ಸಾಧ್ಯತೆ ಇತ್ತು. ಈಗಾಗಲೇ ಎರಡು ಸೋಲು ಕಂಡಿರುವ ನಿಖಿಲ್ ರಾಜಕೀಯ ಜೀವನದಲ್ಲಿ ಮತ್ತೆ ಸೋಲಾದರೆ ಹ್ಯಾಟ್ರಿಕ್ ಸೋಲನ್ನು ಅನುಭವಿಸಿದ ಸಿಎಂ ಪುತ್ರ ಎಂಬ ಹಣೆಪಟ್ಟಿ ಕಟ್ಟಬಹುದು.

ಅಖಾಡಕ್ಕೆ ಇಳಿದರೆ ಮತ್ತೆ ಕಾಂಗ್ರೆಸ್ ನಾಯಕರು ಸ್ವಾಭಿಮಾನದ ಅಸ್ತ್ರ ಬಿಡುತ್ತಿದ್ದರು. ಮಂಡ್ಯಗೆ ಹೊರಗಿನವರು ಬಂದಿದ್ದಾರೆ. ಇದು ನಮ್ಮ ಸ್ವಾಭಿಮಾನದ ಪ್ರಶ್ನೆ ಎಂದು ಕಾಂಗ್ರೆಸ್ ಪ್ರಚಾರ ನಡೆಸಬಹುದು. ಈ ಕಾರಣಗಳನ್ನು ಇಟ್ಟುಕೊಂಡು ಮಂಡ್ಯ ಚುನಾವಣಾ ರಾಜಕೀಯದಿಂದ ನಿಖಿಲ್ ಹಿಂದೆ ಸರಿದಿರಬಹುದು ಎಂದು ವಿಮರ್ಷಿಸಲಾಗುತ್ತಿದೆ.

ನಾನು ಮಂಡ್ಯದಿಂದ ಸ್ಪರ್ಧೆ ಮಾಡಲ್ಲ, ನನ್ನ ಹೇಳಿಕೆಯಿಂದ ಯೂಟರ್ನ್ ಹೊಡೆಯಲ್ಲ ಎಂದು ಹೇಳಿದ್ದಾರೆ. ಹಾಗಿದ್ದರೆ ನಿಖಿಲ್ ಮುಂದೆ ಯಾವ ಚುನಾವಣೆಯಲ್ಲಿ ಎಲ್ಲಿ ಸ್ಪರ್ಧೆ ಮಾಡುತ್ತಾರೆ ಎಂಬ ಕುತೂಹಲ ಮೂಡಿದೆ.

### ಬಹಿರಂಗ ಪ್ರಚಾರ

ಸೋಮಶೇಖರ್ ಅವರು ಬಿಜೆಪಿಗೆ ಮುಜುಗರ ಮಾಡುತ್ತಿರುವುದು ಇದು ಹೊಸದೇನಲ್ಲ. ಈ ಹಿಂದೆ ಗೃಹಲಕ್ಷ್ಮಿ ಯೋಜನೆ ಜಾರಿ ಸಂಬಂಧ ಕ್ಷೇತ್ರದ ಬೆಂಬಲಿಗರು, ಆಪ್ತರು ಹಾಗೂ ಕಾರ್ಯಕರ್ತರ ಸಭೆಯನ್ನು ಸೋಮಶೇಖರ್ ಕರೆದಿದ್ದರು. ಈ ಹಿಂದೆ ಡಿಸಿಎಂ ಡಿಕೆ ಶಿವಕುಮಾರ್ ಅವರನ್ನು ಗುಣಗಾನವನ್ನು ಮಾಡಿದ್ದ ಎಸ್.ಟಿ.ಸೋಮಶೇಖರ್ ಪುಟ್ಟಣ್ಣ ಪರ ಪ್ರಚಾರ ಮಾಡುವ ಮೂಲಕ ಕಾಂಗ್ರೆಸ್ ಸೇರುವ ನಿಟ್ಟಿನಲ್ಲಿ ಮತ್ತೊಂದು ಹೆಜ್ಜೆ ಮುಂದೆ ಇರಿಸಿದ್ರಾ ಎಂಬ ಪ್ರಶ್ನೆ ಎದ್ದಿದೆ.

### ಯಾರಿಗೆ ಸಿಗಲಿದೆ ಟಿಕೆಟ್?

ಕರ್ನಾಟಕ ವಿಧಾನಸಭಾ ಚುನಾವಣೆಯ ಸಮಯದಲ್ಲಿ ಕೊನೆ ಗಳಿಗೆಯಲ್ಲಿ ಕೆಲ ಕ್ಷೇತ್ರಗಳಿಗೆ ಟಿಕೆಟ್ ಪ್ರಕಟಿಸಿದ್ದರಿಂದ ಬಿಜೆಪಿಗೆ ಹಿನ್ನಡೆಯಾಗಿತ್ತು. ಸೋಲಿನ ಬಳಿಕ ನಡೆದ ಆತ್ಮಾವಲೋಕನ ಸಭೆಯಲ್ಲೂ ಈ ವಿಷಯ ಚರ್ಚೆಯಾಗಿತ್ತು. ಈ ಕಾರಣಕ್ಕೆ ಈ ಬಾರಿ ಬಹಳ ಬೇಗ ಎಲ್ಲಾ ಕ್ಷೇತ್ರಗಳಲ್ಲಿ ಸ್ಪರ್ಧಿಸುವ ಅಭ್ಯರ್ಥಿಗಳ ಪಟ್ಟಿ ಬೇಗ ಬಿಡುಗಡೆಯಾಗಲಿದೆ.

### ಹಾಹಾಕಾರ

ಲಗ್ಗೆರೆ ಬ್ರಿಡ್ಜ್ ಸಮೀಪದ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಾಟರ್ ಟ್ಯಾಂಕ್ ಮಾಲೀಕರು ಪ್ರತಿ 6,000 ಲೀಟರ್ ಟ್ಯಾಂಕರ್ ನೀರಿಗೆ 1,500 ರೂ.ಗೆ ಡಿಮ್ಯಾಂಡ್ ಮಾಡ್ತಿದ್ದಾರೆ. ಸ್ವಲ್ಪ ಕಡಿಮೆ ಮಾಡಕೊಳ್ಳಿ ಎಂದು ಸಾರ್ವಜನಿಕರು ಮನವಿ ಮಾಡಿದ್ರೆ, ಮತ್ತೊಂದು ಕಡೆ 3 ಸಾವಿರ ರೂಪಾಯಿ ಕೊಡ್ತಾರೆ, ಬೇಕಿದ್ದರೆ ತಗೊಳ್ಳಿ ಎಂದು ಹೇಳಿಹೋಗ್ತಾರೆ.

ಅದೇ ರೀತಿ ನವರಂಗ್, ದಾಸರಹಳ್ಳಿ, ಹೊಸಕೆರೆಹಳ್ಳಿ, ಮೂಡಲಪಾಳ್ಯ ಸುತ್ತಮುತ್ತಲಿನ ಪ್ರದೇಶಗಳಲ್ಲಿ 3,000 ಲೀಟರ್ ಟ್ಯಾಂಕರ್ ನೀರಿಗೆ 700 ರೂಪಾಯಿಗಿಂತ ಕಡಿಮೆಯಿಲ್ಲ ಎಂದು ಮಾಲೀಕರು ಹೇಳುತ್ತಿದ್ದಾರೆ. ಇದರಿಂದ ಸಾರ್ವಜನಿಕರು ಹೈರಾಣಾಗಿದ್ದಾರೆ. ಅತ್ತ ಹಣಕೊಟ್ಟು ಖರೀದಿಸಲಾಗದೇ, ಇತ್ತ ಕಾವೇರಿ ನೀರೂ ಸರಿಯಾಗಿ ಸಿಗದೇ ಪರದಾಡುವಂತಾಗಿದೆ. ಸರ್ಕಾರ ಈ ರೀತಿ ಬೇಕಾಬಿಟ್ಟಿ ದರ ನಿಗದಿ ಮಾಡೋದನ್ನು ತಪ್ಪಿಸಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

### ಗ್ಯಾಂಗ್ ಉಪಟಳ

ಕಳೆದ 20 ದಿನಗಳಿಂದ ಬೀಟಮ್ಮ ಗ್ಯಾಂಗ್ ಚಿಕ್ಕಮಗಳೂರು ತಾಲೂಕಿನ ವ್ಯಾಪ್ತಿಯಲ್ಲಿ ಸಂಚಾರ ಮಾಡುತ್ತಿವೆ. ಮುತ್ತೋಡಿ ಅರಣ್ಯಕ್ಕೆ ಕಾಡಾನೆ ಓಡಿಸಲು ಅರಣ್ಯ ಇಲಾಖೆ ಪ್ರಯತ್ನಿಸಿತ್ತು. ಆಗ ಮುತ್ತೋಡಿ ಅರಣ್ಯದ ಸಮೀಪದ ಗ್ರಾಮಕ್ಕೆ ತೆರಳಿ ಬೀಟಮ್ಮ ಗ್ಯಾಂಗ್ ವಾಪಸ್ ಆಗಿತ್ತು. ಸದ್ಯ ಈಗ ಚಿಕ್ಕಮಗಳೂರು ನಗರದ ಹೊರವಲಯದ ಇಂದಾವರ ಗ್ರಾಮದಲ್ಲಿ ಬೀಟಮ್ಮ ಗ್ಯಾಂಗ್ ಬೀಡುಬಿಟ್ಟಿದೆ.

ಬೀಟಮ್ಮ ಗ್ಯಾಂಗ್ ಬಲಿಷ್ಠವಾಗಿದೆ. ಸಿಕ್ಕ ಸಿಕ್ಕ ಕಡೆಗಳಲ್ಲಿ ದಾಳಿ ನಡೆಸಿ ಸಿಕ್ಕ ಆಹಾರ ತಿನ್ನುತ್ತಿವೆ. ಇವುಗಳ ಕಾರ್ಯಾಚರಣೆಗೆ ಕರೆಸಿದ್ದ ಕುಮ್ಕಿ ಆನೆಗಳ ಮೇಲೂ ಬೀಟಮ್ಮ ಗ್ಯಾಂಗ್ ದಾಳಿ ನಡೆಸಿತ್ತು. ಆಗ ರಾತ್ರೋರಾತ್ರಿ ಅರಣ್ಯ ಇಲಾಖೆಯವರು ಮೂಡಿಗೆರೆಯ ಹಳೆ ಕೋಟೆಗೆ ಅಭಿಮನ್ಯು ಟೀಂ ಅನ್ನ ಸ್ಥಳಾಂತರ ಮಾಡಿದ್ದರು.

ಕುಮ್ಕಿ ಕ್ಯಾಂಪ್‌ನಲ್ಲಿದ್ದ ಅಭಿಮನ್ಯು, ಮಹೇಂದ್ರ, ಭೀಮ, ಧನಂಜಯ, ಸುಗ್ರೀವ, ಹರ್ಷ, ಅಶ್ವತ್ಥಾಮ, ಪ್ರಶಾಂತ ಹೆಸರಿನ ಆನೆಗಳು ಮತ್ತಾವರ ಗ್ರಾಮದ ಅರಣ್ಯ ಇಲಾಖೆಯ ಗೆಸ್ಟ್ ಹೌಸ್ ನಲ್ಲಿ ಇರಿಸಲಾಗಿತ್ತು. ಆಗ ಬೀಟಮ್ಮ ಗ್ಯಾಂಗ್ ದಾಳಿ ನಡೆಸಿತ್ತು. ಇದರಿಂದ ಭಯಗೊಂಡ ಅರಣ್ಯ ಸಿಬ್ಬಂದಿ ಅಭಿಮನ್ಯ ಟೀಮನ್ನು ಮೂಡಿಗೆರೆಗೆ ಶಿಫ್ಟ್ ಮಾಡಿದ್ದರು.

ಅನಾವಶ್ಯಕವಾಗಿ ಯಾರೂ ರಸ್ತೆಗೆ ಇಳಿಯಬೇಡಿ ಎಂದು ಗ್ರಾಮಸ್ಥರಿಗೆ ಅರಣ್ಯ ಇಲಾಖೆ ಸಿಬ್ಬಂದಿ ಎಚ್ಚರಿಕೆಯನ್ನು ನೀಡಿದ್ದಾರೆ. ಒಂದು ವೇಳೆ ಕೆಲಸವಿದ್ದರೆ ಬೆಳಗ್ಗೆ ಮಾಡಿಕೊಳ್ಳಿ ಎಂಬ ಮಾತುಗಳನ್ನು ಮೈಕ್ ಮೂಲಕ ಅನೌನ್ಸ್ ಮಾಡಿಸಿದ್ದಾರೆ. ಕಾಫಿ ತೋಟ ಹಾಗೂ ಇತರೆ ಕೆಲಸಗಳಿಗೆ ಅನಾವಶ್ಯಕವಾಗಿ ಹೋಗಬೇಡಿ ಎಂದು ಹೇಳಿದ್ದಾರೆ. ಆದರೆ ಇಲ್ಲಿನ ಜನರಲ್ಲಿ ಆನೆ ಭೀತಿ ಮಾತ್ರ ಕೊಂಚವೂ ಕಡಿಮೆಯಾಗಿಲ್ಲ.

### ಆಸಕ್ತಿ ತೋರಿಸಿದ ಸರ್ಕಾರ

ಸಮಗ್ರ ವರದಿ ಸಲ್ಲಿಸುವಂತೆ ಪ್ರಾದೇಶಿಕ ಆಯುಕ್ತ ಸಂಜಯ್ ಶೆಟ್ಟೆನ್ನವರಗೆ ಸರ್ಕಾರ ಪತ್ರ ಬರೆದಿದೆ.

ಸದ್ಯ ಅಸ್ತಿತ್ವದಲ್ಲಿರುವ ಉಪವಿಭಾಗ, ತಾಲೂಕು-ಹೋಬಳಿ ಮಧ್ಯೆ ಇರುವ ವ್ಯಾಪ್ತಿ ವಿವರ, ಸಾರ್ವಜನಿಕರು ನಿತ್ಯ ಎದುರಿಸುತ್ತಿರುವ ಸಮಸ್ಯೆಗಳೇನು? ಜನಸಂಖ್ಯೆ ಎಷ್ಟು? ಮೂಲಸೌಕರ್ಯ ಹಾಗೂ ಭೌಗೋಳಿಕ ವಿಸ್ತೀರ್ಣ ಒಳಗೊಂಡ ಮಾಹಿತಿ ಸಂಗ್ರಹಿಸಿ ವರದಿ ನೀಡಲು ಸೂಚನೆ ನೀಡಲಾಗಿದೆ.

**ಹಲವು ಬಾರಿ ನಡೆದಿದ್ದ ಪ್ರತಿಭಟನೆ:** ಬೆಳಗಾವಿ ಜಿಲ್ಲೆ ವಿಭಜನೆಗೆ ಆಗ್ರಹಿಸಿ ಹಲವು ಬಾರಿ ಪ್ರತಿಭಟನೆಗಳು ನಡೆದಿವೆ. ಕಳೆದ ವರ್ಷವಂತೂ ಅಥಣಿ ಜಿಲ್ಲೆ ಮಾಡುವಂತೆ ಒತ್ತಾಯಿಸಿ ಕೆಲವು ಬಾರಿ ಅಥಣಿ ಬಂದ್ ಮಾಡಲಾಗಿತ್ತು. ಬೆಳಗಾವಿಯ ಸುವರ್ಣಸೌಧದಲ್ಲಿ ಚಳಿಗಾಲದ ಅಧಿವೇಶನದ ಸಂದರ್ಭದಲ್ಲಿ ಅಥಣಿ ಬಂದ್ ಸಹ ಆಚರಿಸಲಾಗಿತ್ತು. ಅಥಣಿಯನ್ನು ಜಿಲ್ಲೆ ಮಾಡುವಂತೆ ಹೋರಾಟ ಮಾಡುವ ಬಗ್ಗೆ ಮಠಾಧೀಶರ ನೇತೃತ್ವದಲ್ಲಿ ಹಲವು ಸುತ್ತಿನ ಸಭೆಗಳೂ ನಡೆದಿದ್ದವು. ಅಥಣಿ ಜಿಲ್ಲೆಗೆ ಆಗ್ರಹಿಸಿ ಹೋರಾಟ ಮಾಡುವ ಬಗ್ಗೆ 2023ರ ಆಗಸ್ಟ್‌ನಲ್ಲಿ ಅಥಣಿ ಪಟ್ಟಣದಲ್ಲಿರುವ ಮೋಟಗಿ ಮಠದ ಪ್ರಭುಚನ್ನಬಸವ ಸ್ವಾಮೀಜಿ, ಗಚ್ಚಿನಮಠದ ಶಿವಬಸವಶ್ರೀ, ಶೆಟ್ಟರಮಠದ ಮರುಳಸಿದ್ದ ಸ್ವಾಮೀಜಿ ನೇತೃತ್ವದಲ್ಲಿ ರೈತ ಮುಖಂಡರು, ಸಾಹಿತಿಗಳು, ಮಾಜಿ ಯೋಧರ ಸಭೆ ನಡೆಸಲಾಗಿತ್ತು.

### ಆತ್ಮಹತ್ಯೆ

ಮರಳು ದಂಧೆಯಲ್ಲಿ ಮೂವರು ಭಾಗಿಯಾಗಿರುವ ಶಂಕೆ ವ್ಯಕ್ತವಾಗಿದ್ದು, ಎಲ್ಲಾ ಲೆಕ್ಕ ಕೊಟ್ಟರೂ ಪದೇ ಪದೇ ಶರಣಗೌಡ ಕಿರುಕುಳ ಕೊಡುತ್ತಿದ್ದರು ಎಂದು ಆರೋಪಿಸಿದ್ದಾರೆ. ಹೀಗಾಗಿ ಮನನೊಂದು ಆತ್ಮಹತ್ಯೆಗೆ ಮಾಡಿಕೊಳ್ಳುತ್ತಿದ್ದೇನೆ ಎಂದು ಪತ್ರದಲ್ಲಿ ಉಲ್ಲೇಖಿಸಿದ್ದಾರೆ. ಉಸ್ತುವಾರಿ ಸಚಿವ ಎಚ್.ಕೆ ಪಾಟೀಲರಿಗೆ ಹೇಳಿ ಶರಣಗೌಡಗೆ ಕಠಿಣ ಶಿಕ್ಷೆ ಕೊಡಿಸಿ ಅಂತ ಸಹ ಪತ್ರದಲ್ಲಿ ಬರೆದಿದ್ದಾರೆ.

ರೋಣ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದ್ದು, ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲಿಸಿದ್ದಾರೆ.

### ಸ್ವಚ್ಛತೆ

ಮಕ್ಕಳನ್ನ ಶೌಚಾಲಯ ಸ್ವಚ್ಛಗೊಳಿಸಲು ಬಳಸಿಕೊಳ್ಳುತ್ತಿರುವ ಶಾಲೆಯ ಸಿಬ್ಬಂದಿ ವಿರುದ್ಧ ಗ್ರಾಮಸ್ಥರು ಆಕ್ರೋಶ ಹೊರ ಹಾಕಿದ್ದಾರೆ.

ರಾಜ್ಯದಲ್ಲಿ ಕಳೆದ ಕೆಲ ದಿನಗಳ ಹಿಂದೆ ಮಕ್ಕಳಿಂದ ಶಾಲಾ ಶೌಚಾಲಯಗಳನ್ನು ಸ್ವಚ್ಛಗೊಳಿಸುತ್ತಿರುವ ಘಟನೆಗಳು ಹೆಚ್ಚಾಗಿ ಬೆಳಕಿಗೆ ಬರುತ್ತಿದ್ದವು. ಹೀಗಾಗಿ ರಾಜ್ಯದ ಸರಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ವಿದ್ಯಾರ್ಥಿಗಳಿಂದ ಶೌಚಾಲಯ ಸ್ವಚ್ಛಗೊಳಿಸುವುದನ್ನು ಶಾಲಾ ಶಿಕ್ಷಣ ಇಲಾಖೆ ಕಡ್ಡಾಯವಾಗಿ ನಿಷೇಧಿಸಿತ್ತು. ಇದೀಗ ನಿಷೇಧದ ನಡುವೆಯೂ ದಾವಣಗೆರೆಯಲ್ಲಿ ಇಂತಹದ್ದೇ ಘಟನೆ ಬಯಲಾಗಿದೆ.

ಇನ್ನು ಖಾಸಗಿ ಅನುದಾನಿತ ಮತ್ತು ಅನುದಾನರಹಿತ ಶಾಲೆಗಳಲ್ಲಿಯೂ ಇಂತಹ ಯಾವುದೇ ಪ್ರಕರಣ ಘಟಿಸದಂತೆ ಶಾಲಾ ಆಡಳಿತ ಮಂಡಳಿ, ಶಾಲಾ ಮುಖ್ಯಸ್ಥರು ಕ್ರಮ ಕೈಗೊಳ್ಳಬೇಕೆಂದು ಸೂಚನೆ ಇದೆ. ಒಂದು ವೇಳೆ ನಿಯಮ ಮೀರಿ ಮಕ್ಕಳಿಂದ ಶೌಚಾಲಯ ಸ್ವಚ್ಛಗೊಳಿಸಿದರೆ ಇಲಾಖೆಯ ಅಧಿಕಾರಿಗಳು, ಶಾಲಾ ಮುಖ್ಯ ಶಿಕ್ಷಕರು ಹಾಗೂ ಸಿಬಂದಿ ವಿರುದ್ಧ ಎಫ್‌ಐಆರ್ ದಾಖಲಿಸಲಾಗುವುದು ಮತ್ತು ಶಿಸ್ತುಕ್ರಮ ಕೈಗೊಳ್ಳ ಲಾಗುವುದು ಎಂದು ಎಚ್ಚರಿಕೆ ನೀಡಲಾಗಿದೆ. ಎಸ್‌ಡಿಎಂಸಿ ಸಹಕಾರದೊಂದಿಗೆ ಸ್ಥಳೀಯವಾಗಿ ಲಭ್ಯ ಸಂಪನ್ಮೂಲ ಬಳಸಿಕೊಂಡು ಸ್ವಚ್ಛತೆ ಕೈಗೊಳ್ಳಬೇಕು ಎಂದು ಸೂಚಿಸಿದ್ದು, ಶೌಚಾಲಯ ಸ್ವಚ್ಛತೆಯ ಹೊಣೆಯನ್ನು ಎಸ್‌ಡಿಎಂಸಿಗಳ ಹೆಗಲಿಗೇರಿಸಲಾಗಿದೆ. ಶಿಕ್ಷಣ ಇಲಾಖೆ ಇಷ್ಟೆಲ್ಲ ಕ್ರಮಗಳನ್ನು ಕೈಗೊಂಡಿದ್ದರೂ ಮತ್ತೆ ಮತ್ತೆ ವಿದ್ಯಾರ್ಥಿಗಳಿಂದ ಶೌಚಾಲಯ ಸ್ವಚ್ಛಗೊಳಿಸುವ ಘಟನೆಗಳು ನಡೆಯುತ್ತಲೇ ಇವೆ.

# ಇಡಿ, ಸಿಬಿಐ ಮೂಲಕ ನನ್ನ ವಿರುದ್ಧ ಷಡ್ಯಂತ್ರ ನಡೆಯುತ್ತಿದೆ: ಡಿಕೆಶಿ



**ರಾಮನಗರ:** ಡಿ.ಕೆ.ಶಿವಕುಮಾರ್ ಮತ್ತೆ ಜೈಲಿಗೆ ಹೋಗ್ತಾರೆ ಎಂಬ ಮಾಜಿ ಸಚಿವ ಕೆ.ಎಸ್.ಈಶ್ವರಪ್ಪ ಹೇಳಿಕೆಗೆ ಡಿಸಿಎಂ ಡಿಕೆಶಿ ಟಾಂಗ್ ನೀಡಿದ್ದಾರೆ.

ರಾಮನಗರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ನನ್ನನ್ನು ಜೈಲಿಗೆ ಕಳುಹಿಸುವುದಾಗಿ ಅನೇಕರು ಮಾತನಾಡಿದ್ದಾರೆ. ಅವರೂ ಮಾತನಾಡಿದ್ದಾರೆ, ನಮ್ಮ ಜಿಲ್ಲೆಯವರೂ ಮಾತನಾಡಿದ್ದಾರೆ. ನಾನು ಎಲ್ಲದಕ್ಕೂ ಸಿದ್ದನಿದ್ದೇನೆ. ನನ್ನ ವಿರುದ್ಧ ದೊಡ್ಡ ಷಡ್ಯಂತ್ರ ನಡೆಯುತ್ತಿದೆ. ಸಿಬಿಐ ಮೂಲಕ ಏನೇನು ಮಾಡಿಸುತ್ತಿದ್ದಾರೆ, ಬೇರೆಯವರ ಮೂಲಕ ಏನು ಮಾಡಿಸುತ್ತಿದ್ದಾರೆ ಎಂದು ನನಗೂ ಗೊತ್ತಿದೆ. ಸಮಯ ಬಂದಾಗ ಎಲ್ಲವನ್ನೂ ಮಾತನಾಡುತ್ತೇನೆ ಎಂದು ಡಿಕೆಶಿ ತಿಳಿಸಿದ್ದಾರೆ.

ಮೋದಿ ಪ್ರಧಾನಿಯಾಗುವುದನ್ನು ತಪ್ಪಿಸಲು ಯಾರಿಂದಲೂ ಸಾಧ್ಯವಿಲ್ಲ ಎಂಬ ಕುಮಾರಸ್ವಾಮಿ ಹೇಳಿಕೆಗೆ ಪ್ರತಿಕ್ರಿಯಿಸಿ, ಕುಮಾರಸ್ವಾಮಿ ಈ ಹಿಂದೆ ಹೇಳಿದ್ದೆಲ್ಲಾ ಮತ್ತೆ ನೆನಪಿಸಿಕೊಳ್ಳಿ. ಅವರು ಪ್ರಧಾನಿಯಾದರೆ ದೇಶ ಬಿಟ್ಟು ಹೋಗುವುದಾಗಿ ದೇವೇಗೌಡರೇ ಹೇಳಿದ್ದರು. ಅದಕ್ಕೆ ಪ್ರಧಾನಿಗಳು ನನ್ನ ಮನೆಯಲ್ಲೇ ಜಾಗ ನೀಡುತ್ತೇನೆ ಬನ್ನಿ ಎಂದಿದ್ದರು. ಕುಮಾರಸ್ವಾಮಿ ಅವರ ಮಾತುಗಳ ದಾಖಲೆ ಮಾಧ್ಯಮಗಳ ಬಳಿಯೂ ಇದೆ ಎಂದು ತಿರುಗೇಟು ನೀಡಿದ್ರು.

ಇದೇ ವೇಳೆ ಇಂದು ರಾಜ್ಯಪಾಲರ ಭಾಷಣದಲ್ಲಿ ಸುಳ್ಳು ಹೇಳಿಸಲಾಗಿದೆ ಎಂಬ ಬಿಜೆಪಿ ನಾಯಕರ ಆರೋಪಕ್ಕೆ ತಿರುಗೇಟು ನೀಡಿದ ಡಿಕೆಶಿ, ರಾಜ್ಯದ ಮಹಿಳೆಯರಿಗೆ 2 ಸಾವಿರ ಕೊಟ್ಟಿರುವುದು ಸುಳ್ಳೇ, ಮಹಿಳೆಯರು ಬಸ್ ಗಳಲ್ಲಿ ಉಚಿತವಾಗಿ ಸಂಚಾರ ಮಾಡುತ್ತಿರುವುದು ಸುಳ್ಳೇ, ಯುವಕರಿಗೆ ನಿರುದ್ಯೋಗ ಭತ್ಯೆ ಸಿಗುತ್ತಿರುವುದು ಸುಳ್ಳಾ ಬಡವರಿಗೆ 5 ಕೆ.ಜಿ ಅಕ್ಕಿ ಹಾಗೂ ಉಳಿದ 5 ಕೆ.ಜಿ ಅಕ್ಕಿಯ ಹಣ ನೀಡುತ್ತಿರುವುದು ಸುಳ್ಳಾ? 200 ಯೂನಿಟ್ ವರೆಗೂ ಉಚಿತ ವಿದ್ಯುತ್ ನೀಡುತ್ತಿರುವುದು ಸುಳ್ಳಾ? ಬಿಜೆಪಿಯವರು ರಾಮನ ಹೆಸರಲ್ಲಿ ಮತ ಕೇಳಲು ಹೊರಟಿದ್ದಾರೆ. ರಾಮ ಅವರ ಮನೆ ಆಸ್ತಿಯೇ? ರಾಮ ನಮ್ಮ ಆಸ್ತಿಯಲ್ಲವೇ? ನಾವು ಹಿಂದೂಗಳಲ್ಲವೇ?'' ಎಂದು ತಿರುಗೇಟು ನೀಡಿದರು.

# ಬಜೆಟ್‌ನಲ್ಲಿ ನಮಗೆ 8 ಸಾವಿರ ಕೋಟಿ ಅನುದಾನ ನೀಡಿ ಬಿಬಿಎಂಪಿ ಮನವಿ




**ಬೆಂಗಳೂರು:** ರಾಜ್ಯ ಬಜೆಟ್‌ನಲ್ಲಿ ಮೂಲಸೌಕರ್ಯ ಯೋಜನೆಗಳು ಮತ್ತು ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸಲು 8,050 ಕೋಟಿ ರೂಪಾಯಿಗಳ ಆರ್ಥಿಕ ನೆರವು ನೀಡುವಂತೆ ರಾಜ್ಯ ಸರ್ಕಾರಕ್ಕೆ ಬಿಬಿಎಂಪಿ ಮನವಿ ಮಾಡಿದೆ. ಬಿಬಿಎಂಪಿ ಅಧಿಕಾರಿಗಳ ಪ್ರಕಾರ, ಗುತ್ತಿಗೆದಾರರಿಗೆ ಬಾಕಿ ಬಿಲ್ ಪಾವತಿ ಮತ್ತು ನಡೆಯುತ್ತಿರುವ ಕಾಮಗಾರಿಗಳಿಗೆ ಸುಮಾರು 3,000 ಕೋಟಿ ರೂ. ಬೇಕಾಗಿದೆ. ಇನ್ನು ಗುತ್ತಿಗೆದಾರರಿಗೆ ಬಿಬಿಎಂಪಿ ನೀಡಬೇಕಿರುವ ಒಟ್ಟು ಬಾಕಿ ಮೊತ್ತ 2,700 ಕೋಟಿ ರೂಪಾಯಿ ಎಂದು ಪಾಲಿಕೆ ಮೂಲಗಳು ತಿಳಿಸಿವೆ. ಇಂದಿರಾ ಕ್ಯಾಂಟೀನ್ ನಿರ್ವಹಣೆಗೆ 200 ಕೋಟಿ ರೂ., ಘನತ್ಯಾಜ್ಯ ನಿರ್ವಹಣೆಗೆ 600 ಕೋಟಿ ರೂ., ಮಳೆ ನೀರು ಚರಂಡಿಗಳ ಅಭಿವೃದ್ಧಿಗೆ 200 ಕೋಟಿ ರೂ. ಅಗತ್ಯವಿದೆ ಎಂದು ಬಿಬಿಎಂಪಿ ಸರ್ಕಾರಕ್ಕೆ ತಿಳಿಸಿದೆ. ಉಳಿದ ಹಣವನ್ನು ಹೊಸ ಯೋಜನೆಗಳ ಅನುಷ್ಠಾನಕ್ಕೆ ಬಳಸಲಾಗುವುದು. ಮೂಲಗಳ ಪ್ರಕಾರ, ಬಿಬಿಎಂಪಿ ಕಳೆದ ವರ್ಷ ಸುಮಾರು 9,000 ಕೋಟಿ ಅನುದಾನವನ್ನು ಕೋರಿತ್ತು ಮತ್ತು ಸರ್ಕಾರ ಕೇವಲ 3,732 ಕೋಟಿ ರೂ. ನೀಡಿತ್ತು.

ಈ ಬಾರಿ ನಗರದ ಮೊದಲ ಸುರಂಗ ಮಾರ್ಗ ಯೋಜನೆ ಮತ್ತು ಸ್ಕೈ ಡೆಕ್ ಯೋಜನೆ ಆರಂಭಿಸಲು ಸರ್ಕಾರ ಉತ್ಸುಕವಾಗಿದೆ ಎಂದು ಬಿಬಿಎಂಪಿ ಅಧಿಕಾರಿಗಳು ತಿಳಿಸಿದ್ದಾರೆ. ಹೀಗಾಗಿ, ಅಧಿಕಾರಿಗಳು ತಾವು ಕೇಳಿದ ಹಣವನ್ನು ಸರ್ಕಾರ ಮಂಜೂರು ಮಾಡುವ ನಿರೀಕ್ಷೆಯಲ್ಲಿದ್ದಾರೆ.

**ಸಿದ್ದರಾಮಯ್ಯ ಬಜೆಟ್:** ರಾಜ್ಯದಲ್ಲಿ ಈಗಾಗಲೆ ಬಜೆಟ್ ಅಧಿವೇಶನ ಆರಂಭವಾಗಿದೆ. ಸೋಮವಾರ (ಫೆ.12) ರಂದು ಅಧಿವೇಶನ ಆರಂಭವಾಗಿದೆ. ಜಂಟಿ ಅಧಿವೇಶನವನ್ನು ಉದ್ದೇಶಿಸಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಭಾಷಣ ಮಾಡಿದರು. ಇಂದಿನಿಂದ (ಫೆ.13) ರಾಜ್ಯಪಾಲರ ಭಾಷಣದ ವಂದನಾ ನಿರ್ಣಯದ ಮೇಲೆ ಚರ್ಚೆ ಆರಂಭವಾಗಿದೆ. ಶುಕ್ರವಾರ (ಫೆ.16) ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಜೆಟ್ ಮಂಡನೆ ಮಾಡಲಿದ್ದಾರೆ.

# ಬೆಂಗಳೂರು ಟ್ರಾಫಿಕ್ ನಿಯಂತ್ರಣಕ್ಕೆ ಜಪಾನ್ ತಂತ್ರಜ್ಞಾನ ಅಳವಡಿಕೆ

**ಬೆಂಗಳೂರು:** ಸುಗಮ ಸಂಚಾರ ನಿರ್ವಹಣೆಗಾಗಿ ಇತ್ತೀಚೆಗೆ ಬೆಂಗಳೂರಿನ ಹಲಸೂರು ಬಳಿಯ ಕೆನ್ಸಿಂಗ್ಟನ್ ರಸ್ತೆ ಮತ್ತು ಮರ್ಫಿ ರಸ್ತೆಯ ಜಂಕ್ಷನ್ ಗಳಲ್ಲಿ ಜಪಾನೀಸ್ ತಂತ್ರಜ್ಞಾನ ಮೋಡರೇಟೊವನ್ನು ಆಧರಿಸಿದ ಹೊಸ ಟ್ರಾಫಿಕ್ ಸಿಗ್ನಲಿಂಗ್ ವ್ಯವಸ್ಥೆಯನ್ನು ಆರಂಭಿಸಲಾಗಿದೆ. ಇದು ವಾಹನಗಳು ಮತ್ತು ಪಾದಚಾರಿಗಳನ್ನು ನಿಯಂತ್ರಿಸಲು ನೆರವಾಗುತ್ತಿದೆ. ಪ್ರತಿ ಜಂಕ್ಷನ್‌ನಲ್ಲಿರುವ ವಾಹನಗಳ ದಟ್ಟಣೆಯ ಆಧಾರದ ಮೇಲೆ ಸಿಗ್ನಲ್ ಸಮಯವನ್ನು ಕ್ರಿಯಾತ್ಮಕವಾಗಿ ಹೊಂದಿಸುವ ಮೂಲಕ ಸಂಚಾರ ನಿರ್ವಹಣೆಯ ದಕ್ಷತೆಯನ್ನು ಹೆಚ್ಚಿಸುವ ಗುರಿಯನ್ನು ಹೊಂದಿದೆ.



ಈ ಅತ್ಯಾಧುನಿಕ ಟ್ರಾಫಿಕ್ ಸಿಗ್ನಲ್‌ಗಳ ಅಳವಡಿಕೆ ವಿವಿಧ ಕಾರಣಗಳಿಂದಾಗಿ ತುಸು ವಿಳಂಬವಾಗಿತ್ತು. ಇದೀಗ ಅವು ಎಂಜಿ ರಸ್ತೆ, ಹೊಸೂರು ರಸ್ತೆ ಮತ್ತು ಹಳೆ ಮದ್ರಾಸ್ ರಸ್ತೆಯಲ್ಲಿರುವ 28 ಪ್ರಮುಖ ಜಂಕ್ಷನ್‌ಗಳಲ್ಲಿ ಕಾರ್ಯನಿರ್ವಹಿಸಲು ಸಿದ್ಧವಾಗಿವೆ. ಹೊಸ ವ್ಯವಸ್ಥೆಯು ಪ್ರತಿ ಜಂಕ್ಷನ್‌ನಲ್ಲಿರುವ ವಾಹನಗಳ ದಟ್ಟಣೆಯ ಆಧಾರದ ಮೇಲೆ ಸ್ವಯಂಚಾಲಿತವಾಗಿ ಸಿಗ್ನಲ್‌ಗಳನ್ನು ಬದಲಾಯಿಸಲು ಅನುವು ಮಾಡಿಕೊಡುತ್ತದೆ ಎಂದು 'ಮನಿ ಕಂಟ್ರೋಲ್' ವರದಿ ತಿಳಿಸಿದೆ.

ಸದ್ಯ ಕೆನ್ಸಿಂಗ್ಟನ್ ರಸ್ತೆ ಮತ್ತು ಮರ್ಫಿ ರಸ್ತೆಯ ಜಂಕ್ಷನ್ ಗಳಲ್ಲಿ ಆರಂಭಿಕ ಪರೀಕ್ಷಾ ಉದ್ದೇಶಗಳಿಗಾಗಿ ತಾತ್ಕಾಲಿಕವಾಗಿ ಜಪಾನೀಸ್ ತಂತ್ರಜ್ಞಾನವನ್ನು ಅಳವಡಿಸಲಾಗಿದೆ. ಫೆಬ್ರವರಿ ಅಂತ್ಯದಲ್ಲಿ ಅಧಿಕೃತ ಪರೀಕ್ಷಾ ಹಂತದ ಕಾರ್ಯಾಚರಣೆ ಆರಂಭವಾಗಲಿದೆ. ಮಾರ್ಚ್ ವೇಳೆಗೆ ನಗರದ ಪ್ರಮುಖ ಪ್ರದೇಶಗಳ ಜಂಕ್ಷನ್ ಗಳಲ್ಲಿ ನೂತನ ತಂತ್ರಜ್ಞಾನದ ಸಿಗ್ನಲ್ ಅಳವಡಿಸುವ ಬಗ್ಗೆ ಕ್ರಮ ಕೈಗೊಳ್ಳಲಾಗುವುದು ಎಂದು ಯೋಜನೆಯ ಮೇಲ್ವಿಚಾರಣೆ ವಹಿಸಿರುವ ನಗರ ಭೂ ಸಾರಿಗೆ ನಿರ್ದೇಶನಾಲಯದ ಆಯುಕ್ತೆ ದೀಪಾ ಚೋಳನ್ ತಿಳಿಸಿದ್ದಾರೆ. 72 ಕೋಟಿ ರೂಪಾಯಿಗಳ ಈ ಸಿಗ್ನಲಿಂಗ್ ಯೋಜನೆಯನ್ನು ಜಪಾನಿನ ಸಂಸ್ಥೆಯಾದ ನಗೋಯಾ ಎಲೆಕ್ಟ್ರಿಕ್ ವರ್ಕ್ಸ್ ಕಂಪನಿ ಲಿಮಿಟೆಡ್ ಕಾರ್ಯಗತಗೊಳಿಸುತ್ತಿದೆ. ಕೋವಿಡ್ ಸಾಂಕ್ರಾಮಿಕ ಹಾಗೂ ಇತರ ಕೆಲವು ಕಾರಣಗಳಿಂದಾಗಿ ಯೋಜನೆ ವಿಳಂಬವಾಗಿತ್ತು.

# ಸಂವಿಧಾನದ ಆಶಯಗಳು ಇಂದಿಗೂ ಈಡೇರುತ್ತಿಲ್ಲ

**ಮೈಸೂರು:** ಹುಣಸೂರು ನಗರದ ಮುನೇಶ್ವರ ಕಾವಲು ಮೈದಾನದಲ್ಲಿ ಆಯೋಜಿಸಿದ್ದ ಭಾರತ ಸಂವಿಧಾನದ ಜಾಗೃತಿ ಜಾತಾ ಕಾರ್ಯಕ್ರಮದಲ್ಲಿ ಪ್ರಧಾನ ಭಾಷಣಕಾರರಾಗಿ ಮಾತನಾಡಿದ ವಿಶ್ರಾಂತ ಪ್ರಾಂಶುಪಾಲ ಮೋದೂರು ಮಹೇಶಾರಾಧ್ಯರವರು ಮಾತನಾಡುತ್ತಾ, ಹಲವಾರು ದೇಶಗಳ ಸಂವಿಧಾನವನ್ನು ಸುಧೀರ್ಘವಾಗಿ ಸಮಗ್ರವಾಗಿ ಅಧ್ಯಯನ ಮಾಡಿ ಭಾರತ ದೇಶದ ಬಹುತ್ವವನ್ನು ಎತ್ತಿ ಹಿಡಿಯುವ ಒಂದು ಶ್ರೇಷ್ಠ ಸಂವಿಧಾನವನ್ನು ಡಾ. ಬಿಆರ್ ಅಂಬೇಡ್ಕರ್ ರವರು ರಚಿಸಿದ್ದು ಇಲ್ಲಿಗೆ 75 ವರ್ಷಗಳು ಸಂಧಿಸಿದರೂ ಅವುಗಳ ಆಶಯ ಇಂದಿಗೂ ಈಡೇರದೇ ಇರುವುದು ಈ ದೇಶದ ವಿಪರ್ಯಾಸವಾಗಿದೆ ಎಂದು ಅಭಿಪ್ರಾಯಪಟ್ಟರು.

ಭಾರತದ ಸಂವಿಧಾನದ ಆಶಯಗಳಾದ ಶಾಂತಿ ಸಮಾನತೆ ಸಹೋದರತ್ವ ಸಹಬಾಳ್ವೆ ನ್ಯಾಯ ಮುಂತಾದವುಗಳನ್ನು ಸಂವಿಧಾನದ ಪೀಠಿಕೆಯಲ್ಲಿ ಅಳವಡಿಸಿರುವುದು ಭಾರತದ ಪ್ರಜೆಗಳಲ್ಲಿ ಆತ್ಮವಿಶ್ವಾಸವನ್ನ ಹಾಗೂ ಹಕ್ಕು ಕರ್ತವ್ಯಗಳ ಪರಸ್ಪರ ಗೌರವವನ್ನು ಬೆಳೆಸಲು ಸಹಕಾರಿಯಾಗಿದೆ ಸಂವಿಧಾನಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ರವರು ಸಂವಿಧಾನ ಸಭೆಯಲ್ಲಿ ಭಾರತ ದೇಶದ ಸಮಗ್ರ ಜನತೆಗೆ ಅನುಕೂಲವಾಗುವ ಕರಡು ಪ್ರತಿಯನ್ನು ಕುರಿತ ಎಲ್ಲಾ ಪ್ರಶ್ನೆಗಳಿಗೂ ಸ್ಪಷ್ಟವಾದ ಉತ್ತರಗಳನ್ನು ಮತ್ತು ಸಮರ್ಥನೆಯನ್ನು ಮತ್ತು ದಾಖಲೆಗಳನ್ನು ಒದಗಿಸುತ್ತ ಜಗತ್ತಿನ ಶ್ರೇಷ್ಠ ಸಂವಿಧಾನ




ರಚಿಸುವಲ್ಲಿ ಸಫಲರಾಗಿದ್ದರು. ಅಂತಹ ಮಹನೀಯರ ಆಶಯ ಮತ್ತು ಆದರ್ಶಗಳನ್ನು ಭಾರತದ ಪ್ರಜೆಗಳಾದ ನಾವು ನಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳುವುದು ಅಷ್ಟೇ ಮುಖ್ಯವಾಗಿದೆ ಆ ನಿಟ್ಟಿನಲ್ಲಿ ಕರ್ನಾಟಕ ಸರ್ಕಾರವು ಸಂವಿಧಾನ ಜಾಗೃತಿ ಜಾತವನ್ನು ಏರ್ಪಡಿಸಿ ಇಡೀ ರಾಜ್ಯದ ಪ್ರತಿ ಗ್ರಾಮ ಪಂಚಾಯಿತಿಗೂ ಸಂವಿಧಾನದ ಆಶಯಗಳನ್ನು ತಲುಪಿಸುವಲ್ಲಿ ಒಂದು ಸಾರ್ಥಕ ಪ್ರಯತ್ನ ಮಾಡುತ್ತಿದೆ ಇದೊಂದು ಆಶಾಭಾವದ ಸಂಗತಿಯಾಗಿದೆ ಹಾಗೂ ಸಂವಿಧಾನವೇ ಭಾರತ ದೇಶದ ಧರ್ಮ ಗ್ರಂಥವಾಗಿದೆ ಎಂದರು.

ನಗರಸಭೆಯ ಪೌರಾಯುಕ್ತರಾದ ಶ್ರೀಮತಿ ಶರ್ಮಿಳ ಸಂವಿಧಾನ ಜಾಗೃತಿ ಜಾತಾ ರಥವನ್ನು ಬರಮಾಡಿಕೊಂಡರು.

ಸಮುದಾಯದ ಮುಖಂಡ ಟಿಎಪಿಸಿಎಂಎಸ್ ಅಧ್ಯಕ್ಷ ಬಸವಲಿಂಗಯ್ಯ ಮಾತನಾಡಿ ಸಂವಿಧಾನವು ಸರ್ವ ಜನಾಂಗಕ್ಕೂ ಆದರ್ಶವಾಗಿದೆ ಪ್ರಸ್ತುತ ಬದುಕಿಗೆ ನಾವೆಲ್ಲರೂ ಸಂವಿಧಾನಕ್ಕೆ ಕೃತಜ್ಞರಾಗಿರಬೇಕು ಎಂದು ಆಶಿಸಿದರು.

ಸಂವಿಧಾನ ಜಾಗೃತಿ ಜಾತದಲ್ಲಿ ವಿವಿಧ ಶಾಲೆಯ ಮಕ್ಕಳು ವಾದ್ಯ ವೃಂದದ ಮೂಲಕ ಮುನೇಶ್ವರ ಕಾವಲು ಮೈದಾನಕ್ಕೆ ನಗರದ ವಿವಿಧ ರಸ್ತೆಗಳಲ್ಲಿ ಸಂಚರಿಸಿ ಆಗಮಿಸಿದರು.

ಕಾರ್ಯಕ್ರಮದಲ್ಲಿ ನಗರಸಭಾ ಸದಸ್ಯರಾಗಿ ಸತೀಶ್ ಕುಮಾರ್ ಕೃಷ್ಣರಾಜಗುಪ್ತ ವಿವೇಕ್ ರಮೇಶ್ ಮುಖಂಡರುಗಳಾದ ನಿಂಗರಾಜ ಮಲ್ಲಾಡಿ ಬಸವಲಿಂಗಯ್ಯ ಬಸವರಾಜು ಕುಮಾರ್ ಕೊಳಘಟ್ಟ ಕೃಷ್ಣಯ್ಯ ಕಾಂತರಾಜು ರತ್ನಾಪುರಿ ಅಪ್ಪಣ್ಣ ಜೆ.ಮಹದೇವ್, ಗಜೇಂದ್ರ ಕಿರಿಜಾಜಿ, ಕ್ಷೇತ್ರ ಶಿಕ್ಷಣಾಧಿಕಾರಿ ರೇವಣ್ಣ, ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿ ಸುಜೇಂದ್ರ ಕುಮಾರ್, ಸಮಾಜ ಕಲ್ಯಾಣ ಅಧಿಕಾರಿ ಸಿದ್ದರಾಜು, ನೋಡಲ್ ಅಧಿಕಾರಿ ಗಣಪತಿ ಜಕಾತಿ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಗೋವಿಂದೇಗೌಡ, ದೈಹಿಕ ಶಿಕ್ಷಣ ಸಮನ್ವಯ ಅಧಿಕಾರಿ ಲೋಕೇಶ್ ನಗರಸಭೆ ಮತ್ತು ಸಮಾಜ ಕಲ್ಯಾಣ ಇಲಾಖೆಯ ಸಿಬ್ಬಂದಿ ವರ್ಗ ವಿವಿಧ ಶಾಲೆಗಳ ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಹಾಜರಿದ್ದರು.

ಕಿರಿಜಾಜಿ ಗಜೇಂದ್ರ, ವಸಂತ ಹೊನ್ನೇನಹಳ್ಳಿ ಸಿಂಗೇಶ್ ಮುಂತಾದ ಕಲಾವಿದರು ಅಂಬೇಡ್ಕರ್ ಕ್ರಾಂತಿ ಗೀತೆಗಳು ಹಾಡಿ ರೋಮಾಂಚನಗೊಳಿಸಿದರು.

### ಹೆದ್ದಾರಿ ತಡೆದು ಆಕ್ರೋಶ

## ದೆಹಲಿ ಚಲೋಗೆ ತೆರಳಿದ್ದ ರೈತರ ಬಂಧನ

**ಮೈಸೂರು:** ಸಂಯುಕ್ತ ಕಿಸಾನ್ ಮೋರ್ಚಾದಿಂದ ಫೆ.13ರಂದು ನಡೆಯಲಿರುವ ದೆಹಲಿ ಚಲೋ ಸಮಾವೇಶದಲ್ಲಿ ಪಾಲ್ಗೊಳ್ಳಲು ರಾಜ್ಯದಿಂದ ತೆರಳಿದ್ದ 250 ಮಂದಿ ರೈತರನ್ನು ಮಧ್ಯಪ್ರದೇಶದಲ್ಲಿ ಬಂಧಿಸಿರುವುದನ್ನು ಖಂಡಿಸಿ ರೈತ ಸಂಘಟನೆಗಳ ಒಕ್ಕೂಟ ಮತ್ತು ಕಬ್ಬು ಬೆಳೆಗಾರರ ಸಂಘದವರು ಇಲ್ಲಿನ ಗನ್‌ಹೌಸ್ ಸಮೀಪದ ಮೈಸೂರು-ನಂಜನಗೂಡು ಹೆದ್ದಾರಿ ತಡೆದು ಸೋಮವಾರ ಪ್ರತಿಭಟಿಸಿದರು.

ರೈತರು ಸಾಲ ಮನ್ನಾ ಮಾಡುವಂತೆ ಆಗ್ರಹಿಸುವುದು ತಪ್ಪೇ, ಕೃಷಿ ಉತ್ಪನ್ನಗಳಿಗೆ ಬೆಂಬಲ ಬೆಲೆ ನೀಡುವಂತೆ ಕೇಳುವುದು ಅಪರಾಧವೇ? ಎಂದು ಆಕ್ರೋಶದಿಂದ ಕೇಳಿದರು. ಕೇಂದ್ರ ಸರ್ಕಾರವು ರೈತರ ಹೋರಾಟ ಹತ್ತಿಕ್ಕುವ ಕೆಲಸವನ್ನು ಮಾಡುತ್ತಿದೆ. ಮಧ್ಯಪ್ರದೇಶ ಪೊಲೀಸರು ನಮ್ಮ ಹಕ್ಕುಗಳನ್ನು ಕಿತ್ತುಕೊಂಡಿದ್ದಾರೆ. ರೈತ ವಿರೋಧಿ ಕೇಂದ್ರ ಸರ್ಕಾರಕ್ಕೆ ಬುದ್ಧಿ ಕಲಿಸಬೇಕಾಗುತ್ತದೆ ಎಂದರು.

ಸಂಘದ ರಾಜ್ಯ ಸಂಘಟನಾ ಕಾರ್ಯದರ್ಶಿ ಅತ್ತಹಳ್ಳಿ ದೇವರಾಜ್ ಮಾತನಾಡಿ, ?ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕಿಸಾನ್ ಮೋರ್ಚಾದಿಂದ ದೆಹಲಿಯಲ್ಲಿ ಮಂಗಳವಾರ (ಫೆ.13) ಪ್ರತಿಭಟನಾ ಸಮಾವೇಶ ಆಯೋಜಿಸಲಾಗಿದೆ. ಮೈಸೂರು ಭಾಗದ 150 ಮಂದಿ ಸೇರಿ ರಾಜ್ಯದಿಂದ 500ಕ್ಕೂ ಹೆಚ್ಚು ಮಂದಿ ರೈತರು ತೆರಳಿದ್ದರು. ಅವರಲ್ಲಿ ಮಹಿಳೆಯರೂ ಇದ್ದಾರೆ. ರೈಲಿನಲ್ಲಿ ತೆರಳುತ್ತಿದ್ದವರನ್ನು ಮಧ್ಯಪ್ರದೇಶ ಪೊಲೀಸರ ಮೂಲಕ ಬಂಧಿಸಲಾಗಿದೆ. ಕೆಲವರ ಮೇಲೆ ಹಲ್ಲೆಯೂ ನಡೆದಿದೆ ಎಂದು ಆರೋಪಿಸಿದರು.

ಭೋಪಾಲ್ ರೈಲು ನಿಲ್ದಾಣದಲ್ಲಿ ರೈತರನ್ನು ತಡೆದು ಸಮುದಾಯ ಭವನಗಳಲ್ಲಿ ಅಕ್ರಮವಾಗಿ ಕೂಡಿ ಹಾಕಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರು ರೈತರ ಜೀವನದ ಜೊತೆ ಆಟವಾಡುತ್ತಿದ್ದಾರೆ. ಕೇವಲ ಭಾಷಣದಲ್ಲಿ ರೈತರ ಬಗ್ಗೆ ಕರುಣೆ ವ್ಯಕ್ತಪಡಿಸುವ ಅವರ ದ್ರೋಹದ ನಡೆಗೆ ಚುನಾವಣೆಯಲ್ಲಿ ಉತ್ತರ ನೀಡಬೇಕಾಗುತ್ತದೆ. ಅಕ್ರಮವಾಗಿ ಬಂಧಿಸಿರುವ ರೈತರನ್ನು ಕೂಡಲೇ ಬಿಡುಗಡೆ ಮಾಡಿ, ಹೋರಾಟದ ಸ್ಥಳಕ್ಕೆ ಸುರಕ್ಷಿತವಾಗಿ ತಲುಪಿಸಬೇಕು. ಇಲ್ಲದಿದ್ದರೆ ನಿತ್ಯವೂ ವಿಭಿನ್ನವಾಗಿ ಹೋರಾಟ ಹಮ್ಮಿಕೊಳ್ಳಬೇಕಾಗುತ್ತದೆ? ಎಂದು ಎಚ್ಚರಿಕೆ ನೀಡಿದರು.

ಸಂಘದ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ಕಿರಗಸೂರು ಶಂಕರ್, ಉಪಾಧ್ಯಕ್ಷ ನೀಲಕಂಠಪ್ಪ ಮಾರ್ಬಳ್ಳಿ, ತಾಲ್ಲೂಕು ಘಟಕದ ಉಪಾಧ್ಯಕ್ಷ ಸಾತಗಳ್ಳಿ ಬಸವರಾಜ್, ಪ್ರಧಾನ ಕಾರ್ಯದರ್ಶಿ ಕಾಟೂರು ಮಹದೇವಸ್ವಾಮಿ, ಸದಸ್ಯರಾದ ನಾಗೇಶ್ ವರಕೋಡು, ಮಹದೇವಪ್ಪ ಹೀರನಂದಿ, ಗಿರೀಶ್ ಚುಂಚೂರಾಯನಹುಂಡಿ, ಶ್ರೀಕಂಠ, ಮಹೇಶ್, ಅರವಿಂದ ಪಾಲ್ಗೊಂಡಿದ್ದರು.

ಪ್ರತಿಭಟನೆಯಿಂದಾಗಿ ವಾಹನಗಳ ಸಂಚಾರಕ್ಕೆ ತೊಂದರೆಯಾಯಿತು. ವಾಹನಗಳು ಸಾಲು ಗಟ್ಟಿ ನಿಂತಿದ್ದವು. 15 ನಿಮಿಷಗಳ ನಂತರ ಸ್ಥಳಕ್ಕೆ ಬಂದ ಪೊಲೀಸರು ವಾಹನಗಳ ಸಂಚಾರಕ್ಕೆ ಅನುವು ಮಾಡಿಕೊಟ್ಟರು. ಬಳಿಕ ರೈತರು ರಸ್ತೆ ಬದಿಯಲ್ಲಿ ಕೆಲ ಹೊತ್ತು ಪ್ರತಿಭಟಿಸಿದರು.



### ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಹೇಳಿಕೆ

## ಮಹಾತ್ಮರ ಆದರ್ಶ ಅನುಸರಿಸಿ

**ಮೈಸೂರು:** ಸಾಧು-ಸತ್ಪುರುಷರ, ಶರಣರ, ಮಹಾತ್ಮರ ಜಯಂತಿಗಳು ಆಚರಣೆಗೆ ಸೀಮಿತವಾಗಬಾರದು, ದಿನನಿತ್ಯದ ವ್ಯವಹಾರದಲ್ಲಿ ಮಾರ್ಗದರ್ಶಕವಾಗಬೇಕು. ಅವರು ನಡೆದ ದಾರಿ, ನುಡಿದ ಮಾತು ನಮಗೆ ಮಾದರಿ ಆಗಬೇಕು. ಅವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ತಿಳಿಸಿದರು.

ಇಂದು ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮತ್ತು ಶ್ರೀ ಶಿವಯೋಗಿ ಸಿದ್ದರಾಮೇಶ್ವರ ಜಯಂತ್ಯೋತ್ಸವ ಸಮಿತಿಯ ಸಂಯುಕ್ತಾಶ್ರಯದಲ್ಲಿ ನಗರದ ಕರ್ನಾಟಕ ಕಲಾ ಮಂದಿರ ಆವರಣದ ಕಿರುರಂಗ ಮಂದಿರದಲ್ಲಿ ಹಮ್ಮಿಕೊಂಡಿದ್ದ ಶ್ರೀ ಶಿವಯೋಗಿ ಸಿದ್ಧರಾಮೇಶ್ವರ ಜಯಂತಿಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಈ ರೀತಿಯ ಮಹಾನುಭಾವರ ಜಯಂತಿ ಆಚರಿಸುವುದು ಎಲ್ಲರಿಗೂ ಅಗತ್ಯವಾದುದು. ಇವರು ಸಮಾಜದ ಅಂಕು-ಡೊಂಕುಗಳನ್ನು ತಿಳಿಸಿ ಸಮಾಜವನ್ನು ತಿದ್ದುವ ಕೆಲಸ ಮಾಡಿದ್ದಾರೆ. ಬೋವಿ ಜನಾಂಗದವರು ಅವರ ಕೆಲಸಕ್ಕೆ ಸೀಮಿತವಾಗಿರದೆ ಉತ್ತಮ ವಿದ್ಯಾಭ್ಯಾಸ ಮಾಡಿ ಇಂದು ಉತ್ತಮ ಸ್ಥಾನದಲ್ಲಿ ಇದ್ದು, ಸಮಾಜವನ್ನು ಕಟ್ಟುವ ಕೆಲಸ ಮಾಡುತ್ತಿದ್ದಾರೆ ಎಂದರು.

ಬಸವಣ್ಣನವರ ಸಮಕಾಲೀನರಾದ ಇವರು ಸಮಾಜದ ಶಿಕ್ಷಣಕ್ಕೆ, ಜ್ಞಾನಕ್ಕೆ ಹೆಚ್ಚು ಒತ್ತು ಕೊಟ್ಟಿದ್ದರು. ಸಿದ್ಧರಾಮೇಶ್ವರರ ಆಚಾರ ವಿಚಾರಗಳನ್ನು ನಾವು ಜೀವನದಲ್ಲಿ ಪಾಲಿಸಿ, ಅವರ ಆದರ್ಶಗಳನ್ನು ನಾವು ಮೈಗೂಡಿಸಿಕೊಳ್ಳಬೇಕು. ಅಸ್ಪೃಶ್ಯತೆ ಅಸಮಾನತೆಯನ್ನು ಹೋಗಲಾಡಿಸಿ ಸಮಸಮಾಜದ ಕಲ್ಪನೆಯ ಸಮಾನತೆ, ಸಹಬಾಳ್ವೆಯ ತತ್ವ ಸಿದ್ಧಾಂತಗಳನ್ನು ಎಲ್ಲರೂ ಪಾಲಿಸಬೇಕು. ಸಿದ್ಧರಾಮೇಶ್ವರರ ನೂರಾರು ತತ್ವಗಳನ್ನು ಎಲ್ಲರಿಗೂ ಸಹ ತಿಳಿಸಬೇಕು ಎಂದು ಹೇಳಿದರು.

ಮುಖ್ಯ ಭಾಷಣಕಾರರಾದ ಮೈಸೂರು ವಿಶ್ವವಿದ್ಯಾನಿಲಯದ ಪ್ರಾಚ್ಯ ವಿದ್ಯಾ ಸಂಶೋಧನಾಲಯದ ವಿಶ್ರಾಂತ ನಿರ್ದೇಶಕರಾದ ಪ್ರೊ.ಎಸ್. ಶಿವರಾಜಪ್ಪ ಅವರು ಮಾತನಾಡಿ, ಜನವಾಣಿಯನ್ನು ದೇವವಾಣಿಯಾಗಿ ಮಾಡಿದ ಕೀರ್ತಿ ಶರಣರಿಗೆ ಸಲ್ಲುತ್ತದೆ. ಸಿದ್ಧರಾಮೇಶ್ವರ ವಚನಗಳನ್ನು ನೆನೆಸಿಕೊಳ್ಳಬೇಕು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.



12ನೇ ಶತಮಾನದಲ್ಲಿ ಅಲ್ಲಮ ಪ್ರಭು, ಬಸವಣ್ಣನವರ ಕಾಲದಲ್ಲಿ ವಚನ ಸಾಹಿತ್ಯದಲ್ಲಿ ಒಂದು ಕ್ರಾಂತಿಯ ಅಲೆಯನ್ನು ಸೃಷ್ಟಿಸದಂತಹವರಲ್ಲಿ ಸಿದ್ಧರಾಮೇಶ್ವರರು ಒಬ್ಬರು. 12 ನೇ ಶತಮಾನದಲ್ಲಿನ 1679 ವಚನಗಳು ಲಭ್ಯವಾಗಿವೆ. ಎಲ್ಲಾ ವಚನಗಳಲ್ಲಿಯೂ ಸಾಮಾಜಿಕ ಕ್ರಾಂತಿಯ ಸಾಮಾಜಿಕ ಸಂವೇದನೆ, ಸಾಮಾಜಿಕ ಕಳಕಳಿ, ಸಂಯಮ, ಆಧ್ಯಾತ್ಮಿಕದ ಒಲವು ಇದೆ, ಇದೇ ಇವರ ಪ್ರೌಢಿಮೆ ಎಂದರು.

ಎಲ್ಲವನ್ನೂ ಪ್ರಶ್ನೆ ಮಾಡಿ, ಹೋರಾಟ ಮಾಡಿ ಬದುಕಬೇಕು. ಈ ಕೆಲಸವನ್ನು ಸಿದ್ದರಾಮೇಶ್ವರರು 12ನೇ ಶತಮಾನದಲ್ಲಿ ಅನುಭವಮಂಟಪದಲ್ಲೇ ಬಸವಣ್ಣ ಅಲ್ಲಮ ಪ್ರಭುವನ್ನು ಪ್ರಶ್ನೆ ಮಾಡುವುದರ ಮೂಲಕ ನಮಗೆ ತೋರಿಸಿಕೊಟ್ಟಿದ್ದಾರೆ. ಕೆರೆಯನ್ನು ಕಟ್ಟಿಸುವುದು, ಬಾವಿ ತೋಡಿಸುವುದು ಇಂದು ಪ್ರಮುಖ ಯೋಜನೆಯಾಗಿದೆ ಆದರೆ ಇದನ್ನು 12 ನೇ ಶತಮಾನದಲ್ಲಿಯೇ ಬೆಳಕಿಗೆ ತಂದ ಧೀಮಂತರು ಸಿದ್ದರಾಮೇಶ್ವರ. ಸಿದ್ದರಾಮೇಶ್ವರರ ವಚನಗಳು ವೈಚಾರಿಕವಾಗಿದ್ದವು. ಇಂದು ಜಗತ್ತೇ ಇವರ ವಚನದ ಸಾರಾಂಶವನ್ನು ತಿಳಿದು ಕೊಳ್ಳಬೇಕು ಎಂದರು. ಶ್ರೀ ಶಿವಯೋಗಿ ಸಿದ್ದರಾಮೇಶ್ವರ ಬೋವಿ ಸಮಾಜದ ಹಿತರಕ್ಷಣಾ ಅಧ್ಯಕ್ಷರಾದ ನಾಗರಾಜು ಅವರು ಮಾತನಾಡಿ, ಬೋವಿ ಸಮಾಜದಿಂದ ಶಾಲಾ ಕಾಲೇಜು, ಮತ್ತು ವಸತಿನಿಲಯ ಸೌಲಭ್ಯವನ್ನು ಕಲ್ಪಿಸುವ ಆಶಾಭಾವನೆ ಇದೆ, ಅದಕ್ಕೆ ಬೋವಿ ಸಮಾಜದ ಎಲ್ಲಾ ಮುಖಂಡರು ಕಾರ್ಯಕರ್ತರು ಸಹ ಒಗ್ಗಟ್ಟಾಗಿ ಕೈ ಗೂಡಿಸಿ ಕೆಲಸ ಮಾಡಬೇಕು ಎಂದರು.

ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಮೈಸೂರು ವಿಭಾಗೀಯ ಜಂಟಿ ನಿರ್ದೇಶಕರಾದ ವಿ.ಎನ್.ಮಲ್ಲಿಕಾರ್ಜುನಸ್ವಾಮಿ, ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿಗಳಾದ ಸವಿತಾ, ಮೈಸೂರು ಮಹಾನಗರ ಪಾಲಿಕೆಯ ಕಂದಾಯ ಉಪ ಆಯುಕ್ತರಾದ ಸೋಮಶೇಖರ್, ಬೋವಿ ಸಮಾಜದ ಉಪಾಧ್ಯಕ್ಷರಾದ ಪಿ.ಎ.ಚಿನ್ನಸ್ವಾಮಿ, ಭೋವಿ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷರಾದ ಜಿ.ವಿ.ಸೀತಾರಾಮ್, ಅಧ್ಯಕ್ಷರಾದ ಆರ್.ಎಲ್ ಮಾಜಿ ಗೊಂಡಯ್ಯ, ಕನ್ನಡ ಸಾಹಿತ್ಯ ಪರಿಷತ್ತಿನ ಮೈಸೂರು ಜಿಲ್ಲಾ ಅಧ್ಯಕ್ಷರಾದ ಮಡ್ಡಿಕೆರೆ ಗೋಪಾಲ್ ಹಾಗೂ ಸಮುದಾಯದ ಮುಖಂಡರು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಚಿರತೆ-ಆನೆ ಕಾರ್ಯಪಡೆ ಸಿಬ್ಬಂದಿಗೆ ಎರಡನೇ ಹಂತದ ಕಾರ್ಯಗಾರ

**ಮೈಸೂರು :** ಜಿಲ್ಲೆಯ ಸುತ್ತಾಮುತ್ತಾ ಹೆಚ್ಚಾಗುತ್ತಿರುವ ಚಿರತೆ, ಆನೆ ಹಾಗೂ ವನ್ಯಪ್ರಾಣಿಗಳ ಉಪಟಳ ನಿಯಂತ್ರಣಕ್ಕಾಗಿ ಮೈಸೂರು ವ್ಯಾಪ್ತಿಯಲ್ಲಿ ಚಿರತೆ ಕಾರ್ಯಪಡೆಯನ್ನು ಹಾಗೂ ಆನೆ ಕಾರ್ಯಪಡೆಯನ್ನು ರಚಿಸಲಾಗಿರುತ್ತದೆ ಎಂದು ಭಾ.ಅ.ಸೇ, ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಮನೋಜ್ ಆರ್ ತಿಳಿಸಿದರು.

ನಗರದ ಇಲವಾಲದಲ್ಲಿರುವ ಅರಣ್ಯ ರಕ್ಷಕರ ತರಬೇತಿ ಕೇಂದ್ರಲ್ಲಿ ಏರ್ಪಡಿಸಿದ್ದ ಚಿರತೆ ಮತ್ತು ಆನೆಗಳನ್ನು ಸಂರಕ್ಷಣೆ ಮತ್ತು ನಿರ್ವಹಣೆ ಮಾಡುವ ಬಗ್ಗೆ, ಚಿರತೆ ಮತ್ತು ಆನೆ ಕಾರ್ಯಪಡೆಯಲ್ಲಿ ಕರ್ತವ್ಯ ನಿರ್ವಹಿಸುವ ಸಿಬ್ಬಂದಿಗಳಿಗೆ 2ನೇ ಕಾರ್ಯಗಾರದಲ್ಲಿ ಮಾತನಾಡಿದ ಅವರು, ಸಿಬ್ಬಂದಿಗಳಿಗೆ ಮಾನವ-ವನ್ಯಪ್ರಾಣಿ ಸಂಘರ್ಷ ನಿಯಂತ್ರಣದಲ್ಲಿರುವ ಸವಾಲುಗಳು, ಸಿಬ್ಬಂದಿಗಳ ಕರ್ತವ್ಯ ಜವಾಬ್ದಾರಿ, ಶಿಸ್ತು, Team work ಮತ್ತು ಕಾರ್ಯಾಚರಣೆಗಳ ವೇಳೆ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಮಾಹಿತಿಗಳನ್ನು ನೀಡಿದರು. ಅಲ್ಲದೇ ಕಾರ್ಯಗಾರಕ್ಕೆ ವಿಶೇಷ ಆಹ್ವಾನಿತರಾಗಿ ಆಗಮಿಸಿದ್ದ ಡಾ. ಚಂದ್ರಶೇಖರ್, Cauvery Multi Speciality Hospital ರವರು ಹೃದಯದ ಆರೋಗ್ಯ ಮತ್ತು ಜೀವನ ನಿರ್ವಹಣೆ ಬಗ್ಗೆ ಮಾಹಿತಿಗಳನ್ನು ನೀಡಿದರು.

ಕಾರ್ಯಗಾರದಲ್ಲಿ ಚಿರತೆ ಕಾರ್ಯಪಡೆಯ 45 ಸಂಖ್ಯೆ, ಆನೆ ಕಾರ್ಯಪಡೆಯ 32 ಸಂಖ್ಯೆ ಹೊರಗುತ್ತಿಗೆ ನೌಕರರು ಸೇರಿದಂತೆ 20 ಸಂಖ್ಯೆ ಮಂಚೂಣಿ ಸಿಬ್ಬಂದಿಗಳು ಭಾಗವಹಿಸಿದ್ದರು.

ಇದೇ ಸಂದರ್ಭದಲ್ಲಿ ಆನೆ ಮತ್ತು ಚಿರತೆಗಳಿಗೆ ಸಂಬಂದಿಸಿದಂತೆ



ಕ್ಷೇತ್ರಕಾರ್ಯ ನಿರ್ವಹಿಸುತ್ತಿರುವ ವಿವಿಧ ಸಂಪನ್ಮೂಲ ವ್ಯಕ್ತಿಗಳು ಮಾಹಿತಿ ನೀಡಿದರು ಹಾಗೂ ಒಂಥಿಇ ಆಡಿಟಟ ನಡೆಸಿದರು.

ಕಾರ್ಯಗಾರದ ಅಂತಿಮ ಘಟ್ಟದಲ್ಲಿ ಶ್ರೀ ಮಹಾದೇವಯ್ಯ, ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು, ಹುಣಸೂರು ವಿಭಾಗ, ಹುಣಸೂರು ಇವರು ವಂದನಾರ್ಪಣೆ ಮಾಡುವ ಮೂಲಕ ಕಾರ್ಯಗಾರವನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯಗಾರದಲ್ಲಿ ಡಾ.ಮಾಲತಿಪ್ರಿಯಾ ಎಂ. ಭಾ.ಅ.ಸೇ, ಅರಣ್ಯ ಸಂರಕ್ಷಣಾಧಿಕಾರಿಗಳು, ಮೈಸೂರು ವೃತ್ತ, ರವರು, ಡಾ. ಬಸವರಾಜ ಕೆ.ಎನ್ .ಭಾ.ಅ.ಸೇ, ಉಪ ಅರಣ್ಯ ಸಂರಕ್ಷಣಾಧಿಕಾರಿಗಳು, ಮೈಸೂರು ವಿಭಾಗ,, ಶ್ರೀಮತಿ ಸೀಮಾ ಪಿ.ಎ. ಭಾ.ಅ.ಸೇ., ಹುಣಸೂರು ವಿಭಾಗ, ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು ಹಾಗೂ ಇತರೆ ಸಿಬ್ಬಂದಿಗಳು ಭಾಗವಹಿಸಿದ್ದರು.

## ಟಮಕದಲ್ಲಿ ನಾಳೆ ದೇಸೀ ಆಹಾರ ಮೇಳ

**ಕೋಲಾರ:** ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಕೋಲಾರ ನುಡಿ ಜಾತ್ರೆ ( ಕನ್ನಡ ರಾಜ್ಯೋತ್ಸವದ ಅಂಗವಾಗಿ) ದೇಸೀ ಆಹಾರ ಮೇಳವನ್ನು ಫೆ.14 ರಂದು ಬುಧವಾರ ಟಮಕದ ದೇವರಾಜು ಅರಸ್ ಬಡಾವಣೆಯಲ್ಲಿರುವ ಬೆಂಗಳೂರು ಉತ್ತರ ವಿಶ್ವವಿದ್ಯಾಲಯದಲ್ಲಿ ಬೆಳಗ್ಗೆ 10-00 ಗಂಟೆಗೆ ಹಮ್ಮಿಕೊಳ್ಳಲಾಗಿದೆ. ವಿಶ್ವವಿದ್ಯಾಲಯದ ಮುಖ್ಯದ್ವಾರದಿಂದ ವೇದಿಕೆವರೆಗೆ ನುಡಿ ಮೆರವಣಿಗೆ ನಡೆಯಲಿದೆ. ಬುರ್ರಕಥಾ ಕಲಾರತ್ನ ಪ್ರಶಸ್ತಿ ವಿಜೇತ ಕೈವಾರದ ಎ.ವೆಂಕಟೇಶ್ ಕಾರ್ಯಕ್ರಮವನ್ನು ಉದ್ಘಾಟಿಸುವರು. ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ಕುಲಪತಿ ನಿರಂಜನಾ ವಾನಳ್ಳಿ ಅಧ್ಯಕ್ಷತೆ ವಹಿಸುವರು. ವಿಮರ್ಶಕ ಪ್ರೊ.ಚಂದ್ರಶೇಖರ ನಂಗಲಿ, ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ಕುಲಸಚಿವ ಡಾ.ಅಶೋಕ್. ಡಿ ಆರ್, ಮೌಲ್ಯಮಾಪನ ಕುಲಸಚಿವ ಡಾ.ತಿಪ್ಪೇಸ್ವಾಮಿ ಕೆ, ವಿತ್ತಾಧಿಕಾರಿ ವಸಂತ ಕುಮಾರ್, ಬೆಂಗಳೂರು ಉತ್ತರ ವಿಶ್ವವಿದ್ಯಾಲಯ ಸ್ನಾತಕೋತ್ತರ ಕೇಂದ್ರ ಮಂಗಸಂದ್ರದ ನಿರ್ದೇಶಕಿ ಡಾ.ಡಿ ಕುಮುದಾ ಉಪಸ್ಥಿತರಿರುವರು. ಕೈವಾರದ ಎ.ವೆಂಕಟೇಶ್ ಮತ್ತು ತಂಡದವರಿಂದ ಬುರಕಥಾ ಗಾಯನ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ.

## ಬಿಜೆಪಿ ಸರ್ಕಾರಕ್ಕೆರೈತರ ಬಗ್ಗೆ ಕಾಳಜಿ ಇಲ್ಲದಂತೆ ಕಾಣೆಸುತಿದೆ

**ಚಿಕ್ಕಬಳ್ಳಾಪುರ:** ಕರ್ನಾಟಕರಾಜ್ಯದಲ್ಲಿ 224 ತಾಲೂಕುಗಳು ಬರಪೀಡಿತ ಪ್ರದೇಶವಾಗಿ ಬಳಲುತ್ತಿದ್ದು ಎನ್. ಡಿ. ಆರ್. ಎಫ್ ನಿಂದಕೇಂದ್ರ ಸರ್ಕಾರ ನಯಾ ಪೈಸೆ ನೀಡದೆ ಇದನ್ನ ಮರೆಮಾಚಲು ಇದೀಗ ರಾಜ್ಯದಲ್ಲಿಗ್ರಾಮ ಪರಿಕ್ರಮಯಾತ್ರೆಕೈಗೊಂಡಿದೆಎಂದುಕಾಂಗ್ರೆಸ್‌ಜಿಲ್ಲಾಉಪಾಧ್ಯಕ್ಷ ಬಿಎಸ್ ರಫಿವುಲ್ಲಾ ವಾಗ್ದಾಳಿ ಮಾಡಿದರು. ಅವರು ಈ ಬಗ್ಗೆ ಪತ್ರಿಕಾ ಪ್ರಕಟಣೆ ನೀಡಿಅದಕ್ಕೆ ಹಣಕಾಸುಆಯೋಗಕರ್ನಾಟಕರಾಜ್ಯಕ್ಕೆ 11,495 ಬಿಡುಗಡೆ ಮಾಡಲು ಶಿಫಾರಸು ಮಾಡಿದ್ದರು ಸಹ ಕರ್ನಾಟಕರಾಜ್ಯಕ್ಕೆಒಂದು ಪೈಸೆ ಬಿಡುಗಡೆಯಾಗಿಲ್ಲಆದರೂ ಸಹ ಆರ್ಥಿಕ ಸಚಿವರಾದ ನಿರ್ಮಲಾಸಿತಾರಾಮನ್ ಅವರು ಸಂಸತ್ತಿನಲ್ಲಿ ಹಣಕಾಸುಆಯೋಗದ ವಿಚಾರದಲ್ಲಿ ಮಧ್ಯಸ್ಥಿಕೆ ಮಾಡುವುದಿಲ್ಲ ಎಂದು ತಿಳಿಸಿರುವುದು ಎ?ರ ಮಟ್ಟಿಗೆ ಸರಿಎಂದು ತಿಳಿಸಿದ್ದಾರೆ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ, ಕಂದಾಯ ಸಚಿವರು ಹಾಗೂ ಇತರೆ ಸಚಿವರು ಪ್ರಧಾನಿಗಳನ್ನು ಭೇಟಿ ಮಾಡಿ ಬರ ಪರಿಹಾರ ನೀಡಲುಒತ್ತಾಯ ಮಾಡಿದ್ದರೂ ಸರ್ಕಾರದಯಾವೊಂದುಒತ್ತಾಯವನ್ನು ಪರಿಗಣಿಸದೆ ನಯಾಪೈಸೆ ನೀಡದೆರಾಜ್ಯದಜನತೆ ಹಾಗೂ ರೈತರಿಗೆ ವಂಚನೆ ಮಾಡಿದ್ದಾರೆಎಂದು ಪ್ರಕಟಣೆಯ ಮೂಲಕ ಆರೋಪ ಮಾಡಿಕೇಂದ್ರದ ಬಿಜೆಪಿ ಸರ್ಕಾರಕ್ಕೆರೈತರ ಬಗ್ಗೆ ಕಾಳಜಿ ಇಲ್ಲದಂತೆಕಾಣೆಸುತಿದೆ ನಿಜಕ್ಕೂಇದು ಸೂಜಿಗದ ಸಂಗತಿಎಂದಿದ್ದಾರೆ, ಕೇಂದ್ರದಿಂದ ಬರ ಪರಿಹಾರ ಹಣ ಬರದಿದ್ದರೂರಾಜ್ಯದಕಾಂಗ್ರೆಸ್ ಸರ್ಕಾರವುರಾಜ್ಯದ 33 ಲಕ್ಷರೈತರಿಗೆರೂ 2000 ಗಳಂತೆ 628 ಕೋಟಿ ರೂಗಳನ್ನು ಬಿಡುಗಡೆಗೊಳಿಸಿ ರೈತರ ಪರ ನಿಂತಿದೆಎಂದಅವರುಕ 'ರ್ನಾಟಕರಾಜ್ಯದಿಂದಕೇಂದ್ರಕ್ಕೆಜಿಎಸ್?ಟಿ ಮುಖಾಂತರನಾಲ್ಕುಲಕ್ಷಕೋಟಿಗೂಅಧಿಕಮೊತ್ತೆರಿಗೆ ಮೂಲಕ ಸಂದಾಯಆಗುತ್ತಿದ್ದರೂ ಸಹ ನಮ್ಮ ಪಾಲಿನ ಹಣ ಬಿಡುಗಡೆಗೊಳಿಸದೆ ರಾಜ್ಯದಕಾಂಗ್ರೆಸ್ ಸರ್ಕಾರಕ್ಕೆಕೇಂದ್ರ ಸರ್ಕಾರವು ಮಲತಾಯಿಧೋರಣೆಅನುಸರಿಸುತ್ತಿದೆಇದು ಒಂದು ಮಾತ್ರಅಲ್ಲದೆದೇಶದಲ್ಲಿಕಾಂಗ್ರೆಸ್ ಆಡಳಿತ ಇರುವ ಬಹುತೇಕ ರಾಜ್ಯಗಳಲ್ಲೂ ಸಹ ಮಲತಾಯಿಧೋರಣೆಅನು ಸರಿಸುತಿದೆಇದುಯಾವ ನ್ಯಾಯಎಂದು ಪ್ರಶ್ನೆ ಮಾಡಿಕೇಂದ್ರ ಸರ್ಕಾರವುರಾಜ್ಯದಜನತೆಗೆ ಮಾಡುತ್ತಿರುವಅನ್ಯಾಯವೇ ಸರಿಎಂದು ತಿಳಿಸಿದ್ದಾರೆ. ಇದು ಸಾಲದುಎಂಬಂತೆರಾಜ್ಯದ 27 ಮಂದಿ ಬಿಜೆಪಿ ಸಂಸದರುರಾಜ್ಯದಜನತೆಯ ಬಗ್ಗೆ ಧ್ವನಿ ಎತ್ತದೆ ಬಿಜೆಪಿ ಹೈಕಮಾಂಡ್ ಮುಂದೆ ಮುಗುಮ್ಮನಾಗಿಇರುವುದು ಸಂವಿಧಾನಕ್ಕೆ ಮಾಡಿದಅಪಚಾರಅಲ್ಲವೇರಾಜ್ಯದಜನತೆಗೆಆಗುತ್ತಿರುವಅನ್ಯಾಯಕ್ಕೆಯಾರು ಹೊಣೆ ? ಎಂದಿರುವಅವರುಇದೆಲ್ಲವನ್ನ ಮರೆಮಾಚಲುಕರ್ನಾಟಕರಾಜ್ಯದಲ್ಲಿ ಬಿಜೆಪಿ ಪಕ್ಷದಿಂದಕೈಗೊಂಡಿರುವ ಪರಿಕ್ರಮಯಾತ್ರೆಯಾವ ಪುರುಷಾರ್ಥಕ್ಕೆಎಂದುಅವರು ಪ್ರಕಟಣೆಯಲ್ಲಿಕಿಡಿಕಾರಿದ್ದಾರೆ.

## ರಾಜ್ಯ ಬಜೆಟ್‌ನಲ್ಲಿ ಜಿಲ್ಲೆಗೆ ವಿಶೇಷ ಅನುದಾನ ನೀಡಲಿ

**ಕೋಲಾರ:** ಮುಂಬರುವ ರಾಜ್ಯ ಬಜೆಟ್ ಅಧಿವೇಶನದಲ್ಲಿ ಕೋಲಾರ ಜಿಲ್ಲೆಯಲ್ಲಿನ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಔಷಧಗಳ ಲಭ್ಯತೆಯೊಂದಿಗೆ ದಿನದ 24 ಗಂಟೆಯೂ ಚಿಕಿತ್ಸೆ ನೀಡುವ ವೈದ್ಯರನ್ನೊಳಗೊಂಡಂತೆ ಚಿಕಿತ್ಸಾ ಸೌಲಭ್ಯ ನೀಡುವಂತೆ ಬಜೆಟ್‌ನಲ್ಲಿ ಹಣಕಾಸು ನಿಗದಿ ಪಡಿಸಬೇಕು ಹಾಗೂ ಜಿಲ್ಲಾಸ್ಪತ್ರೆಯಲ್ಲಿ ಮಹಿಳೆಯರಿಗೆ ಕ್ಯಾನ್ಸರ್ ನಂತಹ ಆಂತರಿಕ ಚಿಕಿತ್ಸೆಗಳನ್ನು ಒಂದೇ ಸೂರಿನಡಿಯಲ್ಲಿ ಚಿಕಿತ್ಸೆ ನೀಡುವಂತ ಘಟಕವನ್ನು ಸ್ಥಾಪಿಸಿ ಮಹಿಳೆಯರ ಆರೋಗ್ಯ ಗೌಪ್ಯತೆಯನ್ನು ಕಾಪಾಡುವ ನಿಟ್ಟಿನಲ್ಲಿ ಹಣಕಾಸು ನಿಗಧಿಪಡಿಸಬೇಕೆಂದು ಕೋಲಾರ ವಿಧಾನ ಸಭಾ ಕ್ಷೇತ್ರದ ಜೆಡಿಎಸ್ ಮುಖಂಡ ಸಿ.ಎಂ.ಆರ್ ಶ್ರೀನಾಥ್ ಮುಖ್ಯಮಂತ್ರಿಗಳನ್ನು ಒತ್ತಾಯಿಸಿದ್ದಾರೆ. ಪತ್ರಿಕಾ ಹೇಳಿಕೆ ನೀಡಿರುವ ಅವರು, ಜಿಲ್ಲೆಯಲ್ಲಿ ಪ್ರವಾಸಿ ತಾಣಗಳು ನಿರ್ಲಕ್ಷ್ಯಕ್ಕೊಳಗಾಗಿ ಹಾಳು ಕೊಂಪೆಗಳಾಗಿವೆ. ಇವುಗಳನ್ನು ತ್ವರಿತವಾಗಿ ಶುಚಿಗೊಳಿಸಿ, ಅಭಿವೃದ್ಧಿಪಡಿಸಿ, ಮೂಲಭೂತ ಸೌಕರ್ಯಗಳೊಂದಿಗೆ ಗೈಡ್‌ಗಳನ್ನು ನೇಮಕ ಮಾಡಿ ಕೋಲಾರದ ಇತಿಹಾಸ ಸಾರುವ ಮತ್ತು ಧಾರ್ಮಿಕ ಕೇಂದ್ರಗಳನ್ನು ಉಳಿಸಿ ಅಭಿವೃದ್ಧಿಪಡಿಸುವಂತೆ ಹಣಕಾಸು ಮಂಜೂರು ಮಾಡಬೇಕೆಂದು ಮನವಿ ಮಾಡಿದ್ದಾರೆ. ನಗರ ಪ್ರದೇಶವನ್ನು ಸ್ಮಾರ್ಟ್ ಸಿಟಿ ಅಡಿಯಲ್ಲಿ ವಿಶೇಷ ಅನುಧಾನ ನಿಗಧಿಪಡಿಸಿ ನಗರಾಭಿವೃದ್ಧಿ ಮತ್ತು ಶೌಚಾಲಯಗಳು ಹಾಗೂ ನೈರ್ಮಲ್ಯ ಕಾಪಾಡುವಲ್ಲಿ ಬಜೆಟ್‌ನಲ್ಲಿ ಒತ್ತು ನೀಡಬೇಕು. ಉಳಿದಂತೆ ಕೃಷಿ ಉತ್ಪನ್ನ ಮಾರುಕಟ್ಟೆ ಜಾಗ, ವರ್ತುಲ ರಸ್ತೆ ಮತ್ತು ಕೆ.ಸಿ ವ್ಯಾಲಿ ಮೂರನೇ ಹಂತದ ಶುದ್ದೀಕರಣ ಹಲವಾರು ವರ್ಷಗಳಿಂದ ಸರ್ಕಾರದ ನಿರ್ಲಕ್ಷ್ಯದಿಂದ ನೆನೆಗುದಿಗೆ ಬಿದ್ದಿದೆ. ಆದ್ದರಿಂದ ಈ ಕೂಡಲೆ ತ್ವರಿತವಾಗಿ ಈ ಎಲ್ಲಾ ಕಾಮಗಾರಿಗಳನ್ನು ಕೈಗೆತ್ತಿಕೊಂಡು ಪೂರ್ಣಗೊಳಿಸುವಂತೆ ಬಜೆಟ್ ಮಂಡನೆಯಾಗಬೇಕೆಂದು ಒತ್ತಾಯಿಸಿದ್ದಾರೆ.

## ಡಾಕ್ಟರೇಟ್ ಪದವಿ ಪ್ರಧಾನ

**ವಿಜಯಪುರ:** ಪಟ್ಟಣ ಸಮೀಪದ ಜೊನ್ನಹಳ್ಳಿ ಗ್ರಾಮದ



ಶಿವರಾಮೇಗೌಡ ಅವರು ಮುಳಬಾಗಿಲು ನಗರ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಸಮಾಜಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕರಾಗಿದ್ದು, ಅವರಿಗೆ ವುಮೆನ್ ಇನ್ ಲೀಗಲ್ ಪ್ರೋಫೆಷನಲ್ ಸೋಷಿಯಾಲಜಿಕಲ್ ಸ್ಟಡಿ ಆಫ್ ರೂರಲ್ ಬೆಂಗಳೂರು ಎಂಬ ವಿಷಯದ ಪ್ರಬಂಧಕ್ಕೆ ಮೈಸೂರು ವಿಶ್ವವಿದ್ಯಾಲಯ ಡಾಕ್ಟರೇಟ್ ನೀಡಿದೆ. ಡಾ.ರೇಖಾ ಕೆ ಜಾದವ್ ಅವರು ಇವರಿಗೆ ಗೈಡಾಗಿ ಮಾರ್ಗದರ್ಶಕರಾಗಿದ್ದರು.

### ಸಂಸ್ಕೃತ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿ ಪ್ರೊ. ಪದ್ಮಾಶೇಖರ್ ಬಣ್ಣನೆ

## ಕರ್ನಾಟಕದ ಸಾಂಸ್ಕೃತಿಕ ಚರಿತ್ರೆಯಲ್ಲಿ ಈಡಿಗರ ಪಾತ್ರ ಮಹತ್ವದ್ದು

**ಮೈಸೂರು :** ಕರ್ನಾಟಕದ ಸಾಂಸ್ಕೃತಿಕ ಚರಿತ್ರೆಯಲ್ಲಿ ಈಡಿಗ ಸಮುದಾಯದ ಪಾತ್ರ ಮಹತ್ವದ್ದಾಗಿದೆ. ನಾಡು ಮತ್ತು ನುಡಿಯ ಕಟ್ಟುವ ಪ್ರಕ್ರಿಯೆಯಲ್ಲಿ ಹಲವು ಮಹತ್ವದ ಕೊಡುಗೆಗಳನ್ನು ನೀಡಿದೆ. ಈ ಹಿನ್ನೆಲೆಯಲ್ಲಿ ಜನಾಂಗದ ಇತಿಹಾಸ ಮತ್ತು ಸಂಸ್ಕೃತಿ ಅಧ್ಯಯನ ಸಂಶೋಧನೆಗೆ ಅರ್ಹವಾಗಿದೆ ಎಂದು ಸಂಸ್ಕೃತ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿ ಪ್ರೊ. ಪದ್ಮಾ ಶೇಖರ್ ಬಣ್ಣಿಸಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು , ಸ್ಪಂದನ ಸಾಂಸ್ಕೃತಿಕ ಪರಿಷತ್ತು, ಕದಂಬ ಕಲಾಪೀಠ ಹಾಗೂ ಉದಯಗಿರಿ ಕನ್ನಡ ಸಂಘದ ಸಂಯಯಕ್ತ ಆಶ್ರಯದಲ್ಲಿ ಇಲ್ಲಿನ ಎಂಜಿನಿಯರ್‌ಗಳ ಸಂಸ್ಥೆ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸುಜಯಾ ಸುರೇಶ್ ಸಂಪಾದಕತ್ವದ 'ಈಡಿಗ ಜನಾಂಗದ ಮರೆಯಲಾಗದ ಮಹನೀಯರು' ಕೃತಿ ಬಿಡುಗಡೆ ಸಮಾರಂಭದಲ್ಲಿ ಅವರು ಮಾತನಾಡಿದರು.

ಸೇಂದಿ ತಯಾರಿಕೆಯು ಈಡಿಗರ ಮೂಲ ಕಸುಬಾದರೂ ಅಷ್ಟಕ್ಕೇ ಅವರ ಸೇವೆ ಸೀಮಿತವಾಗಿರಲಿಲ್ಲ. ಸೇನೆಯನ್ನೂ ಒಳಗೊಂಡು ಅನೇಕ ವಿಭಾಗಗಳಲ್ಲಿ ಅವರು ತೊಡಗಿಸಿಕೊಂಡಿದ್ದರು ಎನ್ನುವುದನ್ನು ಹಲವು ಶಾಸನಗಳು ದಾಖಲಿಸಿವೆ. ಆಧುನಿಕ ಕರ್ನಾಟಕ ಕಟ್ಟುವಲ್ಲೂ ಈ ಸಮುದಾಯ ಮುಂಚೂಣಿಯಲ್ಲಿದ್ದು, ಮಾಧ್ಯಮ ಹಾಗೂ ರಾಜಕೀಯ ಸೇರಿದಂತೆ ಪ್ರಮುಖ ಕ್ಷೇತ್ರಗಳಲ್ಲಿ ಛಾಪು ಮೂಡಿಸಿದೆ ಎಂದು ವಿವರಿಸಿದರು.



ಈಡಿಗ ಸಮುದಾಯದ ಕುರಿತು ಅಲ್ಲಲ್ಲಿ ಬಿಡಿ ಬಿಡಿ ಲೇಖನಗಳು ಬಂದಿವೆಯಾದರೂ ಸಮಗ್ರ ಕೃತಿಯ ಕೊರತೆ ಇತ್ತು. ಅದನ್ನು ಈ ಪುಸ್ತಕವು ಭಾಗಶಃ ನೀಗಿಸಿದೆ. ಹೊಸ ಸಂಶೋಧಕರು ಹಾಗೂ ಸಮುದಾಯದ ಕೈಪಿಡಿ ಆಗಿದೆ. ಲೇಖಕಿ ಕೇವಲ ಪ್ರಾಥಮಿಕ ಶಿಕ್ಷಣ ಪಡೆದಿದ್ದರೂ ಸಂಶೋಧನೆ ಬಯಸುವ ಶಿಸ್ತಿನ ಪಥದಲ್ಲಿ ಕೆಲಸ ಮಾಡಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಪುಸ್ತಕ ಬಿಡುಗಡೆ ಮಾಡಿದ ಹಿರಿಯ ಸಾಹಿತಿ ಪ್ರೊ.ಸಿ.ಪಿ. ಕೃಷ್ಣಕುಮಾರ್ ಮಾತನಾಡಿ, ಈಡಿಗರು ದೇಶದಾದ್ಯಂತ ನೆಲೆಸಿದ್ದಾರೆ. ವಿವಿಧ ಹೆಸರಿನಿಂದ ಕರೆಯಲ್ಪಡುತ್ತಾರೆ. ಹಾಗೆ ವಿಶಾಲ ಮನೋಭಾವ ಹೊಂದಿರುವವರಾಗಿದ್ದಾರೆ. ಅನೇಕ ಗಣ್ಯ ಪುರುಷರು, ಮಹನೀಯರು ಈ ಸಮುದಾಯದಿಂದ ಬಂದು ಸಮಾಜಕ್ಕೆ ಅಮೂಲ್ಯ ಕೊಡುಗೆ ನೀಡಿದ್ದಾರೆ' ಎಂದು ಸ್ಮರಿಸಿದರು. ಸಮು ದಾಯದವರಾದ ನಾರಾಯಣ ಗುರುಗಳು ರಕ್ತಸಿಕ್ತ ಇತಿಹಾಸವುಳ್ಳ ಇಡೀ ಕೇರಳವನ್ನು ಪರಿವರ್ತಿಸಿದ ಕ್ರಾಂತಿಕಾರಿ ಸಮಾಜ ಸುಧಾರಕ. ಬಸವಣ್ಣ ಮತ್ತು ಕುವೆಂಪು ಅವರ ಸಾಲಿನಲ್ಲಿ ನಿಲ್ಲುವಂತ ಸಾಂಸ್ಕೃತಿಕ ನಾಯಕ. ಈ ಸಮುದಾಯದವರೇ ಆದ ರಾಜಕುಮಾರ್, ಎಸ್. ಬಂಗಾರಪ್ಪ ಅವರಂಥವರು ನಾಡಿನ ಸಂಸ್ಕೃತಿಗೆ ಕೊಟ್ಟ ಮೌಲಿಕ ಕೊಡುಗೆ ಅಪಾರ' ಎಂದು ನೆನೆದರು.

ಈಡಿಗ ಜನಾಂಗದ ಮರೆಯಲಾಗದ ಮಹನೀಯರು ಕೃತಿಯು ಗಾತ್ರ-ಸೂತ್ರದಲ್ಲಿ, ರೂಪ-ಸ್ವರೂಪದಲ್ಲಿ ಅಪರೂಪದ ಗ್ರಂಥವಾಗಿದ್ದು, ಗಣ್ಯ ಜನಾಂಗವೊಂದರ ಪ್ರಬುದ್ಧ ಅಧ್ಯಯನದ ಸಾಂಸ್ಕೃತಿಕ ಸಂಕಥನವಾಗಿದೆ.

ಈ ಕೃತಿಯಲ್ಲಿ ಈಡಿಗ ಸಮುದಾಯಕ್ಕೆ ಸಂಬಂಧಿಸಿದಂತೆ ಬೇರೆ ಬೇರೆ ಆಕರಗಳಿಂದ ಮಾಹಿತಿಯನ್ನು ಸಂಗ್ರಹಿಸಿ ಸಂಯೋಜಿಸುವ ಕೆಲಸವನ್ನು ಲೇಖಕರು ಯಶಸ್ವಿಯಾಗಿ ಮಾಡಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಈ ನಿಟ್ಟಿನಲ್ಲಿ ಇದೊಂದು ಸಂಪಾದನಾ ಕೃತಿಯಾಗಿರದೇ, ಸಂಶೋಧನಾ ಗ್ರಂಥವೂ ಆಗಿದೆ. ಈಡಿಗ ಸಮಾಜದ ಮರೆಯಲಾಗದ, ಮರೆಯಬಾರದ ಮಹನೀಯರ ಬಗ್ಗೆ ಬೆಳಕು ಚೆಲ್ಲುತ್ತದೆ. ಈಡಿಗ ಜನಾಂಗದ ರೀತಿಯಲ್ಲಿ, ಇತರೆ ಸಣ್ಣ ಸಣ್ಣ ಜನಾಂಗವರ ಕುರಿತಾಗಿಯೂ ಸಂಶೋಧನಾ ಕೃತಿಗಳು ಹೊರಬರಬೇಕಿರುವುದು ಅಗತ್ಯವಾಗಿದೆ ಎಂದು ಸಿಪಿಕೆ ತಿಳಿಸಿದರು. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್ ಅಧ್ಯಕ್ಷತೆ ವಹಿಸಿದ್ದರು. ಸ್ಪಂದನ ಸಾಂಸ್ಕೃತಿಕ ಪರಿಷತ್ತಿನ ಅಧ್ಯಕ್ಷ ಟಿ. ಸತೀಶ್ ಜವರೇಗೌಡ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕ ಹೆಚ್. ಕೆ. ಪಾಂಡು, ಕೃತಿಯ ಲೇಖಕಿ ಸುಜಯಾ ಸುರೇಶ್, ಲೇಖಕ ಡಾ.ವೈ.ಡಿ. ರಾಜಣ್ಣ, ಕದಂಬ ಕಲಾಪೀಠದ ಅಧ್ಯಕ್ಷ ವಿದ್ಯಾಸಾಗರ ಕದಂಬ, ಉದಯಗಿರಿ ಕನ್ನಡ ಸಂಘದ ಕಾರ್ಯದರ್ಶಿ ಜಯಕುಮಾರ್, ಸ್ಪಂದನ ಸಾಂಸ್ಕೃತಿಕ ಪರಿಷತ್ತಿನ ಪದಾಧಿಕಾರಿಗಳಾದ ಡಾ.ಡಿ.ಕೆ. ಉಷಾ, ಟಿ. ಲೋಕೇಶ್ ಹುಣಸೂರು, ಚಂದ್ರು ಮಂಡ್ಯ ಉಪಸ್ಥಿತರಿದ್ದರು.

## ವಿದ್ಯಾರ್ಥಿಗಳಿಗೆ ವಿಶೇಷ ಉಪನ್ಯಾಸ

**ಹುಳಿಯಾರು:** ಹುಳಿಯಾರು-ಕೆಂಕೆರೆ ಬಿ.ಎಂ.ಎಸ್. ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವಾಣಿಜ್ಯ ಶಾಸ್ತ್ರ ವಿಭಾಗದ ವತಿಯಿಂದ ಐಕ್ಯೂಎಸಿ ಸಹಯೋಗದೊಂದಿಗೆ ಬಿ.ಕಾಂ. ವಿದ್ಯಾರ್ಥಿಗಳಿಗೆ ''ವಿಶೇಷ ಉಪನ್ಯಾಸ'' ಕಾರ್ಯಕ್ರಮವನ್ನು ಸೋಮವಾರ ಏರ್ಪಡಿಸಲಾಗಿತ್ತು. ತುಮಕೂರಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕರಾದ ಡಾ. ಸತೀಶ್ ಕುಮಾರ್ ಜಿ., ಮಂಜುನಾಥ್, ಕುಮಾರಸ್ವಾಮಿ ಬಿ. ಮತ್ತು ಮುದ್ದಗಂಗಯ್ಯ ಕೆ.ಸಿ. ಅವರು ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿ, ಬಿ.ಕಾಂ. ಪ್ರಥಮ ದ್ವಿತೀಯ ಹಾಗೂ ತೃತೀಯ ವರ್ಷದ ವಿದ್ಯಾರ್ಥಿಗಳಿಗೆ ಫೈನಾನ್ಸಿಯಲ್ ಅಕೌಂಟಿಂಗ್, ಕಾಸ್ಟ್ ಅಕೌಂಟಿಂಗ್, ಕಾರ್ಪೊರೇಟ್ ಅಕೌಂಟಿಂಗ್, ಇನ್ಕಮ್ ಟ್ಯಾಕ್ ,ಬಿಸ್ನೆಸ್ ಸ್ಟ್ಯಾಟಿಸ್ಟಿಕ್ಸ್ ಪಠ್ಯ ವಿಷಯಗಳಿಗೆ ಸಂಬಂಧಿಸಿದಂತೆ ಉಪನ್ಯಾಸ ನೀಡಿದರು. ವಿದ್ಯಾರ್ಥಿಗಳ ಜೊತೆ ಸಂವಾದ ನಡೆಸಿ ಸಂದೇಹಗಳನ್ನು ಪರಿಹರಿಸಿದರು. ಸಂಪನ್ಮೂಲ ವ್ಯಕ್ತಿಗಳಾದ ಪ್ರೊ.ಕುಮಾರಸ್ವಾಮಿ ಅವರು ಪರೀಕ್ಷೆಯ ದೃಷ್ಟಿಯಿಂದ ಓದುವ ಜೊತೆಗೆ ವಿಷಯವನ್ನು ಸಂಪೂರ್ಣವಾಗಿ ತಿಳಿದುಕೊಳ್ಳಬೇಕು ಆಗ ಮಾತ್ರ ಅದು ನಮ್ಮ ಪ್ರಯತ್ನಕ್ಕೆ ಒಳ್ಳೆಯ ಫಲಿತಾಂಶ ತಂದು ಕೊಡುತ್ತದೆ ಎಂದರು. ಪ್ರಾಂಶುಪಾಲ ಪ್ರೊ.ಎಸ್.ಸಿ.ವೀರಣ್ಣ ಅಧ್ಯಕ್ಷತೆ ವಹಿಸಿದ್ದರು. ತಿಪಟೂರು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವಾಣಿಜ್ಯ ಉಪನ್ಯಾಸಕರಾದ ಚಂದ್ರಮೌಳಿ, ವಾಣಿಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಪ್ರೊ. ಮಲ್ಲಿಕಾರ್ಜುನ್, ಸಹಾಯಕ ಪ್ರಾಧ್ಯಾಪಕರಾದ ಸಂಗೀತಾ ಪಿ. ಉಪನ್ಯಾಸಕರಾದ ಲಾವಣ್ಯ ಪಿ.ಸಿ ಹಾಗೂ ಕರಿಬಸವ, ದೈಹಿಕ ಶಿಕ್ಷಣ ನಿರ್ದೇಶಕ ಪ್ರೊಯೋಗೀಶ್ ಬಿ. ಮತ್ತು ಐಕ್ಯೂಎಸಿ ಸಂಚಾಲಕರಾದ ಪ್ರೊ. ಮಂಜುನಾಥ್ ಕೆ ಎಸ್. ಅವರು ಉಪಸ್ಥಿತರಿದ್ದರು.



ಬಿ.ಎಂ.ಎಸ್. ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವಾಣಿಜ್ಯ ಶಾಸ್ತ್ರ ವಿಭಾಗದ ವತಿಯಿಂದ ಐಕ್ಯೂಎಸಿ ಸಹಯೋಗದೊಂದಿಗೆ ಬಿ.ಕಾಂ. ವಿದ್ಯಾರ್ಥಿಗಳಿಗೆ ''ವಿಶೇಷ ಉಪನ್ಯಾಸ'' ಕಾರ್ಯಕ್ರಮವನ್ನು ಸೋಮವಾರ ಏರ್ಪಡಿಸಲಾಗಿತ್ತು.

# ಸಂವಿಧಾನದ ಪ್ರಸ್ತಾವನೆ ಅರಿತು ಅದನ್ನು ಅರ್ಥೈಸಿಕೊಳ್ಳಬೇಕು

ಕೋಲಾರ: ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮವು ಸರ್ಕಾರದ ವಿನೂತನ ಕಾರ್ಯಕ್ರಮವಾಗಿದ್ದು, ಸಂವಿಧಾನದ ಮೌಲ್ಯ ಅದರ ಪ್ರಸ್ತಾವನೆ ಎಲ್ಲರಿಗೂ ತಿಳಿದು ಅದನ್ನು ಅರ್ಥೈಸಿಕೊಳ್ಳಬೇಕೆಂದು ಜಿಲ್ಲಾಧಿಕಾರಿ ಅಕ್ರಂ ಪಾಷ ಅವರು ತಿಳಿಸಿದರು. ಭಾರತ್ ಸ್ಕೌಟ್ಸ್ ಭವನದಲ್ಲಿ ಆಯೋಜಿಸಲಾಗಿದ್ದ, ಸ್ಕೌಟ್ಸ್ ಮತ್ತು ಗೈಡ್ಸ್ ವಿದ್ಯಾರ್ಥಿಗಳಿಗೆ ರಾಜ್ಯ ಪುರಸ್ಕೃತ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ದೇಶಿಸಿ ಅವರು ಮಾತನಾಡುತ್ತಿದ್ದರು. ಶಾಲೆಯ ದಿನಗಳನ್ನು ಮೆಲುಕು ಹಾಕಿದ ಅವರು ತಮಗೂ ಸಹ ಭಾರತೀಯ ಸ್ಕೌಟ್ಸ್ ನಲ್ಲಿ ಸೇವೆ ಸಲ್ಲಿಸಲು ಅವಕಾಶ ದೊರೆತ್ತಿದ್ದುದರ ಬಗ್ಗೆ ಹೆಮ್ಮೆ ವ್ಯಕ್ತಪಡಿಸಿದರು. ಸ್ಕೌಟ್ಸ್, ಗೈಡ್ಸ್ ಮತ್ತು ಎನ್.ಸಿ.ಸಿ ಗಳಲ್ಲಿ ತರಬೇತಿ ಪಡೆದ ವ್ಯಕ್ತಿಗಳಲ್ಲಿ ಶಾಂತಿ, ಶಿಸ್ತು, ಸಮಯಪ್ರಜ್ಞೆ, ಜನಸೇವೆ ಹಾಗೂ ರಾಷ್ಟಭಕ್ತಿ ಹೆಚ್ಚಾಗಿರುವುದನ್ನು ಕಾಣಬಹುದು. ವಿದ್ಯಾರ್ಥಿ ದೆಸೆಯಲ್ಲಿ ರಾಷ್ಟ್ರಭಕ್ತಿಯನ್ನು ಮೈಗೂಡಿಸಿಕೊಂಡರೆ ಉತ್ತಮ ನಾಗರೀಕರಾಗಿ ಬೆಳೆಯಲು ಸಾಧ್ಯ ಎಂದು ತಿಳಿಸಿದರು. ಜಿಲ್ಲಾದ್ಯಂತ ಸಂವಿಧಾನ ಅರಿವು ಕಾರ್ಯಕ್ರಮ ನಡೆಸಲಾಗುತ್ತಿದೆ. ಸಂವಿಧಾನ ಜಾಥಾ ಕಾರ್ಯಕ್ರಮವು ಪ್ರತಿನಿತ್ಯ ಒಂದು ಗ್ರಾಮ ಪಂಚಾಯತಿಯನ್ನು ತಲುಪುತ್ತಿದೆ. ಈ ಮೂಲಕ ನಾಗರೀಕರಲ್ಲಿ ಸಂವಿಧಾನ ಕುರಿತಾದ ಅರಿವುಂಟು ಮಾಡಲಾಗುತ್ತಿದೆ. ಜಿಲ್ಲೆಯ ಪ್ರತಿಯೊಬ್ಬರೂ ಇದರ ಪಾಲುಗಾರರಾಗಬೇಕೆಂದು ಜಿಲ್ಲಾಡಳಿತ ಆಪೇಕ್ಷೆಪಡುತ್ತದೆ. ಸಂವಿಧಾನದ ಧ್ಯೇಯೋದ್ದೇಶಗಳು, ಆಶೋತ್ತರಗಳು ಮುಂತಾದವುಗಳ ಬಗ್ಗೆ ಎಲ್ಲರೂ ತಿಳಿದುಕೊಳ್ಳಬೇಕು. ಸಂವಿಧಾನವು ತನ್ನ ಎಲ್ಲಾ ಪ್ರಜೆಗಳಿಗೆ ಸಾಂವಿಧಾನಿಕ ಹಕ್ಕುಗಳನ್ನು ನೀಡಿದೆ. ಅಂತೆಯೇ ನಾಗರೀಕರು ಸಾಂವಿಧಾನಿಕ ಕರ್ತವ್ಯಗಳನ್ನು ಪಾಲಿಸಲು ಸೂಚಿಸುತ್ತದೆ. ಭಾರತೀಯ ಪ್ರಜೆಗಳಾದ ನಾವೆಲ್ಲರೂ ಸಂವಿಧಾನ ಬದ್ಧವಾಗಿ ನಡೆದುಕೊಳ್ಳಬೇಕು ಎಂದರು. ದೇಶದ ಏಕತೆ, ಸಮಗ್ರತೆ ಹಾಗೂ ಸಾರ್ವಭೌಮತೆಗೆ ಧಕ್ಕೆ ತರುವ ವಿಷಯಗಳಿಂದ ದೂರ ಉಳಿಯಬೇಕು. ಸಂವಿಧಾನವು ನಾಗರೀಕರಿಗೆ ನೀಡಿರುವ ಹಕ್ಕುಗಳನ್ನು ವಿವೇಚನಾಯುತವಾಗಿ ಬಳಸಬೇಕು ಹಾಗೂ ತಪ್ಪದೇ ಕರ್ತವ್ಯಗಳನ್ನು ಪಾಲಿಸಬೇಕು. ಎಲ್ಲಾ ಅಂಶಗಳನ್ನು ಮೈಗೂಡಿಸಿಕೊಂಡರೆ ದೇಶದ ಉತ್ತಮ ಹಾಗೂ ಜವಬ್ದಾರಿಯುತ ಪ್ರಜೆಗಳಾಗಿ ಬೆಳೆಯುತ್ತೀರಿ ಎಂದು ತಿಳಿಸಿದರು. ಇದೇ ಸಂದರ್ಭದಲ್ಲಿ ರಾಜ್ಯ ಪುರಸ್ಕೃತ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪ್ರದಾನ ಮಾಡಲಾಯಿತು. ಸಭೆಯಲ್ಲಿ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಮುಖ್ಯ ಆಯುಕ್ತರಾದ ಕೆ.ವಿ ಶಂಕರಪ್ಪ, ಉಪ ಆಯುಕ್ತರಾದ ಚಂದ್ರಶೇಖರ್ ಸೇರಿದಂತೆ ನಗರದ ವಿವಿಧ ಶಾಲೆಗಳ ಸ್ಕೌಟ್ಸ್ ಮತ್ತು ಗೈಡ್ಸ್ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಸಂಘ-ಸಂಸ್ಥೆಗಳಿಂದ ಅರ್ಜಿ

**ಮಂಡ್ಯ:** 2023 24ನೇ ಸಾಲಿನಲ್ಲಿ ಶೇ.5% ರ ವಿಶೇಷ ಚೇತನರ ಕಲ್ಯಾಣ ಕಾರ್ಯಕ್ರಮದಡಿ ಮಂಡ್ಯ ನಗರ ವ್ಯಾಪ್ತಿಯಲ್ಲಿ ಅರ್ಹ ವಿಶೇಷ ಚೇತನರಿಂದ ಆರೋಗ್ಯ ವಿಮೆಗಾಗಿ ಮತ್ತು ವಿಶೇಷ ಚೇತನರ ಸಂಘ-ಸಂಸ್ಥೆಗಳಿಗೆ ಪ್ರೋತ್ಸಾಹ ಧನ ಸೌಲಭ್ಯ ಪಡೆಯಲು ನಗರದಲ್ಲಿರುವ ವಿಶೇಷ ಚೇತನರ ಸಂಘ-ಸಂಸ್ಥೆಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಹ ವಿಶೇಷ ಚೇತನರು ಅರ್ಜಿ ಸಲ್ಲಿಸಲು ಫೆಬ್ರವರಿ 26 ಕೊನೆಯ ದಿನಾಂಕವಾಗಿದ್ದು, ನಂತರ ಬರುವ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಮಂಡ್ಯ ನಗರ ಸಭೆಯ ಡೇ-ನಲ್ಮ್ ಶಾಖೆಯನ್ನು ಸಂಪರ್ಕಿಸುವಂತೆ ನಗರಸಭೆಯ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾರ್ವಜನಿಕರಿಂದ ದೂರು ಸ್ವೀಕಾರ ಸಭೆ ಮುಂದೂಡಿಕೆ

**ಮಂಡ್ಯ:** ಕರ್ನಾಟಕ ಲೋಕಾಯುಕ್ತ ಮಂಡ್ಯ ಘಟಕದ ಪೊಲೀಸ್ ಅಧಿಕಾರಿಗಳ ಉಸ್ತುವಾರಿಯಲ್ಲಿ ಸಾರ್ವಜನಿಕರಿಂದ ದೂರು ಅರ್ಜಿ/ಅಹವಾಲು ಸ್ವೀಕಾರ ಸಭೆಯನ್ನು ಫೆಬ್ರವರಿ 14 ರಂದು ಮಂಡ್ಯ ನಗರಸಭೆಯ ಸಭಾಂಗಣದಲ್ಲಿ ಆಯೋಜಿಲಾಗಿದ್ದು, ಕಾರಣಾಂತರಗಳಿಂದ ಸಭೆಯನ್ನು ಫೆಬ್ರವರಿ 16 ಕ್ಕೆ ಮುಂದೂಡಲಾಗಿರುತ್ತದೆ ಎಂದು ಕರ್ನಾಟಕ ಲೋಕಾಯುಕ್ತ ಸೂಪರ್‌ಡೆಂಟ್ ಆಫ್ ಪೊಲೀಸ್ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ಮಂಡ್ಯ:** 2023 24ನೇ ಸಾಲಿನಲ್ಲಿ ಶೇ.5% ರ ವಿಶೇಷ ಚೇತನರ ಕಲ್ಯಾಣ ಕಾರ್ಯಕ್ರಮದಡಿ ಮಂಡ್ಯ ನಗರ ವ್ಯಾಪ್ತಿಯಲ್ಲಿ ಅರ್ಹ ವಿಶೇಷ ಚೇತನರಿಂದ ಆರೋಗ್ಯ ವಿಮೆಗಾಗಿ ಮತ್ತು ವಿಶೇಷ ಚೇತನರ ಸಂಘ-ಸಂಸ್ಥೆಗಳಿಗೆ ಪ್ರೋತ್ಸಾಹ ಧನ ಸೌಲಭ್ಯ ಪಡೆಯಲು ನಗರದಲ್ಲಿರುವ ವಿಶೇಷ ಚೇತನರ ಸಂಘ-ಸಂಸ್ಥೆಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಹ ವಿಶೇಷ ಚೇತನರು ಅರ್ಜಿ ಸಲ್ಲಿಸಲು ಫೆಬ್ರವರಿ 26 ಕೊನೆಯ ದಿನಾಂಕವಾಗಿದ್ದು, ನಂತರ ಬರುವ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಮಂಡ್ಯ ನಗರ ಸಭೆಯ ಡೇ-ನಲ್ಮ್ ಶಾಖೆಯನ್ನು ಸಂಪರ್ಕಿಸುವಂತೆ ನಗರಸಭೆಯ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದೂರು ಸ್ವೀಕಾರ ಸಭೆ ಮುಂದೂಡಿಕೆ

**ಮಂಡ್ಯ:** ಕರ್ನಾಟಕ ಲೋಕಾಯುಕ್ತ ಮಂಡ್ಯ ಘಟಕದ ಪೊಲೀಸ್ ಅಧಿಕಾರಿಗಳ ಉಸ್ತುವಾರಿಯಲ್ಲಿ ಸಾರ್ವಜನಿಕರಿಂದ ದೂರು ಅರ್ಜಿ/ಅಹವಾಲು ಸ್ವೀಕಾರ ಸಭೆಯನ್ನು ಫೆಬ್ರವರಿ 14 ರಂದು ಮಂಡ್ಯ ನಗರಸಭೆಯ ಸಭಾಂಗಣದಲ್ಲಿ ಆಯೋಜಿಲಾಗಿದ್ದು, ಕಾರಣಾಂತರಗಳಿಂದ ಸಭೆಯನ್ನು ಫೆಬ್ರವರಿ 16 ಕ್ಕೆ ಮುಂದೂಡಲಾಗಿರುತ್ತದೆ ಎಂದು ಕರ್ನಾಟಕ ಲೋಕಾಯುಕ್ತ ಸೂಪರ್‌ಡೆಂಟ್ ಆಫ್ ಪೊಲೀಸ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾ.3ರಂದು ಪಲ್ಸ್ ಪೋಲಿಯೋ

**ಮಂಡ್ಯ:** ಜಿಲ್ಲೆಯಲ್ಲಿ ಮಾರ್ಚ್ 03 ರಂದು ಪಲ್ಸ್ ಪೋಲಿಯೋ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಪೋಷಕರು ತಪ್ಪದೇ ತಮ್ಮ 0-5 ವರ್ಷದೊಳಗಿನ ಮಕ್ಕಳಿಗೆ ಪಲ್ಸ್ ಪೋಲಿಯೋ ಲಸಿಕೆ ಕೊಡಿಸುವಂತೆ ಜಿಲ್ಲಾಧಿಕಾರಿ ಡಾ. ಕುಮಾರ ತಿಳಿಸಿದರು.

# ಮುಂಜಾನೆ ರೋಟರಿ ಶಾಲೆಯ ತಾತ್ಕಾಲಿಕ ತಡೆಗೋಡೆ ನಿರ್ಮಾಣ

**ವಿಜಯಪುರ:** ಪಟ್ಟಣದ ರೋಟರಿ ಶಾಲೆಯ ಮಕ್ಕಳು ಆಟವಾಡುತ್ತಿದ್ದ ಜಾಗದಲ್ಲಿ ಪುರಸಭೆಯವರು ಸೋಮವಾರ ಮುಂಜಾನೆ ತಾತ್ಕಾಲಿಕ ತಡೆಗೋಡೆ ನಿರ್ಮಿಸಿದ್ದಾರೆ.



ಬೆಳಗಿನ ಜಾವ 4 ಗಂಟೆಯ ಸುಮಾರಿಗೆ ಜೆಸಿಬಿಗಳೊಂದಿಗೆ ತೆರಳಿದ ಪುರಸಭೆಯ ಅಧಿಕಾರಿಗಳು ಹಾಗೂ ಪೌರಕಾರ್ಮಿಕರು, ತಗಡಿನ ಶೀಟ್ ಗಳಿಂದ ತಾತ್ಕಾಲಿಕವಾಗಿ ತಡೆಗೋಡೆ ನಿರ್ಮಿಸಿ, ಶಾಲೆಯ ವಿದ್ಯಾರ್ಥಿಗಳು ಓಡಾಡುತ್ತಿದ್ದ ಹಾಗೂ ಆಟವಾಡುತ್ತಿದ್ದ ಜಾಗವನ್ನು ಸಂಪೂರ್ಣವಾಗಿ ಮುಚ್ಚಿದ್ದು, ವಿದ್ಯಾರ್ಥಿಗಳು, ಸುಬ್ಬಮ್ಮ ಚನ್ನಪ್ಪ ಸಮುದಾಯ ಭವನದ ಮುಂಭಾಗದಿಂದ ಮದುವೆ ನಡೆಯುತ್ತಿದ್ದ ಸಂದರ್ಭದಲ್ಲಿ ಅಲ್ಲಿಯೇ ಕಿರಿದಾದ ಜಾಗದಲ್ಲಿ ಶಾಲೆಗೆ ಬರುವಂತಾಗಿದೆ. ಜ.26 ರಂದು ಜೆಸಿಬಿಗಳ ಮೂಲಕ ರೋಟರಿ ಶಾಲೆಗೆ ಹಾಕಿದ್ದ ತಡೆಗೋಡೆ ಹಾಗೂ ನಾಮಫಲಕಗಳನ್ನು ತೆರವುಗೊಳಿಸಲಾಗಿತ್ತು. ಈ ವೇಳೆ ರೋಟರಿ ಸಂಸ್ಥೆಯವರು ಪುರಸಭೆಯ ವಿರುದ್ಧ ಪ್ರತಿಭಟನೆಯನ್ನೂ ಮಾಡಿದ್ದರು. ನ್ಯಾಯಾಲಯದಲ್ಲಿ ವಿಚಾರಣೆ ನಡೆಸಿ, ಫೆ.3 ರವರೆಗೂ ತಾತ್ಕಾಲಿಕವಾಗಿ ಯಾವುದೇ ಚಟುವಟಿಕೆ ಮಾಡದಂತೆ ತಡೆ ನೀಡಿತ್ತು. ಫೆ.3 ರಂದು ಪುರಸಭೆಯಿಂದ ನ್ಯಾಯಾಲಯಕ್ಕೆ ವರದಿ ಸಲ್ಲಿಸಿದ ನಂತರ ತಾತ್ಕಾಲಿಕ ತಡೆಯನ್ನು ಮುಂದುವರೆಸದೇ ಮಾ.7 ಕ್ಕೆ ವಿಚಾರಣೆ ಮುಂದೂಡಲಾಗಿರುವ ಕಾರಣ, ಪುರಸಭೆಯವರು ಬೆಳಗಿನ ಜಾವ 4 ಗಂಟೆಗೆ ತಾತ್ಕಾಲಿಕ ತಡೆಗೋಡೆ ನಿರ್ಮಾಣ ಮಾಡಿ, ಈ ಜಾಗಕ್ಕೆ ಯಾರೂ ಅಕ್ರಮವಾಗಿ ಪ್ರವೇಶ ಮಾಡದಂತೆ ಕಸಸಾಗಾಣಿಕೆಯ ವಾಹನಗಳನ್ನು ಅಡ್ಡ ನಿಲ್ಲಿಸಿದ್ದಾರೆ. ರೋಟರಿ ಸಂಸ್ಥೆಯ ಸದಸ್ಯ ಎನ್.ರುದ್ರಮೂರ್ತಿ ಮಾತನಾಡಿ, ನಾವು ಮಕ್ಕಳ ಭವಿಷ್ಯವನ್ನು ರೂಪಿಸಲು ಶಿಕ್ಷಣ ಸಂಸ್ಥೆ ನಡೆಸುತ್ತಿದ್ದೇವೆ. ಆದರೆ, ಪುರಸಭೆಯವರು ಹಾಗೂ ಕೆಲವರು ಪಟ್ಟಭದ್ರ ಹಿತಾಸಕ್ತಿಗಳು ಒಂದುಗೂಡಿ, ಇದೇ ಜಾಗದಲ್ಲೆ ಇಂದಿರಾ ಕ್ಯಾಂಟೀನ್ ಮಾಡಬೇಕು ಎಂದು ಹಠ ಹಿಡಿದು, ರೋಟರಿ ಶಾಲೆಯನ್ನು ಸಂಪೂರ್ಣವಾಗಿ ಮುಚ್ಚಿಹಾಕುವಂತಹ ಹುನ್ನಾರ ನಡೆಸಿದ್ದಾರೆ. ಇದರ ಬಗ್ಗೆ ಜಿಲ್ಲಾ ಉಸ್ತುವಾರಿ ಸಚಿವರ ಗಮನಕ್ಕೂ ತಂದಿದ್ದೇವೆ. ಜಿಲ್ಲಾಧಿಕಾರಿಗಳಿಗೂ ಮನವರಿಕೆ ಮಾಡಿಕೊಟ್ಟಿದ್ದೇವೆ. ಇಂದಿರಾ ಕ್ಯಾಂಟೀನ್ ಎಲ್ಲಿ ಬೇಕಾದರೂ ಕಟ್ಟಬಹುದು. ಆದರೆ, ಶಿಕ್ಷಣ ಸಂಸ್ಥೆಯನ್ನು ಇಲ್ಲಿಂದ ಬೇರೆ ಕಡೆಗೆ ತೆಗೆದುಕೊಂಡು ಹೋಗಲು ಸಾಧ್ಯವಿಲ್ಲ. ಫೆ.3 ರಂದು ನ್ಯಾಯಾಲಯದಲ್ಲಿ ವಿಚಾರಣೆಯನ್ನು ಮಾ.7 ಕ್ಕೆ ಮುಂದೂಡಿದ ಕಾರಣ ನ್ಯಾಯಾಲಯದ ತಡೆಯಾಜ್ಞೆಯೂ ಸಹ ಮಾರ್ಚ್-7 ರವರೆಗೆ ಇದ್ದು, ಪುರಸಭೆಯವರು ನ್ಯಾಯಾಲಯದ ಆದೇಶವನ್ನು ಧಿಕ್ಕರಿಸಿರುತ್ತಾರೆ. ಅವರು ಮಾಡುವ ಕೆಲಸ ನ್ಯಾಯವೇ ಆಗಿದ್ದಲ್ಲಿ ರಾತ್ರೋರಾತ್ರಿ ಕಾಂಪೌಂಡ್ ನಿರ್ಮಿಸಲು ಹೋಗುತ್ತಿರಲಿಲ್ಲ. ನಾವು ನ್ಯಾಯಾಲಯದ ಮೇಲೆ ಭರವಸೆ ಇಟ್ಟಿದ್ದೇವೆ. ನಮಗೆ ನ್ಯಾಯ ಸಿಗುವ ನಂಬಿಕೆಯಿದೆ ಎಂದರು. ಪುರಸಭೆ ಮುಖ್ಯಾಧಿಕಾರಿ ಸಂತೋಷ್.ಜಿ.ಆರ್ ಅವರು ಮಾತನಾಡಿ, ಸದರಿ ಜಾಗದಲ್ಲಿ ಫೆ.3 ರವರೆಗೂ ಯಾವುದೇ ಚಟುವಟಿಕೆ ಮಾಡಬಾರದು ಎಂದು ನ್ಯಾಯಾಲಯದಿಂದ ತಾತ್ಕಾಲಿಕ ತಡೆ ನೀಡಿದ್ದರು. ನಾವೂ ಯಾವುದೇ ಚಟುವಟಿಕೆ ಮಾಡಿರಲಿಲ್ಲ. ಇದು ಪುರಸಭೆಯ ಆಸ್ತಿ, ಇದನ್ನು ಉಳಿಸುವುದು ನಮ್ಮ ಕರ್ತವ್ಯ. ಫೆ.3 ರಂದು ನಾವು ವಕೀಲರ ಮೂಲಕ ನ್ಯಾಯಾಲಯಕ್ಕೆ ವರದಿ ಸಲ್ಲಿಸಿದ ನಂತರ ತಡೆಯನ್ನು ಮುಂದುವರೆಸಿಲ್ಲ. ಆದ್ದರಿಂದ ನಾವು ಎಲ್ಲಾ ಸಿದ್ಧತೆಗಳನ್ನು ಮಾಡಿಕೊಂಡು, ತಗಡಿನ ಶೀಟ್ ಗಳಲ್ಲಿ ತಾತ್ಕಾಲಿಕ ತಡೆಗೋಡೆ ನಿರ್ಮಿಸಿದ್ದೇವೆ ಎಂದರು. ಮಕ್ಕಳಿಗೆ ಅನುಕೂಲವಾಗಬೇಕು: ಶಿಕ್ಷಕರ ಕ್ಷೇತ್ರದ ವಿಧಾನಪರಿಷತ್ ಚುನಾವಣಾ ಅಭ್ಯರ್ಥಿ ಪುಟ್ಟಣ್ಣ ಈ ಕುರಿತು ಪ್ರತಿಕ್ರಿಯೆ ನೀಡಿ, ಮಕ್ಕಳಿಗೆ ತೊಂದರೆಯಾಗುತ್ತಿರುವ ಬಗ್ಗೆ ಗಮನಕ್ಕೆ ಬಂದಿದೆ. ಈ ಬಗ್ಗೆ ಜಿಲ್ಲಾಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿ, ಮಕ್ಕಳಿಗೆ ತೊಂದರೆಯಾಗದಂತೆ ಕ್ರಮಕೈಗೊಳ್ಳಲಾಗುತ್ತದೆ ಎಂದರು. ಧರ್ಮಪುರದ ಅಂಜನಪ್ಪ ರವರು ಮಾತನಾಡುತ್ತಾ ಸರ್ಕಾರಿ ಜಾಗವಾಗಿದ್ದರೂ, ಶಾಲಾ ಮಕ್ಕಳು ಆಟವಾಡಿಕೊಳ್ಳುತ್ತಿದ್ದ ಈ ಜಾಗದಲ್ಲಿ ನೂರಾರು ಮಂದಿ ರೋಟರಿ ಸಂಸ್ಥೆಯಿಂದ ಪ್ರತಿ ತಿಂಗಳು ನಡೆಯುತ್ತಿರುವ ಉಚಿತ ನೇತ್ರ ತಪಾಸಣೆಗಾಗಿಯೂ ಬಂದಿದ್ದು, ಇಂತಹ ಸೇವಾ ಕಾರ್ಯ ನಡೆಯುತ್ತಿರುವ ಜಾಗವನ್ನು ಪುರಸಭೆಯವರು ದುಂಡಾವರ್ತಿಯಾಗಿ ಕಾಂಪೌಂಡ್ ಹಾಕಿ ಸಾರ್ವಜನಿಕರಿಗೆ ತೊಂದರೆ ನೀಡುತ್ತಿರುವುದು ಎಷ್ಟು ಮಾತ್ರ ಸರಿ ಐದು ವರ್ಷಗಳ ಕಾಲ ಆಡಳಿತ ನಡೆಸಲು ಬಂದವರು ಸಾರ್ವಜನಿಕರಿಗೆ ಉಪಕಾರವನ್ನು ಮಾಡುತ್ತಿಲ್ಲ ಇಂತಹ ಹೇಸಿಗೆ ಕೆಲಸ ಮಾಡುವುದು ಎಷ್ಟು ಸರಿಎಂದು ಪ್ರಶ್ನಿಸಿದರು.

ಉಚಿತ ಕಣ್ಣಿನ ತಪಾಸಣಾ ಶಿಬಿರದಲ್ಲಿ ತಪಾಸಣೆಗೆಂದು ಆಗಮಿಸಿದ್ದ ಕಾಕಚೊಕ್ಕಂಡ ಹಳ್ಳಿಯ ನಾರಾಯಣಸ್ವಾಮಿ ರವರು ಮಾತನಾಡಿ ದ್ವೇಷದ ರಾಜಕಾರಣ ಎಂದಿಗೂ ಸರಿಯಲ್ಲವೆಂದು ರೋಟರಿ ಸಂಸ್ಥೆಯವರು ಏನಾದರೂ ಈ ಜಾಗದಲ್ಲಿ ಅಂಗಡಿ ಮಳಿಗೆಗಳನ್ನೇನಾದರೂ ಕಟ್ಟಿದ್ದಾರೆಯೇ ಇಲ್ಲವೇ ವಾಣಿಜ್ಯಾತ್ಮಕವಾಗಿ ಬಳಸಿಕೊಳ್ಳುತ್ತಿದ್ದಾರೆಯೇ ಎಂದು ಪ್ರಶ್ನಿಸಿ ಕೇವಲ ಶಾಲಾ ಮಕ್ಕಳ ಆಟದ ಮೈದಾನವಾಗಿ ಹಾಗೂ ಸಾರ್ವಜನಿಕರ ಆರೋಗ್ಯ ತಪಾಸಣೆ ನಡೆಸುವ ಸಲುವಾಗಿ ಈ ಜಾಗವನ್ನು ಬಳಸುತ್ತಿರುವುದನ್ನು ನೋಡಿ ಸಹಿಸಲು ಸಾಧ್ಯವಾಗದ ಪುರಸಭೆಯವರು ಎಂತಹ ವ್ಯಕ್ತಿಗಳೆಂದು ಪ್ರಶ್ನಿಸಿದರು.

# ರಾಜ್ಯದಲ್ಲಿ ನೀರಿಗೆ ಹಾಹಾಕಾರ

## ಚನ್ನಪಟ್ಟಣ ಸ್ಪೋರ್ಟ್ಸ್ ಕ್ಲಬ್‌ನ ಅಧ್ಯಕ್ಷರಾದ ನಿಂಗೇಗೌಡ ಹೇಳಿಕೆ

**ಚನ್ನಪಟ್ಟಣ:** ಹೋರಾಟ ನಿರಂತರವಾಗಿದ್ದರೆ ಮಾತ್ರ ಪ್ರತಿಫಲ ಸಿಗಲು ಸಾಧ್ಯ ಇದಕ್ಕೆ ಸ್ವಾತಂತ್ರ್ಯ ಸಂಗ್ರಾಮವೇ ಸಾಕ್ಷಿಯಾಗಿದೆ ಎಂದು ನಿವೃತ್ತ ಪ್ರಾಂಶುಪಾಲರು ಹಾಗೂ ಚನ್ನಪಟ್ಟಣ ಸ್ಪೋರ್ಟ್ಸ್ ಕ್ಲಬ್‌ನ ಅಧ್ಯಕ್ಷರಾದ ನಿಂಗೇಗೌಡರು(ಎನ್) ಅವರು ಅಭಿಪ್ರಾಯಿಸಿದರು.



ರಾಜ್ಯದಲ್ಲಿ ಬಿಸಿಲಿನ ನಡುವೆ ನೀರಿನ ಹಾಹಾಕಾರ ಎದುರಾಗಿದ್ದು, ಈ ಬಗ್ಗೆ ಸರ್ಕಾರವು ಗಮನ ನೀಡಬೇಕು ಎಂದು ಕಸ್ತೂರಿ ಕರ್ನಾಟಕ ಜನಪರ ವೇದಿಕೆಯ ರಾಜ್ಯಾಧ್ಯಕ್ಷ ರಮೇಶ್‌ಗೌಡ ಅಭಿಪ್ರಾಯಿಸಿದರು.

ಕಾವೇರಿ ನದಿ ನೀರಿನ ಹಂಚಿಕೆಯಲ್ಲಿ ಸಂಕಷ್ಟ ಸೂತ್ರ ರಚಿಸುವ ಜೊತೆಗೆ ಮೇಕೆದಾಟು ಯೋಜನೆಗೆ ಅಡಿಗಲ್ಲು ಹಾಕುವಂತೆ ಆಗ್ರಹಿಸಿ ಕಸ್ತೂರಿ ಕರ್ನಾಟಕ ಜನಪರ ವೇದಿಕೆಯ ರಾಜ್ಯಾಧ್ಯಕ್ಷರಾದ ರಮೇಶ್ ಗೌಡರ ನೇತೃತ್ವದಲ್ಲಿ ನಿರಂತರವಾಗಿ ಹೋರಾಟ ಮಾಡುತ್ತಿದ್ದು ಸೋಮವಾರ ನಡೆದ 131 ನೇ ದಿನದ ಹೋರಾಟದಲ್ಲಿ ಭಾಗವಹಿಸಿ ಮಾತನಾಡಿದ ಅವರು ನಮಗೆ ಸಿಕ್ಕಿರುವ ಯಾವುದೇ ಹಕ್ಕುಗಳು ಒಂದೆರಡು ದಿನದ ಹೋರಾಟಕ್ಕೆ ಸಿಕ್ಕ ಜಯಗಳಲ್ಲ, ಬ್ರಿಟೀಷರ ದಾಸ್ಯದಿಂದ ಮುಕ್ತಿ ಪಡೆಯಲು 1857 ರಲ್ಲಿ ಚಾಲನೆಯಾದ ಸ್ವಾತಂತ್ರ್ಯ ಹೋರಾಟದ ಚಳುವಳಿಗಳಿಗೆ ಹಲವಾರು ಮಹನೀಯರು ಕೈಜೋಡಿಸಿ ಅಹಿಂಸೆಯಿಂದ ಹೋರಾಟ ಮಾಡಿದರ ಫಲವಾಗಿ 60 ವರ್ಷಗಳ ಬಳಿಕ 1947 ರಲ್ಲಿ ನಮಗೆ ಬ್ರಿಟೀಷರಿಂದ ಸ್ವಾತಂತ್ರ್ಯ ಸಿಕ್ಕಿದೆ. ಈ ನಿಟ್ಟಿನಲ್ಲಿ ನಾಡು ನುಡಿ, ಜಲ, ಭಾಷೆಯ ಅಸ್ಮಿತೆಗೆ ಹೋರಾಟ ಮಾಡುತ್ತಿರುವ ನಮ್ಮ ಹೋರಾಟಕ್ಕೂ ಮುಂದೆ ಜಯಸಿಗಲಿದೆ ಎಂಬ ವಿಶ್ವಾಸದಿಂದ ಹೋರಾಟ ಮಾಡೋಣ ಇಲ್ಲಿ ಜನರ ಸಂಖ್ಯೆ ಮುಖ್ಯವಲ್ಲ. ಇಲ್ಲಿ ಓಡಾಡುವ ಸಾರ್ವಜನಿಕರು ಈ ಬಗ್ಗೆ ಎಲ್ಲೋ ಒಂದೆಡೆ ಮಾತನಾಡಿದರೂ ಅದು ಜನಪ್ರತಿನಿಧಿಗಳ ವರೆಗೆ ಮುಟ್ಟುತ್ತದೆ. ಈ ನಿಟ್ಟಿನಲ್ಲಿ ನಮ್ಮ ಹೋರಾಟ ನಿರಂತರವಾಗಿರಲಿ ಎಂದು ಅಭಿಪ್ರಾಯಿಸಿದರು.

ಕಕಜ ವೇದಿಕೆ ರಾಜ್ಯಾಧ್ಯಕ್ಷ ರಮೇಶ್‌ಗೌಡರು ಮಾತನಾಡಿ, ಈ ನಾಡು ನಮಗೆ ಬದುಕು ಕಟ್ಟಿಕೊಳ್ಳಲು ಗಾಳಿ, ಬೆಳಕು, ಆಹಾರ, ಶಿಕ್ಷಣ, ನೀರು ಸೇರಿದಂತೆ ಎಲ್ಲವನ್ನು ನೀಡಿದೆ. ಈ ನಿಟ್ಟಿನಲ್ಲಿ ನಾಡಿನ ಅಸ್ಮಿತೆಗೆ ದಕ್ಕೆ ಬಂದಾಗ ಹೋರಾಟ ಮಾಡುವ ಮನೋಭಾವ ಪ್ರತಿಯೊಬ್ಬರಲ್ಲಿ ಬರಬೇಕು, ಒಬ್ಬರಿಂದ ಮತ್ತೊಬ್ಬರಿಗೆ ಹೋರಾಟದ ಕೂಗು ಮುಟ್ಟಬೇಕು. ಇಂದು ನಗರದ ಮನೆಗಳಿಗೆ ಕಾವೇರಿ ಕುಡಿಯುವ ನೀರನ್ನು 5 ದಿನಗಳಿಗೆ ಒಮ್ಮೆ ಬಿಡುವುದಾಗಿ ನಗರಸಭೆ ಮತ್ತು ಜಲಮಂಡಳಿಯಿಂದ ಪ್ರಚಾರ ಮಾಡುತ್ತಿದ್ದಾರೆ. ಮುಂದೆ ತಿಂಗಳಿಗೆ ಒಮ್ಮೆ ನೀರು ಬಿಟ್ಟು ಕೊನೆಗೆ ಕಾವೇರಿ ನೀರನ್ನು ಸಂಪೂರ್ಣವಾಗಿ ನಿಲ್ಲಿಸುವ ವಾತಾವರಣ ಇದೆ. ಈ ನಿಟ್ಟಿನಲ್ಲಿ ಕೊಡಗಿನಲ್ಲಿ ಮಳೆ ಹೆಚ್ಚು ಬಂದಾಗ ಸಮುದ್ರದ ಪಾಲಾಗುವ ನೀರನ್ನು ಸಂಗ್ರಹಿಸಿ ಬರದ ಸಂದರ್ಭದಲ್ಲಿ ನೀರನ್ನು ಬಳಕೆ ಮಾಡಿಕೊಳ್ಳಬೇಕು ಎಂಬ ಉದ್ದೇಶದಿಂದಲೇ ಮೇಕೆದಾಟು ಯೋಜನೆಯನ್ನು ಅನುಷ್ಠಾನಕ್ಕೆ ತರಲು ಆಗ್ರಹಿಸಿ ನಮ್ಮ ಹೋರಾಟ ಮಾಡುತ್ತಿದ್ದು, ಮೇಕೆದಾಟು ಹೋರಾಟದ ಮೂಲಕ ಅಧಿಕಾರಕ್ಕೆ ಬಂದ ರಾಜ್ಯ ಸರ್ಕಾರ ಮೇಕೆದಾಟಿ ಯೋಜನೆಗೆ ಬದ್ದವಾಗಿದ್ದರೂ ಇದಕ್ಕೆ ತಮಿಳುನಾಡು ಸರ್ಕಾರ ಅಡ್ಡಿ ಮಾಡಿರುವ ಬಗ್ಗೆ ಬಿಜೆಪಿ ಸಂಸದರು ಪಕ್ಷಾತೀತವಾಗಿ ಕೇಂದ್ರ ಸರ್ಕಾರದಲ್ಲಿ ಒತ್ತಡ ಹಾಕಿ ಯೋಜನೆಗೆ ಅನುಮತಿ ಪಡೆಯಲು ಮುಂದಾಗಬೇಕು ಎಂದು ಆಗ್ರಹಿಸಿದರು.

ವೇದಿಕೆ ಜಿಲ್ಲಾಧ್ಯಕ್ಷ ಬೇವೂರು ಯೋಗೀಶ್ ಗೌಡ ಮಾತನಾಡಿ, ಬಿಸಿಲಿನ ತಾಪ ಹೆಚ್ಚಾಗುತ್ತಿದ್ದು ಗ್ರಾಮೀಣ ಭಾಗದಲ್ಲಿ ಜನ-ಜಾನುವಾರುಗಳಿಗೆ ಕುಡಿಯುವ ನೀರಿಲ್ಲ. ಜೊತೆಗೆ ಕೆರೆಗಳು ಬರಿದಾಗುವ ಮೂಲಕ ಮೇವಿನ ಕೊರತೆ ಉಂಟಾಗಿದ್ದು, ಬೇರೆಡೆಯಿಂದ ದುಪ್ಪಟ್ಟು ಹಣ ನೀಡಿ ಮೇವನ್ನು ಖರೀದಿ ಮಾಡುವ ಪರಿಸ್ಥಿತಿ ಉಂಟಾಗುತ್ತಿದ್ದು, ಇದರಿಂದ ಹೈನುಗಾರಿಕೆಯಲ್ಲಿ ಅಲ್ಪಸ್ವಲ್ಪ ಲಾಭ ಪಡೆಯುತ್ತಿದ್ದ ರೈತರಿಗೆ ಬಂಡವಾಳವೂ ಕೈಗೆ ಸಿಗದಂತಾಗಿದೆ. ಮೇಕೆದಾಟು ಯೋಜನೆ ಬರದ ಸಮಯದಲ್ಲಿ ಅನುಕೂಲವಾಗುವ ನಿಟ್ಟಿನಲ್ಲಿ ಈ ಯೋಜನೆಗೆ ಶೀಘ್ರವೇ ಅಡಿಗಲ್ಲು ಹಾಕಿ ಮುಂದಿನ ಮಳೆಗಾಲದ ಅವಧಿಗೆ ನೀರನ್ನು ಸಂಗ್ರಹಿಸುವ ನಿಟ್ಟಿನಲ್ಲಿ ಸರ್ಕಾರ ಚಿಂತನೆ ಮಾಡಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ರಾಜ್ಯ ಉಪಾಧ್ಯಕ್ಷರಾದ ಬೆಂಕಿ ಶ್ರೀಧರ್, ಜಗದಪುರ ಕೃಷ್ಣೇಗೌಡ, ಚಿಕ್ಕಣ್ಣಪ್ಪ ಹನುಮಂತನಗರ, ಶಿವಣ್ಣ ಡ್ರೈವರ್, ಸೈಯದ್ ಮುಜಾಯಿದ್, ವೆಂಕಟರಮಣ ಹನುಮಂತನಗರ, ರಾಮಕೃಷ್ಣಪ್ಪ ಮೆಣಸಗಿನಹಳ್ಳಿ, ಬೀರೇಶ್ ಸೇರಿದಂತೆ ಇನ್ನೂ ಅನೇಕರು ಹಾಜರಿದ್ದರು.

# 21ಕ್ಕೆ ನಾನೂ ರಾಣಿ ಚೆನ್ನಮ್ಮ ರಾಷ್ಟ್ರೀಯ ಅಂದೋಲನ

ಕೋಲಾರ: ನಾನೂ ರಾಣಿ ಚೆನ್ನಮ್ಮ ರಾಷ್ಟ್ರೀಯ ಅಂದೋಲನಕ್ಕೆ ಫೆಬ್ರವರಿ ಇಪ್ಪತ್ತೊಂದು 2024 ರಂದು ಕಿತ್ತೂರಿನಲ್ಲಿ ಬೆಳಿಗ್ಗೆ 09-00 ಗಂಟೆಗೆ ಚಾಲನೆಗೊಳ್ಳಲಿದೆ. ಆಂದೋಲನಕ್ಕೆ ಈಗಾಗಲೇ ಹಲವು ಸಂಘಟನೆಗಳು ಭಾಗವಹಿಸಲಿದ್ದು, ತಾವು ಸಾರ್ವಜನಿಕರು ಸಹ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಗಮನ ಮಹಿಳಾ ಸಮೂಹ ಕೋಲಾರ ಸಂಯೋಜಕಿ ಶಾಂತಮ್ಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬ್ರಿಟಿಷ್ ವಸಾಹತುಶಾಹಿಯ ವಿರುದ್ಧ ಸಿಡಿದೆದ್ದು ಪ್ರತಿರೋಧ ತೋರಿದ ಕಿತ್ತೂರು ರಾಣಿ ಚೆನ್ನಮ್ಮ 1778 ಅಕ್ಟೋಬರ್ 23 ರಂದು ಬೆಳಗಾವಿ ಸಮೀಪದ ಪುಟ್ಟಹಳ್ಳಿ ಕಾಕತಿಯಲ್ಲಿ ಧೂಳಪ್ಪಗೌಡರು-ಪದ್ಮಾವತಿ ದಂಪತಿಗಳಿಗೆ ಜನಿಸಿದರು ಈಕೆಯ ತಂದೆ ಧೂಳಪ್ಪಗೌಡರು. ಚಿಕ್ಕವಯಸ್ಸಿನಲ್ಲೇ ಚೆನ್ನಮ್ಮನಿಗೆ ಕತ್ತಿವರಸೆ, ಕುದುರೆ ಸವಾರಿ ಮತ್ತು ಬಿಲ್ಲುವಿದ್ಯೆಗಳನ್ನು ಕಲಿಸಿದರು. ಕಿತ್ತೂರಿನ ರಾಜಮನೆತನದ ದೇಸಾಯಿ ಮಲ್ಲಸರ್ಜದೊಂದಿಗೆ 15ನೆಯ ವಯಸ್ಸಿನಲ್ಲಿ ವಿವಾಹ ನೆರವೇರಿಸಿದರು. ಈ ಮೊದಲೆ ಮಲ್ಲಸರ್ಜ ದೇಸಾಯಿ ಅವರಿಗೆ ರುದ್ರಮ್ಮ ಎಂಬಾಕೆಯೊಂದಿಗೆ ವಿವಾಹವಾಗಿ ಶಿವಲಿಂಗರುದ್ರಸರ್ಜ ಎಂಬ ಒಬ್ಬ ಮಗನಿದ್ದನು. ರಾಜ ಮಲ್ಲಸರ್ಜ ದೇನಾಯಿ ಅವರು 1816 ರಲ್ಲಿ ಮರಣಹೊಂದಿದರು. ಚೆನ್ನಮ್ಮನ ಮಗ ಅತೀ ಚಿಕ್ಕ ವಯಸ್ಸಿನಲ್ಲೇ 1824ರ ಮೊದಲ ಯುದ್ಧದಲ್ಲಿ ಸಾವಿಗೀಡಾದನು ಹಿರಿಯ ಹೆಂಡತಿಯ ಮಗ ಶಿವಲಿಂಗರುದ್ರಸರ್ಜರಿಗೆ ಪಟ್ಟಕಟ್ಟಿದರು. ಆದರೆ ಅನಾರೋಗ್ಯದ ಕಾರಣ ಮಕ್ಕಳಿರದ ಆತ ಬಲುಬೇಗನೆ ಮರಣ ಹೊಂದಿದರು. ಅದಕ್ಕೂ ಮೊದಲೇ ಮುಂದಾಲೋಚನೆಯಿಂದ ಚೆನ್ನಮ್ಮ ಆತನಿಗೆ ಶಿವಲಿಂಗಸರ್ಜ ಎಂಬುವವರನ್ನು ದತ್ತು ಪಡೆಯುವಂತೆ ನೋಡಿಕೊಂಡಿದ್ದರು.

ಶಿವಲಿಂಗರುದ್ರಸರ್ಜ ಸಾವಿಗೀಡಾದ ಸಂದರ್ಭವನ್ನು ಕಾಯುತ್ತಿದ್ದ ಬ್ರಿಟಿಷರು ಕಿತ್ತೂರನ್ನು ಕಬಳಿಸಲು ಹೊಂಚು ಹಾಕುತ್ತಿದ್ದರು. ಈ ಸಂದರ್ಭದಲ್ಲಿ ಕಿತ್ತೂರನ್ನು ಬ್ರಿಟಿಷರಿಂದ ರಕ್ಷಿಸುವ ಹೊಣೆಗಾರಿಕೆಯನ್ನು ರಾಣಿ ಚೆನ್ನಮ್ಮ ತೆಗೆದುಕೊಳ್ಳಬೇಕಾಯಿತು. ಚೆನ್ನಮ್ಮ ದತ್ತು ಮೊಮ್ಮಗ ಶಿವಲಿಂಗಸರ್ಜನನ್ನುಪಟ್ಟದಲ್ಲಿ ಕೂರಿಸಿದಾಗ ಹದ್ದಿನಂತೆ ಕಾಯುತ್ತಿದ್ದ ಈಸ್ಟ್ ಇಂಡಿಯಾ ಕಂಪನಿ ಕಿತ್ತೂರನ್ನು ಕಬಳಿಸಲು ಧಾರವಾಡದಿಂದ ಶರಣಾಗುವಂತೆ ರಾಣಿ ಚೆನ್ನಮ್ಮನಿಗೆ ಮಿ.ಡಾಲ್ ಹೌಸಿ ಆರಂಭಿಸಿದ ದತ್ತಕ ನಿಷೇಧ (ಆಠಛಿಣಡಿಟಿಜ ಠಜ ಐಚಿಠಿಚಿ) ಪ್ರಕಾರ ಆದೇಶ ಕಳುಹಿಸಿತು.

ಇದನ್ನು ಸಹಿಸದ ಕಿತ್ತೂರು ರಾಣಿ ಚೆನ್ನಮ್ಮ ತನ್ನ ಸೈನ್ಯವನ್ನು ಸಜ್ಜು ಮಾಡಿ ಬ್ರಿಟಿಷರ ಮೇಲೆ 1924 ರಲ್ಲಿ ಯುದ್ಧ ಮಾಡಿದಳು. ಯುದ್ಧದಲ್ಲಿ ಥ್ಯಾಕರೆಯನ್ನು ಕೊಂದು ಕಿತ್ತೂರು ಬಯನಾಧಿಸಿತು. ರಾಣಿ ಚೆನ್ನಮ್ಮ ಬ್ರಿಟಿಷರ ವಸಾಹತುಶಾಹಿಯ ವಿರುದ್ಧ ಭಾರತದಲ್ಲಿ ಹೋರಾಡಿದ ಮೊಟ್ಟಮೊದಲ ಮಹಿಳಾ ಹೋರಾಟಗಾರರ ಪಟ್ಟಿಯಲ್ಲಿ ಬರುತ್ತಾಳೆ. ಕರ್ನಾಟಕದ ಜನಪದರಲ್ಲಿ ಅವರಿಗೆ ಸದಾ ಗೌರವ, ಅಭಿಮಾನದ ಸ್ಥಾನವಿದೆ. ವೀರರಾಣಿ ಎಂದೇ ಎಲ್ಲರೂ ಆಕೆಯನ್ನು ನೆನೆಯುತ್ತಾರೆ. ದೇಶದ ಸ್ವಾತಂತ್ರ್ಯ ಸಂಗ್ರಾಮದಲ್ಲೂ ರಾಣಿ ಚೆನ್ನಮ್ಮನಿಗೆ ಒಂದು ಸ್ಥಿರವಾದ ಸ್ಥಾನವಿದೆ. ನಿರ್ಭಯ ವೀರಾಗ್ರಣಿಯಾದ ಚೆನ್ನಮ್ಮ ಇಂದಿಗೂ ಸ್ವಾತಂತ್ರ್ಯಪ್ರಿಯಳಾಗಿ ಬ್ರಿಟಿಷರಿಗೆ ನೀಡಿದ ಪ್ರತಿರೋಧದ, ಆತ್ಮಗೌರವದ ಹೆಗ್ಗುರುತಾಗಿ ನಿಲ್ಲುತ್ತಾಳೆ.

ರಾಣಿ ಚೆನ್ನಮ್ಮ ಸ್ವಾತಂತ್ರ್ಯದ ರಣಕಹಳೆಯನ್ನು 1824ರಲ್ಲಿ ಮೊಳಗಿಸಿ ಇಂದಿಗೆ ಎರಡು ನೂರು ವರ್ಷಗಳು ಸಂದಿವೆ. ಈ ಸಂದರ್ಭದಲ್ಲಿ ದೇಶಾದ್ಯಂತ ರಾಣಿ ಚೆನ್ನಮ್ಮ ಅವರ ಪ್ರತಿರೋಧದ ವರ್ಷಾಚರಣೆಯನ್ನು ಮಾಡುವ ಬಗ್ಗೆ ಅನಹದ್ ಮತ್ತು ಎನ್.ಎಫ್.ಐ.ಡಬ್ಲ್ಯು ಪರ್ಯಾಲೋಚಿಸಿ, ಕರ್ನಾಟಕ ರಾಜ್ಯ ಮಹಿಳಾ ದೌರ್ಜನ್ಯ ವಿರೋಧಿ ಒಕ್ಕೂಟದೊಂದಿಗೆ ಹಂಚಿಕೊಂಡವು ತದನಂತರ ಸಂಪರ್ಕಿಸಿದ- ಮಹಿಳಾ ಸಮಾನತೆಗಾಗಿ, ಸಾಮಾಜಿಕ ನ್ಯಾಯಕ್ಕಾಗಿ, ಸಮ ಸಮಾಜಕ್ಕಾಗಿ ಹೋರಾಡುತ್ತಿರುವ ಅನೇಕ ಸಂಘಟನೆಗಳು ಮತ್ತು ವ್ಯಕ್ತಿಗಳು ಈ ಕಾರ್ಯಕ್ರಮ ನಡೆಸಲು ಒಟ್ಟುಗೂಡಿದರು. ನಮ್ಮ ಪ್ರಜಾಪ್ರಭುತ್ವವನ್ನು, ಸಂವಿಧಾನವನ್ನು ಸಂರಕ್ಷಿಸುವುದಕ್ಕಾಗಿ ಮತ್ತು ದ್ವೇಷ ಅಳಿಸಿ ಪ್ರೀತಿ ಬೆಳೆಸುವುದಕ್ಕಾಗಿ ಭಾರತದ ಎಲ್ಲಾ ಮೂಲೆಗಳಿಂದ ಮಹಿಳೆಯರು ಬರುತ್ತಿದ್ದಾರೆ. ಈ ಕಾರ್ಯಕ್ರಮದಲ್ಲಿ ಹೋರಾಟ ಮತ್ತು ನಾಮಾಜಿಕ ಸಂಘಟನೆಯಲ್ಲಿ ನಿರತರಾಗಿರುವ ಅನೇಕ ಪ್ರಮುಖರು ಕಿತ್ತೂರಿನಲ್ಲಿ ನಡೆಯುವ ಜಾಥಾದಲ್ಲಿ ಭಾಗವಹಿಸುವರು, ಇಡೀ ಭಾರತದ ಮಹಿಳೆಯರು ಈ ಸಂದರ್ಭದಲ್ಲಿ ಕಿತ್ತೂರು ಘೋಷಣೆಯನ್ನು ಮೊಳಗಿಸಿ ಬಿಡುಗಡೆ ಮಾಡಿ ಸ್ವೀಕರಿಸುತ್ತಾರೆ.

ಕರ್ನಾಟಕದ ಹೆಮ್ಮೆಯ ರಾಣಿ ಕಿತ್ತೂರು ರಾಣಿ ಚೆನ್ನಮ್ಮನ ಕೆಚ್ಚೆದೆಯ ಹೋರಾಟವನ್ನು ನೆನೆಯಲು ಮತ್ತು ಸ್ಫೂರ್ತಿ ಪಡೆಯಲು 21/02/2024ರಂದು ಎಲ್ಲರೂ ಬನ್ನಿ ಕಿತ್ತೂರಿಗೆ ಎಂದು ಮನವಿ ಮಾಡಿದ್ದಾರೆ.

# ಸಂಸ್ಕಾರಯುತ ಶಿಕ್ಷಣದಿಂದ ಮಕ್ಕಳ ಭವಿಷ್ಯ ಉಜ್ವಲ

**ಪಿರಿಯಾಪಟ್ಟಣ:** ಶಿಕ್ಷಣ ಸಂಸ್ಥೆಗಳು ವಿದ್ಯಾರ್ಥಿಗಳಿಗೆ ಸಂಸ್ಕಾರಯುತ ಶಿಕ್ಷಣವನ್ನು ನೀಡಿದಾಗ ಮಾತ್ರ ಮಕ್ಕಳ ಭವಿಷ್ಯ ಉಜ್ವಲವಾಗುತ್ತದೆ ಎಂದು ಪಿರಿಯಾಪಟ್ಟಣ ಕರ್ನಾಟಕ ರಕ್ಷಣಾ ವೇದಿಕೆ ಹಾಗೂ ಗ್ರೀನ್ ಕಿಡ್ಸ್ ಡಾನ್ಸ್ ಸ್ಕೂಲ್ ನ್ಯಾಷನಲ್ ಅಕಾಡಮಿಯ ಗೌರವಾಧ್ಯಕ್ಷ ಎನ್.ಎಲ್.ಗಿರೀಶ್ ತಿಳಿಸಿದರು



ಪಟ್ಟಣದ ಶ್ರೀ ಗುರುರೇಣುಕಾದೇವಿ ಆಂಗ್ಲ ಮಾಧ್ಯಮ ಪ್ರೌಢಶಾಲೆ ಹಾಗೂ ಬಸವೇಶ್ವರ ಪದವಿ ಪೂರ್ವ ಕಾಲೇಜು ಶಿಕ್ಷಣ ಸಂಸ್ಥೆಯಲ್ಲಿ ನಡೆದ ಶಾಲಾ ವಾರ್ಷಿಕೋತ್ಸವ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು ಶಿಕ್ಷಕರು ಹಾಗೂ ಶಿಕ್ಷಣ ಸಂಸ್ಥೆಗಳು ವಿದ್ಯಾರ್ಥಿಗಳಿಗೆ ಉತ್ತಮ ಶಿಕ್ಷಣವನ್ನು ನೀಡುವುದರ ಜೊತೆಗೆ ಜೀವನದ ಮೌಲ್ಯಗಳನ್ನು ತಿಳಿಸಬೇಕು ವಿನಯವಿಲ್ಲದ ಶಿಕ್ಷಣಕ್ಕೆ ಬೆಲೆಯಿಲ್ಲ ಆದ್ದರಿಂದ ಮಕ್ಕಳಿಗೆ ಸಂಸ್ಕಾರವನ್ನು ಕಲಿಸಬೇಕು ಆಗ ಮಾತ್ರ ಶಿಕ್ಷಣಕ್ಕೆ ಬೆಲೆ ಸಿಗುತ್ತದೆ. ಈ ನಿಟ್ಟಿನಲ್ಲಿ ಶ್ರೀ ಗುರುರೇಣುಕಾದೇವಿ ಶಿಕ್ಷಣ ಸಂಸ್ಥೆಯು ತಾಲೂಕಿನಲ್ಲಿ ಉತ್ತಮ ಶಿಕ್ಷಣವನ್ನು ನೀಡುತ್ತಾ ಬಂದಿದೆ ಎಂದು ಶಿಕ್ಷಣ ಸಂಸ್ಥೆಯ ಕಾರ್ಯವನ್ನು ಶ್ಲಾಘಿಸಿದರು. ಕೇವಲ ಅಂಕಗಳನ್ನು ಪಡೆಯುವುದೇ ಶಿಕ್ಷಣವಲ್ಲ ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು. ಸಂಸ್ಥೆಯ ಕಾರ್ಯದರ್ಶಿ ಕೆ.ಕೆ.ಅನಿತ್ ಮಾತನಾಡಿ ನಮ್ಮ ಶಿಕ್ಷಣ ಸಂಸ್ಥೆಯು ಪ್ರಾರಂಭವಾಗಿ ಸುಮಾರು 33 ವರ್ಷಗಳಾಗಿವೆ ಅವಾಗಿನಿಂದಲೂ ತಾಲೂಕಿನಲ್ಲಿ ಉತ್ತಮ ಶಿಕ್ಷಣವನ್ನು ನೀಡುತ್ತಾ ಬಂದಿದೆ ನಮ್ಮ ಸಂಸ್ಥೆಯಲ್ಲಿ ಸುಮಾರು 650 ಕ್ಕೂ ಹೆಚ್ಚು ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದು ಸಂಸ್ಕಾರಯುತ ಉತ್ತಮ ಶಿಕ್ಷಣವನ್ನು ಪಡೆಯುತ್ತಿದ್ದಾರೆ ನಮ್ಮ ಸಂಸ್ಥೆಯಲ್ಲಿ ಶಿಕ್ಷಣ ಪಡೆದು ಹಲವಾರು ವಿದ್ಯಾರ್ಥಿಗಳು ಇಂದು ರಾಜ್ಯದಲ್ಲಿ ಹಾಗೂ ಹೊರ ರಾಜ್ಯಗಳಲ್ಲಿ ಉನ್ನತ ಹುದ್ದೆಗಳಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಎಸ್ ಎಸ್ ಎಲ್ ಸಿ ಹಾಗೂ ಪಿಯುಸಿ ಯಲ್ಲಿ ಅತಿಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ಹಾಗೂ ಅವರ ಪೋಷಕರನ್ನು ಸನ್ಮಾನಿಸಿದರು. ಶಾಲಾ ಕಾಲೇಜಿನ ವಿದ್ಯಾರ್ಥಿಗಳು ಸಾಂಸ್ಕೃತಿಕ ಕಾರ್ಯಕ್ರಮಗಳು ನೋಡುಗರ ಕಣ್ಮನ ಸೆಳೆದವು. ಈ ಸಂದರ್ಭದಲ್ಲಿ ಕಾಲೇಜಿನ ಪ್ರಾಂಶುಪಾಲ ಶಾಲಿನಿ ಅನಿತ್, ವಲಯ ಅರಣ್ಯಾಧಿಕಾರಿ ಕಿರಣ್ ಕುಮಾರ್, ನಿವೃತ್ತ ಶಿಕ್ಷಕ ರಾಜು, ಯುಕೊ ಬ್ಯಾಂಕ್ ವ್ಯವಸ್ಥಾಪಕ ಜಾಫರ್ ಶರೀಫ್, ಪುರಸಭಾ ಸದಸ್ಯ ರವಿ, ಚಲನ ಚಿತ್ರ ನಟ ಮದನ್ ಕುಮಾರ್, ಹಾಸ್ಯ ನಟ ಸೂರ್ಯ, ಡಾ.ನಿಶಿತಾ, ತಿಲಕ್, ಸಮಿತಾ, ಪ್ರಭಾರಿ ಮುಖ್ಯ ಶಿಕ್ಷಕರಾದ ಪ್ರಸಾದ್, ರಾಘವೇಂದ್ರ, ಉಪನ್ಯಾಸಕರಾದ ಕಿರಂಗೂರು ಸ್ವಾಮಿ,ಪ್ರಕಾಶ್, ಮಂಜಣ್ಣ ಸೇರಿದಂತೆ ಇತರರು ಇದ್ದರು

# ಸಾರ್ವಜನಿಕರ ಕುಂದು ಕೊರತೆಗಳ ಸಭೆ

ಚಿಕ್ಕಬಳ್ಳಾಪುರ: ಜಿಲ್ಲೆಯ ಕರ್ನಾಟಕ ಲೋಕಾಯುಕ್ತ, ಪೊಲೀಸ್ ಅಧೀಕ್ಷಕರು ಅವರು ಗುಡಿಬಂಡೆ ತಾಲ್ಲೂಕಿಗೆ ಸಂಬಂಧಪಟ್ಟಂತೆ ಸಾರ್ವಜನಿಕರ ಕುಂದು ಕೊರತೆಗಳ ಸಭೆಯನ್ನು ಫೆಬ್ರವರಿ 14 ರಂದು ಬೆಳಿಗ್ಗೆ 11:00 ಗಂಟೆಗೆ ಗುಡಿಬಂಡೆ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಸರ್ಕಾರಿ ಕಚೇರಿಗಳಲ್ಲಿ ಅಧಿಕಾರಿಗಳು ಮತ್ತು ಸಿಬ್ಬಂದಿಯು ಸಾರ್ವಜನಿಕರ ಕೆಲಸ ಕಾರ್ಯಗಳನ್ನು ಮಾಡದೆ ವಿಳಂಬ/ನಿರ್ಲಕ್ಷ್ಯ ಮಾಡುತ್ತಿದ್ದಲ್ಲಿ ಮತ್ತು ಸರ್ಕಾರಿ ಯೋಜನೆಗಳ ಅನುಷ್ಠಾನದಲ್ಲಿ ಅಕ್ರಮಗಳನ್ನು ನಡೆಸಿ ಹಣ ದುರುಪಯೋಗಪಡಿಸಿದ್ದಲ್ಲಿ ಆ ಬಗ್ಗೆ ಸಾರ್ವಜನಿಕರು ನಿರ್ದಿಷ್ಟ ಮಾಹಿತಿಯೊಂದಿಗೆ ಸದರಿ ಸಭೆಗೆ ಹಾಜರಾಗಿ ಅವರ ದೂರು ಅರ್ಜಿ ಹಾಗೂ ಸಂಬಂಧಪಟ್ಟ ದಾಖಲೆಗಳನ್ನು ನೀಡಬಹುದೆಂದು ಚಿಕ್ಕಬಳ್ಳಾಪುರ ಜಿಲ್ಲೆಯ ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಡಾ|| ರಾಮ್ ಎಲ್ ಅರಸಿದ್ಧಿ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಜ್ಯ ರೈತ ಸಂಘದ ಅಧ್ಯಕ್ಷ ಹೊಸಹಳ್ಳಿ ಚಂದ್ರಣ್ಣ ಎಚ್ಚರಿಕೆ

# ಕೊಬ್ಬರಿ ಅಕ್ರಮ ನೋಂದಣಿ ರದ್ದು ಮಾಡದಿದ್ದರೆ ಪ್ರತಿಭಟನೆ

**ಹುಳಿಯಾರು:** ರೈತರ ಉತ್ಪನ್ನಗಳಿಗೆ ವೈಜ್ಞಾನಿಕ ಬೆಲೆ ಕೊಡಿ ಎಂದರೆ ರೈತನ ಮೂಗಿಗೆ ತುಪ್ಪ ಸವರಿದಂತೆ ಕೊಬ್ಬರಿಗೆ ಬೆಂಬಲ ಬೆಲೆ ಘೋಷಿಸಿ ಅದರ ನೊಂದಣಿಯಲ್ಲೂ ಅಕ್ರಮ ಮಾಡಿ ಅರ್ಹ ರೈತರನ್ನು ವಂಚಿಸಲಾಗಿದೆ. ಅಕ್ರಮವಾಗಿ ನೊಂದಣಿ ಮಾಡಿರುವುದನ್ನು ರದ್ದು ಮಾಡಿ ಪುನಃ ಸಿಸಿ ಕ್ಯಾಮರದ ಕಣ್ಗಾವಿನಲ್ಲಿ ನೊಂದಣಿ ಮಾಡಿಕೊಳ್ಳದಿದ್ದರೆ ಪ್ರತಿಭಟನೆಗೆ ಮುಂದಾಗಬೇಕಾಗುತ್ತದೆ ಎಂದು ಹೊಸಹಳ್ಳಿ ಚಂದ್ರಣ್ಣ ಬಣದ ರೈತ ಸಂಘದ ರಾಜ್ಯಾಧ್ಯಕ್ಷ ಹೊಸಹಳ್ಳಿ ಚಂದ್ರಣ್ಣ ಎಚ್ಚರಿಕೆ ನೀಡಿದ್ದಾರೆ.



ಹುಳಿಯಾರು ಎಪಿಎಂಸಿ ಮೂಲಕ ಸೋಮವಾರ ರಾಜ್ಯ ಸರ್ಕಾರಕ್ಕೆ ಕೊಬ್ಬರಿ ನೊಂದಣಿ ರದ್ದು ಮಾಡುವಂತೆ ಒತ್ತಾಯಿಸಿದ ಪತ್ರ ರವಾನಿಸಿ ಅವರು ಮಾತನಾಡಿದರು.

ರಸಗೊಬ್ಬರದ ಬೆಲೆ ದುಬಾರಿ ಮಾಡಿದ್ದೀರಿ, ಡಿಸೆಲ್ ಸಬ್ಸಿಡಿ ರದ್ದು ಮಾಡಿದ್ದೀರಿ. ಜೊತೆಗೆ ಮಳೆ ಕೈ ಕೊಟ್ಟಿದೆ. ವಿದ್ಯುತ್ ಕಣ್ಣಮುಚ್ಚಾಲೆ ಆಟ ಆಡುತ್ತಿದೆ. ಇಂತಹ ಸಂಕಷ್ಟದಲ್ಲೂ ರೈತ ಬೆಳೆ ಬೆಳೆದು ಮಾರಲು ಮುಂದಾದರೆ ರೈತನ ನಿತ್ಯದ ಕೂಲಿಯೂ ಸಹ ಸಿಗದಂತ ಬೆಲೆಗೆ ಕೇಳುತ್ತಿದ್ದೀರಿ. ರಾಗಿ ಬೆಳೆಯಲು ಕನಿಷ್ಠ ಕ್ವಿಂಟಲ್‌ಗೆ 5 ಸಾವಿರ ವೆಚ್ಚವಾಗುತ್ತದೆ. ಕೊಬ್ಬರಿ ಬೆಳೆಯಲು ಕನಿಷ್ಠ 20 ಸಾವಿರ ಕ್ವಿಂಟಲ್‌ಗೆ ತಗಲುತ್ತದೆ. ಆದರೆ ಸರ್ಕಾರ ರಾಗಿಗೆ 3300, ಕೊಬ್ಬರಿಗೆ 12000 ರೂ. ಬೆಂಬಲ ಬೆಲೆ ನಿಗಧಿ ಮಾಡಿದ್ದೀರಿ. ಹಾಳಾಗಿ ಹೋಗಲಿ ಇದೇ ಬೆಲೆ ಮಾರೋಣವೆಂದರೆ 62,500 ಮೆಟ್ರಿಕ್ ಟನ್ ನಿಗಧಿ ಮಾಡಿ ಎಲ್ಲಾ ರೈತರಿಗೂ ಸಿಗದೆ ಕಿತ್ತಾಡುವಂತೆ ಮಾಡಿದ್ದೀರಿ ಎಂದು ಆರೋಪಿಸಿದರು.

ಕೊಬ್ಬರಿ ನೊಂದಣಿ ಮಾಡುವಲ್ಲಿ ಹಿಂದೆಂದೂ ಕಂಡುಕೇಳರಿಯದ ಅಕ್ರಮ ನಡೆದಿದೆ. ವರ್ತಕರ ಮನೆಯಲ್ಲಿ ಕುಳಿತುಕೊಂಡು ರೈತರನ್ನು ಕರೆಸಿ ನೊಂದಣಿ ಮಾಡಿದ್ದಾರೆ. ಲ್ಯಾಪ್‌ಟ್ಯಾಪ್ ಹಿಡಿದು ಮನೆ ಬಾಗಿಲಿಗೆ ತೆರಳಿ 1000 ರೂ.ಗೆ ಒಂದು ನೊಂದಣಿಯಂತೆ ಹಗಲು ದರೋಡೆ ಮಾಡಿದ್ದಾರೆ. ಈ ಅಕ್ರಮ ತಿಳಿಯದ ಅರ್ಹ ರೈತರು 3 ದಿನಗಳಿಂದ ಅನ್ನನೀರಿಲ್ಲದೆ ಬಿಸಿಲಿನಲ್ಲಿ ಸರತಿ ಸಾಲಿನಲ್ಲಿ ನಿಂತು ಹೈರಾಣಾಗಿ ನಿರಾಸೆಯಿಂದ ಹಿಂದುರುಗಿದ್ದಾನೆ. ಇಂತಹ ಅಧಿಕಾರಿಗಳನ್ನು ಸಸ್ಪಂಡ್ ಮಾಡಿದರೆ ಸಾಲದು ಸಂಬಳ ರಹಿತ ಜೈಲು ಶಿಕ್ಷೆ ವಿಧಿಸಬೇಕು ಎಂದು ಒತ್ತಾಯಿಸಿದ್ದಾರೆ.

ಬರಗಾಲ, ಬ್ಯಾಂಕ್, ಮೈಕ್ರೋ ಫೈನಾನ್ಸ್ ಕಾಟದಿಂದ ಜನರು ಗುಳೆ ಹೋಗುತ್ತಿದ್ದಾರೆ. ಎರಡೊತ್ತು ಊಟ ಸಿಕಿದರೆ ಸಾಕು ಎನ್ನುವಂತ ಪರಿಸ್ಥಿತಿ ನಿರ್ಮಾಣವಾಗಿದೆ. ಇಂತಹದರಲ್ಲಿ ದೇಶದ ಜನರಿಗೆ ತಾಯಿಯಾಗಿ ಅನ್ನಹಾಲು ಕೊಡುತ್ತಿರುವ ರೈತರನ್ನು ವಂಚಿಸುವುದು ಹೆತ್ತ ತಾಯಿಯನ್ನು ವಂಚಿಸುವುದಕ್ಕೆ ಸಮ. ತಾಯಿಯ ಶಾಪ ಹೇಗೆ ಏಳೇಳು ಜನ್ಮಕ್ಕೆ ತಟ್ಟುತ್ತದೆಯೋ ಹಾಗೆ ರೈತರ ಶಾಪವೂ ನಿಮಗೆ ತಟ್ಟದೆ ಇರುವುದಿಲ್ಲ. ರೈತರಲ್ಲಿ ಒಗ್ಗಟ್ಟಿಲ್ಲ, ರೈತರಿಗೆ ತಿಳುವಳಿಕೆ ಇಲ್ಲವೆಂದು ಏನು ಮಾಡಿದರೂ ಸರಿ ಎನ್ನುವ ನಿಮ್ಮ ಧೋರಣೆ ಬದಲಾಯಿಸಿಕೊಳ್ಳದಿದ್ದರೆ ಪರಿಸ್ಥಿತಿ ನೆಟ್ಟಗಿರುವುದಿಲ್ಲ. ರೈತರ ತಾಳ್ಮೆ ಕಳೆದುಕೊಂಡರೆ ವಿಧಾನ ಸೌಧ, ಸಂಸತ್ ಭವನ ಬಿಟ್ಟು ನೀವು ಓಡಬೇಕಾಗುತ್ತದೆ ಎಚ್ಚರ ಎಂದರು.

ರೈತ ಸಂಘದ ತಾಲೂಕು ಕಾರ್ಯಾಧ್ಯಕ್ಷ ಕರಿಯಪ್ಪ, ಸೋಮಜ್ಜನಪಾಳ್ಯದ ರೈತ ಸಂಘದ ಅಧ್ಯಕ್ಷ ಪುಟ್ಟಯ್ಯ, ನೀರಾ ಈರಣ್ಣ, ನಂದಿಹಳ್ಳಿ ರೇವಣ್ಣ, ಲಕ್ಷ್ಮೀದೇವಮ್ಮ, ಪುಟ್ಟಮ್ಮ, ಪೆದ್ದಾಬೋವಿ, ಎನ್ .ಪಿ.ಜಯಣ್ಣ, ಗಂಗಮ್ಮ, ಎನ್.ರಮೇಶ್, ಗಂಗಣ್ಣ, ಪೂಜಾರ್ ಪ್ರಕಾಶ್, ಗಂಗಾಧರಯ್ಯ ಮತ್ತಿತರರು ಇದ್ದರು.

# ನನ್ನ ವ್ಯಕ್ತಿತ್ವ ಮಾರಿಕೊಂಡಿಲ್ಲ

**ವಿಜಯಪುರ:** ನಾನು ಯಾವುದೇ ಪಕ್ಷದಿಂದ ಅಭ್ಯರ್ಥಿಯಾಗಿ ನಿಂತರೂ ಸಹ ನನ್ನನ್ನು ನಾನು ಯಾವುದೇ ಪಕ್ಷಕ್ಕೆ ಮಾರಾಟ ಮಾಡಿಕೊಂಡವನಲ್ಲ ಶಿಕ್ಷಕರು, ವಿದ್ಯಾರ್ಥಿಗಳು, ಶಿಕ್ಷಣ ಸಂಸ್ಥೆಗಳಿಗೆ ಯಾವಾಗಲೂ ಯಾವುದೇ ತೊಂದರೆಯಾದಲ್ಲಿ ನಾನು ಮುಂಚೂಣಿಯಲ್ಲಿ ನಿಂತು ಅವರುಗಳಿಗೆ ನ್ಯಾಯ ದೊರಕಿಸಿ ಕೊಡುವ ಕೆಲಸವನ್ನು ಕಳೆದ 20 ವರ್ಷಗಳಿಂದಲೂ ಮಾಡಿಕೊಂಡು ಬಂದಿರುತ್ತೇನೆ ಎಂದು ವಿಧಾನ ಪರಿಷತ್ತಿನ ಶಿಕ್ಷಕರ ಕ್ಷೇತ್ರದ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಪುಟ್ಟಣ್ಣ ರವರು ತಿಳಿಸಿದರು.



ಇಲ್ಲಿನ ಗಿರಿಜಾ ಶಂಕರ ಕಲ್ಯಾಣ ಮಂಟಪದಲ್ಲಿ ಏರ್ಪಡಿಸಿದ್ದ ಶಿಕ್ಷಕರ ಸಮಾವೇಶದಲ್ಲಿ ಮಾತನಾಡುತ್ತಿದ್ದರು. ಪ್ರತಿಯೊಬ್ಬ ಶಿಕ್ಷಕರು ಸ್ವಾಭಿಮಾನ ದಿಂದ ಬದುಕುವ ಕೆಲಸ ಮಾಡಿದ್ದೇನೆ ಇವತ್ತು ಯಾರಲ್ಲಿಯೂ ಒಂದು ನ್ಯಾಯ ಪೈಸೆ ತಾವು ಪಡೆದುಕೊಂಡಿರುವುದಿಲ್ಲವೆಂದು, ಪವಿತ್ರವಾದ ಶಿಕ್ಷಕರ ಕ್ಷೇತ್ರದಿಂದ ಈಗಾಗಲೇ ಐದು ಬಾರಿ ಗೆದ್ದಿದ್ದು ತಾವು ಉತ್ತಮವಾಗಿ ಶಿಕ್ಷಣ ಕ್ಷೇತ್ರದ ಪರವಾಗಿ ಕರ್ತವ್ಯ ನಿರ್ವಹಿಸಿದ್ದರೆ ತಮ್ಮ ಮತ ನನಗೆ ನೀಡಬೇಕೆಂದು ಪ್ರಾರ್ಥಿಸಿದರು.

ಅತಿ ಕಷ್ಟಕರವಾದಂತಹ ಕರೋನ ಸಂದರ್ಭದಲ್ಲಿಯೂ ಸರ್ಕಾರದಿಂದ ಖಾಸಗಿ ಶಾಲಾ ಶಿಕ್ಷಕರ ಗಳಿಗೆ 103 ಕೋಟಿ ಹಣ ಬಿಡುಗಡೆ ಮಾಡಿಸಿರುವುದರೊಂದಿಗೆ ಅದನ್ನು ವಿತರಿಸಿ, 6500 ಕ್ಕೂ ಹೆಚ್ಚು ಫುಡ್ ಕಿಟ್‌ಗಳನ್ನು ಈ ಭಾಗದಲ್ಲಿ ವಿತರಿಸಿ, ಯಾವುದೇ ಕಾರಣಕ್ಕೂ ಯಾವುದೇ ಶಿಕ್ಷಕರುಗಳಿಗೆ ಫುಡ್ ಕಿಟ್ ನೀಡುವ ಫೋಟೋ ತೆಗೆಯಬಾರದೆಂದು ನಿರ್ದೇಶನ ನೀಡಿದ್ದಾಗಿ ತಿಳಿಸಿದರು. ಖಾಸಗಿ ಶಾಲಾ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷ ಶಶಿಕುಮಾರ್ ಮಾತನಾಡಿ ಪುಟ್ಟಣ್ಣ ರವರು ನೇರ, ನಿಷ್ಠುರವಾದಿಯಾಗಿ ಮಾತನಾಡುವುದರೊಂದಿಗೆ, ಬದ್ಧತೆಯಿಂದ ಶಿಕ್ಷಣ ಕ್ಷೇತ್ರದಲ್ಲಿ ಹೋರಾಡಬಲ್ಲಂತಹ ವ್ಯಕ್ತಿಯಾಗಿದ್ದು, ಎಲ್ಲಾ ಶಿಕ್ಷಕರು ತಮ್ಮ ಪ್ರಾಶಸ್ತ ಮತವನ್ನು ಒಂದು ಸಂಖ್ಯೆ ಎಳೆಯುವ ಮೂಲಕ ಪುಟ್ಟಣ್ಣನವರಿಗೆ ಮತ ನೀಡಬೇಕೆಂದು ಯಾವುದೇ ಮತವು ಕುಲಗೆಡದಂತೆ ನೋಡಿಕೊಳ್ಳಬೇಕೆಂದು ತಿಳಿಸಿದರು.

ಪ್ರಗತಿ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷರಾದ ಎಂ.ಸತೀಶ್ ಕುಮಾರ್, ಖಾಸಗಿ ಶಿಕ್ಷಣ ಸಂಸ್ಥೆಗಳ ಶಿಕ್ಷಕರು ಹಾಗೂ ಸಂಸ್ಥೆಗಳ ಮುಖ್ಯಸ್ಥರುಗಳು ಭಾಗವಹಿಸಿದ್ದರು.

# ಸಂಸ್ಕಾರ ಪರಿಶ್ರಮದಿಂದ ಬದುಕು ಉಜ್ವಲ: ಶ್ರೀರಂಭಾಪುರಿ ಜಗದ್ಗುರುಗಳು

**ಕಡೇನಂದಿಹಳ್ಳಿ:** ಬಾಳೆಗೊಂದು ಗೊನೆಯಿರುವಂತೆ ಬಾಳಿಗೊಂದು ಗುರಿಯಿರಬೇಕು. ಜನ ಮಾನಸಕ್ಕೆ ಸನ್ಮಾರ್ಗ ತೋರಿಸುವುದೇ ನಿಜವಾದ ತಪಸ್ಸು. ಸಂಸ್ಕಾರ ಮತ್ತು ಪರಿಶ್ರಮದಿಂದ ಮಾನವನ ಬದುಕು ಉಜ್ವಲಗೊಳ್ಳುವುದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಸೋಮವಾರ ಶಿಕಾರಿಪುರ ತಾಲೂಕ ಕಡೇನಂದಿಹಳ್ಳಿ ಕ್ಷೇತ್ರದ ಶ್ರೀ ಗುರು ರೇವಣಸಿದ್ಧೇಶ್ವರ ಪುಣ್ಯಾಶ್ರಮದಲ್ಲಿ ಜರುಗಿದ ಶ್ರೀ ರಂಭಾಪುರಿ ಜಗದ್ಗುರುಗಳವರ 33ನೇ ವರ್ಷದ ಪೀಠಾರೋಹಣ ವರ್ಧಂತಿ ಮಹೋತ್ಸವ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಹಣತೆ ತನಗಾಗಿ ಉರಿಯುವುದಿಲ್ಲ. ಬೆಳಕು ನೀಡಲು ತನ್ನನ್ನು ತಾನು ಸುಟ್ಟುಕೊಳ್ಳುವಂತೆ ಅನೇಕ ಮಹಾತ್ಮರು ಬೇರೆಯವರ ಒಳಿತಿಗಾಗಿ ಸದಾ ಶ್ರಮಿಸುತ್ತಾರೆ. ಕೆಡಕುಗಳನ್ನು ಮೆಟ್ಟಿ ನಿಂತು ಒಳಿತಿನ ಹೆಜ್ಜೆ ಹಾಕುವುದೇ ಮಾನವನ ಗುರಿಯಾಗಬೇಕು. ಸುಳ್ಳಿಗೆ ಹಲವು ದಾರಿ ಆದರೆ ಸತ್ಯಕ್ಕೆ ಇರುವುದೊಂದೇ ದಾರಿ. ಕಾಯಿಸಿದ ಚಿನ್ನ ಒಡವೆಯಾಗುತ್ತದೆ. ಬಡಿದ ತಾಮ್ರ ತಂತಿಯಾಗುತ್ತದೆ. ಕೆತ್ತಿದ ಕಲ್ಲು ಸುಂದರ ಮೂರ್ತಿಯಾಗುತ್ತದೆ. ಸಂಸ್ಕಾರದ ಪೆಟ್ಟಿನಿಂದ ಜೀವನದ ಮೌಲ್ಯ ಹೆಚ್ಚುತ್ತದೆ. ಪುಟ ಪುಸ್ತಕ ಬದಲಿಸಬಹುದು. ಆದರೆ ಇತಿಹಾಸ ಬದಲಿಸಲು ಸಾಧ್ಯವಿಲ್ಲ. ಸಜ್ಜನರಿಗೆ ಬರುವ ಆಪತ್ತು ದುರ್ಜನರಿಗೆ ಬರುವ ಸಂಪತ್ತು ಬಹಳ ಕಾಲ ಉಳಿಯುವುದಿಲ್ಲ. ಮೂಲ ನಂಬಿಕೆಗಳನ್ನು ಮೂಢ ನಂಬಿಕೆಯಿಂದು ಜನ ಸಮುದಾಯದ ದಾರಿ ತಪ್ಪಿಸಬಾರದು. ಉನ್ನತ ಗುರಿ ಮತ್ತು ಧ್ಯೇಯ ವ್ಯಕ್ತಿತ್ವ ವಿಕಾಸಕ್ಕೆ ದಾರಿ. ಶ್ರೀ ಜಗದ್ಗುರು ರೇಣುಕಾಚಾರ್ಯರು ಜೀವನ ಶ್ರೇಯಸ್ಸಿಗೆ ದಶಧರ್ಮ ಸೂತ್ರಗಳ ಪಾಲನೆ ಮುಖ್ಯವೆಂದು ಬೋಧಿಸಿದ್ದಾರೆ. ಕಡೇನಂದಿಹಳ್ಳಿ ರೇವಣಸಿದ್ಧೇಶ್ವರ ಶ್ರೀಗಳವರ ಶ್ರಮ ಸಾಧನೆ ಅಪೂರ್ವವಾದುದು. ಅಲ್ಪ ಸಮಯದಲ್ಲಿ ಅದ್ಭುತ ಸಾಧನೆ ಮಾಡಿದ್ದಾರೆಂದು ಹರುಷ ವ್ಯಕ್ತಪಡಿಸಿದ ಜಗದ್ಗುರುಗಳು ಪೀಠಾರೋಹಣದ 33ನೇ ವರ್ಧಂತಿ ಮಹೋತ್ಸವ ಇದೇ ಕ್ಷೇತ್ರದಲ್ಲಿ ಜರುಗುತ್ತಿರುವುದು ಸಂತೋಷದ ಸಂಗತಿ ಎಂದರು. ನೇತೃತ್ವ ವಹಿಸಿದ ರೇವಣಸಿದ್ಧೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ಶ್ರೀ ಕ್ಷೇತ್ರದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳವರ 33ನೇ ವರ್ಷದ ಪೀಠಾರೋಹಣ ವರ್ಧಂತಿ ಮಹೋತ್ಸವ ಜರುಗುತ್ತಿರುವುದು ಭಕ್ತ ಸಮುದಾಯಕ್ಕೆ ಸಂತೋಷವನ್ನು ಉಂಟು ಮಾಡಿದೆ. ಶ್ರೀ ಜಗದ್ಗುರುಗಳವರ ಆಶೀರ್ವಾದ ಬಲದಿಂದ ಕ್ಷೇತ್ರ ಅಭಿವೃದ್ಧಿ ಪಥದತ್ತ ಸಾಗುತ್ತಿರುವುದು ಎಲ್ಲರಿಗೂ ಹೆಮ್ಮೆ ತಂದಿದೆ ಎಂದರು. ಸಂಸದ ಬಿ.ವೈ.ರಾಘವೇಂದ್ರ ಸಮಾರಂಭವನ್ನು ಉದ್ಘಾಟಿಸಿ ಶ್ರೀ ರಂಭಾಪುರಿ ಜಗದ್ಗುರುಗಳು 32 ವರ್ಷದಲ್ಲಿ ರಾಜ್ಯ ಹೊರರಾಜ್ಯಗಳಲ್ಲಿ ಸಂಚರಿಸಿ ಧರ್ಮ ಜಾಗೃತಿಯೊಂದಿಗೆ ಅವರು ಮಾಡಿರುವ ಅಭಿವೃದ್ಧಿ ಕಾರ್ಯಗಳು ಶ್ರೀ ರಂಭಾಪುರಿ ಪೀಠದ ಇತಿಹಾಸದಲ್ಲಿ ಅಜರಾಮರವಾಗಿವೆ. ರೇವಣಸಿದ್ಧೇಶ್ವರ ಶ್ರೀಗಳವರ ಕ್ರಿಯಾಶೀಲ ಬದುಕು ಮತ್ತು ಅವರು ಮಾಡಿದ ತಪಸ್ಸು ಈ ಭಾಗದ ಭಕ್ತರಿಗೆ ಬಹು ದೊಡ್ಡ ಸಂಪತ್ತಾಗಿದೆ. ಶ್ರೀಗಳವರ ಸಾಧನೆ ಭಕ್ತರ ಮೇಲಿಟ್ಟಿರುವ ವಾತ್ಸಲ್ಯ ಈ ಕ್ಷೇತ್ರದ ಬೆಳವಣಿಗೆಗೆ ಸಹಕಾರಿಯಾಗಿವೆ ಎಂದರು. ಸವಣೂರಿನ ಡಾ||ಗುರುಪಾದಯ್ಯ ಸಾಲಿಮಠ ಸಂಗ್ರಹಿಸಿದ ಶ್ರೀ ರಂಭಾಪುರಿ ಪೀಠದ ವಾರ್ತಾ ಸಂಕಲನ ಬಿಡುಗಡೆ ಮಾಡಿದ ಯಡೆಯೂರು ರೇಣುಕ ಶಿವಾಚಾರ್ಯರು ಶ್ರೀಗಳವರ ಸಾಧನೆಯ ಬಗೆಗೆ ಮೆಚ್ಚುಗೆಯ ಮಾತುಗಳನ್ನಾಡಿದರು. ಈ ಪವಿತ್ರ ಸಮಾರಂಭದಲ್ಲಿ ಮುಕ್ತಿಮಂದಿರದ ವಿಮಲ ರೇಣುಕ ಮುಕ್ತಿಮುನಿ ಶಿವಾಚಾರ್ಯರು, ಬಂಕಾಪುರದ ರೇವಣಸಿದ್ಧೇಶ್ವರ ಶಿವಾಚಾರ್ಯರು ಉಪದೇಶಾಮೃತವನ್ನಿತ್ತರು. ಕನ್ನೂರು-ಸಿಂಧನೂರು ಸೋಮನಾಥ ಶ್ರೀ, ಚನ್ನಗಿರಿ ಕೇದಾರ ಶಿವಶಾಂತವೀರ ಶ್ರೀ, ಬಿಳಿಕಿ ರಾಚೋಟೇಶ್ವರ ಶ್ರೀ, ಹಾರನಹಳ್ಳಿ ಶಿವಯೋಗಿ ಶ್ರೀ, ಕಾರ್ಜುವಳ್ಳಿ ಸದಾಶಿವ ಶ್ರೀ, ಸಂಗೊಳ್ಳಿ ಗುರುಲಿಂಗ ಶ್ರೀಗಳು ಸೇರಿದಂತೆ ಹಲವಾರು ಮಠಾಧೀಶರು ಉಪಸ್ಥಿತರಿದ್ದರು. ಮುಖ್ಯ ಅತಿಥಿಗಳಾಗಿ ಹಿರೇಕೆರೂರು ಶಾಸಕ ಯು.ಬಿ.ಬಣಕಾರ, ಚಿತ್ರನಟ ಕೆ.ಸುಚೇಂದ್ರ ಪ್ರಸಾದ, ಎನ್.ವಿ.ಈರೇಶ್, ಪ್ರಸನ್ನ ಭೋಜಶೆಟ್ಟರ್ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು. ಹಲವಾರು ಗಣ್ಯರಿಗೆ ಮತ್ತು ದಾನಿಗಳಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆಯಿತ್ತು ಶುಭ ಹಾರೈಸಿದರು. ರೋಣದ ಶೇಖರಯ್ಯ ಶಾಸ್ತ್ರಿಗಳು ಸ್ವಾಗತಿಸಿದರು. ಶಿವಮೊಗ್ಗದ ಶಾಂತಾ ಆನಂದ ನಿರೂಪಿಸಿದರು. ಸಮಾರಂಭಕ್ಕೂ ಮುನ್ನ ಶ್ರೀ ರಂಭಾಪುರಿ ಜಗದ್ಗುರುಗಳವರ ಬೆಳ್ಳಿ ಅಡ್ಡಪಲ್ಲಕ್ಕಿ ಮಹೋತ್ಸವ ಜರುಗಿ ವೀರಸಿಂಹಾಸನವನ್ನು ಆರೋಹಣ ಮಾಡಿ ಭಕ್ತ ಸಮುದಾಯಕ್ಕೆ ಶುಭ ಹಾರೈಸಿದರು. ಆಗಮಿಸಿದ ಎಲ್ಲಾ ಭಕ್ತರಿಗೆ ಅನ್ನ ದಾಸೋಹ ಜರುಗಿತು.



# ಮನುಷ್ಯ ಪ್ರಕೃತಿಯೊಂದಿಗೆ ಬೆರೆತು ಬಾಳಿದರೆ ಉಳಿಗಾಲ

**ಪಿರಿಯಾಪಟ್ಟಣ:** ಅರಣ್ಯ ಹಾಗೂ ಮನುಷ್ಯನ ಆರೋಗ್ಯಕ್ಕೆ ನಿಕಟವಾದ ಸಂಬಂಧವಿದೆ ಹಾಗಾಗಿ ತಮ್ಮ ಸುತ್ತಮುತ್ತಲ ಪ್ರದೇಶದಲ್ಲಿ ಉತ್ತಮ ಮರಗಿಡಗಳನ್ನು ಬೆಳೆಸಬೇಕು ಎಂದು ವಲಯ ಅರಣ್ಯಾಧಿಕಾರಿ ಕಿರಣ್ ಕುಮಾರ್ ತಿಳಿಸಿದರು.

ಪಟ್ಟಣದ ಶ್ರೀ ಗುರುರೇಣುಕಾದೇವಿ ಆಂಗ್ಲಮಾಧ್ಯಮ ಪ್ರೌಢಶಾಲೆ ಹಾಗೂ ಬಸವೇಶ್ವರ ಪದವಿ ಪೂರ್ವ ಕಾಲೇಜು ಶಿಕ್ಷಣ ಸಂಸ್ಥೆಯಲ್ಲಿ ನಡೆದ ಶಾಲಾ ವಾರ್ಷಿಕೋತ್ಸವದಲ್ಲಿ ಮಾತನಾಡಿದರು.

ಮರಗಿಡಗಳನ್ನು ರಕ್ಷಿಸಿದರೆ ಅವು ನಮ್ಮ ಕುಟುಂಬವನ್ನು ರಕ್ಷಿಸುತ್ತವೆ ಹಾಗಾಗಿ ಗಿಡ, ಮರಗಳನ್ನು ಮಕ್ಕಳಂತೆ ನೋಡಿಕೊಳ್ಳಬೇಕು. ಪರಿಸರ ರಕ್ಷಿಸಿದರೆ ಮಾತ್ರ ಮನುಷ್ಯನಿಗೆ ಉಳಿಗಾಲ, ಪರಿಸರವನ್ನು ನಾವು ಗೆಲ್ಲಲು ಸಾಧ್ಯವಿಲ್ಲ. ಅದರ ಜೊತೆಗೆ ಜೀವನ ಮಾಡಬೇಕೆಂದಾದರೆ ಗಿಡ ಮರಗಳನ್ನು ನೆಡುವ ಜೊತೆಗೆ ಇರುವ ಮರಗಳನ್ನು ಕಾಪಾಡಬೇಕು. ಪರಿಸರ ಮಾಲಿನ್ಯವಾಗುವುದನ್ನು ನಿಯಂತ್ರಣಕ್ಕೆ ತರಬೇಕು. ಪರಿಸರದಿಂದ ಸಿಗುವ ಲಾಭ ಮಿತವಾಗಿ ಬಳಸಬೇಕು. ಮನುಷ್ಯ ಪ್ರತಿನಿತ್ಯ 11,500 ಲೀಟರ್ ಗಾಳಿ ಸೇವಿಸಿ ಹೊರಗೆ ಬಿಡುತ್ತಾನೆ. ಮಾನವನಿಗೆ ಶ್ವಾಸಕೋಶ ಇದ್ದಂತೆ ಮರ ಗಿಡಗಳೇ ಪ್ರಕೃತಿಗೆ ಶ್ವಾಸಕೋಶ. ಒಂದು ದೊಡ್ಡ ಮರ ಒಂದು ವರ್ಷಕ್ಕೆ 10 ಜನರಿಗಾಗುವಷ್ಟು ಶುದ್ಧ ಆಮ್ಲಜನಕ ಕೊಡುತ್ತದೆ ಹಾಗಾಗಿ ವಿದ್ಯಾರ್ಥಿಗಳು ಪರಿಸರದ ಬಗ್ಗೆ ಕಾಳಜಿ ಮತ್ತು ಜಾಗೃತಿ ಮೂಡಿಸುವ ಕೆಲಸ ಮಾಡಬೇಕು ಜೊತೆಗೆ ಮೊಬೈಲ್ ಬಳಕೆ ಕಡಿಮೆ ಮಾಡಬೇಕು ಎಂದು ಕಿವಿಮಾತು ಹೇಳಿದರು.

ಕರವೇ ಅಧ್ಯಕ್ಷ ಎನ್.ಎಲ್.ಗಿರೀಶ್ ಮಾತನಾಡಿ ಶಿಕ್ಷಣ ಸಂಸ್ಥೆಗಳು ವಿದ್ಯಾರ್ಥಿಗಳಿಗೆ ಸಂಸ್ಕಾರಯುತ ಶಿಕ್ಷಣವನ್ನು ನೀಡಿದಾಗ ಮಾತ್ರ ಮಕ್ಕಳ ಭವಿಷ್ಯ ಉಜ್ವಲವಾಗುತ್ತದೆ. ವಿನಯವಿಲ್ಲದ ಶಿಕ್ಷಣಕ್ಕೆ ಬೆಲೆಯಿಲ್ಲ ಆದ್ದರಿಂದ ಮಕ್ಕಳಿಗೆ ಸಂಸ್ಕಾರವನ್ನು ಕಲಿಸಬೇಕು ಆಗ ಮಾತ್ರ ಶಿಕ್ಷಣಕ್ಕೆ ಬೆಲೆ ಸಿಗುತ್ತದೆ. ಈ ನಿಟ್ಟಿನಲ್ಲಿ ಶ್ರೀ ಗುರುರೇಣುಕಾದೇವಿ ಶಿಕ್ಷಣ ಸಂಸ್ಥೆಯು ತಾಲೂಕಿನಲ್ಲಿ ಉತ್ತಮ ಶಿಕ್ಷಣವನ್ನು ನೀಡುತ್ತಾ ಬಂದಿದೆ ಎಂದು ಶಿಕ್ಷಣ ಸಂಸ್ಥೆಯ ಕಾರ್ಯವನ್ನು ಶ್ಲಾಘಿಸಿದರು. ಕೇವಲ ಅಂಕಗಳನ್ನು ಪಡೆಯುವುದೇ ಶಿಕ್ಷಣವಲ್ಲ ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಸಂಸ್ಥೆಯ ಕಾರ್ಯದರ್ಶಿ ಕೆ.ಕೆ.ಅನಿತ್ ಮಾತನಾಡಿ ನಮ್ಮ ಶಿಕ್ಷಣ ಸಂಸ್ಥೆಯು ಪ್ರಾರಂಭವಾಗಿ ಸುಮಾರು 33 ವರ್ಷಗಳಾಗಿವೆ ಅವಾಗಿನಿಂದಲೂ ತಾಲೂಕಿನಲ್ಲಿ ಉತ್ತಮ ಶಿಕ್ಷಣವನ್ನು ನೀಡುತ್ತಾ ಬಂದಿದೆ ನಮ್ಮ ಸಂಸ್ಥೆಯಲ್ಲಿ ಸುಮಾರು 650 ಕ್ಕೂ ಹೆಚ್ಚು ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದು ಸಂಸ್ಕಾರಯುತ ಉತ್ತಮ ಶಿಕ್ಷಣವನ್ನು ಪಡೆಯುತ್ತಿದ್ದಾರೆ ನಮ್ಮ ಸಂಸ್ಥೆಯಲ್ಲಿ ಶಿಕ್ಷಣ ಪಡೆದು ಹಲವಾರು ವಿದ್ಯಾರ್ಥಿಗಳು ಇಂದು ರಾಜ್ಯದಲ್ಲಿ ಹಾಗೂ ಹೊರ ರಾಜ್ಯಗಳಲ್ಲಿ ಉನ್ನತ ಹುದ್ದೆಗಳಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ ಎಂದರು.

ಶಾಲಾ ಕಾಲೇಜಿನ ವಿದ್ಯಾರ್ಥಿಗಳು ಸಾಂಸ್ಕೃತಿಕ ಕಾರ್ಯಕ್ರಮಗಳು ನೋಡುಗರ ಕಣ್ಮನ ಸೆಳೆದವು. ಕಾರ್ಯಕ್ರಮದಲ್ಲಿ ಪ್ರಾಂಶುಪಾಲ ಶಾಲಿನಿ ಅನಿತ್, ಯಯುಕೊ ಬ್ಯಾಂಕ್ ವ್ಯವಸ್ಥಾಪಕ ಜಾಫರ್ ಶರೀಫ್, ಪುರಸಭಾ ಸದಸ್ಯ ರವಿ, ಚಲನಚಿತ್ರ ನಟ ಮದನ್ ಕುಮಾರ್, ಹಾಸ್ಯನಟ ಸೂರ್ಯ, ಡಾ.ನಿಶಿತಾ, ತಿಲಕ್, ಸಮಿತಾ, ಪ್ರಭಾರಿ ಮುಖ್ಯ ಶಿಕ್ಷಕರಾದ ಪ್ರಸಾದ್, ರಾಘವೇಂದ್ರ, ಉಪನ್ಯಾಸಕರಾದ ಕಿರಂಗೂರು ಸ್ವಾಮಿ, ಪ್ರಕಾಶ್, ಮಂಜಣ್ಣ ಚಾರಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

**ಡಿಸಿಎಂ ಡಿ.ಕೆ. ಶಿವಕುಮಾರ್ ಹೇಳಿಕೆ**

# ರಾಮನಗರ ಮಾದರಿಗೆ ಸಂಕಲ್ಪ

**ರಾಮನಗರ:** ರಾಮನಗರವನ್ನು ಮಾದರಿ ಜಿಲ್ಲೆಯಾಗಿ ಮಾಡಲು ನಾವು ಸಂಕಲ್ಪ ಮಾಡಿದ್ದೇವೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ರಾಮನಗರ ಜಿಲ್ಲೆಗೆ ನೂತನ ಅಶ್ವಮೇಧ ಬಸ್‌ಗಳ ಸಂಚಾರ ಉದ್ಘಾಟನೆಯನ್ನು ಫೆ. 12ರ ಸೋಮವಾರ ನಗರದ ಜಿಲ್ಲಾ ಕ್ರೀಡಾಂಗಣದ ಆವರಣದಲ್ಲಿ ನೆರವೇರಿಸಿ ಅವರು ಮಾತನಾಡಿದರು.

ರಾಮನಗರ ಜಿಲ್ಲೆಯನ್ನು ಮಾದರಿ ಜಿಲ್ಲೆಯಾಗಿ ಮಾಡಲು ಸಂಸದ ಡಿ.ಕೆ. ಸುರೇಶ್ ಅವರು ಸಂಕಲ್ಪ ಮಾಡಿದ್ದಾರೆ. ಅವರ ಯೋಜನೆಗಳನ್ನು ಜಾರಿಗೊಳಿಸಲು ಉಪಮುಖ್ಯಮಂತ್ರಿ, ಇಲ್ಲಿನ ಸ್ಥಳೀಯ ಶಾಸಕಸರು, ವಿಧಾನ ಪರಿಷತ್ ಸದಸ್ಯರು ಸಂಪೂರ್ಣ ಸಹಕಾರ ನೀಡುತ್ತೇವೆ. ಬಿಡದಿ ಪ್ರಾಧಿಕಾರವನ್ನು ಗ್ರೇಟರ್ ಬೆಂಗಳೂರು ಪ್ರಾಧಿಕಾರವಾಗಿ ಪರಿವರ್ತಿಸುತ್ತಿದ್ದೇವೆ. ಬಿಡದಿ ಹಾಗೂ ಆನೇಕಲ್ ವರೆಗೂ ಮೆಟ್ರೋ ವಿಸ್ತರಿಸಲು ಡಿಪಿಆರ್ ಸಿದ್ಧಪಡಿಸಲು ಸೂಚನೆ ನೀಡಲಾಗಿದೆ. ರಾಮನಗರ ಜಿಲ್ಲೆಗೆ ಯಾವ ಯಾವ ಇಲಾಖೆಗಳಲ್ಲಿ ಏನೆಲ್ಲಾ ಯೋಜನೆಗಳನ್ನು ಸಿದ್ಧಪಡಿಸುತ್ತಿದ್ದೇವೆ ಎಂದು ಮುಂದಿನ ದಿನಗಳಲ್ಲಿ ಪ್ರತ್ಯೇಕವಾಗಿ ತಿಳಿಸಲಾಗುವುದು ಎಂದರು.

ರಾಮನಗರ ಜಿಲ್ಲೆಯವರು ಬೆಂಗಳೂರಿನವರೇ ಆಗಿದ್ದಾರೆ. ಕೆಂಗಲ್ ಹನುಮಂತಯ್ಯ, ಶ್ರೀ ಬಾಲಗಂಗಾಧರನಾಥ ಸ್ವಾಮಿಜಿಗಳು, ಶ್ರೀ ಶಿವಕುಮಾರ ಸ್ವಾಮೀಜಿಗಳು ಇದೇ ಜಿಲ್ಲೆಯವರು. ನಾವೆಲ್ಲರೂ ಬೆಂಗಳೂರಿನ ಭಾಗ. ಈ ವಿಚಾರವಾಗಿ ಚುನಾವಣೆ ನಂತರ ಚರ್ಚೆ ಮಾಡಿ ರೂಪುರೇಷೆ ನೀಡಲಾಗುವುದು. ತಮಿಳುನಾಡಿನಲ್ಲಿ ಪಾಲಿಕೆ ವ್ಯಾಪ್ತಿಯಲ್ಲಿ ಮಾತ್ರ ಉಚಿತ ಬಸ್ ವ್ಯವಸ್ಥೆ ಕಲ್ಪಿಸಿದ್ದರು. ನಮ್ಮ ಸರ್ಕಾರ ಶಕ್ತಿ ಯೋಜನೆ ಮೂಲಕ ಇಡೀ ರಾಜ್ಯದಲ್ಲಿ ಮಹಿಳೆಯರಿಗೆ ಉಚಿತ ಬಸ್ ವ್ಯವಸ್ಥೆ ಕಲ್ಪಿಸಲಾಗಿದೆ. ಈ ಯೋಜನೆಯಿಂದ ಸಾರಿಗೆ ಸಂಸ್ಥೆಗಳು ಬರಿದಾಗುತ್ತವೆ ಎಂದು ಹೇಳುತ್ತಿದ್ದರು. ಈಗ ಪ್ರತಿ ತಿಂಗಳು ಮಹಿಳೆಯರ ಪ್ರಯಾಣದ ಹಣವನ್ನು ಸರ್ಕಾರ ಕಟ್ಟುತ್ತಿದೆ. ಬೆಳಗಾವಿ, ಹುಬ್ಬಳ್ಳಿ ಹಾಗೂ ಇತರೆ ಭಾಗದ ಜಿಲ್ಲೆಗಳಿಂದ ಬೆಂಗಳೂರಿಗೆ ಒಂದು ಬಾರಿ ಓಡಾಡಲು 1500-2000 ರೂಪಾಯಿ ಬೇಕಾಗುತ್ತದೆ. ಈ ಯೋಜನೆಯಿಂದ ಅವರಿಗೆ ಅಷ್ಟೂ ದುಡ್ಡು ಉಳಿಯುತ್ತದೆ. ಕೆಲಸಕ್ಕೆ ಓಡಾಡುವವರಿಗೂ ಈ ಯೋಜನೆ ಬಹಳ ಅನುಕೂಲವಾಗಿದೆ ಎಂದು ಹೇಳಿದರು. ರಾಜ್ಯದಲ್ಲಿ ಬಸ್‌ಗಳ ಕೊರತೆ ನೀಗಿಸಲು 1 ಸಾವಿರ ನೂತನ ಬಸ್‌ಗಳ ನಿಯೋಜನೆ ಮಾಡಲಾಗುತ್ತಿದೆ. ನಮ್ಮ ಶಕ್ತಿ ಯೋಜನೆಯಿಂದ ದೇವಾಲಯಗಳಲ್ಲಿ ಹುಂಡಿಗಳು ತುಂಬುತ್ತಿವೆ. ಪ್ರವಾಸಿ ತಾಣಗಳಲ್ಲಿ ಹೋಟೆಲ್, ವ್ಯಾಪಾರೋದ್ಯಮಗಳಲ್ಲಿ ವ್ಯಾಪಾರ ಹೆಚ್ಚಾಗುತ್ತಿವೆ. ಧರ್ಮಸ್ಥಳದ ಧರ್ಮಾಧಿಕಾರಿ ಶ್ರೀ ವೀರೇಂದ್ರ ಹೆಗ್ಗಡೆಯವರೂ ಈ ಯೋಜನೆಯನ್ನು ಶ್ಲಾಘಿಸಿದ್ದರು. ಮಹಿಳೆಯರು ನನ್ನ ಹಾಗೂ ಸಿದ್ದರಾಮಯ್ಯ ಅವರ ಹೆಸರಿನಲ್ಲೂ ಪೂಜೆ ಮಾಡಿಸುತ್ತಿದ್ದಾರೆ ಎಂದು ಹೇಳಿದ್ದರು ಎಂದು ಉಪ ಮುಖ್ಯಮಂತ್ರಿಗಳು ತಿಳಿಸಿದರು. ನಾವು ರಾಜ್ಯದ ಜನರಿಗೆ ಕೊಟ್ಟ ಮಾತಿನಂತೆ ಗೃಹಲಕ್ಷ್ಮಿ, ಗೃಹಜ್ಯೋತಿ, ಅನ್ನಭಾಗ್ಯ, ಶಕ್ತಿ, ಯುವನಿಧಿ ಯೋಜನೆಗಳನ್ನು ಜಾರಿ ಮಾಡಿದ್ದೇವೆ. ಅಧಿಕಾರಕ್ಕೆ ಬಂದ ಐದಾರು ತಿಂಗಳಲ್ಲಿ ಈ ರೀತಿ ಯೋಜನೆಗಳನ್ನು ಜಾರಿ ಮಾಡಿರುವ ಸರ್ಕಾರ ಯಾವುದಾದರೂ ಇದ್ದರೆ ಅದು ಕರ್ನಾಟಕದ ಕಾಂಗ್ರೆಸ್ ಸರ್ಕಾರ ಮಾತ್ರ.

ರಾಮಲಿಂಗಾರೆಡ್ಡಿ ಅವರು ಈ ಜಿಲ್ಲೆಯ ಉಸ್ತುವಾರಿ ಸಚಿವರಾಗಿದ್ದಾರೆ. ಅವರು ಕೂಡ ತಮ್ಮ ಸಾಕ್ಷಿ ಗುಡ್ಡೆ ಬಿಟ್ಟುಹೋಗಲು ರಾಮನಗರಕ್ಕೆ 100 ನೂತನ ಅಶ್ವಮೇಧ ಬಸ್ ಗಳನ್ನು ಮಂಜೂರಾತಿ ಮಾಡಿದ್ದಾರೆ. ಇಂದು 25 ಬಸ್ ಗಳನ್ನು ಉದ್ಘಾಟನೆ ಮಾಡಲಾಗಿದ್ದು, ಮುಂದಿನ ದಿನಗಳಲ್ಲಿ ಉಳಿದ ಬಸ್ ಗಳನ್ನು ವ್ಯವಸ್ಥೆ ಮಾಡಲಾಗುವುದು. ಬೇರೆ ಬಸ್ ಗಳಿಗಿಂತ ಈ ಬಸ್ ಸ್ವಲ್ಪ ಎತ್ತರವಾಗಿದೆ. ಎಲ್ಲಾ ಪ್ರಯಾಣಿಕರಿಗೆ ಅನುಕೂಲವಾಗಲು ಅನೇಕ ವ್ಯವಸ್ಥೆ ಕಲ್ಪಿಸಲಾಗಿದೆ. ಇಡೀ ದೇಶದಲ್ಲಿ ನಮ್ಮ ರಾಜ್ಯದ ಸಾರಿಗೆ ವ್ಯವಸ್ಥೆ ಮಾದರಿಯಾಗಿದೆ ಎಂದರು.

ರಾಮಲಿಂಗಾ ರೆಡ್ಡಿ ಅವರು ಸಚಿವರಾಗಿ ಸಾರಿಗೆ ಇಲಾಖೆಯಲ್ಲಿ ಕ್ರಾಂತಿಕಾರಕ ಬದಲಾವಣೆ ತರುತ್ತಿದ್ದಾರೆ. ಸರ್ಕಾರದ ಪ್ರತಿನಿಧಿಯಾಗಿ, ಈ ಭಾಗದ ಶಾಸಕನಾಗಿ ಅವರಿಗೆ ತುಂಬು ಹೃದಯದ ಧನ್ಯವಾದ ಸಲ್ಲಿಸುತ್ತೇನೆ. ರಾಮಲಿಂಗಾ ರೆಡ್ಡಿ ಅವರ ಬಳಿ ಅತ್ಯುತ್ತಮ ಅಧಿಕಾರಿಗಳ ತಂಡವಿದೆ. ಅವರಿಗೂ ಅಭಿನಂದನೆ ಸಲ್ಲಿಸುತ್ತೇನೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ರಾಮನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ಇಕ್ಬಾಲ್ ಹುಸೇನ್, ಮಾಗಡಿ ವಿಧಾನಸಭಾ ಕ್ಷೇತ್ರದ ಶಾಸಕರು ಹಾಗೂ ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರಾದ ಎಚ್.ಸಿ. ಬಾಲಕೃಷ್ಣ, ರಾಮನಗರ ನಗರಸಭೆಯ ಅಧ್ಯಕ್ಷರಾದ ವಿಜಯಕುಮಾರಿ, ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.



# ಸಹಾಯಧನಕ್ಕೆ ಅರ್ಜಿ ಆಹ್ವಾನ

**ರಾಮನಗರ:** ಕೇಂದ್ರ ಪುರಸ್ಕೃತ ನೀಲಿಕ್ರಾಂತಿ ಯೋಜನೆಯಡಿ ಒಳನಾಡು ಪ್ರದೇಶದಲ್ಲಿ ಎಫ್.ಆರ್.ಪಿ ದೋಣಿಗಳ ಖರೀದಿಗೆ ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಈ ಯೋಜನೆಯಡಿ ಘಟಕ ವೆಚ್ಚ 1 ಲಕ್ಷಕ್ಕೆ ಸಾಮಾನ್ಯ ವರ್ಗಕ್ಕೆ ಶೇ. 40 ರಷ್ಟು ಮತ್ತು ಪರಿಶಿಷ್ಟ ಜಾತಿ/ಪಂಗಡ/ಮಹಿಳಾ ವರ್ಗಕ್ಕೆ ಶೇ. 60ರಷ್ಟು ಸಹಾಯಧನ ನೀಡಲಾಗುವುದು. ಸಂಬಂಧಿಸಿದ ತಾಲ್ಲೂಕು ಮಟ್ಟದ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿಗಳಿಂದ ಅರ್ಜಿ ಪಡೆದು ಎಲ್ಲಾ ಅಗತ್ಯ ದಾಖಲಾತಿಗಳೊಂದಿಗೆ ಫೆ. 23 ರೊಳಗೆ ಕಚೇರಿಯ ವೇಳೆಯಲ್ಲಿ ಸಂಬಂಧಪಟ್ಟ ತಾಲ್ಲೂಕು ಮಟ್ಟದ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಮೀನುಗಾರಿಕೆ ಉಪನಿರ್ದೇಶಕರು ಮೊ: 9448655014, ರಾಮನಗರ ಹಾಗೂ ಚನ್ನಪಟ್ಟಣ ಮೀನುಗಾರಿಕೆ ಸಹಾಯಕ ನಿರ್ದೇಶಕರು ಮೊ.ನಂ: 9880347733, ಮಾಗಡಿ ತಾಲ್ಲೂಕು ಮೀನುಗಾರಿಕೆ ಸಹಾಯಕ ನಿರ್ದೇಶಕರ ಮೊ:7795621180 ಹಾಗೂ ಕನಕಪುರ ತಾಲ್ಲೂಕು ಮೀನುಗಾರಿಕೆ ಸಹಾಯಕ ನಿರ್ದೇಶಕರ ಮೊ: 9449290091 ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಮೀನುಗಾರಿಕೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಾಹಿತ್ಯ ಕ್ಷೇತ್ರಕ್ಕೆ ಕಾಯಕರ ಕೊಡುಗೆ ಅನನ್ಯ: ರಾಜಶೇಖರ್

**ರಾಮನಗರ:** ಕನ್ನಡ ಭಾಷೆಯ ಸಾಹಿತ್ಯ ಕ್ಷೇತ್ರಕ್ಕೆ ಶರಣರ ಕೊಡುಗೆ ಅನನ್ಯ ಎಂದು ಉಪನ್ಯಾಸಕ ವಿ.ಎಚ್. ರಾಜಶೇಖರ್ ಅವರು ಅಭಿಪ್ರಾಯಪಟ್ಟರು.

ಶನಿವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖಾ ವತಿಯಿಂದ ಏರ್ಪಡಿಸಿದ್ದ ಕಾಯಕ ಶರಣುರುಗಳ ಜಯಂತಿಯಲ್ಲಿ ಉಪನ್ಯಾಸ ನೀಡಿದರು.

ಸಮಾಜದ ಎಲ್ಲಾ ವರ್ಗಗಳ ಜನರು ಅರ್ಥ ಮಾಡಿಕೊಳ್ಳುವ ಭಾಷೆ ಯಾವುದಾದರು ಇದ್ದರೆ ಅದು ಕನ್ನಡ ಜನರನ್ನು ಮುಖ್ಯವಾಹಿನಿಗೆ ತರಲು ಕಾಯಕ ಶರಣರ ಪ್ರಯತ್ನ ಅವಿಸ್ಮರಣೀಯ, ಅಂದು ಮಠ, ದೇವಾಲಯ, ರಾಜರ ಆಸ್ಥಾನಗಳಲ್ಲಿ ಸಾಹಿತ್ಯ ವಿರಾಜಮಾನವಾಗಿತ್ತು ಎಂದರು.

ಡೋಹರ ಕಕ್ಕಯ್ಯ: ಮಾಳವ ದೇಶದಿಂದ ಬಂದು ಬಸವಣ್ಣನವರ ಕಲ್ಯಾಣದಲ್ಲಿ ನೆಲೆಸುತ್ತಾರೆ. ಶರಣರ ಸಂಘದಲ್ಲಿ ಮಿಂದು ಧನ್ಯನಾಗುತ್ತಾರೆ. ಬಸವಣ್ಣನವರ ಅನೇಕ ವಚನಗಳಲ್ಲಿ ಡೋಹರ ಕಕ್ಕಯ್ಯನವರನ್ನು ಸ್ಮರಿಸಿದ್ದಾರೆ. ಮಾದಾರ ಚನ್ನಯ್ಯ: ಮೂಲಹ ತಮಿಳುನಾಡಿನವರಾದ ಇವರು ತಮಿಳುನಾಡಿನ ಕರಿಕಾಲ ಚೋಳನ ಲಾಯದ ಕುದುರೆಗಳಿಗೆ ಹುಲ್ಲು ಹಾಕುವ ಕಾಯಕ ಮಾಡುತ್ತಿದ್ದರು. ಶಿವನೇ ಬಂದು ಈತನ ಮನೆ ಬಾಗಿಲಿಗೆ ಹಂಬಲಿಯನ್ನು ಸ್ವೀಕರಿಸುತ್ತಿದ್ದ ಎಂಬ ಪೌರಾಣಿಕ ಹಿನ್ನಲೆಯಿದ್ದು, ಈ ವಿಷಯ ತಿಳಿದ ಕರಿಕಾಲ ಚೋಳನು ಸಹ ಹಂಬಲಿಯನ್ನು ಸ್ವೀಕರಿಸಿ ನಾನು ಕೃತಾರ್ಥನಾದೆ ಎನ್ನುತ್ತಾನೆ. ಉರಿಲಿಂಗ ಪೆದ್ದಿ: ಉರಿಲಿಂಗ ದೇವರ ಶಿಷ್ಯನಾದ ಈತನು ಮಹಾರಾಷ್ಟ್ರದ ಗೋದಾವರಿ ನದಿ ತೀರದವರು. ಈತನ ಮೂಲ ಆಂಧ್ರಪ್ರದೇಶ. ಜೀವನ ನಿರ್ವಹಣೆಗಾಗಿ ಕಳ್ಳತನ ಮಾಡುತ್ತಿದ್ದ. ನಂತರ ಕಳ್ಳತನವನ್ನು ತ್ಯಜಿಸಿ ಉರಿಲಿಂಗ ದೇವರ ಶಿಷ್ಯನಾಗುತ್ತಾನೆ.

ಮಾದಾರ ಧೂಳಯ್ಯ: ಕಲ್ಯಾಣದಲ್ಲಿ ಪಾದರಕ್ಷೆ ಸಿದ್ಧಪಡಿಸುವ ಕಾಯಕವನ್ನು ಮಾಡುತ್ತಿದ್ದು, ಶಿವನೇ ಈತನ ಮನೆ ಬಾಗಿಲಿಗೆ ಬಂದರೂ ಸಹ ತನ್ನ ಕಾಯಕದಲ್ಲಿ ತೊಡಗಿದ್ದನು. ಈತನ ಬಚ್ಚಲ ಮನೆ ನೀರಿನಿಂದ ವಿಪ್ರನೊಬ್ಬನ ತೊನ್ನು ಕಾಯಿಲೆ ಹೋಯಿತು. ಸಾಮಗಾರ ಹರಳಯ್ಯ: ಸುಮಾರು 900 ವರ್ಷಗಳ ಹಿಂದೆಯೇ ಅಂದರೆ 12ನೇ ಶತಮಾನದಲ್ಲಿ ಅಂತರ್ಜಾತಿ ವಿವಾಹ ಮಾಡಿಸಿದವರು. ಪಾದರಕ್ಷೆ ಸಿದ್ಧಪಡಿಸುವುದು ಇವರ ಕಾಯಕ. ಗುರುಲಿಂಗ ಜಂಗಮರ ಸೇವೆ ಮಾಡುವುದು ಇವರಿಗೆ ಇಷ್ಟವಾದದ್ದು, ಒಮ್ಮೆ ಬಸವಣ್ಣನವರು ಎದುರು ಬಂದಾಗ ಇವರು ಶರಣಾರ್ಥಿ ಎಂದರೆ ಬಸವಣ್ಣನವರು ಶರಣು ಶರಣಾರ್ಥಿ ಎಂದರು. ಇದರಿಂದ ಮನನೊಂದ ದಂಪತಿಗಳು ತಮ್ಮ ತೊಡೆಯ ಚರ್ಮವನ್ನು ತೆಗೆದು ಪಾದರಕ್ಷೆ ಮಾಡಿ ಬಸವಣ್ಣನವರಿಗೆ ಸಲ್ಲಿಸುತ್ತಾರೆ. ಆದರೆ ಬಸವಣ್ಣನವರು ಅದನ್ನು ಸ್ವೀಕರಿಸುವುದಿಲ್ಲ ಎಂದು ಉಪನ್ಯಾಸದಲ್ಲಿ ತಿಳಿಸಿದರು.

ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ರಮೇಶ್ ಬಾಬು, ಆರೋಗ್ಯ ಇಲಾಖೆಯ ಡಿಎಚ್ಇಒ ಗಂಗಾಧರ್, ವಿವಿಧ ಸಂಘಟನೆಯ ಮುಖಂಡರುಗಳಾದ ಚೆಲುವರಾಜು, ಗುಡ್ಡೆ ವೆಂಕಟೇಶ್, ಕನಕಪುರ ಗುರು, ಕಿರಣ್, ರಾಮಕೃಷ್ಣಯ್ಯ, ಜಯಸಿಂಹ, ಪುಟ್ಟಣ್ಣ, ಹೊನ್ನಗಾನಹಳ್ಳಿ ಸಿದ್ದರಾಜು, ರಮೇಶ್, ಹರೀಶ್ ಬಾಲು, ವೆಂಕಟೇಶ್, ಶ್ರೀನಿವಾಸ್ ಹಾಗೂ ಇತರರು ಉಪಸ್ಥಿತರಿದ್ದರು.

## ಪೊಲೀಸ್ ನೇಮಕಾತಿ ಲಿಖಿತ ಪರೀಕ್ಷೆ: ವಸ್ತ್ರಸಂಹಿತೆ ಪಾಲಿಸಿ

**ರಾಮನಗರ:** ರಾಜ್ಯ ಪೊಲೀಸ್ ಇಲಾಖೆಯಲ್ಲಿ ಖಾಲಿ ಇರುವ ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್) (ಪುರುಷ ಮತ್ತು ಮಹಿಳಾ) ಹಾಗೂ (ತೃತೀಯ ಲಿಂಗ ಪುರುಷ ಮತ್ತು ಮಹಿಳಾ) ಸೇವಾ ನಿರತ ಮತ್ತು ಬ್ಯಾಕ್‌ಲಾಗ್-1,137 ಹುದ್ದೆಗಳಿಗೆ ಲಿಖಿತ ಪರೀಕ್ಷೆ ಇದೇ ಫೆ.25ರ ಭಾನುವಾರ ಬೆಳಿಗ್ಗೆ 11 ರಿಂದ 12.30 ರವರೆಗೆ ರಾಜ್ಯಾದ್ಯಂತ ನಡೆಯಲಿದೆ. ಅಖಿತ ಪರೀಕ್ಷೆಗೆ ಅರ್ಹರಿರುವ ಅಭ್ಯರ್ಥಿಗಳಿಗೆ ಕರೆಪತ್ರದ ಬಗ್ಗೆ ಮುಂಬರುವ ದಿನಗಳಲ್ಲಿ ಎಸ್.ಎಂ.ಎಸ್ ಮೂಲಕ ಮಾಹಿತಿ ನೀಡಲಾಗುವುದು ಹಾಗೂ ಕರೆ ಪತ್ರದ ಅಂಕ್ ಅನ್ನು ಸಹ ಕಳುಹಿಸಲಾಗುವುದು. ಅಭ್ಯರ್ಥಿಗಳು ಕರೆಪತ್ರವನ್ನು ಡೌನ್‌ಲೋಡ್ ಮಾಡಿಕೊಂಡು ನಿಗಧಿಪಡಿಸಿದ ದಿನಾಂಕದಂದು ಲಿಖಿತ ಪರೀಕ್ಷೆಗೆ ಹಾಜರಾಗಬೇಕು ಹಾಗೂ ಲಿಖಿತ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳು ಕಡ್ಡಾಯವಾಗಿ ವಸ್ತ್ರಸಂಹಿತೆಯನ್ನು ಪಾಲಿಸಬೇಕಿರುತ್ತದೆ. ಪರುಷ ಮತ್ತು ತೃತೀಯಲಿಂಗ ಪುರುಷ ಅಭ್ಯರ್ಥಿಗಳ ವಸ್ತ್ರಸಂಹಿತೆ: ಪುರುಷ ಮತ್ತು ತೃತೀಯಲಿಂಗ ಪುರುಷ ಅಭ್ಯರ್ಥಿಗಳು ಅರ್ಧ ತೋಳಿನ ಶರ್ಟ್ಗಳನ್ನು ಕಡ್ಡಾಯವಾಗಿ ಧರಿಸುವುದು ಹಾಗೂ ಸಾಧ್ಯವಾದಷ್ಟು ಕಾಲರ್ ರಹಿತ ಶರ್ಟ್ಗಳನ್ನು ಧರಿಸುವುದು, ಜಿಪ್ ಪ್ಯಾಕೆಟ್‌ಗಳು, ದೊಡ್ಡ ಬಟನ್‌ಗಳು ಇರುವ ಶರ್ಟ್ಗಳನ್ನು ಹಾಗೂ ಜೀನ್ಸ್ ಪ್ಯಾಂಟ್ ಮತ್ತು ಹೆಚ್ಚಿನ ಜೇಬುಗಳಿರುವ ಪ್ಯಾಂಟ್‌ಗಳನ್ನು ಧರಿಸುವಂತಿಲ್ಲ. ಪರೀಕ್ಷಾ ಕೇಂದ್ರದೊಳಗೆ ಷೂಗಳನ್ನು ನಿಷೇಧಿಸಲಾಗಿದ್ದು, ಅಭ್ಯರ್ಥಿಗಳು ತೆಳುವಾದ ಅಡಿಭಾಗವಿರುವ ಪಾದರಕ್ಷೆಗಳನ್ನು (ಚಪ್ಪಲಿ) ಧರಿಸುವುದು. ಕುತ್ತಿಗೆ ಸುತ್ತಾ ಯಾವುದೇ ಲೋಹದ ಆಭರಣಗಳು ಅಥವಾ ಉಂಗುರ ಮತ್ತು ಕಡಗಳನ್ನು ಧರಿಸುವುದು ನಿಷೇಧಿಸಲಾಗಿದೆ. ಮಹಿಳಾ ಮತ್ತು ತೃತೀಯಲಿಂಗ ಮಹಿಳಾ ಅಭ್ಯರ್ಥಿಗಳ ವಸ್ತ್ರ ಸಂಹಿತೆ: ಮಹಿಳಾ ಮತ್ತು ತೃತೀಯಲಿಂಗ ಮಹಿಳಾ ಅಭ್ಯಥಿಗಳು ವಿಸ್ತಾರವಾದ ಕಸೂತಿ, ಹೂಗಳು. ಬ್ರೂಚ್‌ಗಳು ಅಥವಾ ಬಟನ್ ಗಳು ಹೊಂದಿರುವ ಬಟ್ಟೆಗಳನ್ನು ಧರಿಸುವುದು ನಿಷೇಧಿಸಲಾಗಿದೆ. ಪರೀಕ್ಷೆಯ ದಿನದಂದು ಪೂರ್ಣ ತೋಳಿನ ಬಟ್ಟೆಗಳನ್ನು / ಜೀನ್ಸ್ ಪ್ಯಾಂಟ್ ಧರಿಸಬಾರದು. ಅದರ ಬದಲಾಗಿ ಅರ್ಧ ತೋಳಿನ ಬಟ್ಟೆಗಳನ್ನು ಅವರಿಗೆ ಮುಜುಗರವಾಗದಂತೆ ಅಭ್ಯರ್ಥಿಗಳು ಧರಿಸುವಂತೆ ನಿರ್ದೇಶಿಸಲಾಗಿದೆ. ಎತ್ತರವಾದ ಹಿಮ್ಮಡಿಯ ಶೂಗಳನ್ನು/ಚಪ್ಪಲಿಗಳನ್ನು ಮತ್ತು ದಪ್ಪವಾದ ಅಡಿ ಭಾಗ ಹೊಂದಿರುವ ಶೂಗಳನ್ನಾಗಲಿ/ಚಪ್ಪಲಿಗಳನ್ನಾಗಲಿ ಧರಿಸಬಾರದು. ತೆಳುವಾದ ಅಡಿಭಾಗ ಹೊಂದಿರುವ ಚಪ್ಪಲಿಗಳು ಧರಿಸುವುದು ಕಡ್ಡಾಯವಾಗಿದೆ. ಮಹಿಳಾ ಮತ್ತು ತೃತೀಯಲಿಂಗ ಮಹಿಳಾ ಅಭ್ಯರ್ಥಿಗಳು ಯಾವುದೇ ರೀತಿಯ ಲೋಹದ ಆಭರಣಗಳನ್ನು (ಮಂಗಳಸೂತ್ರ ಮತ್ತು ಕಾಲುಂಗುರ ಹೊರತುಪಡಿಸಿ) ಧರಿಸುವುದು ನಿಷೇಧಿಸಿದೆ ಎಂದು ರಾಮನಗರ ಜಿಲ್ಲೆಯ ಪೊಲೀಸ್ ಅಧೀಕ್ಷಕರು ಹಾಗೂ ನೇಮಕಾತಿ ಸಮಿತಿ ಅಧ್ಯಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೆಂಬಲ ಬೆಲೆಯಲ್ಲಿ ರಾಗಿ-ಭತ್ತ ಖರೀದಿ: ಡಾ.ಅವಿನಾಶ್ ಮೆನನ್ ರಾಜೇಂದ್ರನ್

**ರಾಮನಗರ:** ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ (ಎಂ.ಎಸ್.ಪಿ) ರೈತರಿಂದ ರಾಗಿ ಹಾಗೂ ಭತ್ತ ಖರೀದಿಸಲು ಈಗಾಗಲೇ ರೈತರಿಂದ ನೋಂದಣಿಯನ್ನು ಪ್ರಾರಂಭಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ. ಅವಿನಾಶ್ ಮೆನನ್ ರಾಜೇಂದ್ರನ್ ಅವರು ತಿಳಿಸಿದರು. ಸೋಮವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ರೈತರು ರಾಗಿ ಹಾಗೂ ಭತ್ತವನ್ನು ಮಧ್ಯವರ್ತಿಗಳಿಗೆ ಮಾರಾಟ ಮಾಡದೇ ನೇರವಾಗಿ ಸರ್ಕಾರ ಗುರುತುಪಡಿಸಿರುವ ಕೇಂದ್ರಗಳಲ್ಲಿ ಮಾರಾಟ ಮಾಡಬೇಕು ಹಾಗೂ ರೈತರಿಂದ ರಾಗಿ ಹಾಗೂ ಭತ್ತ ಖರೀದಿಸಲು 4 ತಾಲ್ಲೂಕುಗಳಲ್ಲಿ ಈಗಾಗಲೇ ಖರೀದಿ ಕೇಂದ್ರ ತೆರೆಯಲಾಗಿದೆ. ಖರೀದಿಗೆ ಅನುಕೂಲವಾಗುವಂತೆ ರೈತ ಸಂಪರ್ಕ ಕೇಂದ್ರಗಳನ್ನು ತೆರೆಯಲಾಗಿದೆ. ರೈತ ಸಂಪರ್ಕ ಕೇಂದ್ರಗಳಲ್ಲಿ ಆರ್.ಟಿ.ಸಿ ಹಾಗೂ ಬೆಳೆಯ ಮಾಹಿತಿಯೊಂದಿಗೆ ರೈತರು ನೋಂದಾಯಿಸಿಕೊಳ್ಳುವಂತೆ ಹಾಗೂ ಆರ್.ಟಿ.ಸಿಯಲ್ಲಿ ರಾಗಿ ಹಾಗೂ ಭತ್ತ ನಮೂದಾಗಿರುವ ಬಗ್ಗೆ ಖಾತರಿಪಡಿಸಿಕೊಳ್ಳುವಂತೆ ತಿಳಿಸಿದರು. ರೈತರಿಂದ ರಾಗಿ ಹಾಗೂ ಭತ್ತ ಖರೀದಿಸುವ ಸಂದರ್ಭದಲ್ಲಿ ರೈತರಿಗೆ ಯಾವುದೇ ತೊಂದರೆಯಾಗದಂತೆ ಕ್ರಮವಹಿಸಬೇಕು. ರೈತರು ರಾಗಿ ಹಾಗೂ ಭತ್ತ ಮಾರಾಟ ಮಾಡಲು ಯಾವುದೇ ಮಧ್ಯವರ್ತಿಗಳ ಸಹಾಯ ಪಡೆಯದೇ ರೈತ ಸಂಪರ್ಕ ಕೇಂದ್ರದಲ್ಲೇ ನೋಂದಣಿ ಮಾಡಿಕೊಂಡು, ರಾಗಿ ಹಾಗೂ ಭತ್ತ ಮಾರಾಟ ಮಾಡುವಂತೆ ತಿಳಿಸಿದರು. ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರಾದ ರಮ್ಯ, ಕೆ.ಎಫ್.ಸಿಎಸ್.ಸಿ ಜಿಲ್ಲಾ ವ್ಯವಸ್ಥಾಪಕರು, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಕಾರ್ಯದರ್ಶಿಗಳು ಉಪಸ್ಥಿತರಿದ್ದರು.

## ಅರ್ಜಿ ಆಹ್ವಾನ

**ರಾಮನಗರ:** ಇಲ್ಲಿನ ನಗರಸಭೆ ವತಿಯಿಂದ ಡೇ-ನಲ್ಮ್ ಅಭಿಯಾನ ಮತ್ತು ಪಿ.ಎಂ. ಸ್ವಾನಿಧಿ ಯೋಜನೆಯಡಿ ಇಂಟರ್ನ್ಶಿಪ್ ಪ್ರೋಗ್ರಾಂ (ಟಿಯುಎಲ್ಐಪಿ) ತರಬೇತಿಗಾಗಿ ಪದವಿ, ಸ್ನಾತಕೋತ್ತರ ಪದವಿ ಹಾಗೂ ಡಿಪ್ಲೊಮೊ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಆಸಕ್ತ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಪದವಿ, ಸ್ನಾತಕೋತ್ತರ ಪದವಿ ಹಾಗೂ ಡಿಪ್ಲೊಮೊ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಆಸಕ್ತಿಯುಳ್ಳ ಅಭ್ಯರ್ಥಿಗಳು ತಮ್ಮ ಶೈಕ್ಷಣಿಕ ದಾಖಲೆಗಳೊಂದಿಗೆ ಫೆ. 15ರ ಸಂಜೆ 5 ಗಂಟೆಯೊಳಗೆ ಇಂಟರ್ನ್ಶಿಪ್ ತರಬೇತಿಗಾಗಿ ಅರ್ಜಿಯನ್ನು ರಾಮನಗರ ನಗರಸಭೆಯ ಡೇ-ನಲ್ಮ್ ಶಾಖೆಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗೆ ರಾಮನಗರ ನಗರಸಭೆಯ ಡೇ-ನಲ್ಮ್ ಶಾಖೆಯನ್ನು ಸಂಪರ್ಕಿಸುವಂತೆ ರಾಮನಗರ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ‘ಎಸ್‌ಐಬಿ ಇಗ್ನೈಟ್ ಕ್ವಿಜಥಾನ್’ ಸ್ಪರ್ಧೆಯ ವಿಜೇತರ ಹೆಸರು ಪ್ರಕಟಿಸಿದ ಸೌತ್ ಇಂಡಿಯನ್ ಬ್ಯಾಂಕ್

**ಬೆಂಗಳೂರು:** ಭಾರತದಲ್ಲಿ ಖಾಸಗಿ ಕ್ಷೇತ್ರದ ಬ್ಯಾಂಕ್ ಆದ ಸೌತ್ ಇಂಡಿಯನ್ ಬ್ಯಾಂಕ್ ಈಗ ಬೆಂಗಳೂರಿನ ಸೇಂಟ್ ಜೋಸೆಫ್ಸ್ ಯುನಿವರ್ಸಿಟಿಯಲ್ಲಿ ನಡೆದ ರಾಷ್ಟ್ರಮಟ್ಟದ ರಸ ಪ್ರಶ್ನೆ ಸ್ಪರ್ಧೆ-‘ಎಸ್ ಐಬಿ ಇಗ್ನೈಟ್ ಕ್ವಿಜಥಾನ್’ನ ಅಂತಿಮವಿಜೇತರಹೆಸರುಗಳನ್ನುಪ್ರಕಟಿಸಿದೆ.

ಟೀಮ್ ಕ್ಯೂರಿಯಸ್ ಡಾಕ್ಸ್(ಗೌಹಾಟಿ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆ) ತಂಡ ಅಸಾಧಾರಣ ಜ್ಞಾನ ಮತ್ತು ಚುರುಕುತನ ಪ್ರದರ್ಶಿಸಿ, ಪ್ರತಿಷ್ಠಿತ ರಾಷ್ಟ್ರೀಯ ಚಾಂಪಿಯನ್ ಪ್ರಶಸ್ತಿಯನ್ನು ಗೆದ್ದುಕೊಂಡಿದೆ. ಈ ತಂಡಕ್ಕೆ 1,50,000/- ರೂ.ಗಳ ಬಹುಮಾನ ನೀಡಲಾಗಿದೆ. ಟೀಮ್ ನಿಯಾಂಡರ್‌ಥಲ್ಸ್(ಎಲ್‌ಎನ್‌ಎಂಐಐಟಿ ಜೈಪುರ್) ತಂಡ 2ನೇ ಸ್ಥಾನ ಪಡೆದು, 1,00,000 ರೂ. ಮತ್ತು ಮೂರನೇ ಸ್ಥಾನ ಪಡೆದ ಟೀಮ್ ಕ್ಯೂಜ್ಜರ್ಸ್(ಕ್ರೈಸ್ಟ್ ಯುನಿವರ್ಸಿಟಿ) ತಂಡ 60,000 ರೂ. ಬಹುಮಾನ ಧನ ಪಡೆದಿವೆ.

ಸೌತ್ ಇಂಡಿಯನ್ ಬ್ಯಾಂಕ್‌ನ ಮುಖ್ಯ ವ್ಯವಹಾರ ಅಧಿಕಾರಿ ಮತ್ತು ಕಾರ್ಯನಿರ್ವಾಹಕ ಉಪಾಧ್ಯಕ್ಷರಾದಥಾಮಸ್ ಜೋಸೆಫ್ ಕೆ. ಅವರು ಪರಿಚಯ ಭಾಷಣ ಮಾಡುವುದರೊಂದಿಗೆ ಸೇಂಟ್ ಜೋಸೆಫ್ಸ್ ವಿಶ್ವವಿದ್ಯಾಲಯದಲ್ಲಿ ಅಂತಿಮ ಸ್ಪರ್ಧೆ ಆರಂಭವಾಗಿತ್ತು. ಕರ್ನಾಟಕ ಆಹಾರ ಮತ್ತು ನಾಗರಿಕ ಪೂರೈಕೆ ನಿಗಮದ ವ್ಯವಸ್ಥಾಪಕ ನಿರ್ದೇಶಕರಾದ ಜ್ಞಾನೇಂದ್ರ ಕುಮಾರ್ ಗಂಗ್ವಾರ್‌ಐಎಎಸ್ ಅವರು ಒಳನೋಟ ಪೂರ್ಣ ಪ್ರಾಸ್ತಾವಿಕ ಭಾಷಣ ಮಾಡಿದರು. ನಂತರ ಸೇಂಟ್ ಜೋಸೆಫ್ಸ್ ವಿಶ್ವವಿದ್ಯಾಲಯದ ಕುಲಪತಿಗಳಾದ ರೆವೆರೆಂಡ್ ಡಾಕ್ಟರ್ ಫಾದರ್ ವಿಕ್ಟರ್ ಲೋಬೊ ಎಸ್‌ಜೆ ಅವರು ವಿಶೇಷ ಭಾಷಣ ಮಾಡಿದರು. ಈ ಸಂದರ್ಭದಲ್ಲಿ ಹಾಜರಿದ್ದ ಇತರ ಗಣ್ಯರಲ್ಲಿ ಸೌತ್ ಇಂಡಿಯನ್ ಬ್ಯಾಂಕ್‌ನ ಎಸ್‌ಜಿಎಂ ಮತ್ತು ಸಿಐಒ ಆದ ಸೋನಿ ಎ., ಸೌತ್ ಇಂಡಿಯನ್ ಬ್ಯಾಂಕ್‌ನ ಮುಖ್ಯ ಮಾರುಕಟ್ಟೆ ಅಧಿಕಾರಿ ಮತ್ತು ಜಂಟಿ ಪ್ರಧಾನ ವ್ಯವಸ್ಥಾಪಕರಾದ ಅಜ್ಮತ್ ಹಬಿಬುಲ್ಲಾ ಮತ್ತು ಸೌತ್ ಇಂಡಿಯನ್ ಬ್ಯಾಂಕ್‌ನ ಬೆಂಗಳೂರಿನ ಪ್ರಾದೇಶಿಕ ಮುಖ್ಯಸ್ಥರಾದ ರೇಖಾ ವಿ.ಆರ್. ಅವರು ಸೇರಿದ್ದರು. ಸೌತ್ ಇಂಡಿಯನ್ ಬ್ಯಾಂಕ್‌ನ ಮುಖ್ಯ ವ್ಯವಹಾರ ಅಧಿಕಾರಿ ಮತ್ತು ಕಾರ್ಯನಿರ್ವಾಹಕ ಉಪಾಧ್ಯಕ್ಷರಾದ ಥಾಮಸ್ ಜೋಸೆಫ್ ಕೆ. ಅವರು ಮಾತನಾಡಿ, ‘‘ಯುವಜನರಲ್ಲಿ ಜ್ಞಾನ ಮತ್ತು ಬೌದ್ಧಿಕ ಕುತೂಹಲಗಳನ್ನು ಪೋಷಿಸುವಲ್ಲಿ ಸೌತ್ ಇಂಡಿಯನ್ ಬ್ಯಾಂಕ್‌ನ ಅಚಲ ಬದ್ಧತೆಗೆ ಎಸ್‌ಐಬಿ ಇಗ್ನೈಟ್ ಕ್ವಿಜಥಾನ್ ಸ್ಪರ್ಧೆ ಒಂದು ಸಾಕ್ಷಿಯಾಗಿದೆ.ಭಾಗವಹಿಸುವವರ ಗ್ರಹಿಕಾ ಸಾಮರ್ಥ್ಯಗಳನ್ನು ಪರೀಕ್ಷಿಸಿ ಹಲವಾರು ವೈವಿಧ್ಯಪೂರ್ಣ ವಿಷಯಗಳನ್ನು ಅವರು ತಿಳಿದುಕೊಳ್ಳುವುದಕ್ಕೆ ಪ್ರೋತ್ಸಾಹ ನೀಡುವ ವೇದಿಕೆ ಈ ಸ್ಪರ್ಧೆಯಾಗಿದೆ. ಈ ಕಾರ್ಯಕ್ರಮದ ಸಂದರ್ಭದಲ್ಲಿ ಕಂಡುಬಂದ ಅಸಾಧಾರಣ ಪ್ರದರ್ಶನಗಳು ನಮ್ಮ ದೇಶದ ಯುವಜನರಲ್ಲಿ ಸಮೃದ್ಧವಾಗಿರುವ ಪ್ರತಿಭೆಯ ಆಳವನ್ನು ನಿರೂಪಿಸಿವೆ.ಯುವಜನರೊಂದಿಗೆ ತೊಡಗಿಸಿಕೊಳ್ಳಲು ಸೌತ್ ಇಂಡಿಯನ್ ಬ್ಯಾಂಕ್‌ಬದ್ಧವಾಗಿದೆಯಲ್ಲದೆ, ಎಸ್‌ಐಬಿ ಇಗ್ನೈಟ್ ಕ್ವಿಜಥಾನ್ ಮೂಲಕ ಈ ಬದ್ಧತೆಯನ್ನು ಪುನರ್ ದೃಢೀಕರಿಸುತ್ತದೆ. ಯುವ ಮನಸ್ಸುಗಳನ್ನು ಪೋಷಿಸುವ ನಿಟ್ಟಿನಲ್ಲಿ ಈ ಉಪಕ್ರಮ ಯೋಜನಾತ್ಮಕ ಹೆಜ್ಜೆಯಾಗಿರುವುದಲ್ಲದೆ, ನಾಳಿನ ಚಟುವಟಿಕೆಯ ಪೀಳಿಗೆಯೊಂದಿಗೆ ಸದಾ ಉಳಿಯುವಂತಹ ಸಂಪರ್ಕ ಸ್ಥಾಪಿಸಲು ನೆರವಾಗುತ್ತದೆ’’ ಎಂದರು. ರಾಷ್ಟ್ರವ್ಯಾಪಿ ಕಾಲೇಜು ವಿದ್ಯಾರ್ಥಿಗಳನ್ನು ಸೆಳೆಯಲು ಮತ್ತು ಅವರಿಗೆ ಸ್ಫೂರ್ತಿ ನೀಡುವ ಗುರಿಯನ್ನು ಎಸ್‌ಐಬಿ ಇಗ್ನೈಟ್ ಸ್ಪರ್ಧೆಯು ಹೊಂದಿರುತ್ತದೆ. ಜೊತೆಗೆ ವಿವಿಧ ವಿಷಯಗಳನ್ನು ಕುರಿತಂತೆ ಅವರ ಅರಿವನ್ನು ಸಮೃದ್ಧಿಗೊಳಿಸಲು ಹಾಗೂ ಈ ಕುರಿತು ಸಾಮಾನ್ಯ ಜ್ಞಾನವನ್ನು ಪ್ರದರ್ಶಿಸಲು ಅವರಿಗೆ ಇದು ವೇದಿಕೆ ಪೂರೈಸುತ್ತದೆ. ಈ ಸ್ಪರ್ಧೆ ಮೂರು ಸುತ್ತುಗಳನ್ನು ಒಳಗೊಂಡಿರುತ್ತದೆ. ಆರಂಭದಲ್ಲಿ ಪ್ರಾಥಮಿಕ ಅರ್ಹತಾ ಸುತ್ತಿನ ಸ್ಪರ್ಧೆಗಳನ್ನು ದೇಶದ ಎಲ್ಲೆಡೆ ಆನ್‌ಲೈನ್‌ನಲ್ಲಿ ತಂಡಗಳಿಗಾಗಿ ನಡೆಸಲಾಗುತ್ತದೆ. ಪ್ರಾಥಮಿಕ ಸುತ್ತಿನ ವಿಜೇತರು ಪ್ರಾದೇಶಿಕ ಸುತ್ತುಗಳಿಗೆ ಆಯ್ಕೆಯಾಗುತ್ತಾರೆ. ಆನಂತರ ಅಲ್ಲಿನ ವಿಜೇತರು ಪ್ರತಿಷ್ಠಿತ ರಾಷ್ಟ್ರೀಯ ಚಾಂಪಿಯನ್ ಪ್ರಶಸ್ತಿಗಾಗಿ ನಡೆಯುವ ಅಂತಿಮ ಸ್ಪರ್ಧೆಯಾದ ಗ್ರ್ಯಾಂಡ್ ಫೈನಲ್‌ಗೆ ಆಯ್ಕೆಯಾಗುತ್ತಾರೆ. ಈ ಸ್ಪರ್ಧೆಯ ಫೈನಲಿಸ್ಟ್‌ಗಳಲ್ಲಿ ಟೀಮ್ ಮಾರ್ಕ್ ಮೆನ್(ಐಐಎಂ ಅಹ್ಮದಾಬಾದ್), ಟೀಮ್ ಕ್ಯೂಜ್ಜರ್ಸ್ (ಕ್ರೈಸ್ ಯುನಿವರ್ಸಿಟಿ), ಟೀಮ್ ನಿಯಾಂಡರ್‌ಥಲ್ಸ್ (ಎಲ್‌ಎನ್‌ಎಂಐಐಟಿ ಜೈಪುರ್), ಟೀಮ್ ಕ್ಯೂರಿಯಸ್ ಡಾಕ್ಸ್ (ಗುವಾಹಟಿ ವೈದ್ಯಕೀಯ ಕಾಲೇಜ್ ಮತ್ತು ಆಸ್ಪತ್ರೆ). ಟೀಮ್ ಟ್ಯೂರಿಂಗ್(ಆರ್‌ಟಿಎಂ ನಾಗ್ಪುರ್ ಯುನಿವರ್ಸಿಟಿ), ಟೀಮ್ ಬ್ಯಾಟ್ಮನ್ ಎಂಡ್ ರಾಬಿನ್ (ಐಐಟಿ ಪಾಲಕ್ಕಾಡ್), ಟೀಮ್ ಕೀನೇಷಿಯನ್ಸ್ (ಸೇಂಟ್ ಬರ್ಕ್‌ಮನ್ಸ್ ಕಾಲೇಜ್ ಚಂಗನಾಸೇರಿ) ಮತ್ತು ಟೀಮ್ ಆರ್‌ಎಂ ಗರ್ಲ್ಸ್ (ಪೋಪ್ ಜಾನ್ ಪಾಲ್ II ಕಾಲೇಜ್ ಆಫ್ ಎಜುಕೇಷನ್) ತಂಡಗಳೂ ಸೇರಿದ್ದವು.



# ಬರಪರಿಸ್ಥಿತಿಯಲ್ಲಿ ಜಾನುವಾರುಗಳಿಗೆ ಮೇವು ಒದಗಿಸಲು ಸಿದ್ಧತೆ

**ಚಿಕ್ಕಬಳ್ಳಾಪುರ:** ರೈತರ ಬೆನ್ನೆಲುಬಾಗಿರುವ ದನ ಕರುಗಳನ್ನು ಸಂರಕ್ಷಿಸಬೇಕು. ಪ್ರಸ್ತುತ ಜಿಲ್ಲೆಯಲ್ಲಿ ಬರಗಾಲ ಪರಿಸ್ಥಿತಿ ಎದುರಾಗಿದ್ದು, ಜಾನುವಾರುಗಳ ಮೇವಿನ ಸಮಸ್ಯೆಗೆ ರೈತರು ಒಳಗಾಗದಂತೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪ್ರಕಾಶ್ ಜಿ.ಟಿ. ನಿಟ್ಟಾಲಿ ರವರು ತಿಳಿಸಿದರು.

ಸೋಮವಾರ ಜಿಲ್ಲಾ ಪಂಚಾಯತ್ ನ ಡಾ|| ಹೆಚ್. ನರಸಿಂಹಯ್ಯ ಮಿನಿ ಸಭಾಂಗಣದಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿ ಮಾತನಾಡಿದರು. ಹಿಂದಿನ ಸಮೀಕ್ಷೆಯಂತೆ ಜಿಲ್ಲೆಯಲ್ಲಿ 2,40,212 ದನ ಮತ್ತು ಎಮ್ಮೆಗಳು ಹಾಗೂ 8,01,589 ಕುರಿ ಮತ್ತು ಮೇಕೆಗಳು ಒಟ್ಟು 10,41,804 ಮೇವು ಆಧಾರಿತ ಜಾನುವಾರುಗಳಿರುತ್ತವೆ. ದನ ಮತ್ತು ಎಮ್ಮೆಗಳಿಗೆ ದಿನಕ್ಕೆ 6 ಕೆ.ಜಿಯಂತೆ ಹಾಗೂ ಕುರಿ ಮತ್ತು ಮೇಕೆಗಳಿಗೆ 0.5 ಕೆ.ಜಿಯಂತೆ ಒಂದು ವಾರಕ್ಕೆ 12,895 ಮೆಟ್ರಿಕ್ ಟನ್ ಮೇವು ಬೇಕಾಗುತ್ತದೆ. ಪ್ರಸ್ತುತ ಜಿಲ್ಲೆಯಲ್ಲಿ 2,87,607 ಮೆಟ್ರಿಕ್ ಟನ್ ಮೇವು ಲಭ್ಯವಿದೆ. ಬರಪರಿಸ್ಥಿತಿ ಇನ್ನೂ ತೀವ್ರಗೊಂಡಲ್ಲಿ ಸರ್ಕಾರ ಹೊರಡಿಸುವ ಆದೇಶಗಳು ಹಾಗೂ ಮಾರ್ಗಸೂಚಿಗಳ ಪ್ರಕಾರ ಪ್ರತಿ ಹೋಬಳಿಗೆ ಒಂದರಂತೆ 26 ಮೇವಿನ ನಿಧಿಗಳನ್ನು ಪ್ರಾರಂಭಿಸಲು ಈಗಾಗಲೇ ಸ್ಥಳಗಳನ್ನು ಗುರುತಿಸಲಾಗಿದ್ದು, ತಾತ್ಕಾಲಿಕ ಶೆಡ್ ಗಳನ್ನು ನಿರ್ಮಾಣ ಮಾಡಲು ಕ್ರಮವಹಿಸಲಾಗಿದೆ ಎಂದರು.

ಕುಡಿಯುವ ನೀರಿನ ಸಮಸ್ಯೆಗೆ ಅಗತ್ಯ ಕ್ರಮ: ಜಿಲ್ಲೆಯಲ್ಲಿ 13 ಗ್ರಾಮ ಪಂಚಾಯಿತಿಗಳ ಪೈಕಿ 16 ಗ್ರಾಮಗಳಲ್ಲಿ ನೀರಿನ ಸಮಸ್ಯೆಯಿದ್ದು, ಸದರಿ ಗ್ರಾಮಗಳಲ್ಲಿ ಖಾಸಗಿ ಕೊಳವೆ ಬಾವಿಗಳ ಮಾಲೀಕರೊಂದಿಗೆ ಒಪ್ಪಂದ ಮಾಡಿಕೊಂಡು ನೀರಿನ ಸಮಸ್ಯೆಯನ್ನು ಬಗೆಹರಿಸಲಾಗಿದೆ ಹಾಗೂ ಮುಂದಿನ ದಿನಗಳಲ್ಲಿ 163 ಹಳ್ಳಿಗಳಲ್ಲಿ ಸಮಸ್ಯೆ ಉದ್ಭವಿಸಬಹುದೆಂದು ಅಂದಾಜಿಸಲಾಗಿದ್ದು, ಇದನ್ನು ಬಗೆಹರಿಸಲು 65 ಖಾಸಗಿ ಕೊಳವೆ ಬಾವಿಗಳನ್ನು ಗುರುತಿಸಿ ನೀರಿನ ಸಮಸ್ಯೆಯನ್ನು ಬಗೆಹರಿಸಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಎಂದರು.

ಜಿಲ್ಲೆಯಲ್ಲಿ ವಿವಿಧ ಮೂಲಗಳಿಂದ ಒಟ್ಟು 1048 ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲಾಗಿದ್ದು, ಈ ಪೈಕಿ 1008 ಘಟಕಗಳು ಕಾರ್ಯನಿರ್ವಹಿಸುತ್ತಿದ್ದು, 40 ಘಟಕಗಳಿ ವಿವಿಧ ಕಾರಣಗಳಿಂದ ಸ್ಥಗಿತಗೊಂಡಿದ್ದು, ಈ ಘಟಕಗಳನ್ನು ಸರಿಪಡಿಸಲಾಗುವುದು ಎಂದರು.

## ಕೂಲಿಕಾರರ ಮಕ್ಕಳಿಗೆ ಕೂಸಿನ ಮನೆ

ಬರಪೀಡಿತ ಜಿಲ್ಲೆ ಎಂದು ಘೋಷಣೆಯಾಗಿರುವುದರಿಂದ ನರೇಗಾ ಯೋಜನೆಯಡಿ ಹೆಚ್ಚು ವೈಯಕ್ತಿಕ ಕಾಮಗಾರಿಗಳನ್ನು ಕೈಗೊಳ್ಳಲು ರೈತರಲ್ಲಿ ಹೆಚ್ಚು ಅರಿವು ಮೂಡಿಸಲಾಗುತ್ತಿದೆ. ನರೇಗಾ ಯೋಜನೆಯ ಕಾಮಗಾರಿಗಳಿಗೆ ಹೆಚ್ಚಿನ ಆದ್ಯತೆ ನೀಡುತ್ತಿರುವ ಹಿನ್ನೆಯಲ್ಲಿ ನರೇಗಾ ಯೋಜನೆಯಡಿ ಕೆಲಸ ಮಾಡುತ್ತಿರುವ ಕೂಲಿಕಾರರ ಮಕ್ಕಳ ಪೋಷಣೆಗೆ ಗ್ರಾಮ ಪಂಚಾಯಿತಿವಾರು ಜಿಲ್ಲೆಯಲ್ಲಿ ಒಟ್ಟು 145 ಕೂಸಿನ ಮನೆಗಳನ್ನು ತೆರೆಯಲಾಗಿದ್ದು, 3 ವರ್ಷದೊಳಗಿನ ಮಕ್ಕಳನ್ನು ನೋಡಿಕೊಳ್ಳಲು ಪಾಲಕರನ್ನು ಸಹ ನೇಮಿಸಲಾಗಿದೆ. ಮಕ್ಕಳಿಗೆ ಉತ್ತಮ ಪೌಷ್ಠಿಕ ಆಹಾರ, ಆಟಿಕೆ ಸಲಕರಣೆಗಳ ಜೊತೆಗೆ ಆಕರ್ಷಣೀಯ ವಾತಾವರಣ ನಿರ್ಮಿಸಲಾಗಿದೆ ಎಂದರು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಸಂಜೆ ಟಿಪ್ಸ್




## ಟಾಪ್ 10 ಡಿಜಿಟಲ್ ಪರ್ಸನಲ್ ಫೈನಾನ್ಸ್ ಕಂಪನಿಗಳಲ್ಲಿ ಗುರುತಿಸಲ್ಪಟ್ಟ ಬಡ್ಡಿ ಲೋನ್

ಫಿನ್‌ಟೆಕ್ ಕ್ಷೇತ್ರದಲ್ಲಿನ ಪ್ರಮುಖ ಸಾಲ ಸೇವಾ ಪೂರೈಕೆದಾರರಾದ ಬಡ್ಡಿ ಲೋನ್, ಇತ್ತೀಚಿನ ಸಿಮಿಲರ್ ವೆಬ್ ನ ''ಡಿಜಿಟಲ್ 100: ವೇಗವಾಗಿ ಬೆಳೆಯುತ್ತಿರುವ ಆನ್ಲೈನ್ ವ್ಯವಹಾರಗಳು'' ವರದಿಯಲ್ಲಿ ಭಾರತದಲ್ಲಿನ ವೈಯಕ್ತಿಕ ಹಣಕಾಸು(ಪರ್ಸನಲ್ ಫೈನಾನ್ಸ್) ವರ್ಗದ ಅಡಿಯಲ್ಲಿ 8 ನೇ ಸ್ಥಾನವನ್ನು ಪಡೆದುಕೊಂಡಿದೆ. ಲೆಕ್ಕಾಚಾರದಲ್ಲಿ ವಿಜಯ ಸಾಧಿಸಿದ, ಬಡ್ಡಿ ಲೋನ್ ಇದೇ ವೆಬ್ನ ಡಿಜಿಟಲ್ 100 ಶ್ರೇಯಾಂಕದಲ್ಲಿ ಗಮನ ಸೆಳೆಯುವ ಸಾಧನೆ ಮಾಡಿದೆ. 2022 ರಿಂದ 2023 ರವರೆಗಿನ ಸರಾಸರಿ ಮಾಸಿಕ ಟ್ರಾಫಿಕ್ನಲ್ಲಿ ಶೇಕಡಾವಾರು ಹೆಚ್ಚಳದ ಮೇಲೆ ಗಮನ ಕೇಂದ್ರೀಕರಿಸಿರುವ ಕಾರ್ಯವಿಧಾನವು, 23.3 ಮಿಲಿಯನ್ ವೆಬ್ ಟ್ರಾಫಿಕ್ ಮತ್ತು 1.2 ಮಿಲಿಯನ್ ಸರಾಸರಿ ಮಾಸಿಕ ಅನನ್ಯ ಸಂದರ್ಶಕರ(ವಿಸಿಟರ್ಸ್)ನ್ನು ಪಡೆಯುವ ಮೂಲಕ ಬಡ್ಡಿ ಲೋನ್ ನ ಬೆಳವಣಿಗೆಯ ಏರಿಕೆಯನ್ನು ತೋರಿಸಿಕೊಟ್ಟಿದೆ. 2018ರಲ್ಲಿ ಸ್ಥಾಪನೆಯಾದಾಗಿನಿಂದ, ಬಡ್ಡಿ ಲೋನ್ ಸಾಲಗಾರರು ಮತ್ತು ಸಾಲದಾತರ ನಡುವಿನ ಅಂತರವನ್ನು ಕಡಿಮೆ ಮಾಡಲು ಅತ್ಯಾಧುನಿಕ ತಂತ್ರಜ್ಞಾನವನ್ನು ಬಳಸಿಕೊಂಡಿದೆ. ಬಡ್ಡಿ ಲೋನ್ ನ ಯಶಸ್ಸು ಆರ್‌ಬಿಐ-ಅನುಮೋದಿತ ಬ್ಯಾಂಕ್‌ಗಳು ಮತ್ತು ಎನ್‌ಬಿಎಫ್‌ಸಿಗಳ ಸಹಭಾಗಿತ್ವದ ಅದರ ಪಾರದರ್ಶಕ ಮತ್ತು ಬಳಕೆದಾರ ಸ್ನೇಹಿ ಸಾಲ ಪರಿಸರ ವ್ಯವಸ್ಥೆಯಲ್ಲಿದೆ. ಸಿಮಿಲರ್ ವೆಬ್ ಗುರುತಿಸಿದ ಟಾಪ್ ಫಿನ್‌ಟೆಕ್ ಪ್ಲಾಟ್‌ಫಾರ್ಮ್‌ಗಳ ಜೊತೆಗೆ ಕಂಪನಿಯ ಗುರುತಿಸುವಿಕೆಯು ಉತ್ಕೃಷ್ಟತೆಯೆಡೆಗಿನ ಅದರ ಬದ್ಧತೆಗೆ ಸಾಕ್ಷಿಯಾಗಿದೆ.ಈ ಪುರಸ್ಕಾರದ ಬಗ್ಗೆ ಉತ್ಸಾಹವನ್ನು ವ್ಯಕ್ತಪಡಿಸಿದ, ಗ್ರೋತ್ ಮತ್ತು ಇನಿಶಿಯೇಟಿವ್ಸ್ ಅಧ್ಯಕ್ಷ ಅಮಿತಾಭ್ ಬಿಷ್ಣೋಯ್, ಗ್ರಾಹಕರನ್ನು ಲಭ್ಯವಾಗಬಹುದಾದ ಮತ್ತು ಸಮರ್ಥ ಆರ್ಥಿಕ ಪರಿಹಾರಗಳೊಂದಿಗೆ ಸಬಲೀಕರಣಗೊಳಿಸುವುದು ನಮ್ಮ ಗುರಿಯಾಗಿದೆ. ಈ ಗುರುತಿಸುವಿಕೆಯು ವೇಗ, ದಕ್ಷತೆ ಮತ್ತು ಗ್ರಾಹಕ-ಕೇಂದ್ರಿತ ಪರಿಹಾರಗಳ ಕಡೆಗೆ ಆದ್ಯತೆ ನೀಡಿ ಫಿನ್‌ಟೆಕ್ ಅನ್ನು ಪರಿವರ್ತಿಸುವಲ್ಲಿನ ನಮ್ಮ ಪ್ರಯತ್ನಗಳಿಗೆ ಉತ್ತೇಜನ ನೀಡಿದೆ ಎಂದು ಹೇಳಿದರು.

## ನೆಲನೆಲ್ಲಿ ತಂಬುಳಿ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ನೆಲ್ಲಿಕಾಯಿ 10,ಕಾಯಿ ತುರಿ ಒಂದು ಕಪ್, ಜೀರಿಗೆ ಅರ್ಧ ಚಮಚ, ಕಾಳು ಮೆಣಸು ಅರ್ಧ ಚಮಚ, ಲವಂಗ 5-7,ಎಣ್ಣೆ ಸ್ವಲ್ಪ, ಉಪ್ಪು, ಅರಿಶಿನ, ಒಣ ಮೆಣಸಿನಕಾಯಿ

### ಮಾಡುವ ವಿಧಾನ

ಒಂದು ಬಾಣಲೆಗೆ ಎಣ್ಣೆ ಹಾಕಿ ಸ್ವಲ್ಪ ಬಿಸಿ ಮಾಡಿ. ಒಲೆಯನ್ನು ಸಣ್ಣ ಉರಿಯಲ್ಲಿ ಇಡಿ. ಅದಕ್ಕೆ ಜೀರಿಗೆ ಹಾಕಿ ಹುರಿಯಿರಿ. ನಂತರ ಇದಕ್ಕೆ ಕಾಳು ಮೆಣಸು, ಲವಂಗ, ಸ್ವಲ್ಪ ಅರಿಶಿಣ ಸೇರಿಸಿ ಹುರಿಯಿರಿ. ಬಳಿಕ ಇದಕ್ಕೆ ತುರಿದ ನೆಲ್ಲಿಕಾಯಿ ಹಾಕಿ ಹಸಿ ವಾಸನೆ ಹೋಗುವವರೆಗೂ ಹುರಿಯಿರಿ ಬಳಿಕ ಇದಕ್ಕೆ ಕಾಯಿ ತುರಿ ಹಾಕಿ ಹುರಿಯಿರಿ. ಇದು ಕೂಡ ಹಸಿ ವಾಸನೆ ಹೋಗುವವರೆಗೂ ಅಂದರೆ ಸ್ವಲ್ಪ ಕೆಂಪಾಗುವವರೆಗೂ ಹುರಿಯಿರಿ. ಬಳಿಕ ಇದನ್ನು ಒಂದು ಮಿಕ್ಸಿ ಜಾರ್ಗೆ ಹಾಕಿ ರುಚಿಗೆ ತಕ್ಕಷ್ಟು ಉಪ್ಪು ಹಾಗೂ ನೀರೊಂದಿಗೆ ನುಣ್ಣಗೆ ರುಬ್ಬಿಕೊಳ್ಳಿ.ಬಳಿಕ ಇದಕ್ಕೆ ಜೀರಿಗೆ, ಸಾಸಿವೆ, ಒಣ ಮೆಣಸಿನಕಾಯಿ ಹಾಗೂ ಕರಿಬೇವಿನ ಎಲೆ ಒಗ್ಗರಣೆ ಹಾಕಿದರೆ, ರುಚಿಯಾದ ನೆಲ್ಲಿಕಾಯಿ ತಂಬುಳಿ ಸವಿಯಲು ಸಿದ್ಧ.ಈ ತಂಬುಳಿ ದೇವನ್ನು ತಂಪಾಗಿರಿಸುತ್ತದೆ. ಜೊತೆಗೆ ಆರೋಗ್ಯಕ್ಕೂ ತುಂಬಾ ಒಳ್ಳೆಯದು.

## ಅಭಿಮಾನಿಯ ಮೊಬೈಲ್ ಕಸಿದು ಎಸೆದ ಬಾಲಿವುಡ್ ಗಾಯಕ ಆದಿತ್ಯ ನಾರಾಯಣ್



ಬಾಲಿವುಡ್ ಹೆಸರಾಂತ ಗಾಯಕ ಉದೀತ್ ನಾರಾಯಣ್ ಪುತ್ರ ಆದಿತ್ಯ ನಾರಾಯಣ್ ಕೂಡ ಗಾಯಕರು. ಈ ಹಿಂದೆ ರಿಯಾಲಿಟಿ ಶೋನಲ್ಲಿ ಆಯಂಕರ್ ಆಗಿದ್ದ ಆದಿತ್ಯ, ಶೋನಲ್ಲಿ ಜಡ್ಜ್ ಆಗಿದ್ದ ನೇಹಾ ಕಕ್ಕರ್ ಅವರನ್ನು ವಿವಾಹವಾಗಲಿದ್ದಾರೆಂಬ ಸುದ್ದಿ ಇತ್ತು. ಆದರೆ ಅದು ಸತ್ಯವಾಗಲಿಲ್ಲ.

ಇಬ್ಬರು ಬೇರೆ ಬೇರೆ ಜೀವನ ಸಂಗಾತಿಯನ್ನು ಹುಡುಕಿಕೊಂಡರು. ಅಲ್ಲದೇ, ಅಭಿಮಾನಿಯ ಎದುರು ಸಿಟ್ಟು ತೋರಿಸಿ, ಆದಿತ್ಯ ಈ ಮೊದಲು ಸುದ್ದಿಯಾಗಿದ್ದರು.

ಇದೀಗ ಮತ್ತೆ ಅದೇ ವಿಷಯಕ್ಕೆ ಆದಿತ್ಯ ಟ್ರೋಲ್ ಆಗಿದ್ದು, ಫ್ಯಾನ್ ಮೊಬೈಲ್ ತೆಗೆದು ಎಸೆದಿದ್ದಾರೆ. ಸ್ಟೇಜ್ ಪರ್ಫಾಮೆನ್ಸ್ ನೀಡುತ್ತಿದ್ದ ವೇಳೆ ಅಭಿಮಾನಿಯ ಮೇಲೆ ಸಿಟ್ಟಾದ ಆದಿತ್ಯ, ಆ ವ್ಯಕ್ತಿಯ ಫೋನ್ ಕಸಿದು, ದೂರ ಬಿಸಾಕಿದ್ದಾರೆ. ಈ ವೀಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದ್ದು, ಹಲವರು ಆಕ್ರೋಶ ಹೊರಹಾಕಿದ್ದಾರೆ.

ಛತ್ತೀಸ್ಘಡದ ಕಾಲೇಜಿನ ಕಾರ್ಯಕ್ರಮವೊಂದರಲ್ಲಿ ಈ ಘಟನೆ ನಡೆದಿದ್ದು, ಇಲ್ಲಿ ಆದಿತ್ಯ ನಾರಾಯಣ್ ಹಾಡು ಹಾಡುತ್ತ, ಕಾರ್ಯಕ್ರಮ ನೀಡುತ್ತಿದ್ದರು. ಇವರ ಹಾಡಿಗೆ ಎಲ್ಲ ವಿದ್ಯಾರ್ಥಿಗಳು ಎಂಜಾಯ್ ಮಾಡುತ್ತಿದ್ದರು. ಆದರೆ ಅಲ್ಲೊಬ್ಬ ವಿದ್ಯಾರ್ಥಿ, ಆದಿತ್ಯ ಪರ್ಫಾಮೆನ್ಸ್ನ್ನು ತಮ್ಮ ಮೊಬೈಲ್ನಲ್ಲಿ ಶೂಟ್ ಮಾಡುತ್ತಿದ್ದ. ಏಕಾಏಕಿ ಸಿಟ್ಟಾದ ಆದಿತ್ಯ, ಕೋಪದಲ್ಲಿ ಬಂದು ಮೊಬೈಲ್ ತೆಗೆದು ಎಸೆದಿದ್ದಾರೆ. ವೀಡಿಯೋ ವೈರಲ್ ಆಗುತ್ತಿದ್ದಂತೆ, ಜನ ಆದಿತ್ಯ ಬಗ್ಗೆ ಆಕ್ರೋಶ ಹೊರಹಾಕಿದ್ದಾರೆ. ಇಷ್ಟು ಸಿಟ್ಟೇಕೆ? ಎಂದು ಪ್ರಶ್ನಿಸಿದ್ದಾರೆ.

ಕಳೆದ ತಿಂಗಳು ಇದೇ ರೀತಿ ಸ್ಟೇಜ್ ಪರ್ಫಾಮೆನ್ಸ್ ಕೊಡುವಾಗ, ಪಾಕಿಸ್ತಾನದ ಗಾಯಕ ಅಭಿಮಾನಿಗಳತ್ತ ತಮ್ಮ ಮೈಕ್ ಬಿಸಾಕಿ, ಸ್ಟೇಜ್ನಿಂದ ಎದ್ದು ಹೋಗಿದ್ದರು. ಈ ಬಗ್ಗೆ ಹಲವರು ಆಕ್ರೋಶ ವ್ಯಕ್ತಪಡಿಸಿದ್ದರು.



## ಮಕ್ಕಳಲ್ಲಿ ಸಾಂಕ್ರಾಮಿಕವಲ್ಲದ ರೋಗ ನಿವಾರಣೆ

### ಹೆಲ್ತ್ ಟಿಪ್ಸ್

ಸಾಂಕ್ರಾಮಿಕವಲ್ಲದ ರೋಗಗಳು(ಎನ್.ಸಿ.ಡಿ.ಗಳು) ಜಾಗತಿಕ ಆರೋಗ್ಯದ ಕಾಳಜಿಯಾಗಿದ್ದು ಎಲ್ಲ ವಯಸ್ಸಿನವರು ಮತ್ತು ಸಾಮಾಜಿಕ ಆರ್ಥಿಕ ವರ್ಗಗಳನ್ನೂ ಬಾಧಿಸುತ್ತಿವೆ. ಸಾಂಪ್ರದಾಯಿಕವಾಗಿ ವಯಸ್ಕರಲ್ಲಿ ಕಾಣಿಸುತ್ತಿದ್ದ ಎನ್.ಸಿ.ಡಿ.ಗಳು ಮಕ್ಕಳಲ್ಲೂ ಹೆಚ್ಚಾಗುತ್ತಿದ್ದು ಅವರ ಸ್ವಾಸ್ಥ್ಯಕ್ಕೆ ಗಮನಾರ್ಹ ಬೆದರಿಕೆ ತಂದೊಡ್ಡಿವೆ. ಶಾಲೆಗಳು ಮಕ್ಕಳ ದೈಹಿಕ ಮತ್ತು ಮಾನಸಿಕ ಆರೋಗ್ಯ ರೂಪಿಸುವಲ್ಲಿ ಪ್ರಮುಖ ಸಂಸ್ಥೆಗಳಾಗಿದ್ದು ಅವುಗಳನ್ನು ಪರಿಣಾಮಕಾರಿ ಆರೋಗ್ಯದ ಮಧ್ಯಪ್ರವೇಶಗಳನ್ನು ಅನುಷ್ಠಾನಗೊಳಿಸಲು ವಿಶಿಷ್ಟ ರೀತಿಯಲ್ಲಿ ಸ್ಥಾನೀಕರಣಗೊಂಡಿವೆ. ಶಾಲೆಗಳು ಶೈಕ್ಷಣಿಕ ಸಂಸ್ಥೆಗಳಾಗಿ ಮಕ್ಕಳ ಒಟ್ಟಾರೆ ಸ್ವಾಸ್ಥ್ಯ ರೂಪಿಸುವಲ್ಲಿ ವಿಶಿಷ್ಟ ಅವಕಾಶವನ್ನು ಒದಗಿಸುತ್ತಿದ್ದು ಅದನ್ನು ತಪ್ಪಿಸಿಕೊಳ್ಳುವಂತಿಲ್ಲ. ಆರೋಗ್ಯದ ಶಿಕ್ಷಣವನ್ನು ರೂಪಿಸುವ, ದೈಹಿಕ ಚಟುವಟಿಕೆಯ ಕಾರ್ಯಕ್ರಮಗಳು ಮತ್ತು ಪೌಷ್ಟಿಕತೆಯ ಮಧ್ಯಪ್ರವೇಶಗಳನ್ನು ಶಾಲೆಯ ಪರಿಸರದಲ್ಲಿ ಅಳವಡಿಸಿದರೆ ಶಿಕ್ಷಕರು ಅವರ ವಿದ್ಯಾರ್ಥಿಗಳ ಸಕಾರಾತ್ಮಕ ಆರೋಗ್ಯದ ಫಲಿತಾಂಶಗಳನ್ನು ತರಬಹುದು. ಈ ಮಧ್ಯಪ್ರವೇಶಗಳು ಆರೋಗ್ಯಕರ ಜೀವನವನ್ನು ಮಾತ್ರ ಉತ್ತೇಜಿಸುವುದಿಲ್ಲ, ಬದಲಿಗೆ ಮಕ್ಕಳಲ್ಲಿ ಎನ್.ಸಿ.ಡಿ.ಗಳನ್ನು ತಡೆಯುವ ಮತ್ತು ನಿರ್ವಹಣೆಯಲ್ಲಿ ಕೊಡುಗೆ ನೀಡುತ್ತವೆ. ಸಮಗ್ರ ಆರೋಗ್ಯ ಶಿಕ್ಷಣ ಕಾರ್ಯಕ್ರಮಗಳ ಅನುಷ್ಠಾನವು ಆರೋಗ್ಯಕರ ಜೀವನಶೈಲಿಯ ಪ್ರಾಮುಖ್ಯತೆಯ ಕುರಿತು ಅರಿವನ್ನು ಹೆಚ್ಚಿಸುವಲ್ಲಿ ಮೂಲಭೂತ ಅಂಶವಾಗಿದೆ. ವಿಶ್ವ ಆರೋಗ್ಯ ಸಂಸ್ಥೆ(ಡಬ್ಲ್ಯೂಎಚ್‌ಒ) ಪ್ರಕಾರ, ಆರೋಗ್ಯ ಶಿಕ್ಷಣ ಕಾರ್ಯಕ್ರಮಗಳು ಸಾಂಕ್ರಾಮಿಕವಲ್ಲದ ರೋಗಗಳ(ಎನ್.ಸಿ.ಡಿ.ಗಳು) ವ್ಯಾಪಕತೆ ಕಡಿಮೆ ಮಾಡುವಲ್ಲಿ ಕೊಡುಗೆ ನೀಡುತ್ತವೆ. ಈ ಕಾರ್ಯಕ್ರಮಗಳು ಪೌಷ್ಟಿಕತೆ, ದೈಹಿಕ ಚಟುವಟಿಕೆ, ಮಾನಸಿಕ ಆರೋಗ್ಯ ಮತ್ತು ತಂಬಾಕು ಹಾಗೂ ಮದ್ಯ ಸೇವನೆಯ ಅಪಾಯಗಳಂತಹ ವಿಷಯಗಳನ್ನು ಹೊಂದಿರುತ್ತವೆ. ಆರೋಗ್ಯಕರ ಸಾಕ್ಷರತೆಯ ಸಂಸ್ಕೃತಿಯನ್ನು ಉತ್ತೇಜಿಸುವ ಮೂಲಕ ಶಾಲೆಗಳು ವಿದ್ಯಾರ್ಥಿಗಳಿಗೆ ಅವರ ಸ್ವಾಸ್ಥ್ಯದ ಬಗ್ಗೆ ಮಾಹಿತಿಪೂರ್ಣ ನಿರ್ಧಾರಗಳನ್ನು ಕೈಗೊಳ್ಳುವ ಮೂಲಕ ಜೀವನಪೂರ್ತಿ ಆರೋಗ್ಯಕರ ಆಯ್ಕೆಗಳಿಗೆ ತಳಹದಿ ಸೃಷ್ಟಿಸಬಹುದು. ಗರಿಷ್ಠ ಆರೋಗ್ಯ ಕಾಪಾಡಲು ಮತ್ತು ಎನ್.ಸಿ.ಡಿ.ಗಳನ್ನು ನಿಯಂತ್ರಿಸಲು ನಿಯಮಿತ ದೈಹಿಕ ಚಟುವಟಿಕೆ ಅಗತ್ಯ. ಶಾಲೆಗಳು ದೈಹಿಕ ಶಿಕ್ಷಣ ತರಗತಿಗಳು, ವಿರಾಮ ಮತ್ತು ಪಠ್ಯೇತರ ಚಟುವಟಿಕೆಗಳ ಮೂಲಕ ದೈನಂದಿನ ಚಟುವಟಿಕೆಗಳಲ್ಲಿ ದೈಹಿಕ ಚಟುವಟಿಕೆ ಅಳವಡಿಸಬಹುದು. ಹೆಚ್ಚುವರಿಯಾಗಿ ಪೂರಕ ಪರಿಸರ ಸೃಷ್ಟಿಸುವುದು ಸಕ್ರಿಯ ಸಾರಿಗೆ ಅಂದರೆ ನಡೆದಾಟ ಅಥವಾ ಶಾಲೆಗೆ ಸೈಕಲ್ ಮೂಲಕ ಪ್ರಯಾಣಿಸುವುದು, ಹೆಚ್ಚು ದೈಹಿಕವಾಗಿ ಸಕ್ರಿಯ ಜೀವನಶೈಲಿಗೆ ಕೊಡುಗೆ ನೀಡುತ್ತವೆ. ನ್ಯಾಷನಲ್ ಸೆಂಟರ್ ಫಾರ್ ಸೇಫ್ ರೂಟ್ಸ್ ಟು ಸ್ಕೂಲ್ ಪ್ರಕಾರ ಶಾಲೆಯಲ್ಲಿ ನಡೆದಾಟ ಮತ್ತು ಬೈಕಿಂಗ್ ಉತ್ತೇಜಿಸುವ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವ ಸಮುದಾಯಗಳು ಹೆಚ್ಚಿನ ಸಂಖ್ಯೆಯ ದೈಹಿಕ ಚಟುವಟಿಕೆಯಲ್ಲಿ ತೊಡಗಿಕೊಳ್ಳುತ್ತಾರೆ ಎಂದು ವರದಿ ಮಾಡಿದೆ . ಶಾಲೆಯ ಪರಿಸರವು ಮಕ್ಕಳ ಪಥ್ಯದ ಅಭ್ಯಾಸಗಳಿಗೆ ಗಮನಾರ್ಹ ರೀತಿಯಲ್ಲಿ ಪ್ರಭಾವಿಸುತ್ತದೆ. ಶಾಲೆಯ ಕೆಫೆಟೇರಿಯಗಳ ಒಳಗಡೆ ಸಮತೋಲನ ಮತ್ತು ಆರೋಗ್ಯಕರ ಆಹಾರದ ಆಯ್ಕೆ ರೂಪಿಸುವಲ್ಲಿ ಮತ್ತು ಅನುಷ್ಠಾನಗೊಳಿಸುವುದು ಗಮನಾರ್ಹ ಪರಿಣಾಮ ಬೀರುತ್ತದೆ. ಅಲ್ಲದೆ ಶಾಲೆಗಳು ಪೋಷಕರೊಂದಿಗೆ ಮನೆಯಲ್ಲಿ ಪೌಷ್ಟಿಕತೆಯ ಭೋಜನ ಮಾಡಲು, ಮಕ್ಕಳ ಪಥ್ಯದ ಅಭ್ಯಾಸಗಳನ್ನು ಸುಧಾರಿಸಲು ಸಮಗ್ರ ವಿಧಾನ ಸೃಷ್ಟಿಸುವಲ್ಲಿ ಸಹಯೋಗ ಹೊಂದಬಹುದು.

## ಆಲೂಗಡ್ಡೆಯಿಂದ ಸೌಂದರ್ಯಕ್ಕೆ ಉಪಯೋಗ

### ಬ್ಯೂಟಿ ಟಿಪ್ಸ್



ಆಲೂಗಡ್ಡೆಯಿಂದ ದೂರ ಉಳಿಯುವವರೇ ಜಾಸ್ತಿ. ಇದು ಕೊಬ್ಬು ಹೆಚ್ಚಿಸುವುದರಿಂದ ದಪ್ಪವಾಗ್ತಿವೆಂಬ ಭಯ. ಆದರೆ ಆಲೂಗಡ್ಡೆಯಿಂದ ಅನೇಕ ಉಪಯೋಗಗಳಿವೆ. ಇದನ್ನು ಕೇಳಿದ್ರೆ ನೀವು ಆಲೂಗಡ್ಡೆ ಬಳಕೆಯನ್ನು ಜಾಸ್ತಿ ಮಾಡ್ತೀರಾ.

ಆಲೂಗಡ್ಡೆಯಲ್ಲಿ ವಿಟಮಿನ್ ಸಿ, ವಿಟಮಿನ್ ಬಿ, ಕಬ್ಬಿಣ, ಕ್ಯಾಲ್ಸಿಯಂ, ಮ್ಯಾಂಗನೀಸ್, ರಂಜಕ ಗಮನಾರ್ಹ ಪ್ರಮಾಣದಲ್ಲಿ ಕಂಡು ಬರುತ್ತವೆ.

**ಚರ್ಮದ ಬಣ್ಣ :** ಹೊಳೆಯುವ ಚರ್ಮ ಪಡೆಯಲು ಆಲೂಗಡ್ಡೆ ಅತೀ ಮುಖ್ಯ. ಆಲೂಗಡ್ಡೆಯನ್ನು ಮುಖಕ್ಕೆ ಹಚ್ಚುವುದರಿಂದ ಚರ್ಮ ಹೊಳಪು ಪಡೆಯುತ್ತದೆ. ಅಲ್ಲದೇ ಮುಖದಲ್ಲಿ ತುರಿಕೆ ಇದ್ದರೆ ಅದೂ ಕಡಿಮೆಯಾಗುತ್ತದೆ. 30 ನಿಮಿಷಗಳ ಕಾಲ ಮುಖಕ್ಕೆ ಆಲೂಗಡ್ಡೆ ಮಿಶ್ರಣವನ್ನು ಹಚ್ಚಿಡಬೇಕು. ಇದಕ್ಕೆ ಲಿಂಬು ರಸ ಬೆರೆಸಿದರೆ ಮತ್ತೂ ಉತ್ತಮ.

**ಸುಕ್ಕು ತಡೆಯುತ್ತದೆ:** ಮುಖ ಸುಕ್ಕುಗಟ್ಟುವುದನ್ನು ಆಲೂಗಡ್ಡೆ ತಡೆಯುತ್ತದೆ. ಸುಕ್ಕು ತಡೆಯುವ ಹಾಗೂ ಚರ್ಮವನ್ನು ಮೃದುಗೊಳಿಸುವ ಗುಣಗಳು ಇದರಲ್ಲಿದೆ.

**ಕಪ್ಪು ಕಲೆ:** ಕಣ್ಣುಗಳ ಕೆಳಗಿರುವ ಕಪ್ಪು ಕಲೆಗಳನ್ನು ಹೋಗಲಾಡಿಸಲು ಆಲೂಗಡ್ಡೆ ಉತ್ತಮ ಔಷಧಿ. ಆಲೂಗಡ್ಡೆಯ ರಸವನ್ನು ಕಣ್ಣಿನ ಕೆಳಗೆ ಹಚ್ಚಿ, ಸ್ವಲ್ಪ ಸಮಯ ಬಿಟ್ಟು ತೊಳೆಯಿರಿ.

**ಸನ್ ಬರ್ನ್:** ಸೂರ್ಯನ ಶಾಖದಿಂದ ಕಪ್ಪಾಗುವ ಮುಖವನ್ನು ಸುಂದರಗೊಳಿಸಲು ಆಲೂಗಡ್ಡೆ ಬಳಸುವುದು ಬಹಳ ಉಪಯೋಗಕಾರಿ. ಮೊದಲು ಆಲೂಗಡ್ಡೆಯನ್ನು ಹೋಳುಗಳಾಗಿ ಮಾಡಿ ಫ್ರಿಜ್ ನಲ್ಲಿಡಿ. ತಣ್ಣಗಾದ ಆಲೂಗಡ್ಡೆಯನ್ನು ಕಪ್ಪಾದ ಜಾಗದಲ್ಲಿ ಇಟ್ಟುಕೊಳ್ಳಿ. ಇದರಿಂದ ಮುಖ ಶುದ್ಧವಾಗುವುದಲ್ಲದೇ, ನಯವಾಗಿ, ಮೃದುವಾಗುತ್ತದೆ ಚರ್ಮ.

**ಒಣ ಚರ್ಮ:** ಒಣ ಚರ್ಮ ಹೊಂದಿದವರು ಆಲೂಗಡ್ಡೆ ರಸವನ್ನು ಮೊಸರಿನಲ್ಲಿ ಕಲಸಿ, ಮುಖಕ್ಕೆ ಪ್ಯಾಕ್ ಮಾಡಿಕೊಳ್ಳಿ. ಸುಮಾರು 20 ನಿಮಿಷಗಳ ಕಾಲ ಮುಖದ ಮೇಲೆ ಪ್ಯಾಕ್ ಇಟ್ಟುಕೊಂಡು ನಂತರ ತೊಳೆಯಿರಿ.

## ಜಿಯೋಸಿನಿಮಾದ 'ಜೀತೋ ಧನ್ ಧನಾ ಧನ್'ನೊಂದಿಗೆ ಕೈಜೋಡಿಸಿದ ಟಿವಿಎಸ್




ಕಳೆದ ವರ್ಷ ಪ್ರಾರಂಭವಾದ ಜಿಯೋಸಿನಿಮಾದ ಸರಿ ಉತ್ತರ ನೀಡಿ ಬಹುಮಾನ ಗೆಲ್ಲುವ ಆಟವಾದ 'ಜೀತೋ ಧನ್ ಧನಾ ಧನ್' ಸ್ಪರ್ಧೆಗೆ ಶೀರ್ಷಿಕೆ ಪ್ರಾಯೋಜಕರಾಗಿ 'ಟಿವಿಎಸ್ ಯೂರೋಗ್ರಿಪ್' ಅನ್ನು ವಯಾಕಾಮ್18 ಘೋಷಿಸುತ್ತಿದೆ. ಸಂವಾದಾತ್ಮಕ ಅಭಿಮಾನಿಗಳ ಒಳಗೊಳ್ಳುವಿಕೆಯ ಹೆಚ್ಚಳ ಮತ್ತು ಐಪಿಎಲ್‌ನ ನಂತರೂ ಭಾರತೀಯ ಕ್ರಿಕೆಟ್‌ನಂತಹ ಪ್ರೀಮಿಯರ್ ಕ್ರೀಡಾ ಚಟುವಟಿಕೆಯ ನಿರಂತರ ಉಚಿತ ನೇರಪ್ರಸಾರದೊಂದಿಗೆ, ಟಿವಿಎಸ್ ಯೂರೋಗ್ರಿಪ್ ಭಾರತ-ಇಂಗ್ಲೆಂಡ್ ಸರಣಿಯಾದ್ಯಂತ ಅಭಿಮಾನಿಗಳಿಗೆ ವಿಶಿಷ್ಟವಾದ ಆಟ ಮತ್ತು ಬಹುಮಾನ ಗೆಲುವಿನ ವೇದಿಕೆಯನ್ನು ಪ್ರಸ್ತುತಪಡಿಸುತ್ತದೆ.

2023ರ ಐಪಿಎಲ್ ಸಮಯದಲ್ಲಿ ಪರಿಚಯಿಸಲಾಯಿತು, 'ಜೀತೋ ಧನ್ ಧನಾ ಧನ್' ಭರ್ಜರಿ ಯಶಸ್ಸನ್ನು ಕಂಡಿತ್ತು. ಸ್ಪರ್ಧೆಯಲ್ಲಿ ಭಾಗವಹಿಸಿದ 50 ಮಿಲಿಯನ್ ಜನರು ಅತ್ಯಾಕರ್ಷಕ ಬಹುಮಾನಗಳ ಶ್ರೇಣಿಯನ್ನು ಗೆಲ್ಲುವಲ್ಲಿ ಸಫಲರಾದರು. ಜತೆಗೆ 60 ಅದೃಷ್ಟಶಾಲಿ ಸ್ಪರ್ಧಿಗಳು ಪ್ರೀಮಿಯಂ ಹ್ಯಾಚ್‌ಬ್ಯಾಕ್ ಬಹುಮಾನವಾಗಿ ಕಾರುಗಳನ್ನು ಒಲಿಸಿಕೊಂಡರು. ಐಪಿಎಲ್‌ನ ಕೇವಲ ಒಂದು ಆವೃತ್ತಿಯಲ್ಲಿ, ಜೀತೋ ಧನ್ ಧನಾ ಧನ್ ಭಾರತದ ಹೃದಯಭಾಗದಿಂದ ಬದಲಾದ ಅದೃಷ್ಟದ ಹೃದಯಸ್ಪರ್ಶಿ ಕಥೆಗಳಿಗೆ ವೇದಿಕೆಯಾಯಿತು. ಜೀತೋ ಧನ್ ಧನಾ ಧನ್‌ಗಾಗಿ ಶೀರ್ಷಿಕೆ ಪ್ರಾಯೋಜಕರ ಘೋಷಣೆಯು ಕಂಟೆಂಟ್‌ನ ಗ್ಯಾಮಿಫಿಕೇಶನ್‌ನಲ್ಲಿ ತೀವ್ರ ಏರಿಕೆಯ ಹಿನ್ನೆಲೆಯಲ್ಲಿ ಬಂದಿದೆ. ಇದು ಐಪಿಎಲ್‌ನ ಕಳೆದ ಆವೃತ್ತಿಯಲ್ಲಿ ಶತಕೋಟಿ ಆಟಗಳನ್ನು ಆಡುವುದರೊಂದಿಗೆ ಜಿಯೋಸಿನಿಮಾ ಹೊಸ ರೀತಿಯಲ್ಲಿ ಮಾನದಂಡವನ್ನು ನಿಗದಿಪಡಿಸಿದೆ.

'ಡಿಜಿಟಲ್ ನಮಗೆ ಬಲವಾದ ಕೇಂದ್ರೀಕೃತ ಪ್ರದೇಶವಾಗಿದೆ. ಟಿವಿಎಸ್ ಯುರೋಗ್ರಿಪ್ ಟೈರ್ಸ್ ಜೀತೋ ಧನ್ ಧನಾ ಧನ್ ಸ್ಪರ್ಧೆಯಲ್ಲಿ ವಯೋಕಾಮ್18 ಜೊತೆಗಿನ ಈ ಪಾಲುದಾರಿಕೆಯು ನಮಗೆ ನಮ್ಮ ಗ್ರಾಹಕರೊಂದಿಗೆ ಸಂಪರ್ಕಿಸಲು ಉತ್ತೇಜಕ ಮತ್ತು ಒಳಗೊಳ್ಳುವಿಕೆಯ ಮಾರ್ಗವಾಗಿದೆ. ಇದು ಹೊಸ ಯುಗ, ಸಹಸ್ರಮಾನ ಮತ್ತು ಜೆನ್ ಝುಡ್ ರೈಡರ್ಸ್ ಆಗಿದೆ. ಭವಿಷ್ಯದಲ್ಲಿ ನಾವು ಇಂತಹ ಅರ್ಥಪೂರ್ಣ ಸಹಯೋಗಗಳನ್ನು ಎದುರುನೋಡುತ್ತೇವೆ ಮತ್ತು ಇದು ಉತ್ತಮ ಬ್ರ್ಯಾಂಡ್ ಅನುಭವಗಳನ್ನು ಜೀವಂತವಾಗಿ ತರಲು ನಮಗೆ ಸಹಾಯ ಮಾಡುತ್ತದೆ' ಎಂದು ಟಿವಿಎಸ್ ಶ್ರೀಚಕ್ರ ಲಿಮಿಟೆಡ್ನ ಸೇಲ್ಸ್ ಮತ್ತು ಮಾರ್ಕೆಂಟಿಂಗ್ ಇವಿಪಿ ಆಗಿರುವ ಪಿ. ಮಾಧವನ್ ಹೇಳಿದ್ದಾರೆ.

'ಟಿವಿಎಸ್ ಯುರೋಗ್ರಿಪ್ ನಮ್ಮೊಂದಿಗೆ ಪಾಲುದಾರರಾಗಿ ಕೈಜೋಡಿಸಿರುವುದು ನಮಗೆ ರೋಮಾಂಚನಕಾರಿಯಾಗಿದೆ. ಇದು ಗೇಮಿಫೈಯಿಂಗ್ ವಿಷಯವನ್ನು ಇನ್ನಷ್ಟು ಮೇಲಕ್ಕೇರಿಸಲಿದೆ. ಕಳೆದ ಐಪಿಎಲ್‌ನಲ್ಲಿ ಕೈಗೆಟುಕುವ ಬೆಲೆಯ ಅಡೆತಡೆಗಳನ್ನು ತೆಗೆದುಹಾಕಲು ನಾವು ವ್ಯವಸ್ಥಿತವಾಗಿ ಕೆಲಸ ಮಾಡಿದ್ದೇವೆ. ಇದು ಐಪಿಎಲ್ ಪಂದ್ಯಗಳ ಉಚಿತ ನೇರಪ್ರಸಾರವನ್ನು ದೊಡ್ಡ ಪ್ರಮಾಣದಲ್ಲಿ ಸಕ್ರಿಯಗೊಳಿಸುವುದನ್ನು ಸಾಧ್ಯವಾಗಿಸಿತು. ಜನಸಾಮಾನ್ಯರು ಮತ್ತು ಬ್ರ್ಯಾಂಡ್‌ಗಳ ನಡುವಿನ ಅಂತರವನ್ನೂ ಇದು ಕಡಿಮೆಗೊಳಿಸಿತು. ಬ್ರ್ಯಾಂಡ್ಗಳು ಅರ್ಥಪೂರ್ಣವಾಗಿ ತಮ್ಮ ಬಳಕೆದಾರರೊಂದಿಗೆ ತಮ್ಮ ಸಂವಹನವನ್ನು ಗೇಮಿಫೈ ಮಾಡಲು ಮತ್ತು ಉತ್ತೇಜಿಸಲು ಮಾರ್ಗಗಳನ್ನು ಹುಡುಕುತ್ತವೆ. ಇದು ಕೇವಲ ಪ್ರಾರಂಭವಷ್ಟೇ ಆಗಿದೆ ಎಂದು ನಾವು ನಿಜವಾಗಿಯೂ ನಂಬುತ್ತೇವೆ ಮತ್ತು ಟಿವಿಎಸ್ ಯುರೋಗ್ರಿಪ್ ಜೀತೋ ಧನ್ ಧನಾ ಧನ್‌ನಿಂದ ಇನ್ನಷ್ಟು ಹೆಚ್ಚಿನ ಸಂಖ್ಯೆಯ ದಾಖಲೆಗಳನ್ನು ನಾವು ಎದುರು ನೋಡುತ್ತಿರುತ್ತೇವೆ' ಎಂದು ವಯಾಕಾಮ್18ನ ವಕ್ತಾರರೊಬ್ಬರು ತಿಳಿಸಿದ್ದಾರೆ.

ವೀಕ್ಷಕರು ರೋಮಾಂಚಕ ಪಂದ್ಯ-ಆಟದಲ್ಲಿ ಮುಳುಗಿದಂತೆ, ಜಾಹೀರಾತುದಾರರು ತಮ್ಮ ಬ್ರ್ಯಾಂಡ್‌ಗಳಿಗೆ ಉತ್ಸಾಹವನ್ನು ಉಂಟುಮಾಡುವ ವಿಶೇಷ ಅವಕಾಶವನ್ನು ಒದಗಿಸುತ್ತಾರೆ. ಪ್ರತಿ ಓವರ್‌ನಲ್ಲಿ ಪ್ರದರ್ಶನವನ್ನು ಬಹಿರಂಗಪಡಿಸುವ ನಿರೀಕ್ಷೆಯೊಂದಿಗೆ, ಜೀತೋ ಧನ್ ಧನಾ ಧನ್ ವಿಶಾಲ ವೀಕ್ಷಕರೊಂದಿಗೆ ತೊಡಗಿಸಿಕೊಳ್ಳಲು ಬ್ರ್ಯಾಂಡ್‌ಗಳಿಗೆ ಆಕರ್ಷಕ ವೇದಿಕೆಯಾಗಿ ಕಾರ್ಯನಿರ್ವಹಿಸುತ್ತದೆ. ಅವರ ಲ್ಯಾಂಡಿಂಗ್ ಪುಟಕ್ಕೆ ದಟ್ಟಣೆಯನ್ನು ಹೆಚ್ಚಿಸಲು ಇದು ಒಂದು ಮಾರ್ಗವಾಗಿದೆ.

ಬಳಕೆದಾರನು ಕೂಪನ್ ಅನ್ನು ಸ್ವೀಕರಿಸಿದಾಗ, ಜಾಹೀರಾತುದಾರರು ರಿಯಾಯಿತಿ ಕೂಪನ್‌ಗಳನ್ನು ಹೇರಳವಾಗಿ ವಿತರಿಸುವ ಅವಕಾಶವನ್ನು ಬಳಸಿಕೊಳ್ಳುತ್ತಾರೆ. ಇಂಪ್ರೆಶನ್‌ಗಳು, ಒಳಗೊಳ್ಳುವಿಕೆ ಮತ್ತು ವಿಮೋಚನೆಯ ಒಂದು ಕೊಳವೆಯನ್ನು ರಚಿಸುತ್ತಾರೆ. ಎಲ್ಲವೂ ಪಂದ್ಯವು ಪ್ರಗತಿಯಲ್ಲಿರುವಾಗ ಮನಬಂದಂತೆ ತೆರೆದುಕೊಳ್ಳುತ್ತವೆ. ಈ ವಿಶಿಷ್ಟ ಸನ್ನಿವೇಶವು ಪಂದ್ಯಗಳ ನೇರಪ್ರಸಾರದ ಸಮಯದಲ್ಲಿ ಅಪರೂಪವಾಗಿ ತೆರೆದುಕೊಳ್ಳುತ್ತದೆ. ಇದು ಜಾಹೀರಾತುದಾರರಿಗೆ ಗಮನಾರ್ಹ ಪರಿಣಾಮ ಬೀರಲು ಅಸಾಧಾರಣ ಅವಕಾಶವಾಗಿದೆ.

ಜಿಯೋಸಿನಿಮಾದ ಬಳಕೆದಾರರು ಭಾರತ ಮತ್ತು ಇಂಗ್ಲೆಂಡ್ ನಡುವಿನ ಐದು ಟೆಸ್ಟ್ ಪಂದ್ಯಗಳ ಸರಣಿಯಲ್ಲೂ ಪ್ರತಿ ಪಂದ್ಯದ ದಿನಗಳಲ್ಲಿ ಆಕರ್ಷಕವಾದ ಬಹುಮಾನಗಳನ್ನು ಗೆಲ್ಲುವ ಅವಕಾಶಗಳನ್ನು ಹೊಂದಿರುತ್ತಾರೆ. ವೀಕ್ಷಕರು ಫೋನ್‌ಅನ್ನು ಪೋರ್ಟ್ರೈಟ್ ಮೋಡ್ನಲ್ಲಿ ಹಿಡಿದಿಟ್ಟುಕೊಳ್ಳಬೇಕು. ನಾಲ್ಕು ಆಯ್ಕೆಗಳ ಜೊತೆಗೆ ಪ್ರತಿ ಓವರ್ಗೂ ಮೊದಲು ಪ್ರಶ್ನೆ ಕಾಣಿಸಿಕೊಳ್ಳುವ ಚಾಟ್ ಬಾಕ್ಸ್ ಪರದೆಯು ಕೆಳಭಾಗದಲ್ಲಿ ತೆರೆಯುತ್ತದೆ.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಅವಕಾಶ ಸದುಪಯೋಗ ಪಡಿಸಿಕೊಳ್ಳುವಿರಿ, ಧನ ಲಾಭ, ಇತರರ ಭಾವನೆಗಳಿಗೆ ಸ್ಪಂದಿಸುವಿರಿ.

**ವೃಷಭ:** ಕೆಲಸವನ್ನ ತಾಳ್ಮೆಯಿಂದ ನಿಭಾಯಿಸಿ, ವಿನಾಕಾರಣ ನಿಷ್ಠುರ, ದೇವತಾ ಕಾರ್ಯ, ಕುಟುಂಬದಲ್ಲಿ ಶಾಂತಿ

**ಮಿಥುನ:** ಬೇಡದ ವಿಷಯಗಳಲ್ಲಿ ಆಸಕ್ತಿ, ಪ್ರೀತಿ ಪಾತ್ರರ ಆಗಮನ, ಹಿತ ಶತ್ರು ಬಾಧೆ, ಮನಸ್ಸಿಗೆ ಸದಾ ಸಂಕಟ, ಚಂಚಲ ಮನಸ್ಸು.

**ಕಟಕ:** ಕಾರ್ಯಕ್ಷೇತ್ರದಲ್ಲಿ ಒತ್ತಡ, ಯಂತ್ರೋಪಕರಣಗಳಿಂದ ಲಾಭ, ಪ್ರಯತ್ನದಿಂದ ಕಾರ್ಯಸಿದ್ಧಿ.

**ಸಿಂಹ:** ವಿದೇಶ ಪ್ರಯಾಣ, ಕ್ರಯ ವಿಕ್ರಯಗಳಿಂದ ಲಾಭ, ಕೃಷಿಕರಿಗೆ ಲಾಭ, ಆಪ್ತರ ಭೇಟಿ, ಶುಭ ಸುದ್ದಿ ಕೇಳುವಿರಿ.

**ಕನ್ಯಾ:** ಹಣದ ವಿಷಯದಲ್ಲಿ ಜಾಗೃತೆ, ಚಂಚಲ ಮನಸ್ಸು, ಋಣಬಾಧೆ, ವಾಹನ ರಿಪೇರಿ, ಎಲ್ಲಿ ಹೋದರು ಅಶಾಂತಿ.

**ತುಲಾ :** ಇತರರ ಮಾತಿನಿಂದ ಕಲಹ, ಎಷ್ಟೇ ಹಣ ಬಂದರೂ ಉಳಿಯುವುದಿಲ್ಲ, ಸ್ವಯಂಕೃತ ಅಪರಾಧ, ಮಕ್ಕಳ ವಿಷಯದಲ್ಲಿ ನೋವು.

**ವೃಶ್ಚಿಕ:** ರೋಗಭಾದೆ, ಮನೋವ್ಯಥೆ, ಆಪ್ತರೊಂದಿಗೆ ಸಂಕಷ್ಟಗಳನ್ನು ಹೇಳಿಕೊಳ್ಳುವಿರಿ, ಯತ್ನ ಕಾರ್ಯಭಂಗ

**ಧನಸ್ಸು:** ಬೆಲೆಬಾಳುವ ವಸ್ತುಗಳ ಖರೀದಿ, ರಫ್ತು ಮಾರಾಟದವರಿಗೆ ಲಾಭ, ಹೊಸ ಯಶಸ್ಸು

**ಮಕರ:** ಪರರಿಗೆ ವಂಚನೆ, ದಾಯಾದಿ ಕಲಹ, ಕೆಟ್ಟ ಮಾತುಗಳನ್ನು ಆಡುವಿರಿ, ಚಂಚಲ ಮನಸ್ಸು, ಭೋಜನ.

**ಕುಂಭ:** ನಂಬಿದ ಜನರಿಂದ ಮೋಸ, ಸಣ್ಣಪುಟ್ಟ ವಿಷಯಗಳಿಂದ ಕಲಹ, ವಿದ್ಯಾರ್ಥಿಗಳಲ್ಲಿ ಹಿನ್ನಡೆ

**ಮೀನ:** ಉದ್ಯೋಗದಲ್ಲಿ ವರ್ಗಾವಣೆ, ಹಿತ ಶತ್ರು ಬಾಧೆ, ಮಾತಿನ ಚಕಮುಖಿ, ವಾದ ವಿವಾದ, ತಾಳ್ಮೆ ಅಗತ್ಯ, ಆಯಾಸ.

## ವಿಶ್ವ ರೇಡಿಯೋ ದಿನ




ರೇಡಿಯೋ 19 ನೇ ಶತಮಾನದ ಮಧ್ಯಭಾಗದಲ್ಲಿ ಆರಂಭವಾಗಿದೆ. ಇದು ನಿರ್ದಿಷ್ಟ ಬ್ಯಾಂಡ್ವಿಡ್ತ್ ಸಂದೇಶಗಳನ್ನು ರವಾನಿಸುವ ಧ್ವನಿ ತರಂಗಗಳು ಮತ್ತು ಸಂಕೇತಗಳ ಸಹಾಯದಿಂದ ಕಾರ್ಯನಿರ್ವಹಿಸುತದೆ. ಭಾರತದಲ್ಲಿ, ರೇಡಿಯೋ 20 ನೇ ಶತಮಾನದ ಆರಂಭದಲ್ಲಿ ಪರಿಚಯವಾಗಿತ್ತು, ಆದರೂ, ಇದು ಸಮೂಹ ಮಾಧ್ಯಮದ ಜನಪ್ರಿಯ ಮಾಧ್ಯಮವಾಗಲು ಹಲವಾರು ವರ್ಷಗಳನ್ನು ತೆಗೆದುಕೊಂಡಿದ್ದು ಮಾತ್ರ ಸತ್ಯ

ಶಿಕ್ಷಣ ವಂಚಿತ ಜನರಿಗೆ ಮಾಹಿತಿ ನೀಡುವುದನ್ನ ಗಮನದಲ್ಲಿಟ್ಟುಕೊಂಡು ರೇಡಿಯೋ ಬಳಕೆ ಹೆಚ್ಚಾಗಿದ್ದಲ್ಲದೇ ಅದರ ಅನಿವಾರ್ಯತೆ ತಿಳಿಯಿತು. ಜಾಹೀರಾತು ಮತ್ತು ಪತ್ರಿಕೆಗಳನ್ನು ಓದಲು ಸಾಧ್ಯವಾಗದ ಜನರು ರೇಡಿಯೋ ಬಂದ ನಂತರ ವಿಷಯಗಳನ್ನು ಚೆನ್ನಾಗಿ ಕೇಳಲು ಮತ್ತು ಅರ್ಥಮಾಡಿಕೊಳ್ಳಲು ಸಾಧ್ಯವಾಯಿತು. ಮಾಧ್ಯಮದ ಜನಪ್ರಿಯತೆಯನ್ನು ಜೀವಂತವಾಗಿರಿಸಲು ಮತ್ತು ಎಲ್ಲರ ನಡುವೆ ಅದರ ಬಳಕೆಯನ್ನು ಉತ್ತೇಜಿಸಲು, ವಿಶ್ವ ರೇಡಿಯೋ ದಿನವನ್ನು ಪ್ರತಿ ವರ್ಷ ಫೆಬ್ರವರಿ 13 ರಂದು ವಿಶ್ವದಾದ್ಯಂತ ಆಚರಿಸಲಾಗುತ್ತದೆ.

ಯುನೆಸ್ಕೋ ತನ್ನ 36 ನೇ ಸಮ್ಮೇಳನದಲ್ಲಿ 2011 ರಲ್ಲಿ ದಿನದ ಆಚರಣೆಯನ್ನು ಘೋಷಿಸಿದ ನಂತರ 2012 ರಲ್ಲಿ ಮೊದಲ ಬಾರಿ ಈ ದಿನವನ್ನು ಆಚರಿಸಲಾಯಿತು.

ಈ ದಿನವನ್ನು ಆಚರಿಸುವ ಮುಖ್ಯ ಉದ್ದೇಶವೆಂದರೆ ಕೇಳಿಸಿಕೊಳ್ಳುವ ಮಾಧ್ಯಮದ ಇಂದಿನ ಮಹತ್ವವನ್ನು ಜನರು ಅರಿತುಕೊಳ್ಳುವುದು. ದೂರದರ್ಶನದ ಜನಪ್ರಿಯತೆಯ ವರ್ಷಗಳ ನಂತರವೂ, ರೇಡಿಯೋವು ಸಂಗೀತದ ಮಾಧ್ಯಮವಾಗಿದೆ, ಪ್ರಯಾಣದ ಒಡನಾಡಿಯಾಗಿದೆ ಮತ್ತು ಸಮುದಾಯ ರೇಡಿಯೋ ಮೂಲಕ ಸಮುದಾಯದ ಧ್ವನಿಯನ್ನು ಹೆಚ್ಚಿಸುವ ರೂಪದಲ್ಲಿ ವಿಶ್ವದಲ್ಲಿ ಪ್ರತಿಷ್ಠಿತ ಸ್ಥಾನವನ್ನು ಹೊಂದಿದೆ ಎಂದರೆ ತಪ್ಪಾಗಲಾರದು. ರೇಡಿಯೋವನ್ನು ದೂರದರ್ಶನ ಮತ್ತು ಅಂತರ್ಜಾಲದ ಮೊದಲು ಪ್ರೇಕ್ಷಕರಿಗೆ ಸುದ್ದಿ ಮತ್ತು ಮಾಹಿತಿಯನ್ನು ಪ್ರಸಾರ ಮಾಡುವ ಸಾಧನವಾಗಿ ಕಂಡುಹಿಡಿಯಲಾಯಿತು, ಈಗಲೂ ಸಹ ರೇಡಿಯೋ ಜನರ ಒಂದು ಭಾಗವಾಗಿದೆ. ಕೆಲ ಮಾಹಿತಿ ಪ್ರಕಾರ, ಡೆಟ್ರಾಯಿಟ್, ಮಿಚಿಗನ್ನಲ್ಲಿರುವ ಸ್ಟೇಷನ್ 8MK, ಮೊದಲ ರೇಡಿಯೋ ಸುದ್ದಿ ಕಾರ್ಯಕ್ರಮವನ್ನು 31 ಆಗಸ್ಟ್, 1920 ರಂದು ಪ್ರಸಾರ ಮಾಡಲಾಯಿತು.

# ತಮಿಳುನಾಡಿಗೆ ಕಾವೇರಿ ನೀರು ಹರಿಸಲು CWRC ಶಿಫಾರಸು

**ನವದೆಹಲಿ:** ಕರ್ನಾಟಕದಿಂದ ತಮಿಳಿನಾಡಿಗೆ ಫೆಬ್ರವರಿಯಿಂದ ಮಾರ್ಚ್ ಅವಧಿಗೆ 2.50 ಟಿಎಂಸಿ ನೀರು ಹರಿಸಬೇಕು ಎಂದು ಕಾವೇರಿ ನೀರು ನಿಯಂತ್ರಣ ಸಮಿತಿ ಸೂಚನೆ ನೀಡಿದೆ. ಇಂದು ದೆಹಲಿಯಲ್ಲಿ ಸಭೆ ನಡೆಸಿದ ಸಮಿತಿ ಸಸ್ಯವರ್ಗ, ಪ್ರಾಣಿಸಂಕುಲ ಮತ್ತು ಪರಿಸರ ಸಂರಕ್ಷಣೆಗಾಗಿ ಪರಿಸರದ ಹರಿವನ್ನು ಖಚಿತಪಡಿಸಿಕೊಳ್ಳಬೇಕು ಎಂದು ನಿರ್ದೇಶಿಸಿದೆ.

ಸಭೆಯಲ್ಲಿ ದಿನಾಂಕ 01.06.2023 ರಿಂದ 09.02.2024 ರವರೆಗೆ ಕರ್ನಾಟಕದ ನಾಲ್ಕು ಜಲಾಶಯಗಳಿಗೆ ಸಂಚಿತ ಒಳಹರಿವಿನ ಕೊರತೆಯು 52.43% ಇದ್ದು, ಅನಿಯಂತ್ರಿತ ಜಲಾನಯನ ಪ್ರದೇಶದಿಂದ ಉಂಟಾಗುವ ಕೊಡುಗೆಯನ್ನು ಹೊರತುಪಡಿಸಿ ಬಿಳಿಗುಂಡ್ಲು ತಲುಪಲು ಕರ್ನಾಟಕವು ತನ್ನ ಜಲಾಶಯಗಳಿಂದ ಯಾವುದೇ ನೀರನ್ನು ಬಿಡುಗಡೆ ಮಾಡಲು ಸಾಧ್ಯವಾಗುವುದಿಲ್ಲ ಎಂದು ಕರ್ನಾಟಕ ಹೇಳಿತು. ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ತಮಿಳುನಾಡು 7.61 ಟಿಎಂಸಿ ಬಾಕಿ ಉಳಿಸಿಕೊಂಡ ನೀರಿನ ಜೊತೆಗೆ, ಫೆಬ್ರವರಿ 2024 ರಿಂದ ಮೇ 2024 ರ ತಿಂಗಳುಗಳಿಗೆ, ಕರ್ನಾಟಕವು ಪ್ರತಿ ತಿಂಗಳು 2.50 ಟಿಎಂಸಿಯಂತೆ ಪರಿಸರ ಹರಿವನ್ನು ನಿರಂತರವಾಗಿ ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿತು.ಫಿ ಅಂತಿಮವಾಗಿ ಫೆಬ್ರವರಿ 2024 ಮತ್ತು ಮಾರ್ಚ್ 2024 ರ ಉಳಿದ ಅವಧಿಗೆ ಸುಪ್ರೀಂ ಕೋರ್ಟ್ ಮಾರ್ಪಡಿಸಿದಂತೆ ಅಫಆಖಿ ಯ ಆದೇಶದ ಪ್ರಕಾರ ಅಂತರರಾಜ್ಯ ಸಂಪರ್ಕ ಬಿಂದು ಬಿಳಿಗುಂಡ್ಲುನಲ್ಲಿ ಕರ್ನಾಟಕವು ನಿಗದಿತ ಪ್ರಮಾಣದ ನೀರು ಹರಿವನ್ನು ಖಚಿತಪಡಿಸಿಕೊಳ್ಳಬೇಕು ಎಂದು CWRCನಿರ್ಧರಿಸಿತು. ಕರ್ನಾಟಕವು ಫೆಬ್ರವರಿ 2024 ಹಾಗೂ ಮಾರ್ಚ್ 2024 ರ ತಿಂಗಳುಗಳಿಗೆ ಪ್ರತಿ ತಿಂಗಳು 2.50 ಟಿಎಂಸಿ ನೀರು ಹರಿಸಬೇಕು ಎಂದು ಶಿಫಾರಸು ಮಾಡಿತು.



## ಜನವರಿಯಲ್ಲಿ ಚಿಲ್ಲರೆ ಹಣದುಬ್ಬರ ಶೇ.5.10ಕ್ಕೆ ಇಳಿಕೆ



**ನವದೆಹಲಿ:** ಭಾರತದ ಚಿಲ್ಲರೆ ಹಣದುಬ್ಬರವು ಜನವರಿಯಲ್ಲಿ ಶೇಕಡಾ 5.10 ಕ್ಕೆ ಇಳಿದಿದೆ, ಇದು ಡಿಸೆಂಬರ್ನಲ್ಲಿ ಶೇಕಡಾ 5.69 ರಿಂದ ಮೂರು ತಿಂಗಳ ಕನಿಷ್ಠವಾಗಿದೆ. ರಾಷ್ಟ್ರೀಯ ಅಂಕಿಅಂಶ ಕಚೇರಿ (ಓಖಔ) ಸೋಮವಾರ ಬಿಡುಗಡೆ ಮಾಡಿದ ಇತ್ತೀಚಿನ ಮಾಹಿತಿಯ ಪ್ರಕಾರ, ಆಹಾರ ಮತ್ತು ಪಾನೀಯಗಳ ಹಣದುಬ್ಬರವು ಜನವರಿಯಲ್ಲಿ ಶೇಕಡಾ 8.3 ರಷ್ಟು ದಾಖಲಾಗಿದೆ.

ಕಳೆದ ವಾರ ಇತ್ತೀಚಿನ ಆರ್ಬಿಐ ಎಂಪಿಸಿಯಲ್ಲಿ, ಕೇಂದ್ರ ಬ್ಯಾಂಕ್ 2023-24ರ ಚಿಲ್ಲರೆ ಹಣದುಬ್ಬರವನ್ನ ಶೇಕಡಾ 5.4 ಕ್ಕೆ ಅಂದಾಜಿಸಿದೆ. ಪ್ರಸಕ್ತ ತ್ರೈಮಾಸಿಕದಲ್ಲಿ (ಕಿ4) ಅಂದಾಜನ್ನ ಹಿಂದಿನ ಶೇಕಡಾ 5.2 ರಿಂದ ಶೇಕಡಾ 5 ಕ್ಕೆ ಇಳಿಸಲಾಗಿದೆ. 2025ರ ಹಣಕಾಸು ವರ್ಷದಲ್ಲಿ ಹಣದುಬ್ಬರದ ಅಂದಾಜನ್ನು ಶೇ.4.5ಕ್ಕೆ ಇಳಿಸಲಾಗಿದ್ದು, ಮೊದಲ ತ್ರೈಮಾಸಿಕದಲ್ಲಿ ಶೇ.5, ಎರಡನೇ ತ್ರೈಮಾಸಿಕದಲ್ಲಿ ಶೇ.4, ಮೂರನೇ ತ್ರೈಮಾಸಿಕದಲ್ಲಿ ಶೇ.4.6 ಮತ್ತು ನಾಲ್ಕನೇ ತ್ರೈಮಾಸಿಕದಲ್ಲಿ ಶೇ.4.7 ಇರಲಿದೆ.

ಎಲ್ಲಾ ರಾಜ್ಯಗಳು / ಕೇಂದ್ರಾಡಳಿತ ಪ್ರದೇಶಗಳನ್ನ ಒಳಗೊಂಡ ಆಯ್ದ 1,114 ನಗರ ಮಾರುಕಟ್ಟೆಗಳು ಮತ್ತು 1,181 ಗ್ರಾಮಗಳಿಂದ ಎನ್ಎಸ್ಒ, ಎಂಒಎಸ್ಪಿಐನ ಕ್ಷೇತ್ರ ಕಾರ್ಯಾಚರಣೆ ವಿಭಾಗದ ಕ್ಷೇತ್ರ ಸಿಬ್ಬಂದಿ ವೈಯಕ್ತಿಕ ಭೇಟಿಗಳ ಮೂಲಕ ವಾರದ ರೋಸ್ಟರ್ನಲ್ಲಿ ಬೆಲೆ ಡೇಟಾವನ್ನ ಸಂಗ್ರಹಿಸಲಾಗುತ್ತದೆ. ಜನವರಿ ತಿಂಗಳಲ್ಲಿ, ಎನ್ಎಸ್ಒ ಶೇಕಡಾ 99.8 ರಷ್ಟು ಹಳ್ಳಿಗಳು ಮತ್ತು ಶೇಕಡಾ 98.5 ರಷ್ಟು ನಗರ ಮಾರುಕಟ್ಟೆಗಳಿಂದ ಬೆಲೆಗಳನ್ನು ಸಂಗ್ರಹಿಸಿದರೆ, ಅದರಲ್ಲಿ ವರದಿಯಾದ ಮಾರುಕಟ್ಟೆವಾರು ಬೆಲೆಗಳು ಗ್ರಾಮೀಣ ಮಾರುಕಟ್ಟೆಗಳಿಗೆ ಶೇಕಡಾ 89.9 ಮತ್ತು ನಗರ ಪ್ರದೇಶಗಳಿಗೆ ಶೇಕಡಾ 93.6 ರಷ್ಟಿದೆ.

# ಹೆಚ್ಚು ಸರ್ಕಾರಿ ಉದ್ಯೋಗ ಸೃಷ್ಟಿ: ಪ್ರಧಾನಿ ಮೋದಿ

**ದೆಹಲಿ:** ಬಿಜೆಪಿ ಸರ್ಕಾರದ ಆಡಳಿತದಲ್ಲಿ 10 ವರ್ಷಗಳಲ್ಲಿ ಸುಮಾರು 1.5 ಪಟ್ಟು ಹೆಚ್ಚು ಸರ್ಕಾರಿ ಉದ್ಯೋಗಗಳನ್ನು ಒದಗಿಸಿದೆ ಎಂದು ಪ್ರಧಾನಿ ನರೇಂದ್ರ ಮೋದಿಯವರು ಸೋಮವಾರ ಹೇಳಿದ್ದಾರೆ.

ರೋಜಗಾರ್ ಮೇಳದ(ಉದ್ಯೋಗ ಮೇಳ) ಹಿನ್ನೆಲೆಯಲ್ಲಿ ವಿಡಿಯೊ ಕಾನ್ಫರೆನ್ಸ್ ಮೂಲಕ ಒಂದು ಲಕ್ಷಕ್ಕೂ ಅಧಿಕ ಯುವಕರಿಗೆ ಉದ್ಯೋಗ ನೇಮಕಾತಿ ಪತ್ರಗಳನ್ನು ವಿತರಿಸಿ ಮಾತನಾಡಿದ ಅವರು, ನಮ್ಮ ಸರ್ಕಾರ ಉದ್ಯೋಗ ನೇಮಕಾತಿಯಲ್ಲಿ ಪಾರದರ್ಶಕತೆ ತಂದಿದೆ. ಕಾಲಮಿತೊಯಲ್ಲಿ ಉದ್ಯೋಗಕ್ಕೆ ನೇಮಕಾತಿ ಖಚಿತಪಡಿಸುವ ನಿಟ್ಟಿನಲ್ಲಿ ಶ್ರಮಿಸುತ್ತಿದೆ ಎಂದು ಹೇಳಿದರು.

ಈ ಹಿಂದೆ ಸರ್ಕಾರಗಳು ನೇಮಕಾತಿ ನಡೆಸಲು ಬಹಳ ಸಮಯ ತೆಗೆದುಕೊಳ್ಳುತ್ತಿದ್ದವು, ಆದರೆ, ಬಿಜೆಪಿ ಸರ್ಕಾರವು ತನ್ನ ದಶಕದ ಆಡಳಿತದಲ್ಲಿ ಹಿಂದಿನ ಸರ್ಕಾರಕ್ಕಿಂತ 10 ವರ್ಷಗಳಲ್ಲಿ ಸುಮಾರು 1.5 ಪಟ್ಟು ಹೆಚ್ಚು ಸರ್ಕಾರಿ ಉದ್ಯೋಗಗಳನ್ನು ಒದಗಿಸಿದೆ ಎಂದರು.

ನಮ್ಮ ಸರ್ಕಾರ ನಿಗದಿತ ಸಮಯದ ಚೌಕಟ್ಟಿನೊಳಗೆ ನೇಮಕಾತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ನಾವು ಪ್ರಯತ್ನಿಸುತ್ತೇವೆ. ಇದರಿಂದ ಪ್ರತಿಯೊಬ್ಬರೂ ತಮ್ಮ ಸಾಮರ್ಥ್ಯಗಳನ್ನು ಪ್ರದರ್ಶಿಸಲು ಸಮಾನ ಅವಕಾಶವನ್ನು ನೀಡುತ್ತಿದೆ ಎಂದು ತಿಳಿಸಿದರು.



## ಚಿನ್ನದ ಬಾಂಡ್ ಖರೀದಿ ಆರಂಭ

ಪ್ರಸಕ್ತ ಹಣಕಾಸು ವರ್ಷದ ಚಿನ್ನದ ಬಾಂಡ್ ಯೋಜನೆ 5 ನೇ ಕಂತು ಖರೀದಿ ಶುರುವಾಗಿದೆ. ರಿಸರ್ವ್ ಬ್ಯಾಂಕ್ ಆಫ್ ಇಂಡಿಯಾ ಚಿನ್ನ ಪ್ರತಿ ಗ್ರಾಂಗೆ 4790 ರೂಪಾಯಿ ನಿಗದಿಪಡಿಸಿದ್ದು, ಇದು ಮಾರುಕಟ್ಟೆಗಿಂತಲೂ ಕಡಿಮೆ ಬೆಲೆಗೆ ಸಿಗುತ್ತಿದೆ. ಸೋಮವಾರದಿಂದ ಶುಕ್ರವಾರದವರೆಗೆ ಚಿನ್ನದ ಬಾಂಡ್ ಯೋಜನೆ 5 ನೇ ಕಂತು ಖರೀದಿ ನಡೆಯಲಿದೆ. ಆಗಸ್ಟ್ 17 ರಂದು ಬಾಂಡ್ ವಿತರಿಸಲಾಗುವುದು. ಆನ್ಲೈನ್ ಮೂಲಕ ಬಾಂಡ್ ಖರೀದಿಗೆ ಅರ್ಜಿ ಸಲ್ಲಿಸುವವರಿಗೆ ಪ್ರತಿ ಗ್ರಾಂನಲ್ಲಿ 50 ರೂ. ವಿನಾಯಿತಿ ನೀಡಲಾಗುವುದು. ಆಯ್ದ ಬ್ಯಾಂಕುಗಳು, ಅಂಚೆ ಕಚೇರಿಗಳು ಮತ್ತು ಸ್ಟಾಕ್ ಹೋಲ್ಡಿಂಗ್ ಕಾರ್ಪೋರೇಶನ್ ಅಫ್ ಇಂಡಿಯಾ, ಮುಂಬೈ ಷೇರು ವಿನಿಮಯ ಕೇಂದ್ರಗಳಲ್ಲಿ ಬಾಂಡ್ ಮಾರಾಟ ಮಾಡಲಾಗುತ್ತದೆ. ಕನಿಷ್ಠ ಹೂಡಿಕೆ 1 ಗ್ರಾಂ ಇರಲಿದ್ದು ವೈಯಕ್ತಿಕ ಖರೀದಿದಾರರಿಗೆ ಹಾಗೂ ಹಿಂದು ಅವಿಭಕ್ತ ಕುಟುಂಬಕ್ಕೆ 4 ಕೆಜಿ ವರೆಗೆ ಹೂಡಿಕೆ ಮಾಡಬಹುದು. ಟ್ರಸ್ಟ್ ಗಳಿಗೆ 20 ಕೆಜಿ ಹೂಡಿಕೆ ಮಾಡಲು ಅವಕಾಶವಿದೆ. ಎಸ್ಜಿಬಿಗಳನ್ನು ನಿಗದಿತ ವಾಣಿಜ್ಯ ಬ್ಯಾಂಕುಗಳು (ಸಣ್ಣ ಹಣಕಾಸು ಬ್ಯಾಂಕುಗಳು, ಪಾವತಿ ಬ್ಯಾಂಕುಗಳು ಮತ್ತು ಪ್ರಾದೇಶಿಕ ಗ್ರಾಮೀಣ ಬ್ಯಾಂಕುಗಳನ್ನು ಹೊರತುಪಡಿಸಿ), ಸ್ಟಾಕ್ ಹೋಲ್ಡಿಂಗ್ ಕಾರ್ಪೊರೇಷನ್ ಆಫ್ ಇಂಡಿಯಾ ಲಿಮಿಟೆಡ್ (ಎಸ್ಎಚ್ಸಿಐಎಲ್), ಕ್ಲಿಯರಿಂಗ್ ಕಾರ್ಪೊರೇಷನ್ ಆಫ್ ಇಂಡಿಯಾ ಲಿಮಿಟೆಡ್ (ಸಿಸಿಐಎಲ್), ನಿಯೋಜಿತ ಅಂಚೆ ಕಚೇರಿಗಳು ಮತ್ತು ಮಾನ್ಯತೆ ಪಡೆದ ಸ್ಟಾಕ್ ಎಕ್ಸ್ಚೇಂಜ್ಗಳಾದ ನ್ಯಾಷನಲ್ ಸ್ಟಾಕ್ ಎಕ್ಸ್ಚೇಂಜ್ ಆಫ್ ಇಂಡಿಯಾ ಲಿಮಿಟೆಡ್ ಮತ್ತು ಬಾಂಬೆ ಸ್ಟಾಕ್ ಎಕ್ಸ್ಚೇಂಜ್ ಲಿಮಿಟೆಡ್ ಮೂಲಕ ಮಾರಾಟ ಮಾಡಲಾಗುತ್ತದೆ.



## ಹೊಸ ರಾಕೆಟ್ ಲಾಂಚರ್ ನಿಯಂತ್ರಣ ಪರೀಕ್ಷಿಸಿದ ಉತ್ತರ ಕೊರಿಯಾ

**ಪ್ಯೋಂಗ್ಯಾಂಗ್:** ಬಹು ರಾಕೆಟ್ ಲಾಂಚರ್ ಗಾಗಿ ಹೊಸ ನಿಯಂತ್ರಣ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸಿದ್ದು ಅದು ತನ್ನ ರಕ್ಷಣಾ ಸಾಮರ್ಥ್ಯಗಳಲ್ಲಿ ಗುಣಾತ್ಮಕ ಬದಲಾವಣೆಗೆ ಕಾರಣವಾಗಲಿದೆ ಎಂದು ಉತ್ತರ ಕೊರಿಯಾ ಸೋಮವಾರ ಹೇಳಿದೆ. ರಾಕೆಟ್ ಲಾಂಚರ್ಗಳಿಗಾಗಿ ನಿಯಂತ್ರಿತ ಶೆಲ್ ಮತ್ತು ಬ್ಯಾಲಿಸ್ಟಿಕ್ ನಿಯಂತ್ರಣ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸಲು ಪ್ಯೋಂಗ್ಯಾಗ್ನ 'ಅಕಾಡೆಮಿ ಆಫ್ ಡಿಫೆನ್ಸ್ ಸೈಯನ್ಸ್' 240 ಎಂಎಂ ಕ್ಯಾಲಿಬರ್ ಬಹು ರಾಕೆಟ್ ಲಾಂಚರ್ ಶೆಲ್ಗಳ ಬ್ಯಾಲಿಸ್ಟಿಕ್ ನಿಯಂತ್ರಣ ಪ್ರಯೋಗಾರ್ಥ ಪರೀಕ್ಷೆಯನ್ನು ಯಶಸ್ವಿಯಾಗಿ ನಡೆಸಿದೆ. ಹೊಸ ರಾಕೆಟ್ ಲಾಂಚರ್ ಅನ್ನು ಮರುಮೌಲ್ಯಮಾಪನ ಮಾಡಲಾಗುವುದು ಮತ್ತು ಅದರ ಯುದ್ಧಭೂಮಿ ಸಾಮರ್ಥ್ಯವನ್ನು ವರ್ಧಿಸಲಾಗುವುದು ಎಂದು ಸರಕಾರಿ ಸ್ವಾಮ್ಯದ ಕೆಸಿಎನ್ಎ ವರದಿ ಮಾಡಿದೆ. ದಕ್ಷಿಣ ಕೊರಿಯಾವು ಉತ್ತರ ಕೊರಿಯಾದ ಅತ್ಯಂತ ಅಪಾಯಕಾರಿ ಮತ್ತು ಮೊದಲ ಶತ್ರುವಾಗಿದ್ದು ಒಂದು ವೇಳೆ ಅದು ದಾಳಿ ನಡೆಸಿದರೆ ಅದನ್ನು ಅಂತ್ಯಗೊಳಿಸಲು ತಾನು ಹಿಂಜರಿಯುವುದಿಲ್ಲ ಎಂದು ಅಧ್ಯಕ್ಷ ಕಿಮ್ಜಾಂಗ್ ಉನ್ ಪುನರುಚ್ಚರಿಸಿದ್ದಾರೆ.

## ಪ್ಯಾರಾಗ್ಲೈಡಿಂಗ್ ಬಿದ್ದು 26 ವರ್ಷದ ಯುವತಿ ಸಾವು

**ಹೈದರಾಬಾದ್:** ಪ್ಯಾರಾಗ್ಲೈಡಿಂಗ್ ವೇಳೆ ಆಕಾಶದಿಂದ ಟೆರೇಸ್ ಮನೆಯ ಮಹಡಿ ಮೇಲೆ ಬಿದ್ದು 26 ವರ್ಷದ ಯುವತಿ ಸಾವನ್ನಪ್ಪಿದ ಘಟನೆ ಹಿಮಾಚಲ ಪ್ರದೇಶದ ಕುಲುವಿನಲ್ಲಿ ನಡೆದಿದೆ. ಮೃತ ಯುವತಿ ತೆಲಂಗಾಣದ ಹೈದರಾಬಾದ್ನವರಾಗಿದ್ದು, ಹಿಮಾಚಲ ಪ್ರದೇಶದ ಮನಾಲಿಗೆ ಪ್ರವಾಸ ತೆರಳಿದ್ದರು. ಈ ವೇಳೆ ಪ್ಯಾರಾಗ್ಲೈಡಿಂಗ್ ಸಾಹಸದಲ್ಲಿ ಭಾಗವಹಿಸಿದ ವೇಳೆ ಈ ದುರಂತ ಸಂಭವಿಸಿದೆ. ಮನಾಲಿಯ ಕುಲುನಲ್ಲಿ ಈ ದುರಂತ ಸಂಭವಿಸಿದ್ದು, ಪ್ಯಾರಾಗ್ಲೈಡಿಂಗ್ ಸಂಸ್ಥೆ ಹಾಗೂ ಆಕೆಯನ್ನು ಪ್ಯಾರಾಗ್ಲೈಡಿಂಗ್ ಕರೆದೊಯ್ದ ಪೈಲಟ್ ವಿರುದ್ಧ ಪ್ರಕರಣ ದಾಖಲಾಗಿದೆ. ತೆಲಂಗಾಣದ ಸಂಗಾರೆಡ್ಡಿ ಜಿಲ್ಲೆಯ ಜಹೀರಾಬಾದ್ನ ನವ್ಯಾ ಸಾವನ್ನಪ್ಪಿದ ಯುವತಿ. ಮಧ್ಯ ಆಕಾಶದಲ್ಲಿ ಪ್ಯಾರಾಗ್ಲೈಡಿಂಗ್ನಲ್ಲಿ ಹಾರಾಡುತ್ತಿದ್ದ ವೇಳೆ ಹಿಡಿತ ತಪ್ಪಿ ಆಕೆ ಎತ್ತರದಿಂದ ಆರ್ಸಿಸಿ ಕಟ್ಟಡವೊಂದರ ಮಹಡಿ ಮೇಲೆ ಬಿದ್ದ ಪರಿಣಾಮ ಈ ದುರಂತ ಸಂಭವಿಸಿದೆ ಎಂದು ಪೊಲೀಸ್ ಅಧಿಕಾರಿಗಳು ಹೇಳಿದ್ದಾರೆ. ಈ ಪ್ರಕರಣದಲ್ಲಿ ಭಾಗಿಯಾಗಿದ್ದ ಪೈಲಟ್ನ್ನು ಬಂಧಿಸಲಾಗಿದೆ. ಘಟನೆಗೆ ಸಂಬಂಧಿಸಿದಂತೆ ಪ್ರಕರಣ ದಾಖಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಇನ್ನು ಈ ಪ್ಯಾರಾಗ್ಲೈಡಿಂಗ್ಗೆ ಸಂಬಂಧಿಸಿದಂತೆ ಬಳಸಿದ ಉಪಕರಣ ಪರಿಶೀಲಿಸಲಾಗಿದ್ದು, ಅದು ಸರಿಯಾಗಿಯೇ ಇದು ಅವುಗಳನ್ನು ನೋಂದಾಯಿಸಿ ಅನುಮೋದಿಸಲಾಗಿತ್ತು. ಮಾನವ ಲೋಪದಿಂದ ಈ ಅನಾಹುತ ಸಂಭವಿಸಿದೆ ಎಂದು ಪ್ರವಾಸೋದ್ಯಮ ಇಲಾಖೆ ಅಧಿಕಾರಿ ಸುನೈನಾ ಶರ್ಮಾ ಹೇಳಿದ್ದಾರೆ.



## ಫಿಲಿಪೈನ್ಸ್ ಚಿನ್ನದ ಗಣಿಯಲ್ಲಿ ಭೂಕುಸಿತ: ಸಾವಿನ ಸಂಖ್ಯೆ ಹೆಚ್ಚಳ

**ದಕ್ಷಿಣ ಫಿಲಿಪೈನ್ಸ್:** ದಕ್ಷಿಣ ಫಿಲಿಪೈನ್ಸ್ ನ ಚಿನ್ನದ ಗಣಿಯಲ್ಲಿ ಸಂಭವಿಸಿದ ಭೂಕುಸಿತದಲ್ಲಿ ಸಾವನ್ನಪ್ಪಿದವರ ಸಂಖ್ಯೆ 54 ಕ್ಕೆ ಏರಿದೆ ಮತ್ತು 63 ಜನರು ಕಾಣೆಯಾಗಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಧಾರಾಕಾರ ಮಳೆಯ ನಂತರ ಕಳೆದ ಮಂಗಳವಾರ ರಾತ್ರಿ ದಾವಾವೊ ಡಿ ಒರೊ ಪ್ರಾಂತ್ಯದ ಮಸಾರಾ ಪರ್ವತ ಗ್ರಾಮ ಮಸಾರಾದಲ್ಲಿ ಭೂಕುಸಿತ ಸಂಭವಿಸಿದೆ. ಕುಸಿದ ಅವಶೇಷಗಳಡಿ 54 ಶವಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ದಾವಾವೊ ಡಿ ಒರೊ ಪ್ರಾಂತೀಯ ಸರ್ಕಾರ ತಿಳಿಸಿದೆ, ಕನಿಷ್ಠ 32 ನಿವಾಸಿಗಳು ಗಾಯಗಳೊಂದಿಗೆ ಬದುಕುಳಿದಿದ್ದಾರೆ ಆದರೆ 63 ಜನರು ಕಾಣೆಯಾಗಿದ್ದಾರೆ ಎಂದು ತಿಳಿಸಿದೆ. 300 ಕ್ಕೂ ಹೆಚ್ಚು ಜನರು ರಕ್ಷಣಾ ಕಾರ್ಯಾಚರಣೆಯಲ್ಲಿ ಭಾಗಿಯಾಗಿದ್ದಾರೆ ಎಂದು ದಾವಾವೊ ಡಿ ಒರೊದ ಅಧಿಕಾರಿ ಎಡ್ವರ್ಡ್ ಮಕಾಪಿಲಿ ಹೇಳಿದ್ದಾರೆ, ಆದರೆ ಭಾರಿ ಮಳೆ, ದಟ್ಟವಾದ ಮಣ್ಣು ಮತ್ತು ಮತ್ತಷ್ಟು ಭೂಕುಸಿತದ ಬೆದರಿಕೆಯಿಂದ ಕಾರ್ಯಾಚರಣೆಗೆ ಅಡ್ಡಿಯಾಗಿದೆ.



## ದೆಹಲಿ ಚಲೋ: ರಾಜಧಾನಿಯಲ್ಲಿ ಬಿಗಿ ಭದ್ರತೆ

**ನವದೆಹಲಿ:** ಬೆಳೆಗಳಿಗೆ ಕನಿಷ್ಠ ಬೆಂಬಲ ಬೆಲೆ ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಕೇಂದ್ರ ಸರ್ಕಾರದ ಮೇಲೆ ಒತ್ತಡ ತರಲು 200 ರೈತ ಸಂಘಟನೆಗಳು ಮಂಗಳವಾರ ದೆಹಲಿ ಚಲೋಗೆ ಕರೆ ನೀಡಿರುವ ಹಿನ್ನಲೆಯಲ್ಲಿ ರಾಜಧಾನಿಯಲ್ಲಿ ಬಿಗಿ ಭದ್ರತೆ ನಿಯೋಜಿಸಲಾಗಿದೆ. ಈ ಹಿನ್ನೆಲೆಯಲ್ಲಿ ರೈತರು ಅಂಬಾಲ-ಸಿಂಘು, ಕನೌರಿ-ಜಿಂದ್, ಮತ್ತು ದಬಾವಲಿ ಗಡಿಗಳ ಮೂಲಕ ರಾಜಧಾನಿ ಪ್ರವೇಶಕ್ಕೆ ರೈತರು ಯೋಜಿಸಿದ್ದಾರೆ. ಈಗಾಗಲೇ ಪಂಜಾಬ್ ಹಾಗೂ ಹರಿಯಾಣದ ಟ್ರ್ಯಾಕ್ಟರ್ಗಳಲ್ಲಿ ಹೊರಟಿದ್ದಾರೆ. ದೆಹಲಿ ಚಲೋ' ನಲ್ಲಿ ಸುಮಾರು 20,000 ರೈತರು ಪಾಲ್ಗೊಳ್ಳಲಿದ್ದಾರೆ. ಈ ಹಿನ್ನೆಲೆಯಲ್ಲಿ ರಾಷ್ಟ್ರ ರಾಜಧಾನಿಯಲ್ಲಿ ಹೈಅಲರ್ಟ್ ಘೋಷಿಸಲಾಗಿದೆ. ಮುನ್ನೆಚ್ಚರಿಕಾ ಕ್ರಮವಾಗಿ ದೆಹಲಿಯ ಗಡಿ ಭಾಗಗಳನ್ನ ಬ್ಯಾರಿಕೇಡ್ಗಳಿಂದ ಬಂದ್ ಮಾಡಲಾಗಿದೆ. ಈಗಾಗಲೇ ಹಲವು ಕಡೆ ಗಡಿಗಳನ್ನು ಬ್ಯಾರಿಕೇಡ್ಗಳಿಂದ ಬಂದ್ ಮಾಡಲಾಗಿದೆ. ಗಡಿಗಳಲ್ಲಿ ಕ್ರೇನ್ ಮತ್ತು ಕಂಟೇನರ್ಗಳನ್ನು ತಂದಿಡಲಾಗಿದ್ದು, ರೈತರು ದೆಹಲಿ ಪ್ರವೇಶ ಮಾಡಲು ಯತ್ನಿಸಿದ್ರೆ, ಹೆದ್ದಾರಿಯನ್ನೇ ಬಂದ್ ಮಾಡಲು ಪೊಲೀಸರು ಯೋಜಿಸಿದ್ದಾರೆ. ಯಾವುದೇ ಅನಾಹುತಕಾರಿ ಘಟನೆಗಳನ್ನು ತಡೆಯಲು ಹೆಚ್ಚುವರಿ ಪೊಲೀಸ್ ಭದ್ರತೆಯನ್ನ ಆಯಕಟ್ಟಿನ ಸ್ಥಳಗಳಲ್ಲಿ ನಿಯೋಜಿಸಲಾಗಿದೆ. ಸಂಯುಕ್ತ ಕಿಸಾನ್ ಮೋರ್ಚಾ ಕರೆ ನೀಡಿರುವ ಈ ಪ್ರತಿಭಟನೆಗೆ 200 ರೈತ ಸಂಘಟನೆಗಳು ಬೆಂಬಲ ನೀಡಿದ್ದು, ಸುಮಾರು 20,000 ರೈತರು ಪಾಲ್ಗೊಳ್ಳಲಿದ್ದಾರೆ ಎಂದು ಗುಪ್ತಚರ ಇಲಾಖೆ ಅಂದಾಜಿಸಿದೆ.

# ಸರ್ಕಾರ, ರಾಜ್ಯಪಾಲರ ತಿಕ್ಕಾಟ: ಸದನದಿಂದ ಹೊರನಡೆದ ಗವರ್ನರ್



**ಚೆನ್ನೈ:** ತಮಿಳುನಾಡು ಸರ್ಕಾರ ಹಾಗೂ ರಾಜ್ಯಪಾಲರು ನಡುವಿನ ಶೀತಲ ಸಮರ ಈಗ ವಿಕೋಪಕ್ಕೆ ತಿರುಗಿದೆ. ಸರ್ಕಾರ ಸಿದ್ಧಪಡಿಸಿದ ಭಾಷಣವನ್ನು ಓದದೇ ತಮಿಳುನಾಡು ರಾಜ್ಯಪಾಲರು ವಿಧಾನಸಭೆ ಕಲಾಪದಿಂದ ಹೊರ ನಡೆದಿದ್ದಾರೆ. ಈ ಹಿಂದೆ ಕೇರಳ ಗವರ್ನರ್ ಆರೀಫ್ ಅಹ್ಮದ್ ಕೂಡ ಇದೇ ರೀತಿ ಮಾಡಿದ್ದರು. ತಮಿಳುನಾಡು ವಿಧಾನಸಭೆಯ ಈ ವರ್ಷದ ಮೊದಲ ಕಲಾಪ ಇಂದು ಆರಂಭವಾಗಿದ್ದು, ಕಲಾಪಕ್ಕೆ ಬಂದ ತಮಿಳುನಾಡು ಗವರ್ನರ್ ಎಂ. ಎನ್. ರವಿ ಅವರು ರಾಜ್ಯದ ಗವರ್ನರ್ ಆಗಿ ಮಾಡಬೇಕಿದ್ದ ಸಂಪ್ರದಾಯಿಕ ಭಾಷಣವನ್ನು ಮಾಡದೇ ಸದನದಿಂದ ಹೊರ ನಡೆದಿದ್ದಾರೆ.

ಮುಖ್ಯಮಂತ್ರಿ ಸ್ಟಾಲಿನ್ ನೇತೃತ್ವದ ತಮಿಳುನಾಡು ಸರ್ಕಾರ ಹಾಗೂ ತಮಿಳುನಾಡು ರಾಜ್ಯಪಾಲ ಎಂ. ಎನ್. ರವಿ ಅವರ ಮಧ್ಯೆ ಈ ಹಿಂದಿನಿಂದಲೂ ನಿರಂತರ ಮುಸುಕಿನ ಗುದ್ದಾಟ ನಡೆಯುತ್ತಿತ್ತು. ನಂತರದಲ್ಲಿ ತಮಿಳುನಾಡು ರಾಜ್ಯಪಾಲರು ತಮಿಳುನಾಡು ಸರ್ಕಾರದ ವಿರುದ್ಧ ಬಹಿರಂಗವಾಗಿಯೇ ವಾಗ್ದಾಳಿ ನಡೆಸಿದ್ದರು. ಹಾಗೆಯೇ ತಮಿಳುನಾಡು ಸರ್ಕಾರವೂ ಕೂಡ ರಾಜ್ಯಪಾಲರ ವಿರುದ್ಧ ಬಹಿರಂಗವಾಗಿಯೇ ಅಸಮಾಧಾನ ವ್ಯಕ್ತಪಡಿಸಿತ್ತು. ಆದರೆ ಈಗ ರಾಜ್ಯಪಾಲರು ಭಾಷಣ ಓದದೇ ಸದನದಿಂದ ತೆರಳುವುದರೊಂದಿಗೆ ಈ ಸಮರ ಇನ್ನೊಂದು ಹಂತ ತಲುಪಿದೆ. ರಾಜ್ಯಪಾಲರ ಭಾಷಣ ವಾಡಿಕೆಯಂತೆ ರಾಜ್ಯ ಸರ್ಕಾರದ ಕೆಲ ಯೋಜನೆಗಳು ಹಾಗೂ ಕಾರ್ಯವೈಖರಿ ಹಾಗೂ ಕಲಾಪದ ಅಜೆಂಡಾನ್ನು ಹೊಂದಿತ್ತು. ಸಂಪ್ರದಾಯದಂತೆ ತಮಿಳುನಾಡು ಸರ್ಕಾರ ಸಿದ್ಧಪಡಿಸಿದ ಈ ಭಾಷಣದ ಭಾಷಾಂತರವನ್ನು ರಾಜ್ಯಪಾಲರು ಓದಬೇಕಿತ್ತು. ನಂತರ ರಾಜ್ಯ ಸರ್ಕಾರವು ತನ್ನ ಕಾರ್ಯವನ್ನು ಪರಿಶೀಲಿಸಿದ ಮತ್ತು ಅಧಿವೇಶನದ ಕಾರ್ಯಸೂಚಿಯನ್ನು ರೂಪಿಸಿದ ಈ ಭಾಷಣದ ಅನುವಾದವನ್ನು ತಮಿಳುನಾಡು ಸ್ಪೀಕರ್ ಎಂ.ಅಪ್ಪಾವು ಅವರು ಓದಿದರು. ಆದರೆ ರಾಜ್ಯಪಾಲರು ಭಾಷಣದ ಕೊನೆಯಲ್ಲಿ ರಾಷ್ಟ್ರಗೀತೆಗೂ ಕಾಯದೆ ಗದ್ದಲದಿಂದ ಕೂಡಿದ ಸದನದಿಂದ ಸೀದಾ ಹೊರ ನಡೆದರು.

## ಪಾಕಿಸ್ತಾನಿಗಳು ಭಾರತದ ದೊಡ್ಡ ಆಸ್ತಿ:ಮಣಿಶಂಕರ್ ಅಯ್ಯರ್



**ನವದೆಹಲಿ:** ಪಾಕಿಸ್ತಾನಿಗಳನ್ನು ಭಾರತದ ದೊಡ್ಡ ಆಸ್ತಿ ಎಂದು ಹೇಳುವ ಮೂಲಕ ಕಾಂಗ್ರೆಸ್ ನಾಯಕ ಮಣಿಶಂಕರ್ ಅಯ್ಯರ್ ಹೊಸ ವಿವಾದವನ್ನು ಹುಟ್ಟುಹಾಕಿದ್ದಾರೆ. ಉಭಯ ರಾಷ್ಟ್ರಗಳ ನಡುವೆ ಸಂವಹನ ಮಾರ್ಗಗಳನ್ನು ತೆರೆಯುವ ಕರೆಯನ್ನೂ ಅವರು ಪುನರುಚ್ಚರಿಸಿದರು.

ಭಾನುವಾರ ಲಾಹೋರ್ನಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಅವರು ಈ ವಿಷಯ ತಿಳಿಸಿದರು.

ಪಾಕಿಸ್ತಾನಿ ದೈನಿಕ ಡಾನ್ ಅನ್ನು ಉಲ್ಲೇಖಿಸಿ, ಸ್ಥಳೀಯ ಪತ್ರಿಕೆ ವರದಿ ಮಾಡಿದೆ, ಮಾಜಿ ಕೇಂದ್ರ ಸಚಿವರು, ನನ್ನ ಅನುಭವದಿಂದ, ಪಾಕಿಸ್ತಾನಿಗಳು ಇನ್ನೊಂದು ಬದಿಗೆ ಪ್ರತಿಕ್ರಿಯಿಸುವ ಜನರು, ಬಹುಶಃ ಅತಿಯಾಗಿ ಪ್ರತಿಕ್ರಿಯಿಸುವ ಜನರು ಎಂದು ಹೇಳಿದರು.

ನಾವು ಸೌಹಾರ್ದದಿಂದ ವರ್ತಿಸಿದರೆ ಅವರು ಅತಿಯಾದ ಸ್ನೇಹಪರರು ಮತ್ತು ನಾವು ದ್ವೇಷಿಸಿದರೆ ಅವರು ದ್ವೇಷ ಸಾಧಿಸುತ್ತಾರೆ ಎಂದು ಅವರು ಹೇಳಿದರು.

ಅಯ್ಯರ್ ಅವರು ಪಾಕಿಸ್ತಾನದಲ್ಲಿದ್ದಷ್ಟು ತೆರೆದ ತೋಳುಗಳಿಂದ ಅವರನ್ನು ಸ್ವಾಗತಿಸಿದ ದೇಶಕ್ಕೆ ಎಂದಿಗೂ ಹೋಗಿಲ್ಲ ಎಂದು ಹೇಳಿದರು.

ಪಾಕಿಸ್ತಾನಿ ಪತ್ರಿಕೆಯ ಪ್ರಕಾರ, ಕಾಂಗ್ರೆಸ್ ನಾಯಕ ಅವರು ಲಾಹೋರ್ನಲ್ಲಿ ಕಾನ್ಸುಲ್ ಜನರಲ್ ಆಗಿ ನೇಮಕಗೊಂಡ ಸಮಯವನ್ನು ನೆನಪಿಸಿಕೊಂಡರು ಮತ್ತು ಎಲ್ಲರೂ ತನ್ನನ್ನು ಮತ್ತು ಅವರ ಹೆಂಡತಿಯನ್ನು ನೋಡಿಕೊಂಡಿದ್ದಾರೆ ಎಂದು ಹೇಳಿದರು.

# ಬಹುಮತ ಸಾಬೀತು ಪಡಿಸಿದ ಸಿಎಂ ನಿತೀಶ್ ಕುಮಾರ್



**ಬಿಹಾರ:** ಬಿಹಾರದಲ್ಲಿ ನಿತೀಶ್ ಕುಮಾರ್ ನೇತೃತ್ವದ ಎನ್ಡಿಎ ಸರ್ಕಾರದ ಬಹುಮತ ಸಾಬೀತುಪಡಿಸಲು ಸೋಮವಾರ ವಿಶ್ವಾಸಮತ ಯಾಚನೆ ನಡೆಸಿದರು. ಅಂತಿಮವಾಗಿ ಬಿಹಾರ ವಿಧಾನಸಭೆಯಲ್ಲಿ ತಮ್ಮ ಪಕ್ಷವು ಸರ್ಕಾರ ರಚಿಸೋದಕ್ಕೆ ಬೇಕಿದ್ದಂತ ಬಹುಮತವನ್ನು ಸಾಭೀತುಪಡಿಸಿದರು.

ಪಾಟ್ನಾದಲ್ಲಿ ಭಾನುವಾರ ಸಂಜೆ ನಡೆದ ನಿರ್ಣಾಯಕ ಶಾಸಕರ ಸಭೆಗೆ ಬಿಹಾರದ ಆಡಳಿತಾರೂಢ ಜನತಾದಳ (ಯುನೈಟೆಡ್) ನ ಮೂವರು ಶಾಸಕರು ಮತ್ತೊಮ್ಮೆ ಗೈರು ಹಾಜರಾಗಿದ್ದರಿಂದ ಕಳವಳವನ್ನು ಎದುರಿಸಬೇಕಾಯಿತು. ಸಚಿವ ಶ್ರವಣ್ ಕುಮಾರ್ ಅವರ ನಿವಾಸದಲ್ಲಿ ಶನಿವಾರ ನಡೆದ ಹಿಂದಿನ ಭೋಜನಕೂಟದ ಸಭೆಗೆ ಆರು ಶಾಸಕರು ಗೈರು ಹಾಜರಾಗಿದ್ದರು. ಗೈರುಹಾಜರಾದ ಜೆಡಿಯು ಶಾಸಕರಲ್ಲಿ ರೂಪೌಲಿ ಶಾಸಕ ಮತ್ತು ಮಾಜಿ ಸಚಿವ ಬಿಮಾ ಭಾರತಿ, ಸುರ್ಸಂದ್ ಶಾಸಕ ದಿಲೀಪ್ ರೇ (ಈ ಹಿಂದೆ ರಾಷ್ಟ್ರೀಯ ಜನತಾ ದಳದಲ್ಲಿದ್ದರು) ಮತ್ತು ಬಾರ್ಬಿಘಾ ಶಾಸಕ ಸುದರ್ಶನ್ ಕುಮಾರ್ ಸೇರಿದ್ದರು. ಜೆಡಿಯು ತನ್ನ ಶಾಸಕರನ್ನು ವಿಧಾನಸಭೆಯ ಬಳಿಯ ಹೋಟೆಲ್ಗೆ ಸ್ಥಳಾಂತರಿಸಲಾಗಿತ್ತು. 243 ಸದಸ್ಯರ ಬಿಹಾರ ವಿಧಾನಸಭೆಯಲ್ಲಿ ಜೆಡಿಯು 45 ಶಾಸಕರೊಂದಿಗೆ ಮಹತ್ವದ ಸ್ಥಾನವನ್ನು ಹೊಂದಿದ್ದರೆ, ಭಾರತೀಯ ಜನತಾ ಪಕ್ಷ (ಬಿಜೆಪಿ) 79 ಶಾಸಕರನ್ನು ಹೊಂದಿದೆ. ಹೆಚ್ಚುವರಿಯಾಗಿ, ಮೈತ್ರಿ ಪಾಲುದಾರ ಹಿಂದೂಸ್ತಾನಿ ಅವಾಮ್ ಮೋರ್ಚಾ-ಸೆಕ್ಯುಲರ್ (ಎಚ್ಎಎಂ-ಎಸ್) ನಾಲ್ಕು ಶಾಸಕರನ್ನು ನೀಡುತ್ತದೆ ಮತ್ತು ಒಬ್ಬ ಸ್ವತಂತ್ರರ ಬೆಂಬಲದೊಂದಿಗೆ ಎನ್ಡಿಎ 128 ಶಾಸಕರನ್ನು ಒಳಗೊಂಡಿದೆ. ಬಹುಮತ ಸಾಬೀತುಪಡಿಸಲು 122 ಶಾಸಕರ ಅಗತ್ಯವಿದೆ.

# ಸ್ಪೈಸ್ ಜೆಟ್‌ನಿಂದ ಬರೋಬ್ಬರಿ 1400 ಉದ್ಯೋಗಿ ವಜಾ

**ದೆಹಲಿ:** ಕಡಿಮೆ ವೆಚ್ಚದಲ್ಲಿ ಓಡಾಡಲು ಇರುವ ವಾಹಕ ಸ್ಪೈಸ್ಜೆಟ್ ತನ್ನ 1,400 ಉದ್ಯೋಗಿಗಳನ್ನು ವಜಾಗೊಳಿಸಲು ಸಜ್ಜಾಗಿದೆ. ನಗದು ಕೊರತೆಯಿರುವ ಕಾರಣ ಉದ್ಯೋಗಿಗಳನ್ನು ವಜಾಗೊಳಿಸಲು ಯೋಜಿಸುತ್ತಿದೆ. ಈ ಕ್ರಮವು ವೆಚ್ಚವನ್ನು ಕಡಿಮೆ ಮಾಡುವ ಮತ್ತು ಹೂಡಿಕೆದಾರರನ್ನು ಆಕರ್ಷಿಸುವ ಗುರಿಯನ್ನು ಹೊಂದಿದೆ.

ವೇತನ ಪಾವತಿಯಲ್ಲಿ ವಿಳಂಬ ಮತ್ತು ಹಣಕಾಸಿನ ಕಾಳಜಿಗಳ ಹೊರತಾಗಿಯೂ, ಸ್ಪೈಸ್ಜೆಟ್ 2,200 ಕೋಟಿ ರೂಪಾಯಿಗಳ ನಿಧಿಯನ್ನು ಪಡೆದುಕೊಳ್ಳುವ ಪ್ರಕ್ರಿಯೆಯಲ್ಲಿದೆ. ಈ ಮೂಲಕ ತನ್ನ ಹೂಡಿಕೆದಾರರ ಹಿತಾಸಕ್ತಿಯನ್ನು ಉಳಿಸಿಕೊಳ್ಳುವ ಗುರಿಯನ್ನು ಹೊಂದಿದೆ.

ವ್ಯವಹಾರ ನಡೆಸಲು ಹೆಣಗಾಡುತ್ತಿರುವ ವಿಮಾನಯಾನ ಸಂಸ್ಥೆ ಈಗ ಸುಮಾರು 9,000 ಉದ್ಯೋಗಿಗಳನ್ನು ಹೊಂದಿದೆ. ಸರಿಸುಮಾರು 30 ವಿಮಾನಗಳು ಕಾರ್ಯಾಚರಣೆಯಲ್ಲಿವೆ.

ವರದಿಯಾಗಿರುವಂತೆ ಸ್ಪೈಸ್ಜೆಟ್ ವಕ್ತಾರರು ಉದ್ಯೋಗ ಕಡಿತವನ್ನು ದೃಢಪಡಿಸಿದ್ದಾರೆ. ಕಾರ್ಯಾಚರಣೆಯ ಅಗತ್ಯತೆಗಳೊಂದಿಗೆ ಕಂಪನಿಯಾದ್ಯಂತದ ವೆಚ್ಚಗಳನ್ನು ಜೋಡಿಸುವ ಅಗತ್ಯವನ್ನು ಉಲ್ಲೇಖಿಸಿದ್ದಾರೆ.

ನಮ್ಮ ಸೇವೆ ಮತ್ತು ವೆಚ್ಚ-ಕಡಿತ ಕಾರ್ಯತಂತ್ರದ ಭಾಗವಾಗಿ, ಇತ್ತೀಚಿನ ಫಂಡ್ ಇನ್ಫ್ಯೂಷನ್ ಅನ್ನು ಅನುಸರಿಸಿ, ಸ್ಪೈಸ್ಜೆಟ್ ಹಲವಾರು ಕ್ರಮಗಳನ್ನು ಪ್ರಾರಂಭಿಸಿದೆ, ಮಾನವಶಕ್ತಿ ತರ್ಕಬದ್ಧಗೊಳಿಸುವಿಕೆ ಸೇರಿದಂತೆ, ಲಾಭದಾಯಕ ಬೆಳವಣಿಗೆಯನ್ನು ಸಾಧಿಸುವ ಗುರಿಯನ್ನು ಹೊಂದಿದೆ.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# 'ಯುಐ' ಡಬ್ಬಿಂಗ್ ಕೆಲಸದಲ್ಲಿ ತೊಡಗಿದ ಉಪೇಂದ್ರ



ಉಪೇಂದ್ರ ನಟನೆಯ ಯುಐ ತಂಡದಿಂದ ಮತ್ತೊಂದು ಅಪ್ ಡೇಟ್ ಸಿಕ್ಕಿದೆ. ಸದ್ಯ ಉಪೇಂದ್ರ ಅವರು ಯುಐ ಸಿನಿಮಾದ ಡಬ್ಬಿಂಗ್ ಕೆಲಸದಲ್ಲಿ ನಿರತರಾಗಿದ್ದಾರೆ ಎಂದು ನಿರ್ಮಾಪಕರಲ್ಲಿ ಒಬ್ಬರಾದ ಕೆ.ಪಿ ಶ್ರೀಕಾಂತ್ ಸೋಷಿಯಲ್ ಮೀಡಿಯಾದಲ್ಲಿ ಮಾಹಿತಿ ನೀಡಿದ್ದಾರೆ. ಜೊತೆಗೆ ಉಪೇಂದ್ರ ಅವರು ಡಬ್ಬಿಂಗ್ ಮಾಡುತ್ತಿರುವ ವಿಡಿಯೋವನ್ನು ಅವರು ಶೇರ್ ಮಾಡಿದ್ದಾರೆ. ಈ ಹಿಂದೆ ಯುಐ ಸಿನಿಮಾದ ಟೀಸರ್ ರಿಲೀಸ್ ಆಗಿತ್ತು. ಅದಕ್ಕೆ ಅದ್ಭುತ ರೆಸ್ಪಾನ್ಸ್ ಸಿಕ್ಕಿತ್ತು. ರಿಲೀಸ್ ಆದ ಕೆಲವೇ ಗಂಟೆಗಳಲ್ಲಿ 23 ಮಿಲಿಯನ್ ವೀಕ್ಷಣೆ ಪಡೆದುಕೊಂಡಿತ್ತು. ಈ ಖುಷಿಯಲ್ಲಿ ಉಪ್ಪಿ ಸೋಷಿಯಲ್ ಮೀಡಿಯಾ ಮೂಲಕ ಹಂಚಿಕೊಂಡಿದ್ದರು. ವೀಕ್ಷಣೆಗೆ ಧನ್ಯವಾದಗಳನ್ನೂ ಹೇಳಿದರು. ಟೀಸರ್ ನೋಡಿದ ಉಪ್ಪಿ ಅಭಿಮಾನಿಗಳು ಸಾಕಷ್ಟು ತಲೆಕೆಡಿಸಿಕೊಂಡಿದ್ದಾರೆ. ಜೊತೆಗೆ ನೂರಾರು ಪ್ರಶ್ನೆಗಳನ್ನು ಉಪ್ಪಿಗೆ ಕೇಳಿದ್ದಾರೆ. ಯಾರೇ ಪ್ರಶ್ನೆ ಮಾಡಿದರೂ ಉಪೇಂದ್ರ ಮಾತ್ರ ಟೀಸರ್ ನೋಡಿ, ಅಲ್ಲೇ ಉತ್ತರವಿದೆ ಎನ್ನುವಂತೆ ಮೌನ ತಾಳಿದ್ದಾರೆ. ತಿಂಗಳ ಹಿಂದೆಯಷ್ಟೇ ಬೆಂಗಳೂರಿನ ಪ್ರತಿಷ್ಠಿತ ಹೋಟೆಲ್ ನಲ್ಲಿ ನಡೆದ ಟೀಸರ್ ಬಿಡುಗಡೆ ಸಮಾರಂಭಕ್ಕೆ ತೆಲುಗಿನ ಖ್ಯಾತ ನಿರ್ಮಾಪಕ ಅಲ್ಲು ಅರವಿಂದ್ ಆಗಮಿಸಿದ್ದರು. ಶಿವರಾಜ್ ಕುಮಾರ್, ಪಬ್ಲಿಕ್ ಟಿವಿ ಮುಖ್ಯಸ್ಥ ಹೆಚ್.ಆರ್.ರಂಗನಾಥ್ (ಸೇರಿದಂತೆ ಹಲವರು ಕಾರ್ಯಕ್ರಮಲ್ಲಿ ಭಾಗಿಯಾಗಿದ್ದರು.

# ಪ್ರೀತಿಸಿದ ಹುಡುಗನ ಕೈ ಹಿಡಿದ ನಟಿ



ಗಿಲ್ಲಿ ಸೇರಿದಂತೆ ಸಾಕಷ್ಟು ಸಿನಿಮಾಗಳಲ್ಲಿ ನಟಿಸಿರುವ ರಕುಲ್ ಪ್ರೀತಿ ಸಿಂಗ್ ಫೆ.21ರಂದು ಗೋವಾದಲ್ಲಿ ಹೊಸ ಜೀವನಕ್ಕೆ ಕಾಲಿಡುತ್ತಿದ್ದಾರೆ. ಬಾಲಿವುಡ್ ನ ಅನೇಕ ನಟಿಯರು ವಿದೇಶಗಳಲ್ಲಿ ಮದುವೆ ಪ್ಲ್ಯಾನ್ ಮಾಡಿದ್ದರೆ, ರಕುಲ್ ಮಾತ್ರ ಗೋವಾವನ್ನು ಆಯ್ಕೆ ಮಾಡಿಕೊಂಡಿದ್ದಾರೆ. ಕುಟುಂಬಸ್ಥರು ಮತ್ತು ಆಪ್ತರಿಗೆ ಈಗಾಗಲೇ ಆಹ್ವಾನ ಕೂಡ ನೀಡಲಾಗಿದೆ.



ಮೊನ್ನೆಯಷ್ಟೇ 31ನೇ ವರ್ಷದ ಹುಟ್ಟುಹಬ್ಬವನ್ನು ಸಂಭ್ರಮದಿಂದ ಆಚರಿಸಿದ್ದಾರೆ. ಈ ವೇಳೆ ತಮ್ಮ ವೈಯಕ್ತಿಕ ಜೀವನದ ಕುರಿತಾಗಿ ಕೆಲವು ವಿಚಾರಗಳನ್ನು ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದರು. ತಮ್ಮ ಜನ್ಮದಿನವನ್ನು ಭರ್ಜರಿಯಾಗಿ ನಟಿ ರಕುಲ್ ಪ್ರೀತ್ ಸಿಂಗ್ ಸೆಲೆಬ್ರೇಟ್ ಮಾಡಿದ್ದರು.

ಈ ಸಮಯದಲ್ಲಿ ರಕುಲ್ ಪ್ರೀತಿ ಸಿಂಗ್ ಅವರ ಬಾಯ್‌ಫ್ರೆಂಡ್ ನಟ, ನಿರ್ಮಾಪಕ ಜ್ಯಾಕಿ ಭಗ್ನಾನಿ ನೀನಿಲ್ಲದೆ ದಿನಗಳು ಎಂದಿನಂತೆ ದಿನಗಳಾಗಿರುವುದಿಲ್ಲ. ನೀನಿಲ್ಲದೆ ಎಂಥಾ ರುಚಿಕರ ತಿನಿಸನ್ನೂ ಆಸ್ವಾದಿಸಲಾಗುವುದಿಲ್ಲ. ನನ್ನ ಪಾಲಿಗೆ ಜಗತ್ತೇ ಆಗಿರುವ ಪ್ರೀತಿಯ ಪ್ರಿಯತಮೆಗೆ ಹುಟ್ಟುಹಬ್ಬದ ಶುಭಾಶಯಗಳು. ನಿಮ್ಮ ಈ ದಿನ ನಿಮ್ಮಂತೆಯೇ ಸುಂದರವಾಗಿರಲಿ, ನಿಮ್ಮ ನಗುವಿನಂತೆಯೇ ಪ್ರಜ್ವಲಿಸಲಿ. ಹ್ಯಾಪಿ ಬರ್ತ್‌ಡೇ ಮೈ ಲವ್ ಎಂದು ಇನ್ ಸ್ಟಾಗ್ರಾಂನಲ್ಲಿ ಬರೆದುಕೊಂಡಿದ್ದರು. ಆಗಲೇ ಮದುವೆ ವಿಚಾರವನ್ನೂ ಅವರು ಪ್ರಸ್ತಾಪಿಸಿದ್ದರು. ಥ್ಯಾಂಕ್ಯು ಮೈ ಲವ್. ಈ ವರ್ಷ ನನಗೆ ಸಿಕ್ಕ ಅತ್ಯುತ್ತಮ ಉಡುಗೊರೆ ನೀವೇ. ನನ್ನ ಬದುಕಿಗೆ ಬಣ್ಣಗಳನ್ನು ತುಂಬಿದ ನಿಮಗೆ ಧನ್ಯವಾದಗಳು. ನನ್ನನ್ನ ಸದಾ ನಗುವಂತೆ ಮಾಡುವ ನಿಮಗೆ ಧನ್ಯವಾದಗಳು ಎಂದು ಜ್ಯಾಕಿ ಭಗ್ನಾನಿ ಅವರನ್ನು ಉಲ್ಲೇಖಿಸಿ ಇನ್‌ಸ್ಟಾಗ್ರಾಂನಲ್ಲಿ ನಟಿ ರಕುಲ್ ಪ್ರೀತ್ ಸಿಂಗ್ ಬರೆದುಕೊಳ್ಳುವ ಮೂಲಕವಾಗಿ ತಮ್ಮ ಬಾಯ್ ಫ್ರೆಂಡ್ ಕುರಿತಾಗಿ ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದರು. ಅದೇ ಗೆಳೆಯನ ಜೊತೆಯೆ ನಟಿ ಹೊಸ ಜೀವನಕ್ಕೆ ಕಾಲಿಡುತ್ತಿದ್ದಾರೆ.

ಸ್ಯಾಂಡಲ್‌ವುಡ್, ಬಾಲಿವುಡ್ ಸಿನಿಮಾಗಳಲ್ಲಿ ರಕುಲ್ ಪ್ರೀತಿ ಸಿಂಗ್ ನಟಿಸಿದ್ದಾರೆ. ಕನ್ನಡದ ಗಿಲ್ಲಿ ಚಿತ್ರದ ಮೂಲಕ ಚಿತ್ರರಂಗಕ್ಕೆ ಕಾಲಿಟ್ಟ ನಟಿ ರಕುಲ್ ಪ್ರೀತ್ ಸಿಂಗ್ ಕಿಕ್ 2, ಸರೈನೋಡು, ನಾನಕು ಪ್ರೇಮತೋ, ಸ್ಪೈಡರ್ ಮುಂತಾದ ಹಿಟ್ ಚಿತ್ರಗಳಲ್ಲಿ ಅಭಿನಯಿಸುವ ಮೂಲಕವಾಗಿ ಅಪಾರ ಅಭಿಮಾನಿಗಳ ಪ್ರೀತಿಯನ್ನು ಸಂಪಾದಿಸಿದ್ದಾರೆ.

# ದರ್ಶನ್ ಚಿತ್ರರಂಗಕ್ಕೆ ಬಂದು 25 ವರ್ಷ




ಚಾಲೆಂಜಿಂಗ್ ಸ್ಟಾರ್ ದರ್ಶನ್ ಚಂದನವನಕ್ಕೆ ಪದಾರ್ಪಣೆ ಮಾಡಿ ಭರ್ತಿ 25 ವರ್ಷಗಳಾಗಿವೆ. ಇದೇ ಶುಭ ಸಂದರ್ಭದಲ್ಲಿ ದರ್ಶನ್ ಅವರ ನೆಚ್ಚಿನ ಸೆಲೆಬ್ರಿಟಿಗಳು, ಸ್ನೇಹಿತರು ಹಾಗೂ ಹಿತೈಷಿಗಳು ಅರ್ಥಪೂರ್ಣವಾದ ಸಮಾರಂಭವೊಂದನ್ನು ಏರ್ಪಡಿಸಿದ್ದಾರೆ. ಶ್ರೀ ಆದಿಚುಂಚನಗಿರಿ ಶ್ರೀಗಳು, ಶ್ರೀ ಸುತ್ತೂರು ಶ್ರೀಗಳು, ಬೇಬಿ ಮಠ ಶ್ರೀಗಳ ಸಾನಿಧ್ಯದಲ್ಲಿ ಹಾಗೂ ಸಂಸದೆ, ಚಿತ್ರನಟಿ ಸುಮಲತಾ ಅಂಬರೀಶ್ ಅವರ ಉಪಸ್ಥಿತಿಯಲ್ಲಿ ಕಾರ್ಯಕ್ರಮ ನೆರವೇರಲಿದೆ.

ಫೆಬ್ರವರಿ 17ರ ಶನಿವಾರ ಸಂಜೆ 5 ಗಂಟೆಗೆ ಬೆಳ್ಳಿ ಪರ್ವ ಡಿ–25 ಎಂಬ ಕಾರ್ಯಕ್ರಮ ನಡೆಯಲಿದೆ. ಸಾವಿರಾರು ಅಭಿಮಾನಿಗಳ ಸಮ್ಮುಖದಲ್ಲಿ ಈ ಸಮಾರಂಭ ನಡೆಯಲಿದ್ದು, ಕನ್ನಡ ಚಿತ್ರರಂಗದಲ್ಲಿ 25 ವರ್ಷ ಪೂರೈಸಿರುವ ದರ್ಶನ್ ಅವರಿಗೆ ಸನ್ಮಾನ ಕಾರ್ಯಕ್ರಮ ನಡೆಯಲಿದೆ. ಜತೆಗೆ ವಿ.ಹರಿಕೃಷ್ಣ ಸಂಗೀತ ಸಂಜೆ ಸೇರಿದಂತೆ ಹಲವು ಮನರಂಜನಾ ಕಾರ್ಯಕ್ರಮಗಳು ಇರಲಿವೆ.

ವಿನೋದ್ ರಾಜ್ ಕುಮಾರ್, ವಿನೋದ್ ಪ್ರಭಾಕರ್, ಸತೀಶ್ ನೀನಾಸಂ, ಡಾಲಿ ಧನಂಜಯ್, ಅಭಿಷೇಕ್ ಅಂಬರೀಶ್, ಧನ್ವೀರ್, ಚಿಕ್ಕಣ್ಣ, ಝೈದ್ ಖಾನ್, ಶಿವರಾಜ್ ಕೆ.ಆರ್ ಪೇಟೆ ಹಾಗೂ ಸೂರಜ್ ಸೇರಿದಂತೆ ಸಾಕಷ್ಟು ನಟ, ನಟಿಯರು ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ನಿಮಿಕಾ ರತ್ನಾಕರ್, ನಿಶ್ವಿಕಾ ನಾಯ್ಡು, ಬೃಂದಾ ಆಚಾರ್ಯ, ಶರಣ್ಯ ಶೆಟ್ಟಿ, ನಮ್ರತಾ ಗೌಡ, ತನ್ವಿಯ ಬಾಲರಾಜ್, ಪ್ರಿಯಾಂಕ ಗೌಡ ನೃತ್ಯ ಮಾಡಲಿದ್ದಾರೆ.

ಹಲವು ಸಾಮಾಜಿಕ ಕಾರ್ಯಕ್ರಮಗಳು ಇದೇ ವೇಳೆ ಜರುಗಲಿದೆ. ಇವೆಲ್ಲ ಕಾರ್ಯಗಳ ಉಸ್ತುವಾರಿಯನ್ನು ದರ್ಶನ್ ಅವರ ಆತ್ಮೀಯರಾದ ಎಸ್.ಸಚ್ಚಿದಾನಂದ ಇಂಡುವಾಳು ವಹಿಸಿಕೊಂಡಿದ್ದಾರೆ. ಶ್ರೀರಂಗಪಟ್ಟಣದ ಶ್ರೀ ರಂಗನಾಥ ಸ್ವಾಮಿ ದೇವಸ್ಥಾನ ಮೈದಾನದಲ್ಲಿ ಬೆಳ್ಳಿ ಪರ್ವ ಕಾರ್ಯಕ್ರಮ ನಡೆಯಲಿದೆ.

# ಇಂಗ್ಲೆಂಡ್ ವಿರುದ್ಧ 3ನೇ ಟೆಸ್ಟ್ ಪಂದ್ಯಕ್ಕೆ ಜಡ್ಡು ಇನ್



ಇದೇ ಫೆ.15ರಿಂದ ಇಂಗ್ಲೆಂಡ್ ವಿರುದ್ಧ ಇಲ್ಲಿ ನಡೆಯಲಿರುವ 3ನೇ ಟೆಸ್ಟ್ ಪಂದ್ಯದಿಂದ ಟೀಂ ಇಂಡಿಯಾ ಬ್ಯಾಟಿಂಗ್ ಪಿಲ್ಲರ್ ಕೆ.ಎಲ್ ರಾಹುಲ್ ಹೊರಗುಳಿದಿದ್ದಾರೆ. ಆದ್ರೆ ಕೆ.ಎಲ್ ರಾಹುಲ್ ಅವರ ಸ್ಥಾನಕ್ಕೆ ಬಿಸಿಸಿಐ ಮತ್ತೊಬ್ಬ ಕನ್ನಡಿಗನಿಗೆ ಮಣೆ ಹಾಕಿದೆ.

ಇಂಗ್ಲೆಂಡ್ ವಿರುದ್ಧದ 3ನೇ ಪಂದ್ಯಕ್ಕೆ ಭಾರತ ತಂಡವನ್ನು ಪ್ರಕಟಿಸಲು ಕನ್ನಡಿಗ ಕೆ.ಎಲ್ ರಾಹುಲ್ ಹಾಗೂ ಆಲ್‌ರೌಂಡರ್ ರವೀಂದ್ರ ಜಡೇಜಾ ಅವರನ್ನು ಫಿಟ್‌ನೆಸ್ ಪರೀಕ್ಷೆಗೆ ಒಳಪಡಿಸಲಾಗಿತ್ತು. ಈ ವೇಳೆ ಜಡೇಜಾ ಪಾಲ್ಗೊಳ್ಳುವಿಕೆಗೆ ಬಿಸಿಸಿಐ ಗ್ರೀನ್ ಸಿಗ್ನಲ್ ನೀಡಿದ್ದು, ಫಿಟ್‌ನೆಸ್ ಸಾಬೀತುಪಡಿಸುವಲ್ಲಿ ವಿಫಲರಾದ ಕೆ.ಎಲ್ ರಾಹುಲ್ ಅವರನ್ನು ಪಂದ್ಯದಿಂದ ಹೊರಗಿಡಲಾಗಿದೆ. ಅಲ್ಲದೇ ಕೆ.ಎಲ್ ರಾಹುಲ್ ಸ್ಥಾನಕ್ಕೆ ಮತ್ತೊಬ್ಬ ಕನ್ನಡಿಗನನ್ನೇ ಆದ ದೇವದತ್ ಪಡಿಕ್ಕಲ್ ಅವರಿಗೆ ಸ್ಥಾನ ನೀಡಲಾಗಿದೆ ಎಂದು ಬಿಸಿಸಿಐ ಮೂಲಗಳು ತಿಳಿಸಿವೆ.

ಸದ್ಯ ವಿರಾಟ್ ಕೊಹ್ಲಿ ಅವರ ಅನುಪಸ್ಥಿತಿಯಿಂದ ಟೀಂ ಇಂಡಿಯಾಕ್ಕೆ ಬ್ಯಾಟಿಂಗ್ ಬಲದ ಕೊರತೆಯಾಗಿದೆ. ಅನುಭವಿ ಅಗ್ರಕ್ರಮಾಂಕದಲ್ಲಿ ಕೊಹ್ಲಿ ಅವರ ಸ್ಥಾನ ತುಂಬಲು ಕೆ.ಎಲ್ ರಾಹುಲ್ ಅವರನ್ನು ತಂಡಕ್ಕೆ ಕರೆತರುವ ಉತ್ಸಾಹದಲ್ಲಿ ಬಿಸಿಸಿಐ ಇತ್ತು. ಆದ್ರೆ ಕೆ.ಎಲ್ ರಾಹುಲ್ ಅವರು ಹೈದರಾಬಾದ್‌ನಲ್ಲಿ ನಡೆದ ಮೊದಲ ಟೆಸ್ಟ್ ಪಂದ್ಯದ ವೇಳೆ ಬಲತೋಡೆಯ ಸ್ನಾಯು ಸೆಳೆತದಿಂದ ಬಳಲುತ್ತಿದ್ದರು. ಸದ್ಯ ಕೆ.ಎಲ್ ರಾಹುಲ್ ಅವರು ಸಂಪೂರ್ಣ ಫಿಟ್ ಇರುವುದು ಕಂಡುಬಂದಿಲ್ಲ. ಹಾಗಾಗಿ ರಾಹುಲ್ ಅವರನ್ನು ಇನ್ನೂ ಒಂದು ವಾರಗಳ ಕಾಲ ಅವರನ್ನು ವೈದ್ಯಕೀಯ ಮೇಲ್ವಿಚಾರಣೆಗೆ ಒಳಪಡಿಸಲಾಗಿದೆ ಎಂದು ಬಿಸಿಸಿಐ ತಿಳಿಸಿದೆ.

**ಪಡಿಕಲ್‌ಗೆ ಚಾನ್ಸ್:** ಕೆ.ಎಲ್ ರಾಹುಲ್ ಬದಲಿಗೆ ಕರ್ನಾಟಕದ ಮತ್ತೊಬ್ಬ ಬ್ಯಾಟ್ಸ್‌ಮನ್ ದೇವದತ್ ಪಡಿಕ್ಕಲ್ ಅವರಿಗೆ ಟೆಸ್ಟ್ ತಂಡದಲ್ಲಿ ಸ್ಥಾನ ನೀಡಲಾಗಿದೆ. ಸದ್ಯ ರಣಜಿ ಟ್ರೋಫಿಯಲ್ಲಿ ಆಡುತ್ತಿರುವ ದೇವದತ್ ಪಡಿಕಲ್ ಕರ್ನಾಟಕದ ಪರ ಅದ್ಭುತ ಬ್ಯಾಟಿಂಗ್ ಪ್ರದರ್ಶನ ನೀಡುತ್ತಿದ್ದಾರೆ. ಇತ್ತೀಚೆಗೆ ಪಂಜಾಬ್ ವಿರುದ್ಧ ನಡೆದ ಪಂದ್ಯದಲ್ಲಿ 193 ರನ್ ಗಳಿಸಿ ಮಿಂಚಿದ್ದರು. ಅಲ್ಲದೇ ಇಂಗ್ಲೆಂಡ್ ಲಯನ್ಸ್ ವಿರುದ್ಧ ನಡೆದ ಎರಡು ಟೆಸ್ಟ್ ಪಂದ್ಯದ ಮೂರು ಇನ್ನಿಂಗ್ಸ್‌ಗಳಲ್ಲಿ ಭಾರತ ಎ ತಂಡದ ಪರ ಕ್ರಮವಾಗಿ 105, 65 ಮತ್ತು 21 ರನ್ ಗಳಿಸಿದ್ದರು.

# ಮೋದಿ ತವರಲ್ಲಿ ಲೋಕಸಭಾ ಪ್ರೀಮಿಯರ್ ಲೀಗ್‌ಗೆ ಚಾಲನೆ



**ಗಾಂಧಿನಗರ:** ಇದೇ ಮೊದಲ ಬಾರಿಗೆ ಗುಜರಾತ್‌ನ ಗಾಂಧಿನಗರ ಲೋಕಸಭಾ ಕ್ಷೇತ್ರದ ಜನರಿಗಾಗಿ ಕೇಂದ್ರ ಗೃಹಸಚಿವ ಅಮಿತ್ ಶಾ ಅವರು ಹೊನಲು ಬೆಳಕಿನ ಕ್ರಿಕೆಟ್ ಟೂರ್ನಿಯನ್ನ ಆಯೋಜಿಸಿದ್ದು, ಅಧಿಕೃತವಾಗಿ ಚಾಲನೆಗೊಂಡಿದೆ.

ಟೀಂ ಇಂಡಿಯಾ ಆಟಗಾರ ಹಾರ್ದಿಕ್ ಪಾಂಡ್ಯ, ಅಮಿತ್ ಶಾ ಜೊತೆಗೂಡಿ ಗಾಂಧಿನಗರ ಲೋಕಸಭಾ ಪ್ರೀಮಿಯರ್ ಲೀಗ್‌ಗೆ ಚಾಲನೆ ನೀಡಿದ್ದಾರೆ. ಈ ಸಂದರ್ಭದಲ್ಲಿ ಗುಜರಾತ್ ಮುಖ್ಯಮಂತ್ರಿ ಭೂಪೇಂದ್ರಭಾಯ್ ಪಟೇಲ್ ಸಹ ಸಾಥ್ ನೀಡಿದ್ದಾರೆ.

ಖೇಲೋ ಇಂಡಿಯಾ ಮಾದರಿಯಲ್ಲಿ ಕ್ರೀಡಾ ಉತ್ಸಾಹ ಬೆಳೆಸುವ ನಿಟ್ಟಿನಲ್ಲಿ ಖೇಲೋ ಗಾಂಧಿನಗರ ಘೋಷವಾಕ್ಯದ ಅಡಿಯಲ್ಲಿ ಟೂರ್ನಿ ಆಯೋಜಿಸಲಾಗಿದೆ.

ವೇಜಲ್‌ಪುರ, ಘಟ್ಲೋಡಿಯಾ, ನಾರಣಪುರ, ಸಬರಮತಿ, ಗಾಂಧಿನಗರ ಉತ್ತರ, ಮಾನ್ಸಾ ಮತ್ತು ಸನಂದ್ ಸೇರಿ ಏಳು ವಿಧಾನಸಭಾ ಕ್ಷೇತ್ರಗಳನ್ನು ಒಳಗೊಂಡಿರುವ ಈ ಕ್ರಿಕೆಟ್ ಟೂರ್ನಿಯು 13 ಮೈದಾನಗಳಲ್ಲಿ 21 ದಿನಗಳ ಕಾಲ ನಡೆಯಲಿದೆ. ಒಟ್ಟು 1,078 ತಂಡಗಳ ನಡುವೆ ಲೀಗ್ ಪಂದ್ಯಗಳು ನಡೆಯಲಿದ್ದು, 16,100 ಆಟಗಾರರು ಪಾಲ್ಗೊಳ್ಳಲಿದ್ದಾರೆ. ಪ್ರತಿ ಪಂದ್ಯಕ್ಕೆ 10 ಓವರ್ ಮೀಸಲಾಗಿರುತ್ತದೆ.

## ಕಾಂಗ್ರೆಸ್‌ನವರದ್ದು ಲೂಟಿ ಸರ್ಕಾರ

# ಆರ್ ಅಶೋಕ್, ಬೊಮ್ಮಾಯಿ ವಾಗ್ದಾಳಿ

**ಬೆಂಗಳೂರು:** ರಾಜ್ಯ ಕಾಂಗ್ರೆಸ್ ಸರ್ಕಾರ ಲೂಟಿ ಸರ್ಕಾರ ಎಂದು ವಿಧಾನಸಭೆ ಪ್ರತಿಪಕ್ಷ ನಾಯಕ ಆರ್ ಅಶೋಕ ವಾಗ್ದಾಳಿ ನಡೆಸಿದರು. ವಿಧಾನಮಂಡಲದ ಜಂಟಿ ಅಧಿವೇಶನ ಉದ್ದೇಶಿಸಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಭಾಷಣ ಮಾಡಿದ ನಂತರ ವಿಧಾನಸೌಧದಲ್ಲಿ ಆ ಬಗ್ಗೆ ಪ್ರತಿಕ್ರಿಯಿಸಿದ ಅಶೋಕ, ರಾಜ್ಯದಲ್ಲಿ ಯಾವುದೇ ಅಭಿವೃದ್ಧಿ ಕೆಲಸಗಳನ್ನು ಸರ್ಕಾರ ಮಾಡಿಲ್ಲ. ಕಾಂಗ್ರೆಸ್ ಸರ್ಕಾರ ರಾಜ್ಯಪಾಲರ ಭಾಷಣದಲ್ಲಿ ಸುಳ್ಳು ಹೇಳಿಸಿದೆ ಎಂದರು.

ರಾಜ್ಯಪಾಲರು ಮಾಡಿದ ಭಾಷಣದಲ್ಲಿ ಸುಳ್ಳು ಮಾಹಿತಿ ಇದೆ. ಕಾಂಗ್ರೆಸ್ ಅಧಿಕಾರಕ್ಕೆ ಬಂದಾಗಿನಿಂದ ಈವರೆಗೂ ಯಾವುದೇ ಅಭಿವೃದ್ಧಿ ಆಗಿಲ್ಲ. ಜನರ ಹಣವನ್ನು ಕೊಳ್ಳೆ ಹೊಡೆಯುವುದೇ ಸರ್ಕಾರದ ಕೆಲಸ ಆಗಿದೆ ಎಂದು ಅಶೋಕ ಟೀಕಿಸಿದರು.

ಬಿಜೆಪಿ ಸರ್ಕಾರ ಜಾರಿಗೆ ತಂದ ಯೋಜನೆಗಳನ್ನು, ಕೇಂದ್ರದ ಯೋಜನೆಯನ್ನು ನಾವೇ ತಂದಿದ್ದೀವಿ, ನಾವೇ ಮಾಡಿದ್ದು ಎಂದು ರಾಜ್ಯ ಸರ್ಕಾರ ಬೆನ್ನು ತಟ್ಟಿಕೊಂಡಿದೆ. ಕೋಮುವಾದಕ್ಕೆ ಉತ್ತೇಜನ ನೀಡುವ ಕೆಲಸ ಆಗಿದೆ. ಐದನೇ ಗ್ಯಾರಂಟಿ ಪ್ರಾರಂಭವೇ ಆಗಿಲ್ಲ. ಒಬ್ಬ ನಿರುದ್ಯೋಗಿ ಯುವಕನಿಗೆ ಒಂದು ರೂಪಾಯಿ ಸಿಕ್ಕಿಲ್ಲ. ಬರದ ವಿಚಾರದಲ್ಲಿ ಎರಡು ಸಾವಿರ ಹಣ ಕೊಟ್ಟಿಲ್ಲ. ಕಂತು ಕಂತು ಆಗಿ ಹೋಗಿದೆ ಅಂತೆ. ರೈತರಿಗೆ ಮೋಸ ಮಾಡುತ್ತಾ ಇದ್ದಾರೆ. ಬರ ಪರಿಸ್ಥಿತಿ 25 ಸಾವಿರ ಪರಿಹಾರ ನೀಡಬೇಕು ಅಂತ ಒತ್ತಾಯ ಮಾಡಿದ್ದೆವು. ಅದನ್ನು ಕೊಡುವುದು ಬಿಟ್ಟು ಕೇಂದ್ರದ ಮೇಲೆ ಗೂಬೆ ಕುರಿಸುವ ಕೆಲಸ ಆಗುತ್ತಿದೆ. ಅಭಿವೃದ್ಧಿ ಕುಂಠಿತ ಆಗಿದೆ ಎಂದು ಅಶೋಕ ಆಕ್ರೋಶ ವ್ಯಕ್ತಪಡಿಸಿದರು.

ಮಕ್ಕಳಿಗೆ ಚಿಕ್ಕಿ, ಮೊಟ್ಟೆ ಕೊಡುತ್ತಾ ಇದ್ದೇವೆ ಎನ್ನುತ್ತಾರೆ. ಮೊಟ್ಟೆ, ಚಿಕ್ಕಿ ಕೊಟ್ಟು ಶೌಚಾಲಯ ಕ್ಲೀನ್ ಮಾಡಿಸುವ ಕೆಲಸ ಮಾಡುತ್ತಾ ಇದ್ದಾರೆ.



ಇಂದು ಒಂದು ಬೋಗಸ್ ಮಾಡಿದ್ದಾರೆ. ಶಿವಮೊಗ್ಗ ಏರ್ಪೋರ್ಟ್ ಕಾಮಗಾರಿ ಮುಗಿದಿದ್ದು, ಅದು ನಮ್ಮದು ಅಂತ ಹೇಳಿದ್ದಾರೆ. ಮೆಟ್ರೋ ಯೋಜನೆಗೆ ಕೇಂದ್ರ ಸರ್ಕಾರ ಹಣ ನಿಡುವುದು. ಅದನ್ನೂ ತಮ್ಮದೇ ಎಂದು ಪ್ರತಿಪಾದಿಸಿದ್ದಾರೆ ಎಂದು ಅಶೋಕ್ ಹೇಳಿದರು. ಸರ್ವ ಜನಾಂಗ ಶಾಂತಿಯ ತೋಟ ಎಂಬ ಸಾಲುಗಳನ್ನು ಉಲ್ಲೇಖಿಸಿದ್ದಾರೆ. ಆದರೆ, ಇಡಿ ಕರ್ನಾಟಕ ಉರಿಯುತ್ತಿದೆ. ಹಿಂದುಗಳ ಮೇಲೆ ದೌರ್ಜನ್ಯ ಆಗುತ್ತಾ ಇದೆ. ಭಯೋತ್ಪಾದಕ ಚಟುವಟಿಕೆಗಳು ಜಾಸ್ತಿ ಆಗಿವೆ. ಇಷ್ಟೆಲ್ಲ ಆದರೂ ಶಾಂತಿ ಸುವ್ಯವಸ್ಥೆ ಕಾಪಾಡ್ತೀನಿ ಅಂತ ಹೇಳ್ತಾ ಇದ್ದಾರೆ. ಕನ್ನಡ ರಕ್ಷಣೆ ಮಾಡ್ತೀವಿ ಅಂತ ಹೇಳಿ ಕನ್ನಡ ಹೋರಾಟಗಾರರರನ್ನು ಜೈಲಿಗೆ ಅಟ್ಟಿದ ದುಷ್ಟ ಸರ್ಕಾರ ಇದು. ಎಸ್‌ಸಿ, ಎಸ್ಟಿ ಹಣ ಬೇರೆ ಯೋಜನೆಗಳಿಗೆ ಬಳಸಿ ಮೋಸ ಮಾಡಿದ್ದಾರೆ ಎಂದು ಅಶೋಕ ಆಕ್ರೋಶ ವ್ಯಕ್ತಪಡಿಸಿದರು.

ಕಳೆದು ಎಂಟು ತಿಂಗಳಲ್ಲಿ ಒಂದು ರೂಪಾಯಿ ಅಭಿವೃದ್ಧಿಗೆ ಕೊಡದೆ ರಾಜ್ಯಪಾಲರಿಗೆ ಅವಮಾನ ಮಾಡಿದ್ದಾರೆ. ಈ ಸರ್ಕಾರದಿಂದ ಒಂದೇ ಒಂದೇ ಕಾಮಗಾರಿ ಆಗಿಲ್ಲ. ಕಾಂಗ್ರೆಸ್ ಶಾಸಕರು ಹೇಳ್ತಾ ಇದ್ದಾರೆ, ಕೆಂಪಣ್ಣ ಹೇಳಿದ್ದಾರೆ 40 ಪರ್ಸೆಂಟ್ ಲೂಟಿ ಸರ್ಕಾರ, ಕಮಿಷನ್ ಸರ್ಕಾರ ಎಂಬುದಾಗಿ. ರಾಜ್ಯಪಾಲರ ಕೈಯಲ್ಲಿ ಸುಳ್ಳುಗಳನ್ನ ಹೇಳಿಸಿದ್ದಾರೆ ಎಂದು ಅಶೋಕ ವಾಗ್ದಾಳಿ ನಡೆಸಿದ್ದಾರೆ.

**ಜನವಿರೋಧಿ ಸರ್ಕಾರ:** ರಾಜ್ಯ ಕಾಂಗ್ರೆಸ್ ಸರ್ಕಾರ ಜನವಿರೋಧಿ ಸರ್ಕಾರ. ರಾಜ್ಯಪಾಲರ ಭಾಷಣ ಸುಳ್ಳಿನ ಕಂತೆ ಎಂದು ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಟೀಕಿಸಿದ್ದಾರೆ. ನಮ್ಮ ಅವಧಿಯ ಕೆಲಸಗಳನ್ನು ತಾವು ಮಾಡಿದ್ದಾಗಿ ಕಾಂಗ್ರೆಸ್ ಸರ್ಕಾರ ರಾಜ್ಯಪಾಲರಿಂದ ಹೇಳಿಸಿದೆ ಈ ಸರ್ಕಾರ ರಾಜ್ಯಪಾಲರ ಮೂಲಕ ಸುಳ್ಳು ಭಾಷಣ ಮಾಡಿಸಿದೆ. ಕಾಂಗ್ರೆಸ್ ಸರ್ಕಾರ ಕರ್ನಾಟಕ ಮಾದರಿ ಎಂದು ಬಿಂಬಿಸಿಕೊಂಡಿದೆ. ಕರ್ನಾಟಕ ಮಾಡೆಲ್ ಅಂದರೆ ಏನು ಎಂಬುದನ್ನು ಕಾಂಗ್ರೆಸ್ ಹೇಳಲಿ. ಅಭಿವೃದ್ಧಿ ಕೆಲಸ ಮಾಡದೆ ತನ್ನ ಬೆನ್ನನ್ನು ತಾನೇ ತಟ್ಟಿಕೊಂಡಿದೆ. ರಾಜ್ಯಪಾಲರ ಬಾಯಲ್ಲಿ ಸುಳ್ಳನ್ನು ಹೇಳಿಸಿದೆ ಈ ಸರ್ಕಾರ ಎಂದು ಬೊಮ್ಮಾಯಿ ವಾಗ್ದಾಳಿ ನಡೆಸಿದರು.

**ಕರ್ನಾಟಕ ಮಾದರಿ ಭ್ರಷ್ಟಾಚಾರ:** ಕರ್ನಾಟಕಕ್ಕೆ ಇದ್ದ ಒಳ್ಳೆಯ ಹೆಸರನ್ನು ಈ ಸರ್ಕಾರ ಕೆಡಿಸಿದೆ. ಕರ್ನಾಟಕ ಇತರೆ ರಾಜ್ಯಗಳಿಗೆ ಮಾದರಿಯಾಗಿತ್ತು. ಕಾಂಗ್ರೆಸ್ ಸರ್ಕಾರ ಬಂದ ನಂತರ ಕೆಟ್ಟ ಮಾಡೆಲ್ ಆಗಿದೆ. ಭ್ರಷ್ಟಾಚಾರ ಮಾದರಿಯಾಗಿದೆ. ಕರ್ನಾಟಕ ಮಾದರಿ ಅಂದರೆ ಅಪಕೀರ್ತಿ ಮಾಡೆಲ್ ಆಗಿದೆ ಎಂದು ವಿಧಾನಸೌಧದಲ್ಲಿ ಬಿಜೆಪಿ ಶಾಸಕ ಡಾ. ಅಶ್ವತ್ಥ್ ನಾರಾಯಣ ವಾಗ್ದಾಳಿ ನಡೆಸಿದರು.

ಇದು ಭ್ರಷ್ಟಾಚಾರ, ಅಕ್ರಮ, ಜನವಿರೋಧಿ ಸರ್ಕಾರ ಆಗಿದೆ. ಬರಗಾಲ ನಿಭಾಯಿಸುವಲ್ಲಿ ಸಂಪೂರ್ಣ ವಿಫಲವಾಗಿದೆ. ರಾಜ್ಯದಲ್ಲಿ ಅಭಿವೃದ್ಧಿ ಕೆಲಸಗಳನ್ನು ಸಂಪೂರ್ಣ ಕಡೆಗಣಿಸಿದೆ. ರಾಜ್ಯಪಾಲರ ಭಾಷಣದಲ್ಲಿ ಸಂಪೂರ್ಣ ಸುಳ್ಳು ಹೇಳಿಸಿದ್ದಾರೆ ಎಂದು ಅವರು ಟೀಕಿಸಿದರು.

# ಹೆಚ್‌ಡಿಡಿಯನ್ನು ಭೇಟಿ ಮಾಡಿ ಚರ್ಚಿಸಿದ ಯೋಗೇಶ್ವರ್



**ಬೆಂಗಳೂರು:** ಮಾಜಿ ಪ್ರಧಾನಿ ದೇವೇಗೌಡರನ್ನು ಮಾಜಿ ಶಾಸಕ ಸಿ.ಪಿ. ಯೋಗೇಶ್ವರ್ ಭೇಟಿಯಾಗಿ ಮಾತುಕತೆ ನಡೆಸಿದ್ದಾರೆ. ಭಾನುವಾರ ಸಂಜೆ ಪದ್ಮನಾಭನಗರ ನಿವಾಸದಲ್ಲಿ ಭೇಟಿಯಾಗಿ ಮಾತುಕತೆ ಮಾಡಿದ್ದಾರೆ.

ಲೋಕಸಭಾ ಚುನಾವಣೆಗೆ ಬಿಜೆಪಿ, ಜೆಡಿಎಸ್ ಮೈತ್ರಿ ಮಾಡಿಕೊಂಡಿರುವ ಕಾರಣ ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರಕ್ಕೆ ಅಭ್ಯರ್ಥಿ ಯಾರು ಎನ್ನುವ ಕುತೂಹಲ ಮೂಡಿದೆ. ಈ ಹಿನ್ನೆಲೆಯಲ್ಲಿ ಯೋಗೇಶ್ವರ್ ಭೇಟಿ ಮಹತ್ವ ಪಡೆದುಕೊಂಡಿದೆ.

ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರ 8 ವಿಧಾನಸಭಾ ಕ್ಷೇತ್ರಗಳನ್ನು ಒಳಗೊಂಡಿದೆ. ಕುಣಿಗಲ್, ರಾಜರಾಜೇಶ್ವರಿ ನಗರ, ಬೆಂಗಳೂರು ದಕ್ಷಿಣ, ಆನೇಕಲ್, ಮಾಗಡಿ, ರಾಮನಗರ, ಕನಕಪುರ, ಚನ್ನಪಟ್ಟಣ ಕ್ಷೇತ್ರಗಳು ವ್ಯಾಪ್ತಿಗೆ ಬರುತ್ತದೆ. 8 ಕ್ಷೇತ್ರಗಳ ಪೈಕಿ ಐದರಲ್ಲಿ ಕಾಂಗ್ರೆಸ್ ಇದ್ದರೆ ಎರಡು ಕ್ಷೇತ್ರಗಳಲ್ಲಿ ಬಿಜೆಪಿ ಶಾಸಕರಿದ್ದಾರೆ. ಚನ್ನಪಟ್ಟಣದಲ್ಲಿ ಜೆಡಿಎಸ್ ಶಾಸಕ ಹೆಚ್‌ಡಿ ಕುಮಾರಸ್ವಾಮಿ ಇದ್ದಾರೆ.

2019ರ ಲೋಕಸಭಾ ಚುನಾವಣೆಯಲ್ಲಿ ಕರ್ನಾಟಕದ ಒಟ್ಟು 28 ಕ್ಷೇತ್ರಗಳಲ್ಲಿ 25ರಲ್ಲಿ ಬಿಜೆಪಿ, ಕಾಂಗ್ರೆಸ್, ಜೆಡಿಎಸ್ ತಲಾ ಒಂದೊಂದು ಕ್ಷೇತ್ರಗಳನ್ನು ಗೆದ್ದಿತ್ತು. ಡಿಕೆ ಸುರೇಶ್ ಅವರು ರಾಜ್ಯದ ಏಕೈಕ ಕಾಂಗ್ರೆಸ್ ಸಂಸದರಾಗಿ ಆಯ್ಕೆಯಾಗಿದ್ದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com